# ಯೋಹಾನನ ಸುವಾರ್ತೆ

### ಜಗತ್ತಿಗೆ ಕ್ರಿಸ್ತನ ಆಗಮನ

1 ಜಗತ್ತು ಸೃಷ್ಟಿಯಾಗುವುದಕ್ಕಿಂತ ಮೊದಲೇ ವಾಕ್ಯ*
ಎಂಬಾತನಿದ್ದನು. ಆ ವಾಕ್ಯ ಎಂಬಾತನು ದೇವರೊಂದಿಗೆ
ಇದ್ದನು. ಆ ವಾಕ್ಯ ಎಂಬಾತನೇ ಸ್ವತಃ ದೇವರಾಗಿದ್ದನು.
2 ಆರಂಭದಲ್ಲಿ ಆತನು ದೇವರೊಂದಿಗೆ ಇದ್ದನು. 3 ಎಲ್ಲಾ
ವಸ್ತುಗಳು ಆತನ ಮೂಲಕ ನಿರ್ಮಾಣಗೊಂಡವು. ಆತನಿಲ್ಲದೆ
ಯಾವುದೂ ನಿರ್ಮಿತವಾಗಲಿಲ್ಲ. 4 ಆತನಲ್ಲಿ ಜೀವವಿತ್ತು. ಆ
ಜೀವವು ಮನುಷ್ಯರಿಗೆ ಬೆಳಕಾಗಿತ್ತು. 5 ಬೆಳಕು ಕತ್ತಲೆಯಲ್ಲಿ
ಪ್ರಕಾಶಿಸುತ್ತದೆ. ಆದರೆ ಕತ್ತಲೆಯು ಬೆಳಕನ್ನು ಮುಸುಕಲಿಲ್ಲ.

6 ಯೋಹಾನ* ಎಂಬ ಒಬ್ಬ ಮನುಷ್ಯನನ್ನು ದೇವರು
ಕಳುಹಿಸಿದನು. 7 ಯೋಹಾನನು ಬೆಳಕಿನ (ಕ್ರಿಸ್ತನ) ಬಗ್ಗೆ
ಜನರಿಗೆ ತಿಳಿಸುವುದಕ್ಕಾಗಿ ಬಂದನು. ತನ್ನ ಮೂಲಕ ಎಲ್ಲಾ
ಜನರು ಬೆಳಕಿನ ಬಗ್ಗೆ ಕೇಳಿ ನಂಬಿಕೊಳ್ಳಲೆಂದು ಅವನು
ಬಂದನು. 8 ಯೋಹಾನನೇ ಆ ಬೆಳಕಾಗಿರಲಿಲ್ಲ. ಆದರೆ
ಯೋಹಾನನು ಬೆಳಕಿನ ಬಗ್ಗೆ ಜನರಿಗೆ ಸಾಕ್ಷಿ ನೀಡಲು ಬಂದನು.
9 ನಿಜವಾದ ಬೆಳಕು ಈ ಲೋಕಕ್ಕೆ ಆಗಮಿಸಲಿತ್ತು. ಈ ನಿಜವಾದ
ಬೆಳಕೇ ಎಲ್ಲಾ ಜನರಿಗೆ ಬೆಳಕನ್ನು ಕೊಡುತ್ತದೆ.

10 ವಾಕ್ಯ ಎಂಬಾತನು ಆಗಲೇ ಈ ಲೋಕದಲ್ಲಿದ್ದನು. ಈ
ಲೋಕವು ವಾಕ್ಯ ಎಂಬಾತನ ಮೂಲಕ ನಿರ್ಮಾಣಗೊಂಡಿತು.
ಆದರೆ ಈ ಲೋಕದವರು ಆತನನ್ನು ತಿಳಿದಿರಲಿಲ್ಲ. 11 ಆತನು
ತನ್ನ ಸ್ವಾಸ್ಥ್ಯಕ್ಕೆ ಬಂದನು. ಆದರೆ ಆತನ ಸ್ವಂತ ಜನರು ಆತನನ್ನು
ಸ್ವೀಕರಿಸಿಕೊಳ್ಳಲಿಲ್ಲ. 12 ಯಾರ್‍ಯಾರು ಆತನನ್ನು ಸ್ವೀಕರಿಸಿ
ಕೊಂಡರೊ ಅಂದರೆ ಆತನಲ್ಲಿ ನಂಬಿಕೆ ಇಟ್ಟರೊ ಅವರಿಗೆ
ಆತನು ದೇವರ ಮಕ್ಕಳಾಗುವ ಅಧಿಕಾರಕೊಟ್ಟನು. 13 ಇವರು
ರಕ್ತದಿಂದಾಗಲಿ ಕಾಮದಿಂದಾಗಲಿ ಪುರುಷನ ಸಂಕಲ್ಪ
ದಿಂದಾಗಲಿ ಹುಟ್ಟಿದವರಲ್ಲ. ಇವರು ದೇವರಿಂದಲೇ
ಹುಟ್ಟಿದವರು.

14 ವಾಕ್ಯ ಎಂಬಾತನು ಮನುಷ್ಯನಾಗಿ ನಮ್ಮೊಂದಿಗೆ
ವಾಸಿಸಿದನು. ನಾವು ಆತನ ಮಹಿಮೆಯನ್ನು ನೋಡಿದೆವು. ಆ
ಮಹಿಮೆಯು ತಂದೆಯ ಒಬ್ಬನೇ ಮಗನಿಗಿರುವ ಮಹಿಮೆ
ಯಾಗಿತ್ತು. ಆತನು ಕೃಪೆಯಿಂದಲೂ ಸತ್ಯದಿಂದಲೂ ತುಂಬಿದವ
ನಾಗಿದ್ದನು. 15 ಯೋಹಾನನು ಆತನ ಬಗ್ಗೆ ಜನರಿಗೆ ತಿಳಿಸುತ್ತಾ,
‘‘‘ನನ್ನ ನಂತರ ಬರುವ ಒಬ್ಬನು ನನಗಿಂತಲೂ ಶ್ರೇಷ್ಠನಾಗಿ
ದ್ದಾನೆ. ಆತನು ನನಗಿಂತ ಮೊದಲೇ ಜೀವಿಸುತ್ತಿದ್ದನು’ ಎಂದು
ನಾನು ಹೇಳಿದಾಗ ಈತನ ಬಗ್ಗೆಯೇ ಮಾತಾಡುತ್ತಿದ್ದೆನು’’
ಎಂದು ಗಟ್ಟಿಯಾಗಿ ಕೂಗಿ ಹೇಳಿದನು.

16 ವಾಕ್ಯ ಎಂಬಾತನು ಕೃಪೆಯಿಂದಲೂ ಸತ್ಯದಿಂದಲೂ
ತುಂಬಿದವನಾಗಿದ್ದನು. ಆತನಿಂದಲೇ ನಾವೆಲ್ಲರೂ ಕೃಪೆಯ
ಮೇಲೆ ಕೃಪೆಯನ್ನು ಹೊಂದಿದೆವು. 17 ಧರ್ಮಶಾಸ್ತ್ರವು
ಮೋಶೆಯ ಮೂಲಕ ಕೊಡಲ್ಪಟ್ಟಿತು. ಆದರೆ ಕೃಪೆಯೂ
ಸತ್ಯವೂ ಯೇಸುಕ್ರಿಸ್ತನ ಮೂಲಕ ಬಂದವು. 18 ದೇವರನ್ನು
ಯಾರೂ ಎಂದೂ ಕಂಡಿಲ್ಲ. ಆದರೆ ಒಬ್ಬನೇ ಮಗನು
(ಯೇಸು) ದೇವರಾಗಿದ್ದಾನೆ. ಆತನು ತಂದೆಯ (ದೇವರ)
ಎದೆಯಲ್ಲಿದ್ದಾನೆ. ಆತನೇ ತಂದೆಯನ್ನು ತಿಳಿಯಪಡಿಸಿದ್ದಾನೆ.

### ಯೇಸುವಿನ ಕುರಿತು ಯೋಹಾನನ ಸಂದೇಶ

(ಮತ್ತಾಯ 3:1-12; ಮಾರ್ಕ 1:2-8; ಲೂಕ 3:15-17)

19 ‘‘ನೀನು ಯಾರು?’’ ಎಂದು ಯೋಹಾನನನ್ನು ಕೇಳು
ವುದಕ್ಕಾಗಿ ಜೆರುಸಲೇಮಿನ ಯೆಹೂದ್ಯರು ಯೋಹಾನನ ಬಳಿಗೆ
ಕೆಲವು ಯಾಜಕರನ್ನು ಮತ್ತು ಲೇವಿಯರನ್ನು* ಕಳುಹಿಸಿದರು.
20 ಯೋಹಾನನು ಮರೆಮಾಚದೆ, ‘‘ನಾನು ಕ್ರಿಸ್ತನಲ್ಲ’’
ಎಂದು ಹೇಳಿದನು.

21 ಯೆಹೂದ್ಯರು ಯೋಹಾನನಿಗೆ, ‘‘ಹಾಗಾದರೆ ನೀನು
ಯಾರು? ನೀನು ಎಲೀಯನೋ?’’* ಎಂದು ಕೇಳಿದರು.
ಅವನು, ‘‘ಇಲ್ಲ, ನಾನು ಎಲೀಯನಲ್ಲ’’ ಎಂದು ಅವನು
ಉತ್ತರಿಸಿದನು.

ಯೆಹೂದ್ಯರು, ‘‘ನೀನು ಪ್ರವಾದಿಯೋ?’’ ಎಂದು ಕೇಳಿ
ದರು. ‘‘ಇಲ್ಲ, ನಾನು ಪ್ರವಾದಿಯಲ್ಲ’’ ಎಂದು ಉತ್ತರ
ಕೊಟ್ಟನು.

22 ಆಗ ಯೆಹೂದ್ಯರು, ‘‘ನಮಗೆ ಹೇಳು. ನಮ್ಮನ್ನು
ಕಳುಹಿಸಿದವರಿಗೆ ನಾವು ತಿಳಿಸಬೇಕಾಗಿದೆ. ನಿನ್ನ ಬಗ್ಗೆ ನೀನು
ಏನು ಹೇಳುವೆ?’’ ಎಂದು ಕೇಳಿದರು.

23 ಅದಕ್ಕೆ ಯೋಹಾನನು,

> ‘‘‘ಪ್ರಭುವಿಗಾಗಿ ನೇರವಾದ ದಾರಿಯನ್ನು ಸಿದ್ಧ
> ಗೊಳಿಸಿರಿ’ ಎಂದು ಅಡವಿಯಲ್ಲಿ ಕೂಗುವವನ
> ಸ್ವರವೇ ನಾನು’’
>
> *ಯೆಶಾಯ 40:3*

---

**ವಾಕ್ಯ** ಇಲ್ಲಿ ಇದರರ್ಥ ಕ್ರಿಸ್ತನು.

**ಯೋಹಾನ** ಸ್ನಾನಿಕ ಯೋಹಾನ. ಇವನು ಕ್ರಿಸ್ತನ ಬರುವಿಕೆಯ ಬಗ್ಗೆ ಜನರಿಗೆ ಬೋಧಿಸಿದನು.

**ಲೇವಿಯರು** ದೇವಾಲಯದಲ್ಲಿ ಯೆಹೂದ್ಯ ಯಾಜಕರುಗಳಿಗೆ ಸಹಾಯ ಮಾಡುತ್ತಿದ್ದ ಲೇವಿ ಕುಲದವರು.

**ಎಲೀಯ** ಕ್ರಿ. ಪೂ. 850 ರಲ್ಲಿ ಜೀವಿಸಿದ್ದ ಪ್ರವಾದಿ.

ಎಂದು ಪ್ರವಾದಿಯಾದ ಯೆಶಾಯನ ಮಾತುಗಳಲ್ಲೇ ಉತ್ತರ
ಕೊಟ್ಟನು.
24ಕಳುಹಿಸಲ್ಪಟ್ಟಿದ್ದವರಲ್ಲಿ ಕೆಲವು ಮಂದಿ ಫರಿಸಾಯರೂ*
ಇದ್ದರು. 25ಅವರು ಅವನಿಗೆ, ‘‘ನೀನು ನಿನ್ನ ಬಗ್ಗೆ, ‘ನಾನು
ಕ್ರಿಸ್ತನೂ ಅಲ್ಲ, ಎಲೀಯನೂ ಅಲ್ಲ, ಪ್ರವಾದಿಯೂ ಅಲ್ಲ,
ಎಂದು ಹೇಳುತ್ತಿರುವೆ. ಹಾಗಾದರೆ ನೀನು ಜನರಿಗೆ ಏಕೆ ದೀಕ್ಷಾ
ಸ್ನಾನ ಮಾಡಿಸುವೆ?’’ ಎಂದು ಕೇಳಿದರು.
26ಯೋಹಾನನು, ‘‘ನಾನು ಜನರಿಗೆ ನೀರಿನಿಂದ ದೀಕ್ಷಾ
ಸ್ನಾನ ಮಾಡಿಸುವೆನು. ಆದರೆ ನಿಮಗೆ ಗೊತಿಲ್ಲದ ಒಬ್ಬನು ಇಲ್ಲಿ
ದ್ದಾನೆ. 27ನನ್ನ ನಂತರ ಬರುವವನು ಆತನೇ. ಆತನ ಪಾದರಕ್ಷೆ
ಗಳನ್ನು ಬಿಚ್ಚುವುದಕ್ಕೂ ನಾನು ಯೋಗ್ಯನಲ್ಲ’’ ಎಂದು
ಹೇಳಿದನು.
28ಜೋರ್ಡನ್ ನದಿಯ ಆಚೆದಡದಲ್ಲಿದ್ದ ಬೆಥಾನಿಯ
ಎಂಬ ಊರಲ್ಲಿ ಈ ಸಂಗತಿಗಳೆಲ್ಲಾ ನಡೆದವು. ಯೋಹಾನನು
ಜನರಿಗೆ ದೀಕ್ಷಾಸ್ನಾನ ಮಾಡಿಸುತ್ತಿದ್ದದ್ದು ಇಲ್ಲಿಯೇ.
29ಮರುದಿನ ಯೋಹಾನನು, ತನ್ನ ಬಳಿಗೆ ಬರುತ್ತಿದ್ದ
ಯೇಸುವನ್ನು ಕಂಡು, ‘‘ಇಗೋ, ಯಜ್ಞಕ್ಕಾಗಿ ದೇವರು
ನೇಮಿಸಿದ ಕುರಿಮರಿ. ಆತನು ಈ ಲೋಕದ ಪಾಪಗಳನ್ನು
ಪರಿಹರಿಸುವವನು. 30‘ನನ್ನ ನಂತರ ಒಬ್ಬ ವ್ಯಕ್ತಿಯು ಬರುವನು.
ಆತನು ನನಗಿಂತಲೂ ದೊಡ್ಡವನು. ಏಕೆಂದರೆ ಆತನು ನನ
ಗಿಂತಲೂ ಮೊದಲೇ ಇದ್ದವನು ಮತ್ತು ಯಾವಾಗಲೂ
ಇದ್ದವನು’ ಎಂದು ನಾನು ಹೇಳುತ್ತಿದ್ದುದು ಈತನ ವಿಷಯ
ವಾಗಿಯೇ. 31ಆತನು ಯಾರೆಂಬುದು ನನಗೂ ಗೊತ್ತಿರಲಿಲ್ಲ.
ಆದರೆ ಆತನನ್ನು ಇಸ್ರೇಲರಿಗೆ ತಿಳಿಸುವದಕ್ಕೋಸ್ಕರ ನಾನು
ಜನರಿಗೆ ನೀರಿನಿಂದ ದೀಕ್ಷಾಸ್ನಾನ ಕೊಡುತ್ತಿದ್ದೆನು’’ ಎಂದು
ಹೇಳಿದನು.
32-33ಇದಲ್ಲದೆ ಯೋಹಾನನು ಸಾಕ್ಷಿಕೊಟ್ಟು ಹೇಳಿದ್ದೇ
ನೆಂದರೆ, ‘‘ಆತನು ಯಾರೆಂದು ನನಗೂ ಗೊತ್ತಿರಲಿಲ್ಲ. ಆದರೆ
ಜನರಿಗೆ ದೀಕ್ಷಾಸ್ನಾನ ಕೊಡಲು ನನ್ನನ್ನು ಕಳುಹಿಸಿದಾತನು
ನನಗೆ, ‘ಪವಿತ್ರಾತ್ಮನು* ಇಳಿದು ಬಂದು ಒಬ್ಬ ವ್ಯಕ್ತಿಯ ಮೇಲೆ
ನೆಲಸುವುದನ್ನು ನೀನು ನೋಡುವೆ. ಪವಿತ್ರಾತ್ಮನಿಂದ ದೀಕ್ಷಾ
ಸ್ನಾನ ಕೊಡುವವನು ಆ ವ್ಯಕ್ತಿಯೇ’ ಎಂದು ಹೇಳಿದ್ದನು. ಇದು
ನೆರವೇರುವುದನ್ನು ನಾನು ಕಣ್ಣಾರೆ ಕಂಡಿದ್ದೇನೆ. ಪವಿತ್ರಾತ್ಮನು
ಪರಲೋಕದಿಂದ ಪಾರಿವಾಳದ ರೂಪದಲ್ಲಿ ಇಳಿದುಬಂದು
ಆತನ (ಯೇಸುವಿನ) ಮೇಲೆ ನೆಲಸುವುದನ್ನು ನಾನು ನೋಡಿ
ದೆನು.
34ಆದ್ದರಿಂದ ಆತನೇ (ಯೇಸುವೇ) ದೇವರ ಮಗನೆಂದು
ನಾನು ಜನರಿಗೆ ತಿಳಿಸುವೆನು’’ ಎಂದನು.

## ಯೇಸುವಿನ ಪ್ರಥಮ ಶಿಷ್ಯರು

35ಮರುದಿನ ಯೋಹಾನನು ತನ್ನ ಇಬ್ಬರು ಶಿಷ್ಯರೊಂದಿಗೆ
ಇದ್ದಾಗ, 36ಸಮೀಪದಲ್ಲಿ ನಡೆದುಹೋಗುತ್ತಿದ್ದ ಯೇಸುವನ್ನು
ಕಂಡು, ‘‘ಇಗೋ, ಯಜ್ಞಕ್ಕೆ ದೇವರು ನೇಮಿಸಿದ ಕುರಿಮರಿ!’’
ಎಂದು ಹೇಳಿದನು.
37ಯೋಹಾನನ ಈ ಮಾತನ್ನು ಕೇಳಿದ ಆ ಇಬ್ಬರು ಶಿಷ್ಯರು
ಯೇಸುವನ್ನು ಹಿಂಬಾಲಿಸಿದರು. 38ಯೇಸು ಹಿಂತಿರುಗಿ
ನೋಡಿ, ‘‘ನಿಮಗೇನು ಬೇಕು?’’ ಎಂದು ಕೇಳಿದನು.
ಆ ಇಬ್ಬರು, ‘‘ರಬ್ಬಿ, ನೀನು ಎಲ್ಲಿ ಇಳಿದುಕೊಂಡಿರುವೆ’’
ಎಂದು ಕೇಳಿದರು. (‘‘ರಬ್ಬಿ’’ ಅಂದರೆ ‘‘ಗುರು’’ ಎಂದರ್ಥ.)
39ಯೇಸು, ‘‘ನನ್ನೊಂದಿಗೆ ಬನ್ನಿ, ಆಗ ನೀವೇ ನೋಡು
ವಿರಿ’’ ಎಂದು ಹೇಳಿದನು. ಆದ್ದರಿಂದ ಆ ಇಬ್ಬರು ಹೋಗಿ
ಯೇಸು ಇಳಿದುಕೊಂಡಿದ್ದ ಸ್ಥಳವನ್ನು ನೋಡಿದರು. ಆ ದಿನ
ಅವರು ಅಲ್ಲಿಯೇ ಆತನೊಂದಿಗೆ ಇದ್ದರು. ಆಗ ಸಾಯಂಕಾಲ
ಸುಮಾರು ನಾಲ್ಕು ಗಂಟೆಯಾಗಿತ್ತು.
40ಈ ಇಬ್ಬರು ಯೋಹಾನನ ಮಾತನ್ನು ಕೇಳಿ ಯೇಸುವನ್ನು
ಹಿಂಬಾಲಿಸಿದರು. ಸೀಮೋನ್ ಪೇತ್ರನ ತಮ್ಮನಾದ ಅಂದ್ರೆ
ಯನು ಇವರಲ್ಲಿ ಒಬ್ಬನಾಗಿದ್ದನು. 41ಮೊದಲನೆಯದಾಗಿ,
ಅವನು ತನ್ನ ಅಣ್ಣನಾದ ಸೀಮೋನನನ್ನು ಕಾಣಲು ಹೋಗಿ
ಅವನಿಗೆ, ‘‘ನಾವು ಮೆಸ್ಸೀಯನನ್ನು ಕಂಡುಕೊಂಡೆವು’’ ಎಂದು
ಹೇಳಿದನು. (‘‘ಮೆಸ್ಸೀಯ’’ ಅಂದರೆ ‘‘ಕ್ರಿಸ್ತನು’’ ಎಂದರ್ಥ.)
42ಅವನು ಸೀಮೋನನನ್ನು ಯೇಸುವಿನ ಬಳಿಗೆ ಕರೆದು
ಕೊಂಡು ಬಂದನು. ಯೇಸು ಸೀಮೋನನ ಕಡೆಗೆ ನೋಡಿ,
‘‘ಯೋಹಾನನ ಮಗನಾದ ನಿನ್ನ ಹೆಸರು ಸೀಮೋನ. ನೀನು
ಕೇಫನೆಂದು ಕರೆಸಿಕೊಳ್ಳುವೆ’’ ಎಂದು ಹೇಳಿದನು. (‘‘ಕೇಫ’’
ಅಂದರೆ ‘‘ಪೇತ್ರ’’ ಎಂದರ್ಥ).
43ಮರುದಿನ ಯೇಸು ಗಲಿಲೇಯಕ್ಕೆ ಹೋಗಲು ನಿರ್ಧ
ರಿಸಿದನು. ಯೇಸು ಫಿಲಿಪ್ಪನನ್ನು ಕಂಡು ಅವನಿಗೆ, ‘‘ನನ್ನನ್ನು
ಹಿಂಬಾಲಿಸು’’ ಎಂದು ಹೇಳಿದನು. 44ಅಂದ್ರೆಯ ಮತ್ತು ಪೇತ್ರ
ರಂತೆ ಫಿಲಿಪ್ಪನು ಸಹ ಬೆತ್ಸಾಯಿದ ಎಂಬ ಊರಿನವನಾಗಿದ್ದನು.
45ಫಿಲಿಪ್ಪನು ನತಾನಿಯೇಲನನ್ನು ಕಂಡು ಅವನಿಗೆ, ‘‘ಯಾವನ
ವಿಷಯದಲ್ಲಿ ಮೋಶೆಯು ಧರ್ಮಶಾಸ್ತ್ರದಲ್ಲಿ ಬರೆದನೋ
ಮತ್ತು ಪ್ರವಾದಿಗಳು ಬರೆದರೋ ಆತನನ್ನು ನಾವು ಕಂಡು
ಕೊಂಡೆವು. ಆತನ ಹೆಸರು ಯೇಸು. ಆತನು ಯೋಸೇಫನ
ಮಗನು. ಆತನು ನಜರೇತಿನವನು’’ ಎಂದು ಹೇಳಿದನು.
46ಆದರೆ ನತಾನಿಯೇಲನು ಫಿಲಿಪ್ಪನಿಗೆ, ‘‘ನಜರೇತಿನಿಂದ
ಒಳ್ಳೆಯದೇನಾದರೂ ಬರುವುದೇ?’’ ಎಂದು ಕೇಳಿದನು.
ಫಿಲಿಪ್ಪನು, ‘‘ಬಂದು ನೋಡು’’ ಎಂದು ಉತ್ತರಕೊಟ್ಟನು.
47ಯೇಸು ತನ್ನ ಬಳಿಗೆ ಬರುತ್ತಿದ್ದ ನತಾನಿಯೇಲನನ್ನು
ಕಂಡು ಅವನ ಬಗ್ಗೆ, ‘‘ಇವನು ನಿಜವಾದ ಇಸ್ರೇಲ. ಇವನಲ್ಲಿ
ಕಪಟವಿಲ್ಲ’’ ಎಂದು ಹೇಳಿದನು.
48ನತಾನಿಯೇಲನು, ‘‘ನೀನು ನನ್ನನ್ನು ಹೇಗೆ ಬಲ್ಲೆ?’’
ಎಂದು ಕೇಳಿದನು. ಯೇಸು, ‘‘ಫಿಲಿಪ್ಪನು ನನ್ನ ಬಗ್ಗೆ ನಿನಗೆ
ತಿಳಿಸುವುದಕ್ಕಿಂತ ಮೊದಲೇ ನೀನು ಅಂಜೂರದ ಮರದ
ಕೆಳಗಿದ್ದಾಗ ನಾನು ನಿನ್ನನ್ನು ನೋಡಿದೆನು’’ ಎಂದು ಹೇಳಿದನು.
49ಆಗ ನತಾನಿಯೇಲನು ಯೇಸುವಿಗೆ, ‘‘ಗುರುವೇ, ನೀನೇ
ದೇವರ ಮಗನು. ನೀನೇ ಇಸ್ರೇಲರ ರಾಜ’’ ಎಂದು ಹೇಳಿದನು.
50ಯೇಸು ನತಾನಿಯೇಲನಿಗೆ, ‘‘ನಿನ್ನನ್ನು ಅಂಜೂರದ
ಮರದ ಕೆಳಗೆ ನೋಡಿದೆನೆಂದು ನಾನು ನಿನಗೆ ಹೇಳಿದ್ದರಿಂದ
ನೀನು ನನ್ನನ್ನು ನಂಬುವೆ. ಆದರೆ ಅದಕ್ಕಿಂತಲೂ ಹೆಚ್ಚು ದೊಡ್ಡ
ಕಾರ್ಯಗಳನ್ನು ನೀನು ನೋಡುವೆ!’’ ಎಂದು ಹೇಳಿದನು.
51ಅದಲ್ಲದೆ ಯೇಸು, ‘‘ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.

---

**ಫರಿಸಾಯರು** ಯೆಹೂದ್ಯರ ಒಂದು ಧಾರ್ಮಿಕ ಪಂಗಡದವರು.

**ಪವಿತ್ರಾತ್ಮನು** ದೇವರಾತ್ಮನು, ಕ್ರಿಸ್ತನ ಆತ್ಮನು ಮತ್ತು ಸಹಾಯಕನು ಎಂಬುದಾಗಿ ಕರೆಯಲಾಗಿದೆ.

ಪರಲೋಕವು ತೆರೆದಿರುವುದನ್ನೂ ಮನುಷ್ಯಕುಮಾರನ ಮೇಲೆ
ದೇವದೂತರುಗಳು ಏರಿಹೋಗುವುದನ್ನೂ ಕೆಳಗೆ ಇಳಿದು
ಬರುವುದನ್ನೂ ನೀವು ನೋಡುವಿರಿ’’ ಎಂದು ಹೇಳಿದನು.

### ಕಾನಾ ಊರಿನಲ್ಲಿ ಮದುವೆ

2 ಮಾರನೆಯ ದಿನ ಗಲಿಲೇಯದ ಕಾನಾ ಊರಿನಲ್ಲಿ
ಒಂದು ಮದುವೆ ಇತ್ತು. ಯೇಸುವಿನ ತಾಯಿಯೂ
ಬಂದಿದ್ದಳು. 2ಯೇಸು ಮತ್ತು ಆತನ ಶಿಷ್ಯರನ್ನು ಸಹ ಮದುವೆಗೆ
ಆಹ್ವಾನಿಸಲಾಗಿತ್ತು. 3ಮದುವೆಯಲ್ಲಿ ಸಾಕಷ್ಟು ದ್ರಾಕ್ಷಾರಸ
ವಿರಲಿಲ್ಲ. ಇದ್ದ ದ್ರಾಕ್ಷಾರಸವೆಲ್ಲಾ ಮುಗಿದುಹೋದಾಗ
ಯೇಸುವಿನ ತಾಯಿಯು ಆತನಿಗೆ, ‘‘ಅವರಲ್ಲಿ ದ್ರಾಕ್ಷಾರಸವೇ
ಇಲ್ಲ’’ ಎಂದು ತಿಳಿಸಿದಳು. 4ಯೇಸು, ‘‘ಅಮ್ಮಾ, ನನ್ನ ಗೊಡವೆ
ನಿನಗೇಕೆ? ನನ್ನ ಸಮಯ ಇನ್ನೂ ಬಂದಿಲ್ಲ’’ ಎಂದು ಉತ್ತರ
ಕೊಟ್ಟನು. 5ಯೇಸುವಿನ ತಾಯಿ ಸೇವಕರಿಗೆ, ‘‘ಯೇಸು ನಿಮಗೆ
ಏನು ಹೇಳುತ್ತಾನೊ ಅದನ್ನು ಮಾಡಿರಿ’’ ಎಂದು ಹೇಳಿದಳು.
6ಕಲ್ಲಿನಿಂದ ಮಾಡಿದ ಆರು ದೊಡ್ಡ ಬಾನೆಗಳು ಅಲ್ಲಿದ್ದವು.
ಯೆಹೂದ್ಯರು ಶುದ್ಧಾಚಾರಗಳಿಗಾಗಿ ಈ ಕಲ್ಲಿನ ಬಾನೆಗಳನ್ನು
ಉಪಯೋಗಿಸುತ್ತಿದ್ದರು. ಪ್ರತಿಯೊಂದು ಬಾನೆಯೂ
ಸುಮಾರು ನೂರು ಲೀಟರ್‌ಗಳಷ್ಟು ನೀರು ಹಿಡಿಯುತ್ತಿತ್ತು.
7ಯೇಸು ಸೇವಕರಿಗೆ, ‘‘ಆ ಬಾನೆಗಳಲ್ಲಿ ನೀರನ್ನು ತುಂಬಿರಿ’’
ಎಂದು ಹೇಳಿದನು. ಅಂತೆಯೇ ಸೇವಕರು ಆ ಬಾನೆಗಳ
ಕಂಠದವರೆಗೂ ನೀರನ್ನು ತುಂಬಿದರು. 8ಬಳಿಕ ಯೇಸು
ಸೇವಕರಿಗೆ, ‘‘ಈಗ ಸ್ವಲ್ಪ ನೀರನ್ನು ತೆಗೆದುಕೊಂಡು ಹೋಗಿ
ಔತಣದ ಮೇಲ್ವಿಚಾರಕನಿಗೆ ಕೊಡಿರಿ’’ ಎಂದು ಹೇಳಿದನು.
ಅಂತೆಯೇ ಅವರು ಅದನ್ನು ತೆಗೆದುಕೊಂಡು ಹೋದರು.
9ಮದುವೆಯ ಮೇಲ್ವಿಚಾರಕನು ದ್ರಾಕ್ಷಾರಸವಾಗಿ ಮಾರ್ಪ
ಟ್ಟಿದ್ದ ನೀರನ್ನು ರುಚಿನೋಡಿದನು. ದ್ರಾಕ್ಷಾರಸವು ಎಲ್ಲಿಂದ
ಬಂತೆಂಬುದು ಅವನಿಗೆ ಗೊತ್ತಿರಲಿಲ್ಲ. ಆದರೆ ಅದು ಆ
ಸೇವಕರಿಗೆ ತಿಳಿದಿತ್ತು. ಮದುವೆಯ ಮೇಲ್ವಿಚಾರಕನು ಮದು
ಮಗನನ್ನು ಕರೆದು, 10‘‘ಜನರು ಉತ್ತಮವಾದ ದ್ರಾಕ್ಷಾರಸ
ವನ್ನು ಯಾವಾಗಲೂ ಮೊದಲು ಹಂಚುತ್ತಾರೆ. ಅತಿಥಿಗಳು
ಕುಡಿದು ಮತ್ತರಾದ ಮೇಲೆ ಅವರಿಗೆ ಕಡಿಮೆ ದರ್ಜೆಯ
ದ್ರಾಕ್ಷಾರಸವನ್ನು ಕೊಡುತ್ತಾರೆ. ಆದರೆ ನೀನು ಉತ್ತಮವಾದ
ದ್ರಾಕ್ಷಾರಸವನ್ನು ಈವರೆಗೂ ಇಟ್ಟಿರುವೆ!’’ ಎಂದು ಹೇಳಿದನು.
11ಯೇಸು ಮಾಡಿದ ಮೊದಲನೆಯ ಅದ್ಭುತಕಾರ್ಯವಿದು.
ಯೇಸು ಇದನ್ನು ಗಲಿಲೇಯದ ಕಾನಾ ಊರಿನಲ್ಲಿ ಮಾಡಿ ತನ್ನ
ಮಹತ್ವವನ್ನು ತೋರಿದನು. ಆತನ ಶಿಷ್ಯರೂ ಆತನಲ್ಲಿ ನಂಬಿಕೆ
ಇಟ್ಟರು.

### ದೇವಾಲಯದಲ್ಲಿ ಯೇಸು

(ಮತ್ತಾಯ 21:12-13; ಮಾರ್ಕ 11:15-17; ಲೂಕ 19:45-46)

12ಬಳಿಕ ಯೇಸು ಕಪೆರ್ನೌಮ್ ಎಂಬ ಊರಿಗೆ
ಹೋದನು. ಯೇಸುವಿನ ತಾಯಿ ಮತ್ತು ಸಹೋದರರು ಹಾಗೂ
ಆತನ ಶಿಷ್ಯರು ಆತನೊಡನೆ ಹೋದರು. ಅವರೆಲ್ಲರೂ
ಕಪೆರ್ನೌಮ್‌ನಲ್ಲಿ ಕೆಲವು ದಿನ ತಂಗಿದ್ದರು. 13ಆಗ
ಯೆಹೂದ್ಯರ ಪಸ್ಕಹಬ್ಬ ಬಹು ಸಮೀಪವಾಗಿತ್ತು. ಆದ್ದರಿಂದ
ಯೇಸು ಜೆರುಸಲೇಮಿಗೆ ಹೋದನು. 14ದೇವಾಲಯದಲ್ಲಿ
ಜನರು ದನ, ಕುರಿ ಮತ್ತು ಪಾರಿವಾಳಗಳನ್ನು ಮಾರುತ್ತಿರು
ವುದನ್ನು ಯೇಸು ಕಂಡನು. ಇತರ ಕೆಲವು ಜನರು ಮೇಜುಗಳ
ಸಮೀಪದಲ್ಲಿ ಕುಳಿತುಕೊಂಡು ಹಣ ವಿನಿಮಯ ಮಾಡು
ತ್ತಿದ್ದರು ಮತ್ತು ವ್ಯಾಪಾರ ಮಾಡುತ್ತಿದ್ದರು. 15ಯೇಸು ಹಗ್ಗದ
ಕೆಲವು ತುಂಡುಗಳನ್ನು ತೆಗೆದುಕೊಂಡು ಅವುಗಳಿಂದ ಒಂದು
ಚಾವಟಿ ಮಾಡಿ ಆ ಜನರನ್ನು ಮತ್ತು ದನಕುರಿಗಳನ್ನು
ಬಲವಂತವಾಗಿ ದೇವಾಲಯದಿಂದ ಹೊರಗಟ್ಟಿದನು. ಯೇಸು
ಮೇಜುಗಳನ್ನು ಕೆಡವಿ, ಹಣ ವಿನಿಮಯ ಮಾಡುತ್ತಿದ್ದ ಜನರ
ಹಣವನ್ನು ಚೆಲ್ಲಿದನು. 16ಪಾರಿವಾಳಗಳನ್ನು ಮಾರುತ್ತಿದ್ದವರಿಗೆ,
‘‘ಇವುಗಳನ್ನು ಹೊರಗೆ ತೆಗೆದುಕೊಂಡು ಹೋಗಿರಿ! ನನ್ನ
ತಂದೆಯ ಮನೆಯನ್ನು ವ್ಯಾಪಾರ ಸ್ಥಳವನ್ನಾಗಿ ಮಾಡಬೇಡಿ!’’
ಎಂದು ಹೇಳಿದನು.

17‘‘ನಿನ್ನ ಆಲಯದ ಮೇಲಿನ ಅಭಿಮಾನವು
ನನ್ನೊಳಗೆ ಬೆಂಕಿಯಂತೆ ಸುಡುತ್ತದೆ’’
*ಕೀರ್ತನೆ 69:9*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿರುವ ವಾಕ್ಯವನ್ನು ಯೇಸುವಿನ
ಶಿಷ್ಯರು ಆಗ ಜ್ಞಾಪಿಸಿಕೊಂಡರು.

18ಯೆಹೂದ್ಯರು ಯೇಸುವಿಗೆ, ‘‘ಇಷ್ಟೆಲ್ಲಾ ಮಾಡಲು ನಿನಗೆ
ಅಧಿಕಾರವಿದೆ ಎಂದು ರುಜುವಾತುಪಡಿಸಲು ಯಾವ ಸೂಚಕ
ಕಾರ್ಯವನ್ನು ಮಾಡುವೆ?’’ ಎಂದು ಕೇಳಿದರು.
19ಯೇಸು, ‘‘ಈ ದೇವಾಲಯವನ್ನು ಕೆಡವಿರಿ, ಮೂರು
ದಿನಗಳಲ್ಲಿ ಅದನ್ನು ಮತ್ತೆ ಕಟ್ಟುತ್ತೇನೆ’’ ಎಂದು ಉತ್ತರ
ಕೊಟ್ಟನು.
20ಯೆಹೂದ್ಯರು, ‘‘ಈ ದೇವಾಲಯವನ್ನು ಕಟ್ಟಲು ಜನರು
ನಲವತ್ತಾರು ವರ್ಷಗಳ ಕಾಲ ದುಡಿದಿದ್ದಾರೆ! ನೀನು ಮೂರೇ
ದಿನಗಳಲ್ಲಿ ಇದನ್ನು ಕಟ್ಟಬಲ್ಲೆಯಾ?’’ ಎಂದು ಕೇಳಿದರು.
21(ಆದರೆ ಯೇಸು ತನ್ನ ದೇಹವೇ ದೇವಾಲಯವೆಂಬ
ಅರ್ಥದಲ್ಲಿ ಹೇಳಿದ್ದನು. 22ಯೇಸು ಸತ್ತವರೊಳಗಿಂದ ಎದ್ದು
ಬಂದಾಗ ಆತನ ಶಿಷ್ಯರು ಆತನ ಈ ಮಾತನ್ನು ಜ್ಞಾಪಿಸಿ
ಕೊಂಡರು. ಅವರು ಪವಿತ್ರ ಗ್ರಂಥವನ್ನು ಮತ್ತು ಆತನು ಹೇಳಿದ
ಮಾತುಗಳನ್ನು ನಂಬಿದರು.)
23ಯೇಸು ಪಸ್ಕಹಬ್ಬಕ್ಕಾಗಿ ಜೆರುಸಲೇಮಿನಲ್ಲಿದ್ದನು.
ಆತನು ಮಾಡಿದ ಸೂಚಕಕಾರ್ಯಗಳನ್ನು ನೋಡಿದಾಗ ಅನೇಕ
ಜನರು ಆತನನ್ನು ನಂಬಿದರು. 24ಆದರೆ ಯೇಸು ಅವರಲ್ಲಿ
ಭರವಸೆ ಇಡಲಿಲ್ಲ. ಏಕೆಂದರೆ ಆತನು ಅವರನ್ನು ಚೆನ್ನಾಗಿ ಬಲ್ಲವ
ನಾಗಿದ್ದನು. 25ಯೇಸುವಿಗೆ ಜನರ ಬಗ್ಗೆ ಯಾರೂ ತಿಳಿಸುವ
ಅಗತ್ಯವಿರಲಿಲ್ಲ. ಮನುಷ್ಯನ ಮನಸ್ಸಿನಲ್ಲಿ ಏನಿದೆ ಎಂಬುದು
ಯೇಸುವಿಗೆ ಗೊತ್ತಿತ್ತು.

### ಯೇಸು ಮತ್ತು ನಿಕೊದೇಮ

3 ನಿಕೊದೇಮ ಎಂಬ ಒಬ್ಬ ಮನುಷ್ಯನಿದ್ದನು.
ನಿಕೊದೇಮನು ಫರಿಸಾಯರಲ್ಲಿ ಒಬ್ಬನಾಗಿದ್ದನು. ಅವನು
ಒಬ್ಬ ಮುಖ್ಯ ಯೆಹೂದ್ಯನಾಯಕನಾಗಿದ್ದನು. 2ಒಂದು
ರಾತ್ರಿ, ನಿಕೊದೇಮನು ಯೇಸುವಿನ ಬಳಿಗೆ ಬಂದನು.

ನಿಕೊದೇಮನು, ''ಗುರುವೇ, ನೀನು ದೇವರಿಂದ ಕಳುಹಿಸಲ್ಪಟ್ಟ ಉಪದೇಶಕನೆಂದು ನಮಗೆ ಗೊತ್ತಿದೆ. ನೀನು ಮಾಡುವ ಈ ಸೂಚಕಕಾರ್ಯಗಳನ್ನು ದೇವರ ಸಹಾಯದಿಂದಲ್ಲದೆ ಯಾರೂ ಮಾಡಲಾರರು'' ಎಂದು ಹೇಳಿದನು.

3ಯೇಸು ''ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ಒಬ್ಬನು ಹೊಸದಾಗಿ ಹುಟ್ಟಲೇಬೇಕು. ಒಬ್ಬನು ಹೊಸದಾಗಿ ಹುಟ್ಟಿಲ್ಲ ದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು'' ಎಂದು ಉತ್ತರಿಸಿದನು.

4ನಿಕೊದೇಮನು, ''ಮನುಷ್ಯನು ಮುದುಕನಾದ ಮೇಲೆ ಹುಟ್ಟುವುದು ಹೇಗೆ? ಒಬ್ಬನು ತನ್ನ ತಾಯಿಯ ಗರ್ಭದೊಳಗೆ ಮತ್ತೆ ಪ್ರವೇಶಿಸಲು ಸಾಧ್ಯವೇ?'' ಎಂದು ಕೇಳಿದನು.

5ಅದಕ್ಕೆ ಯೇಸು, ''ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.
ಒಬ್ಬನು ನೀರಿನಿಂದಲೂ ಆತ್ಮನಿಂದಲೂ ಹುಟ್ಟಲೇಬೇಕು.
ಇಲ್ಲವಾದರೆ ಅವನು ದೇವರ ರಾಜ್ಯವನ್ನು ಪ್ರವೇಶಿಸಲಾರನು.
6ದೇಹವು ಮಾನುಷ್ಯ ತಂದೆತಾಯಿಗಳಿಂದ ಹುಟ್ಟಿದ್ದು. ಆದರೆ
ಆತ್ಮಿಕ ಜೀವನವು ಆತ್ಮನಿಂದ ಹುಟ್ಟಿದ್ದು. 7'ನೀನು ಹೊಸದಾಗಿ
ಹುಟ್ಟಲೇಬೇಕು' ಎಂದು ನಾನು ಹೇಳಿದ್ದಕ್ಕೆ ಆಶ್ಚರ್ಯ
ಪಡಬೇಡ. 8ಗಾಳಿಯು ತನಗಿಷ್ಟ ಬಂದ ಕಡೆಗೆ ಹೋಗುತ್ತದೆ.
ಗಾಳಿ ಬೀಸುವ ಶಬ್ದವನ್ನು ನೀನು ಕೇಳುವೆ. ಆದರೆ ಗಾಳಿ ಎಲ್ಲಿಂದ
ಬರುತ್ತದೋ ಮತ್ತು ಎಲ್ಲಿಗೆ ಹೋಗುತ್ತದೋ ನಿನಗೆ ತಿಳಿ
ಯದು. ಆತ್ಮದಿಂದ ಹುಟ್ಟಿದ ಪ್ರತಿಯೊಬ್ಬರೂ ಅದರಂತಿದ್ದಾರೆ''
ಎಂದು ಹೇಳಿದನು.

9ನಿಕೊದೇಮನು, ''ಇದೆಲ್ಲಾ ಹೇಗೆ ಸಾಧ್ಯ?'' ಎಂದು
ಕೇಳಿದನು. 10ಯೇಸು, ''ನೀನು ಇಸ್ರೇಲಿನ ಉಪದೇಶಕ
ನಾಗಿರುವೆ. ಆದರೆ ನಿನಗೆ ಈ ಸಂಗತಿಗಳು ಇನ್ನೂ ಅರ್ಥ
ವಾಗುವುದಿಲ್ಲವೇ? 11ನಾನು ನಿನಗೆ ಸತ್ಯವನ್ನು ಹೇಳುತ್ತೇನೆ.
ನಮಗೆ ಗೊತ್ತಿರುವುದರ ಬಗ್ಗೆ ನಾವು ಮಾತಾಡುತ್ತೇವೆ. ನಾವು
ಕಂಡದ್ದರ ಬಗ್ಗೆ ನಾವು ಸಾಕ್ಷಿ ಕೊಡುತ್ತೇವೆ.ಆದರೆ ನಾವು
ಹೇಳುವುದನ್ನು ನೀವು ಸ್ವೀಕರಿಸಿಕೊಳ್ಳುವುದಿಲ್ಲ. 12ನಾನು ನಿನಗೆ
ಭೂಲೋಕದ ಸಂಗತಿಗಳ ಬಗ್ಗೆ ಹೇಳಿದೆ. ಆದರೆ ನೀನು ನನ್ನನ್ನು
ನಂಬುವುದಿಲ್ಲ. ಆದ್ದರಿಂದ ನಾನು ಪರಲೋಕದ ಸಂಗತಿಗಳ
ಬಗ್ಗೆ ನಿನಗೆ ಹೇಳಿದರೂ ನೀನು ಖಂಡಿತವಾಗಿ ನಂಬುವುದಿಲ್ಲ!
13ಪರಲೋಕದಿಂದ ಇಳಿದು ಬಂದ ಮನುಷ್ಯಕುಮಾರ
ನೊಬ್ಬನೇ ಪರಲೋಕಕ್ಕೆ ಏರಿಹೋದ ಏಕೈಕ ವ್ಯಕ್ತಿಯಾಗಿದ್ದಾನೆ.

14''ಮೋಶೆಯು ಮರಳುಗಾಡಿನಲ್ಲಿ ಸರ್ಪವನ್ನು ಎತ್ತರ
ವಾದ ಕಂಬದ ಮೇಲಿಟ್ಟನು. ಅಂತೆಯೇ ಮನುಷ್ಯಕುಮಾರ
ನನ್ನು ಸಹ ಎತ್ತರವಾದ ಕಂಬದ ಮೇಲಿಡಬೇಕು. 15ಆತನಲ್ಲಿ
ನಂಬಿಕೆ ಇಡುವ ಪ್ರತಿಯೊಬ್ಬರೂ ನಿತ್ಯಜೀವವನ್ನು ಹೊಂದಿ
ಕೊಳ್ಳುವರು'' ಎಂದು ಹೇಳಿದನು.

16ಹೌದು, ದೇವರು ಲೋಕವನ್ನು ಎಷ್ಟೋ ಪ್ರೀತಿಸಿ ತನ್ನ
ಒಬ್ಬನೇ ಮಗನನ್ನು ಕೊಟ್ಟನು. ಆತನನ್ನು ನಂಬುವ
ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಹೊಂದ
ಬೇಕೆಂದು ದೇವರು ತನ್ನ ಮಗನನ್ನು ಕೊಟ್ಟನು. 17ದೇವರು
ತನ್ನ ಮಗನನ್ನು ಈ ಲೋಕಕ್ಕೆ ಕಳುಹಿಸಿದ್ದು ಆತನ ಮೂಲಕವಾಗಿ
ಈ ಲೋಕದ ಜನರನ್ನು ಅಪರಾಧಿಗಳೆಂದು ತೀರ್ಪು
ಮಾಡುವುದಕ್ಕಾಗಿಯಲ್ಲ. ಈ ಲೋಕದವರು ರಕ್ಷಣೆ ಹೊಂದಿ
ಕೊಳ್ಳಲೆಂದು ದೇವರು ಆತನನ್ನು ಕಳುಹಿಸಿಕೊಟ್ಟನು. 18ದೇವರ
ಮಗನಲ್ಲಿ ನಂಬಿಕೆ ಇಡುವವನಿಗೆ ತೀರ್ಪಾಗುವುದಿಲ್ಲ. ಆದರೆ
ನಂಬದವನಿಗೆ ಆಗಲೇ ತೀರ್ಪಾಗಿದೆ. ಏಕೆಂದರೆ, ಅವನು ದೇವರ
ಒಬ್ಬನೇ ಮಗನಲ್ಲಿ ನಂಬಿಕೆ ಇಡಲಿಲ್ಲ. 19ಆ ತೀರ್ಪು ಏನಂದರೆ:
ಬೆಳಕು ಈ ಲೋಕಕ್ಕೆ ಬಂದಿದೆ, ಆದರೆ ಜನರು ಬೆಳಕನ್ನು
ಅಪೇಕ್ಷಿಸದೆ ಕತ್ತಲೆಯನ್ನೇ ಬಯಸಿದರು. ಏಕೆಂದರೆ ಅವರು
ದುಷ್ಟಕಾರ್ಯಗಳನ್ನು ಮಾಡುತ್ತಿದ್ದರು. 20ಕೇಡನ್ನು ಮಾಡುವ
ಪ್ರತಿಯೊಬ್ಬನೂ ಬೆಳಕನ್ನು ದ್ವೇಷಿಸುವನು. ಅವನು ಬೆಳಕಿಗೆ
ಬರುವುದಿಲ್ಲ. ಏಕೆಂದರೆ ಅವನು ಮಾಡಿರುವ ಕೆಟ್ಟ ಕಾರ್ಯ
ಗಳನ್ನೆಲ್ಲಾ ಬೆಳಕು ತೋರಿಸುತ್ತದೆ. 21ಆದರೆ ಸತ್ಯಮಾರ್ಗವನ್ನು
ಅನುಸರಿಸುವವನು ಬೆಳಕಿಗೆ ಬರುತ್ತಾನೆ. ಅವನು ಮಾಡಿರುವ
ಕಾರ್ಯಗಳೆಲ್ಲಾ ದೇವರ ಮೂಲಕವಾಗಿ ಮಾಡಿದ ಕಾರ್ಯ
ಗಳೆಂದು ಬೆಳಕು ತೋರಿಸುತ್ತದೆ.

## ಯೇಸು ಮತ್ತು ಸ್ನಾನಿಕ ಯೋಹಾನ

22ಇದಾದ ನಂತರ, ಯೇಸು ಮತ್ತು ಆತನ ಶಿಷ್ಯರು
ಜುದೇಯ ಪ್ರಾಂತ್ಯಕ್ಕೆ ಹೋದರು. ಅಲ್ಲಿ ಯೇಸು ತನ್ನ ಶಿಷ್ಯ
ರೊಡನೆ ತಂಗಿದ್ದು, ಜನರಿಗೆ ದೀಕ್ಷಾಸ್ನಾನ ಮಾಡಿಸಿದನು.
23ಯೋಹಾನನು ಸಹ ಐನೋನ್ ಎಂಬ ಸ್ಥಳದಲ್ಲಿ ದೀಕ್ಷಾಸ್ನಾನ
ಮಾಡಿಸುತ್ತಿದ್ದನು. ಐನೋನ್ ಎಂಬ ಊರು ಸಲೀಮ್
ಊರಿನ ಸಮೀಪದಲ್ಲಿದೆ. ಅಲ್ಲಿ ಬೇಕಾದಷ್ಟು ನೀರಿದ್ದುದರಿಂದ
ಯೋಹಾನನು ಅಲ್ಲಿ ಜನರಿಗೆ ದೀಕ್ಷಾಸ್ನಾನ ಮಾಡಿಸುತ್ತಿದ್ದನು.
ಜನರು ಅಲ್ಲಿಗೆ ಬಂದು ದೀಕ್ಷಾಸ್ನಾನ ತೆಗೆದುಕೊಳ್ಳುತ್ತಿದ್ದರು.
24(ಆಗ ಯೋಹಾನನನ್ನು ಇನ್ನೂ ಸೆರೆಮನೆಗೆ ಹಾಕಿರಲಿಲ್ಲ.)

25ಯೋಹಾನನ ಶಿಷ್ಯರಲ್ಲಿ ಕೆಲವರಿಗೂ ಮತ್ತೊಬ್ಬ
ಯೆಹೂದ್ಯನಿಗೂ ಶುದ್ಧಾಚಾರದ ಬಗ್ಗೆ ವಾದವಾಯಿತು.
26ಆದ್ದರಿಂದ ಶಿಷ್ಯರು ಯೋಹಾನನ ಬಳಿಗೆ ಬಂದು,
''ಗುರುವೇ, ಜೋರ್ಡನ್ ನದಿಯ ಆಚೆ ದಡದಲ್ಲಿ ನಿನ್ನೊಂದಿ
ಗಿದ್ದ ವ್ಯಕ್ತಿಯನ್ನು ಜ್ಞಾಪಿಸಿಕೊ. ಆತನ ಕುರಿತಾಗಿ ನೀನೇ ಸಾಕ್ಷಿ
ಹೇಳಲಿಲ್ಲವೇ? ಆತನು ಜನರಿಗೆ ದೀಕ್ಷಾಸ್ನಾನ ಕೊಡುತ್ತಿದ್ದಾನೆ.
ಅನೇಕ ಜನರು ಆತನ ಬಳಿಗೆ ಹೋಗುತ್ತಿದ್ದಾರೆ'' ಎಂದು
ಹೇಳಿದರು. 27ಯೋಹಾನನು, ''ದೇವರು ಏನು ಕೊಡುತ್ತಾನೊ
ಅದನ್ನು ಮಾತ್ರ ಒಬ್ಬನು ಪಡೆದುಕೊಳ್ಳಬಲ್ಲನು. 28''ನಾನು
ಕ್ರಿಸ್ತನಲ್ಲ. ಆತನಿಗಾಗಿ ಹಾದಿಯನ್ನು ಸಿದ್ಧಪಡಿಸುವುದಕ್ಕಾಗಿ
ಮಾತ್ರ ಕಳುಹಿಸಲ್ಪಟ್ಟಿದ್ದೇನೆ' ಎಂದು ನಾನು ಹೇಳಿದ್ದಕ್ಕೆ ನೀವೇ
ಸಾಕ್ಷಿಗಳಾಗಿದ್ದೀರಿ. 29ಮದುಮಗಳು ಮದುಮಗನಿಗೆ ಮಾತ್ರ
ಸೇರಿದವಳಾಗಿದ್ದಾಳೆ. ಮದುಮಗನಿಗೆ ಸಹಾಯ ಮಾಡುವ
ಸ್ನೇಹಿತನು ಮದುಮಗನ ಬರುವಿಕೆಗಾಗಿ ಕಾಯುತ್ತಿರುತ್ತಾನೆ
ಮತ್ತು ಆತನ ಕರೆಗಾಗಿ ಆಲಿಸುತ್ತಿರುತ್ತಾನೆ. ಮದುಮಗನ
ಸ್ವರವನ್ನು ಕೇಳುವಾಗ ಈ ಸ್ನೇಹಿತನು ಬಹು ಸಂತೋಷ
ಪಡುವನು. ಅದೇ ಸಂತೋಷ ನನಗಿದೆ. ನನ್ನ ಪೂರ್ಣಾನಂದದ
ಸಮಯವು ಇದೇ ಆಗಿದೆ. 30ಆತನು (ಯೇಸು) ವೃದ್ಧಿಯಾಗ
ಬೇಕು ಮತ್ತು ನಾನು ಕಡಿಮೆಯಾಗಬೇಕು.

## ಪರಲೋಕದಿಂದ ಬರುವ ವ್ಯಕ್ತಿ

31''ಮೇಲಿನಿಂದ ಬರುವ ಒಬ್ಬನು (ಯೇಸು) ಬೇರೆಲ್ಲಾ
ಜನರಿಗಿಂತಲೂ ದೊಡ್ಡವನಾಗಿದ್ದಾನೆ. ಈ ಲೋಕದ ವ್ಯಕ್ತಿಯು
ಈ ಲೋಕಕ್ಕೆ ಸೇರಿದವನಾಗಿದ್ದಾನೆ. ಅವನು ಈ ಲೋಕದಲ್ಲಿನ

ಸಂಗತಿಗಳ ಬಗ್ಗೆ ಮಾತಾಡುತ್ತಾನೆ. ಆದರೆ ಪರಲೋಕದಿಂದ
ಬರುವ ಒಬ್ಬನು (ಯೇಸು) ಬೇರೆಲ್ಲಾ ಜನರಿಗಿಂತಲೂ
ದೊಡ್ಡವನಾಗಿದ್ದಾನೆ. [32]ಆತನು ತಾನು ಕಂಡಿರುವುದರ ಬಗ್ಗೆ
ಮತ್ತು ಕೇಳಿರುವುದರ ಬಗ್ಗೆ ಸಾಕ್ಷಿ ನೀಡುತ್ತಾನೆ. ಆದರೆ ಆತನ
ಸಾಕ್ಷಿಯನ್ನು ಜನರು ಸ್ವೀಕರಿಸಿಕೊಳ್ಳುವುದಿಲ್ಲ. [33]ಆತನ ಸಾಕ್ಷಿ
ಯನ್ನು ಸ್ವೀಕರಿಸಿಕೊಳ್ಳುವ ವ್ಯಕ್ತಿಯು ದೇವರೇ ಸತ್ಯವಂತನೆಂದು
ನಿರೂಪಿಸುತ್ತಾನೆ. [34]ದೇವರು ಆತನನ್ನು (ಯೇಸುವನ್ನು)
ಕಳುಹಿಸಿದನು. ದೇವರು ಹೇಳುವ ಸಂಗತಿಗಳನ್ನು ಆತನು ಹೇಳು
ತ್ತಾನೆ. ಏಕೆಂದರೆ ದೇವರು ಆತನಿಗೆ ಆತ್ಮನನ್ನು ಅಮಿತವಾಗಿ
ಕೊಡುತ್ತಾನೆ. [35]ತಂದೆಯು ಮಗನನ್ನು ಪ್ರೀತಿಸುತ್ತಾನೆ.
ತಂದೆಯು ಮಗನಿಗೆ ಪ್ರತಿಯೊಂದರ ಮೇಲೆಯೂ ಅಧಿಕಾರ
ವನ್ನು ಕೊಟ್ಟಿದ್ದಾನೆ. [36]ಮಗನಲ್ಲಿ ನಂಬಿಕೆ ಇಡುವವನು ನಿತ್ಯ
ಜೀವವನ್ನು ಹೊಂದಿದ್ದಾನೆ. ಆದರೆ ಮಗನಿಗೆ ವಿಧೇಯನಾಗ
ದವನು ಆ ಜೀವವನ್ನು ಎಂದಿಗೂ ಹೊಂದಿಕೊಳ್ಳುವುದಿಲ್ಲ.
ದೇವರ ಕೋಪವು ಅವನ ಮೇಲೆ ನೆಲೆಗೊಂಡಿರುವುದು''
ಎಂದು ಉತ್ತರಕೊಟ್ಟನು.

### ಯೇಸು ಮತ್ತು ಸಮಾರ್ಯ ಸ್ತ್ರೀಯ ಸಂಭಾಷಣೆ

4 ತಾನು ಯೋಹಾನನಿಗಿಂತಲೂ ಹೆಚ್ಚು ಶಿಷ್ಯರನ್ನು
ಮಾಡಿಕೊಂಡು ಅವರಿಗೆ ದೀಕ್ಷಾಸ್ನಾನ ಮಾಡಿಸುತ್ತಿರುವ
ಸುದ್ದಿಯು ಫರಿಸಾಯರಿಗೆ ತಿಳಿಯಿತೆಂಬುದು ಯೇಸುವಿಗೆ
ಗೊತ್ತಾಯಿತು. [2](ವಾಸ್ತವವಾಗಿ ಜನರಿಗೆ ದೀಕ್ಷಾಸ್ನಾನ
ಕೊಟ್ಟದ್ದು ಯೇಸುವಲ್ಲ. ಆತನ ಶಿಷ್ಯರೇ ಜನರಿಗೆ ದೀಕ್ಷಾಸ್ನಾನ
ಮಾಡಿಸಿದರು.) [3]ಆಗ, ಆತನು ಜುದೇಯವನ್ನು ಬಿಟ್ಟು ಮತ್ತೆ
ಗಲಿಲೇಯಕ್ಕೆ ಹೋದನು. [4]ಸಮಾರ್ಯ ಪ್ರಾಂತ್ಯದ
ಮೂಲಕವೇ ಗಲಿಲೇಯಕ್ಕೆ ಹೋಗಬೇಕಿತ್ತು.

[5]ಯೇಸು ಸಮಾರ್ಯದ ಪಟ್ಟಣವಾದ ಸಿಖಾರ್ ಎಂಬಲ್ಲಿಗೆ
ಬಂದನು. ಯಾಕೋಬನು ತನ್ನ ಮಗನಾದ ಯೋಸೇಫನಿಗೆ
ಕೊಟ್ಟ ಭೂಮಿಯ ಸಮೀಪದಲ್ಲಿ ಆ ಊರಿದೆ. [6]ಯಾಕೋಬನ
ಬಾವಿಯು ಅಲ್ಲಿತ್ತು. ಯೇಸು ತನ್ನ ದೀರ್ಘ ಪ್ರಯಾಣದಿಂದ
ಆಯಾಸಗೊಂಡಿದ್ದನು. ಆದ್ದರಿಂದ ಆತನು ಬಾವಿಯ ಬಳಿ
ಕುಳಿತುಕೊಂಡನು. ಆಗ ಸುಮಾರು ಮಧ್ಯಾಹ್ನದ ಸಮಯ
ವಾಗಿತ್ತು.

[7]ಸಮಾರ್ಯದ ಸ್ತ್ರೀಯೊಬ್ಬಳು ನೀರನ್ನು ತೆಗೆದುಕೊಂಡು
ಹೋಗುವುದಕ್ಕಾಗಿ ಆ ಬಾವಿಗೆ ಬಂದಳು. ಯೇಸು ಆಕೆಗೆ,
''ದಯವಿಟ್ಟು ಕುಡಿಯಲು ಸ್ವಲ್ಪ ನೀರು ಕೊಡು'' ಎಂದು
ಕೇಳಿದನು. [8](ಯೇಸುವಿನ ಶಿಷ್ಯರು ಆಹಾರ ಪದಾರ್ಥವನ್ನು
ಕೊಂಡುಕೊಂಡು ಬರಲು ಪಟ್ಟಣದೊಳಗೆ ಹೋಗಿದ್ದಾಗ ಇದು
ಸಂಭವಿಸಿತು.)

[9]ಸಮಾರ್ಯದ ಸ್ತ್ರೀಯು, ''ಕುಡಿಯುವ ನೀರಿಗಾಗಿ ನೀನು
ನನ್ನನ್ನು ಕೇಳುತ್ತಿರುವುದು ನನಗೆ ಆಶ್ಚರ್ಯವನ್ನು ಉಂಟು
ಮಾಡಿದೆ! ನೀನಾದರೊ ಯೆಹೂದ್ಯನು. ನಾನಾದರೊ
ಸಮಾರ್ಯದವಳು!'' ಎಂದು ಹೇಳಿದಳು. (ಯೆಹೂದ್ಯರು
ಸಮಾರ್ಯದವರೊಂದಿಗೆ ಸ್ನೇಹದಿಂದಿರಲಿಲ್ಲ.)

[10]ಯೇಸು ಆಕೆಗೆ, ''ದೇವರು ಏನು ಕೊಡುತ್ತಾನೆಂಬುದು
ನಿನಗೆ ಗೊತ್ತಿಲ್ಲ ಮತ್ತು ಕುಡಿಯಲು ನೀರನ್ನು ಕೇಳಿದ ನಾನು
ಯಾರೆಂಬುದೂ ನಿನಗೆ ಗೊತ್ತಿಲ್ಲ. ನಿನಗೆ ಈ ಸಂಗತಿಗಳು
ಗೊತ್ತಿದ್ದರೆ, ನೀನು ನನ್ನನ್ನು ಕೇಳಿಕೊಳ್ಳುತ್ತಿದ್ದೆ. ಮತ್ತು ನಾನು
ನಿನಗೆ ಜೀವಜಲವನ್ನು ಕೊಡುತ್ತಿದ್ದೆ'' ಎಂದನು.

[11]ಆ ಸ್ತ್ರೀಯು, ''ಅಯ್ಯಾ, ಆ ಜೀವಜಲ ನಿನಗೆಲ್ಲಿ
ಸಿಕ್ಕುವುದು? ಬಾವಿಯು ಬಹು ಆಳವಾಗಿದೆ ಮತ್ತು ನೀರು
ಸೇದುವುದಕ್ಕೆ ನಿನ್ನಲ್ಲಿ ಏನೂ ಇಲ್ಲ. [12]ನಮ್ಮ ಪಿತೃವಾದ
ಯಾಕೋಬನಿಗಿಂತಲೂ ನೀನು ದೊಡ್ಡವನೋ? ನಮಗೆ ಈ
ಬಾವಿಯನ್ನು ಯಾಕೋಬನೇ ಕೊಟ್ಟನು. ಸ್ವತಃ ಅವನೇ ಈ
ನೀರನ್ನು ಕುಡಿದನು. ಅಲ್ಲದೆ ಅವನ ಮಕ್ಕಳು ಈ ಬಾವಿಯ
ನೀರನ್ನು ಕುಡಿದರು ಮತ್ತು ಅವನ ಪಶುಗಳೆಲ್ಲಾ ಈ ಬಾವಿಯ
ನೀರನ್ನು ಕುಡಿದವು'' ಎಂದು ಹೇಳಿದಳು.

[13]ಯೇಸು, ''ಈ ನೀರನ್ನು ಕುಡಿಯುವ ಪ್ರತಿಯೊಬ್ಬನಿಗೂ
ಮತ್ತೆ ದಾಹವಾಗುವುದು. [14]ಆದರೆ ನಾನು ಕೊಡುವ ನೀರನ್ನು
ಕುಡಿಯುವವನಿಗೆ ದಾಹವಾಗುವುದೇ ಇಲ್ಲ. ನಾನು ಅವನಿಗೆ
ಕೊಡುವ ನೀರು ಅವನೊಳಗೆ ಉಕ್ಕಿ ಹರಿಯುವ ನೀರಿನ
ಬುಗ್ಗೆಯಾಗುವುದು. ಆ ನೀರು ಅವನಿಗೆ ನಿತ್ಯಜೀವವನ್ನು
ತರುತ್ತದೆ'' ಎಂದು ಉತ್ತರಕೊಟ್ಟನು. [15]ಆ ಸ್ತ್ರೀಯು ಯೇಸು
ವಿಗೆ, ''ಅಯ್ಯಾ, ಆ ನೀರನ್ನು ನನಗೆ ಕೊಡು. ಆಗ ನನಗೆ
ಮತ್ತೆಂದಿಗೂ ದಾಹವಾಗುವುದಿಲ್ಲ. ನೀರನ್ನು ತೆಗೆದುಕೊಂಡು
ಹೋಗುವುದಕ್ಕಾಗಿ ನಾನು ಇಲ್ಲಿಗೆ ಮತ್ತೆ ಬರುವ ಅಗತ್ಯವೂ
ಇರುವುದಿಲ್ಲ'' ಎಂದು ಹೇಳಿದಳು.

[16]ಯೇಸು ಆಕೆಗೆ, ''ಹೋಗಿ ನಿನ್ನ ಗಂಡನನ್ನು ಕರೆದು
ಕೊಂಡು ಬಾ'' ಎಂದನು.

[17]ಆ ಸ್ತ್ರೀಯು, ''ನನಗೆ ಗಂಡನಿಲ್ಲ'' ಎಂದು ಹೇಳಿದಳು.
ಯೇಸು ಆಕೆಗೆ, ''ಗಂಡನಿಲ್ಲವೆಂದು ಸರಿಯಾಗಿ ಹೇಳಿದೆ.
[18]ನಿಜವಾಗಿಯೂ ನಿನಗೆ ಐದು ಮಂದಿ ಗಂಡಂದಿರಿದ್ದರು.
ಆದರೆ ಈಗ ನೀನು ಯಾರೊಂದಿಗೆ ವಾಸಿಸುತ್ತಿರುವಿಯೋ
ಅವನು ನಿನ್ನ ಗಂಡನಲ್ಲ. ನೀನು ನನಗೆ ಸತ್ಯವನ್ನು ತಿಳಿಸಿದೆ''
ಎಂದು ಹೇಳಿದನು. [19] ಆ ಸ್ತ್ರೀಯು, ''ಅಯ್ಯಾ, ನೀನು ಪ್ರವಾದಿ
ಯೆಂದು ಕಾಣುತ್ತದೆ. [20]ನಮ್ಮ ಪಿತೃಗಳು ಈ ಗುಡ್ಡದ ಮೇಲೆ
ಆರಾಧಿಸಿದರು. ಆದರೆ ಜನರು ಆರಾಧಿಸಬೇಕಾದ ಸ್ಥಳ
ಜೆರುಸಲೇಮ್ ಎಂದು ಯೆಹೂದ್ಯರಾದ ನೀವು ಹೇಳು
ತ್ತೀರಲ್ಲಾ'' ಎಂದಳು.

[21]ಯೇಸು, ''ಅಮ್ಮಾ, ನನ್ನನ್ನು ನಂಬು! ನೀವು ಇನ್ನೆಂದಿಗೂ
ತಂದೆಯನ್ನು (ದೇವರನ್ನು) ಜೆರುಸಲೇಮಿನಲ್ಲಾಗಲಿ ಈ
ಗುಡ್ಡದ ಮೇಲಾಗಲಿ ಆರಾಧಿಸಬೇಕಿಲ್ಲ. [22]ನೀವು ನಿಮಗೆ
ತಿಳಿದಿಲ್ಲದ ಯಾವುದನ್ನೋ ಆರಾಧಿಸುತ್ತೀರಿ. ನಮಗಾದರೋ
ನಾವು ಯಾರನ್ನು ಆರಾಧಿಸುತ್ತಿದ್ದೇವೆ ಎಂಬುದು ತಿಳಿದಿದೆ.
ರಕ್ಷಣೆಯು ಯೆಹೂದ್ಯರಿಂದ ಬರುತ್ತದೆ. [23]ನಿಜವಾದ
ಆರಾಧಕರು ತಂದೆಯ ಚಿತ್ತಕ್ಕನುಸಾರವಾಗಿ ತಂದೆಯನ್ನು
ಆತ್ಮದಿಂದಲೂ ಸತ್ಯದಿಂದಲೂ ಆರಾಧಿಸುವ ಕಾಲ ಬರುತ್ತದೆ.
ಆ ಕಾಲ ಈಗಲೇ ಬಂದಿದೆ ಮತ್ತು ಅಂಥ ಜನರೇ ತನ್ನ
ಆರಾಧಕರಾಗಿರಬೇಕೆಂದು ತಂದೆಯು ಬಯಸುತ್ತಾನೆ.
[24]ದೇವರು ಆತ್ಮಸ್ವರೂಪಿ. ಆದ್ದರಿಂದ ದೇವರನ್ನು ಆರಾಧಿಸು
ವವರು ಆತ್ಮದಿಂದಲೂ ಸತ್ಯದಿಂದಲೂ ಆರಾಧಿಸಬೇಕು''
ಎಂದು ಹೇಳಿದನು.

[25]ಆ ಸ್ತ್ರೀಯು, ''ಮೆಸ್ಸೀಯನು ಬರುತ್ತಾನೆಂದು ನನಗೆ
ಗೊತ್ತು. ಆತನು ಬಂದಾಗ ನಮಗೆ ಪ್ರತಿಯೊಂದನ್ನೂ

ವಿವರಿಸುವನು'' ಎಂದು ಹೇಳಿದಳು. (''ಮೆಸ್ಸೀಯನು''ಅಂದರೆ
''ಕ್ರಿಸ್ತನು.'') 26ಆಗ ಯೇಸು, ''ಆತನೇ ಈಗ ನಿನ್ನೊಂದಿಗೆ
ಮಾತಾಡುತ್ತಿದ್ದಾನೆ. ನಾನೇ ಮೆಸ್ಸೀಯ'' ಎಂದು ಹೇಳಿದನು.

27ಆ ಸಮಯದಲ್ಲಿ ಆತನ ಶಿಷ್ಯರು ಹಿಂತಿರುಗಿ ಬಂದರು.
ಯೇಸು ಒಬ್ಬ ಸ್ತ್ರೀಯೊಂದಿಗೆ ಮಾತಾಡುತ್ತಿರುವುದನ್ನು ನೋಡಿ
ಅವರು ಆಶ್ಚರ್ಯಗೊಂಡರು. ಆದರೆ, ''ನಿನಗೇನು ಬೇಕು?''
ಎಂದಾಗಲಿ ''ನೀನು ಆಕೆಯೊಂದಿಗೆ ಏಕೆ ಮಾತಾಡುತ್ತಿರುವೆ?''
ಎಂದಾಗಲಿ ಅವರಲ್ಲಿ ಒಬ್ಬರೂ ಕೇಳಲಿಲ್ಲ.

28ಬಳಿಕ ಆ ಸ್ತ್ರೀಯು, ತನ್ನ ಕೊಡವನ್ನು ಅಲ್ಲಿಯೇ ಬಿಟ್ಟು
ಊರಿಗೆ ಹಿಂತಿರುಗಿ ಹೋಗಿ ಜನರಿಗೆ, 29''ನಾನು ಈವರೆಗೆ
ಮಾಡಿರುವ ಪ್ರತಿಯೊಂದನ್ನೂ ಒಬ್ಬ ವ್ಯಕ್ತಿ ನನಗೆ ತಿಳಿಸಿದನು.
ಬಂದು ಅವನನ್ನು ನೋಡಿರಿ. ಆತನೇ ಕ್ರಿಸ್ತನಿರಬಹುದು''
ಎಂದು ಹೇಳಿದಳು. 30ಆದ್ದರಿಂದ ಜನರು ಆತನನ್ನು ನೋಡಲು
ಪಟ್ಟಣದಿಂದ ಹೊರಬಂದರು.

31ಅಷ್ಟರಲ್ಲಿ ಯೇಸುವಿನ ಶಿಷ್ಯರು, ''ಗುರುವೇ, ಊಟ
ಮಾಡಿ'' ಎಂದು ಆತನನ್ನು ಒತ್ತಾಯ ಮಾಡಿದರು.

32ಅದಕ್ಕೆ ಯೇಸು, ''ನನ್ನಲ್ಲಿ ಆಹಾರವಿದೆ. ಆ ಆಹಾರದ
ಬಗ್ಗೆ ನಿಮಗೇನೂ ಗೊತ್ತಿಲ್ಲ'' ಎಂದನು.

33ಆದ್ದರಿಂದ ಶಿಷ್ಯರು, ''ಯಾರಾದರೂ ಆತನಿಗೆ ಮೊದಲೇ
ಆಹಾರವನ್ನು ತಂದುಕೊಟ್ಟರೇ? ಎಂದು ತಮ್ಮತಮ್ಮೊಳಗೆ
ಕೇಳತೊಡಗಿದರು. 34ಯೇಸು, ''ನನ್ನನ್ನು ಕಳುಹಿಸಿದಾತನು
(ದೇವರು) ನಾನು ಏನು ಮಾಡಬೇಕೆಂದು ಬಯಸುವನೋ
ಅದನ್ನು ಮಾಡುವುದೇ ನನಗೆ ಆಹಾರವಾಗಿದೆ. ಆತನು ನನಗೆ
ಕೊಟ್ಟಿರುವ ಕೆಲಸವನ್ನು ಪೂರೈಸುವುದೇ ನನಗೆ ಆಹಾರವಾಗಿದೆ.
35'ಸುಗ್ಗಿಗೆ ಇನ್ನೂ ನಾಲ್ಕು ತಿಂಗಳು ಕಾಯಬೇಕು' ಎಂದು ನೀವು
ಹೇಳುವಿರಿ. ಆದರೆ ನಾನು ನಿಮಗೆ ಹೇಳುತ್ತೇನೆ, ನಿಮ್ಮ
ಕಣ್ಣುಗಳನ್ನು ತೆರೆಯಿರಿ. ಹೊಲಗಳ ಸುತ್ತಲ್ಲೆಲ್ಲಾ ನೋಡಿರಿ,
ಅವು ಕೊಯ್ಲಿಗೆ ಬಂದಿವೆ. 36ಈಗಲೂ ಸಹ, ಬೆಳೆಯನ್ನು
ಕೊಯ್ಯುವವನಿಗೆ ಕೂಲಿ ದೊರೆಯುತ್ತದೆ. ಅವನು ಬೆಳೆಗಳನ್ನು
ನಿತ್ಯಜೀವಕ್ಕಾಗಿ ಕೂಡಿಸುತ್ತಿದ್ದಾನೆ. ಆದ್ದರಿಂದ ಈಗ
ಬಿತ್ತುವವರೂ ಮತ್ತು ಕೊಯ್ಯುವವರೂ ಒಟ್ಟಿಗೆ ಸಂತೋಷ
ವಾಗಿರುವರು. 37'ಒಬ್ಬನು ಬಿತ್ತುತ್ತಾನೆ, ಆದರೆ ಮತ್ತೊಬ್ಬನು
ಬೆಳೆಯನ್ನು ಕೊಯ್ಯುತ್ತಾನೆ' ಎಂದು ನಾವು ಹೇಳುವ ನಾಣ್ಣುಡಿ
ಸತ್ಯವಾದದ್ದು. 38ನೀವು ದುಡಿದಿಲ್ಲದ ಬೆಳೆಯನ್ನು ಕೊಯ್ಯುವು
ದಕ್ಕಾಗಿ ನಾನು ನಿಮ್ಮನ್ನು ಕಳುಹಿಸುತ್ತಿದ್ದೇನೆ. ಬೇರೆಯವರು
ದುಡಿದರು, ಆದರೆ ಅವರ ದುಡಿಮೆಯಿಂದ ನೀವು ಲಾಭವನ್ನು
ಪಡೆಯುತ್ತೀರಿ'' ಎಂದು ಹೇಳಿದನು.

39ಆ ಸಮಾರ್ಯ ಪಟ್ಟಣದ ಜನರಲ್ಲಿ ಅನೇಕರು
ಯೇಸುವನ್ನು ನಂಬಿದರು. ಏಕೆಂದರೆ ಆ ಸ್ತ್ರೀಯು ಆತನ
ವಿಷಯವಾಗಿ ಅವರಿಗೆ, ''ನಾನು ಮಾಡಿರುವ ಪ್ರತಿಯೊಂದನ್ನೂ
ಆತನು (ಯೇಸು) ನನಗೆ ತಿಳಿಸಿದನು'' ಎಂದು ಹೇಳಿದ್ದಳು.
40ಸಮಾರ್ಯದವರು ಯೇಸುವಿನ ಬಳಿಗೆ ಹೋಗಿ ತಮ್ಮೊಂದಿಗೆ
ಇರಬೇಕೆಂದು ಆತನನ್ನು ಬೇಡಿಕೊಂಡರು. ಆದ್ದರಿಂದ ಆತನು
ಅಲ್ಲಿ ಎರಡು ದಿನ ಇದ್ದನು. 41ಆತನು ಹೇಳಿದ ಸಂಗತಿಗಳನ್ನು
ಕೇಳಿ ಇನ್ನೂ ಅನೇಕ ಜನರು ನಂಬಿದರು. 42ಅವರು ಆ ಸ್ತ್ರೀಗೆ,
''ನಾವು ಮೊದಲು ನಿನ್ನ ಮಾತನ್ನು ಕೇಳಿ ಯೇಸುವನ್ನು
ನಂಬಿದೆವು. ಆದರೆ ಈಗ ಸ್ವತಃ ನಾವೇ ಆತನ ಮಾತನ್ನು ಕೇಳಿದ್ದ
ರಿಂದ ನಂಬುತ್ತೇವೆ. ನಿಜವಾಗಿಯೂ ಈತನೇ ಲೋಕ
ರಕ್ಷಕನೆಂದು ಈಗ ನಮಗೆ ತಿಳಿದಿದೆ'' ಎಂದು ಹೇಳಿದರು.

### ಗುಣಹೊಂದಿದ ಅಧಿಕಾರಿಯ ಮಗ

(ಮತ್ತಾಯ 8:5-13; ಲೂಕ 7:1-10)

43ಎರಡು ದಿನಗಳಾದ ನಂತರ ಯೇಸು ಅಲ್ಲಿಂದ
ಗಲಿಲೇಯಕ್ಕೆ ಹೋದನು. 44(ಪ್ರವಾದಿಗೆ ಸ್ವಂತ ಊರಿನಲ್ಲಿ
ಗೌರವವಿಲ್ಲವೆಂದು ಸ್ವತಃ ಯೇಸುವೇ ತಿಳಿಸಿದ್ದನು.) 45ಆತನು
ಗಲಿಲೇಯವನ್ನು ತಲುಪಿದಾಗ, ಅಲ್ಲಿಯ ಜನರು ಆತನನ್ನು
ಸ್ವಾಗತಿಸಿದರು. ಈ ಜನರು ಪಸ್ಕಹಬ್ಬಕ್ಕಾಗಿ ಜೆರುಸಲೇಮಿಗೆ
ಹೋಗಿದ್ದಾಗ ಹಬ್ಬದ ಸಮಯದಲ್ಲಿ ಆತನು ಮಾಡಿದ
ಕಾರ್ಯಗಳನ್ನೆಲ್ಲಾ ನೋಡಿದ್ದರು.

46ಯೇಸು ಗಲಿಲೇಯದ ಕಾನಾ ಊರಿಗೆ ಮತ್ತೊಮ್ಮೆ
ಭೇಟಿ ನೀಡಿದನು. ಆತನು ನೀರನ್ನು ದ್ರಾಕ್ಷಾರಸವನ್ನಾಗಿ
ಮಾರ್ಪಡಿಸಿದ್ದು ಆ ಊರಿನಲ್ಲೇ. ರಾಜನ ಒಬ್ಬ ಅಧಿಕಾರಿಯು
ಕಪೆರ್ನೌಮ್ ಪಟ್ಟಣದಲ್ಲಿ ವಾಸವಾಗಿದ್ದನು. ಅವನ ಮಗನಿಗೆ
ಕಾಯಿಲೆಯಾಗಿತ್ತು. 47ಯೇಸು ಜುದೇಯದಿಂದ ಬಂದು ಈಗ
ಗಲಿಲೇಯದಲ್ಲಿ ಇದ್ದಾನೆ ಎಂಬ ಸುದ್ದಿಯನ್ನು ಅವನು
ಕೇಳಿದನು. ಆದ್ದರಿಂದ ಅವನು ಆತನ ಬಳಿಗೆ ಹೋಗಿ ತನ್ನ
ಮಗನನ್ನು ಗುಣಪಡಿಸುವುದಕ್ಕಾಗಿ ಕಪೆರ್ನೌಮ್‌ಗೆ ಬರ
ಬೇಕೆಂದು ಆತನನ್ನು ಬೇಡಿಕೊಂಡನು. ಅವನ ಮಗನು
ಸಾಯುವ ಸ್ಥಿತಿಯಲ್ಲಿದ್ದನು. 48ಯೇಸು ಅವನಿಗೆ, ''ನೀವು
ಸೂಚಕಕಾರ್ಯಗಳನ್ನು ಮತ್ತು ಆಶ್ಚರ್ಯಕರವಾದ ಕಾರ್ಯ
ಗಳನ್ನು ನೋಡದ ಹೊರತು ನನ್ನನ್ನು ನಂಬುವುದೇ ಇಲ್ಲ''
ಎಂದು ಹೇಳಿದನು.

49ರಾಜನ ಅಧಿಕಾರಿ, ''ಸ್ವಾಮೀ, ನನ್ನ ಮಗನು ಸಾಯುವ
ಮೊದಲೇ ನೀನು ಬರಬೇಕು'' ಎಂದು ಕೇಳಿಕೊಂಡನು.

50ಯೇಸು ಅವನಿಗೆ, ''ಹೋಗು, ನಿನ್ನ ಮಗನು
ಬದುಕುವನು'' ಎಂದು ಉತ್ತರಕೊಟ್ಟನು.

ಯೇಸುವಿನ ಮಾತನ್ನು ಅವನು ನಂಬಿ ಮನೆಗೆ
ಹಿಂತಿರುಗಿದನು. 51ಅವನು ಮನೆಗೆ ಹೋಗುತ್ತಿರುವಾಗ ಅವನ
ಸೇವಕರುಗಳು ಬಂದು ಅವನನ್ನು ಭೇಟಿಯಾಗಿ, ''ನಿನ್ನ ಮಗನು
ಗುಣಹೊಂದಿದನು'' ಎಂದು ತಿಳಿಸಿದರು.

52ಅವನು, ''ನನ್ನ ಮಗನಿಗೆ ಯಾವಾಗ ಗುಣವಾಯಿತು?''
ಎಂದು ಕೇಳಿದನು.

ಸೇವಕರುಗಳು, ''ನಿನ್ನೆ ಮಧ್ಯಾಹ್ನ ಸುಮಾರು ಒಂದು
ಗಂಟೆಯಲ್ಲಿ ಅವನ ಜ್ವರವು ಬಿಟ್ಟಿತು'' ಎಂದು ಉತ್ತರಕೊಟ್ಟರು.
53''ನಿನ್ನ ಮಗನು ಬದುಕುವನು'' ಎಂದು ಯೇಸು
ಹೇಳಿದ್ದು ಇದೇ ಹೊತ್ತಿನಲ್ಲಿ ಎಂಬುದು ತಂದೆಗೆ ತಿಳಿದಿತ್ತು.
ಆದ್ದರಿಂದ ಅವನು ಮತ್ತು ಅವನ ಮನೆಯವರೆಲ್ಲ ಯೇಸುವನ್ನು
ನಂಬಿದರು. 54ಯೇಸು ಜುದೇಯದಿಂದ ಗಲಿಲೇಯಕ್ಕೆ ಬಂದ
ಮೇಲೆ ಮಾಡಿದ ಎರಡನೆಯ ಸೂಚಕಕಾರ್ಯವಿದು.

### ಕೊಳದ ಬಳಿ ಗುಣಹೊಂದಿದ ರೋಗಿ

5 ತರುವಾಯ ಯೇಸು ಯೆಹೂದ್ಯರ ಒಂದು ಹಬ್ಬಕ್ಕಾಗಿ
ಜೆರುಸಲೇಮಿಗೆ ಹೋದನು. 2ಜೆರುಸಲೇಮಿನಲ್ಲಿ ಐದು
ಮಂಟಪಗಳಿಂದ ಕೂಡಿದ ಒಂದು ಕೊಳವಿದೆ. ಯೆಹೂದ್ಯರ

ಭಾಷೆಯಲ್ಲಿ ಅದಕ್ಕೆ 'ಬೆತ್ಸಥ' ಎಂದು ಕರೆಯುತ್ತಾರೆ. ಈ
ಕೊಳವು 'ಕುರಿಬಾಗಿಲು' ಎಂಬ ಸ್ಥಳದ ಸಮೀಪದಲ್ಲಿದೆ.
3ಕೊಳದ ಬಳಿಯಲ್ಲಿದ್ದ ಮಂಟಪಗಳಲ್ಲಿ ಅನೇಕ ರೋಗಿಗಳು
ಬಿದ್ದುಕೊಂಡಿರುತ್ತಿದ್ದರು. ಅವರಲ್ಲಿ ಕೆಲವರು ಕುರುಡ
ರಾಗಿದ್ದರು, ಕೆಲವರು ಕುಂಟರಾಗಿದ್ದರು, ಮತ್ತೆ ಕೆಲವರು,
ಪಾರ್ಶ್ವವಾಯು ರೋಗಿಗಳಾಗಿದ್ದರು. 4*-5ಮೂವತ್ತೆಂಟು
ವರ್ಷಗಳಿಂದ ರೋಗಿಯಾಗಿದ್ದ ಒಬ್ಬನು ಅಲ್ಲಿ ಬಿದ್ದು
ಕೊಂಡಿದ್ದನು. 6ಯೇಸು ಅವನನ್ನು ನೋಡಿದನು. ಅವನು
ಬಹುಕಾಲದಿಂದ ರೋಗಿಯಾಗಿರುವುದು ಆತನಿಗೆ ಗೊತ್ತಿತ್ತು.
ಆದ್ದರಿಂದ ಆತನು ಅವನಿಗೆ, ''ಗುಣಹೊಂದಲು ನಿನಗೆ ಅಪೇಕ್ಷೆ
ಇದೆಯಾ?'' ಎಂದು ಕೇಳಿದನು.

7ಆ ರೋಗಿಯು, ''ಅಯ್ಯಾ, ನೀರು ಉಕ್ಕುವಾಗ
ಕೊಳದೊಳಗೆ ಇಳಿದುಹೋಗಲು ನನಗೆ ಯಾರೂ ಸಹಾಯ
ಮಾಡುವುದಿಲ್ಲ. ನಾನು ಎಲ್ಲರಿಗಿಂತ ಮೊದಲೇ ನೀರಿಗೆ ಇಳಿ
ಯಲು ಪ್ರಯತ್ನಿಸುವೆ. ಆದರೆ ಪ್ರತಿಸಲವು ನನಗಿಂತ ಮೊದಲೇ
ಮತ್ತೊಬ್ಬನು ಇಳಿದುಬಿಡುತ್ತಾನೆ'' ಎಂದು ಹೇಳಿದನು.

8ಆಗ ಯೇಸು, ''ಎದ್ದುನಿಲ್ಲು! ನಿನ್ನ ಹಾಸಿಗೆಯನ್ನು
ಎತ್ತಿಕೊಂಡು ನಡೆ'' ಎಂದು ಹೇಳಿದನು. 9 ಆ ಕ್ಷಣವೇ ಆ
ಮನುಷ್ಯನು ಗುಣಹೊಂದಿ, ತನ್ನ ಹಾಸಿಗೆಯನ್ನು ಎತ್ತಿಕೊಂಡು
ನಡೆದನು. ಇದೆಲ್ಲಾ ನಡೆದದ್ದು ಸಬ್ಬತ್‌ದಿನದಲ್ಲಿ. 10ಆದ್ದರಿಂದ
ಯೆಹೂದ್ಯರು ಗುಣಹೊಂದಿದ ಆ ವ್ಯಕ್ತಿಗೆ, ''ಇಂದು ಸಬ್ಬತ್
ದಿನ. ನೀನು ಸಬ್ಬತ್‌ದಿನದಲ್ಲಿ* ಹಾಸಿಗೆಯನ್ನು ಹೊತ್ತು
ಕೊಂಡು ಹೋಗುವುದು ನಮ್ಮ ಧರ್ಮಶಾಸ್ತ್ರಕ್ಕೆ ವಿರುದ್ಧ
ವಾದದ್ದು'' ಎಂದರು.

11ಅದಕ್ಕೆ ಅವನು, ''ನನ್ನನ್ನು ಗುಣಪಡಿಸಿದವನೇ, 'ನಿನ್ನ
ಹಾಸಿಗೆಯನ್ನು ಎತ್ತಿಕೊಂಡು ನಡೆ' ಎಂದು ಹೇಳಿದನು''
ಎಂಬುದಾಗಿ ಉತ್ತರಿಸಿದನು.

12ಅದಕ್ಕೆ ಅವರು, ''ನಿನ್ನ ಹಾಸಿಗೆಯನ್ನು ಎತ್ತಿಕೊಂಡು
ನಡೆಯಲು ನಿನಗೆ ಹೇಳಿದವನು ಯಾರು?'' ಎಂದು ಕೇಳಿದರು.

13ಆದರೆ ಗುಣಹೊಂದಿದ್ದ ವ್ಯಕ್ತಿಗೆ ತನ್ನನ್ನು ಗುಣಪಡಿಸಿ
ದವನು ಯಾರೆಂಬುದು ಗೊತ್ತಿರಲಿಲ್ಲ. ಆ ಸ್ಥಳದಲ್ಲಿ ಅನೇಕ
ಜನರಿದ್ದರು. ಯೇಸು ಆ ಸ್ಥಳದಿಂದ ನುಸುಳಿಕೊಂಡು ಹೊರಟು
ಹೋದನು.

14ಅನಂತರ ಯೇಸು ಆ ಮನುಷ್ಯನನ್ನು ದೇವಾಲಯದಲ್ಲಿ
ಕಂಡು ಅವನಿಗೆ, ''ನೋಡು, ಈಗ ನೀನು ಗುಣಹೊಂದಿರುವೆ.
ಆದರೆ ಪಾಪ ಮಾಡುವುದನ್ನು ಬಿಟ್ಟುಬಿಡು. ಇಲ್ಲದಿದ್ದರೆ ಹೆಚ್ಚಿನ
ಕೇಡು ನಿನಗೆ ಸಂಭವಿಸಬಹುದು!'' ಎಂದು ಹೇಳಿದನು.

15ಆಗ ಆ ಮನುಷ್ಯನು ಆ ಯೆಹೂದ್ಯರ ಬಳಿಗೆ ಹೋಗಿ
ತನ್ನನ್ನು ಗುಣಪಡಿಸಿದವನು ಯೇಸುವೇ ಎಂದು ತಿಳಿಸಿದನು.

16ಯೇಸು ಈ ಕಾರ್ಯಗಳನ್ನು ಸಬ್ಬತ್ ದಿನದಲ್ಲಿ ಮಾಡು
ತ್ತಿದ್ದನು. ಈ ಕಾರಣದಿಂದಾಗಿ ಯೆಹೂದ್ಯರು ಯೇಸುವನ್ನು
ಹಿಂಸಿಸತೊಡಗಿದರು. 17ಆದರೆ ಯೇಸು ಅವರಿಗೆ, ''ನನ್ನ
ತಂದೆಯು ತನ್ನ ಕಾರ್ಯವನ್ನು ಎಂದಿಗೂ ನಿಲ್ಲಿಸುವುದಿಲ್ಲ.
ಆದ್ದರಿಂದ ನಾನು ಸಹ ಕಾರ್ಯನಿರತನಾಗಿದ್ದೇನೆ'' ಎಂದು
ತನ್ನನ್ನು ಪ್ರತಿಪಾದಿಸಿಕೊಂಡನು.

18ಯೇಸು ಸಬ್ಬತ್ತನ್ನು ಉಲ್ಲಂಘಿಸಿದ್ದಲ್ಲದೆ ದೇವರನ್ನು ತನ್ನ
ತಂದೆಯೆಂದು ಹೇಳಿಕೊಂಡು ತನ್ನನ್ನು ದೇವರಿಗೆ ಸರಿ
ಸಮಾನನ್ನಾಗಿ ಮಾಡಿಕೊಳ್ಳುತ್ತಿದ್ದಾನೆಂದು ಯೆಹೂದ್ಯರು
ಆತನನ್ನು ಕೊಲ್ಲಲು ಮತ್ತುಷ್ಟು ಪ್ರಯತ್ನಿಸಿದರು.

### ಯೇಸುವಿಗೆ ದೇವರ ಅಧಿಕಾರವಿದೆ

19ಅದಕ್ಕೆ ಉತ್ತರವಾಗಿ ಆತನು ಇಂತೆಂದನು: ''ನಾನು
ನಿಮಗೆ ಸತ್ಯವನ್ನು ಹೇಳುತ್ತೇನೆ. ಮಗನು ತನ್ನಷ್ಟಕ್ಕೆ ತಾನೇ ಏನೂ
ಮಾಡಲಾರನು; ತಂದೆಯು ಮಾಡುವುದನ್ನು ಕಂಡು ತಾನೂ
ಹಾಗೆಯೇ ಮಾಡುತ್ತಾನೆ. ತಂದೆಯು ಮಾಡುವ ಕಾರ್ಯ
ಗಳನ್ನೇ ಮಗನೂ ಮಾಡುತ್ತಾನೆ. 20ತಂದೆಯು ಮಗನನ್ನು
ಪ್ರೀತಿಸುವನು ಮತ್ತು ತಾನು ಮಾಡುವ ಎಲ್ಲಾ ಕಾರ್ಯಗಳನ್ನು
ಮಗನಿಗೆ ತೋರಿಸುವನು. ಆದರೆ ಇದಕ್ಕಿಂತಲೂ ಹೆಚ್ಚಿನ
ಕಾರ್ಯಗಳನ್ನು ತಂದೆಯು ಮಗನಿಗೆ ತೋರಿಸುವನು. ಆಗ
ನೀವೆಲ್ಲರೂ ಆಶ್ಚರ್ಯಚಕಿತರಾಗುವಿರಿ. 21ತಂದೆಯು ಸತ್ತ
ವರನ್ನು ಎಬ್ಬಿಸಿ ಅವರಿಗೆ ಜೀವ ಕೊಡುತ್ತಾನೆ. ಅದೇ ರೀತಿಯಲ್ಲಿ
ಮಗನು ತಾನು ಬಯಸಿದವರಿಗೆ ಜೀವವನ್ನು ಕೊಡುತ್ತಾನೆ.
22ಇದಲ್ಲದೆ ತಂದೆಯು ಯಾರಿಗೂ ತೀರ್ಪು ಮಾಡುವುದಿಲ್ಲ.
ಆದರೆ ತಂದೆಯು ತೀರ್ಪು ಮಾಡುವ ಅಧಿಕಾರವನ್ನೆಲ್ಲಾ
ಮಗನಿಗೆ ಕೊಟ್ಟಿದ್ದಾನೆ. 23ಜನರು ತಂದೆಯನ್ನು ಗೌರವಿಸು
ವಂತೆ ಮಗನನ್ನು ಗೌರವಿಸಬೇಕೆಂದು ದೇವರು ಹೀಗೆ
ಮಾಡಿದನು. ಮಗನನ್ನು ಸನ್ಮಾನಿಸದವನು ಆತನನ್ನು ಕಳು
ಹಿಸಿರುವ ತಂದೆಯನ್ನೂ ಸನ್ಮಾನಿಸದವನಾಗಿದ್ದಾನೆ.

24''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನನ್ನ ಮಾತನ್ನು
ಕೇಳಿ ನನ್ನನ್ನು ಕಳುಹಿಸಿದಾತನನ್ನು ನಂಬುವವನು ನಿತ್ಯಜೀವ
ವನ್ನು ಹೊಂದಿದ್ದಾನೆ. ಅವನಿಗೆ ಅಪರಾಧಿಯೆಂಬ ತೀರ್ಪಾ
ಗುವುದಿಲ್ಲ. ಅವನು ಈಗಾಗಲೇ ಮರಣವನ್ನು ದಾಟಿ ಜೀವಕ್ಕೆ
ಪ್ರವೇಶಿಸಿದ್ದಾನೆ. 25ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ಸತ್ತು
ಹೋದವರು ದೇವರ ಮಗನ ಸ್ವರವನ್ನು ಕೇಳುವ ಕಾಲ ಬರು
ತ್ತದೆ, ಅದು ಈಗಲೇ ಬಂದಿದೆ. ಕೇಳಿ ಸ್ವೀಕರಿಸಿಕೊಳ್ಳುವವರು
ಜೀವವನ್ನು ಹೊಂದುವರು. 26ತಂದೆಯು ಜೀವಕೊಡುವ
ಶಕ್ತಿಯನ್ನು ತಾನು ಹೊಂದಿರುವಂತೆ ಮಗನಿಗೂ ಜೀವಕೊಡುವ
ಶಕ್ತಿಯನ್ನು ಅನುಗ್ರಹಿಸಿದನು. 27ಮತ್ತು ಎಲ್ಲಾ ಜನರಿಗೆ ತೀರ್ಪು
ಮಾಡುವ ಅಧಿಕಾರವನ್ನು ತಂದೆಯು ಮಗನಿಗೂ ಕೊಟ್ಟಿದ್ದಾನೆ.
ಏಕೆಂದರೆ ಆ ಮಗನು ಮನುಷ್ಯಕುಮಾರನಾಗಿದ್ದಾನೆ. 28ಇದರ
ಬಗ್ಗೆ ಆಶ್ಚರ್ಯಪಡಬೇಡಿರಿ. ಏಕೆಂದರೆ ಸಮಾಧಿಗಳಲ್ಲಿರುವ
ಜನರೆಲ್ಲರೂ ಆತನ ಸ್ವರವನ್ನು ಕೇಳುವ ಕಾಲ ಬರುತ್ತದೆ. 29ಆಗ
ಅವರು ತಮ್ಮ ಸಮಾಧಿಗಳಿಂದ ಎದ್ದು ಬರುವರು. ಜೀವನದಲ್ಲಿ
ಒಳ್ಳೆಯದನ್ನು ಮಾಡಿದ ಜನರು ಪುನರುತ್ಥಾನಗೊಂಡು ನಿತ್ಯ
ಜೀವವನ್ನು ಹೊಂದಿಕೊಳ್ಳುವರು. ಆದರೆ ಕೆಟ್ಟದ್ದನ್ನು ಮಾಡಿ
ದವರಿಗೆ ತೀರ್ಪಿಗಾಗಿ ಪುನರುತ್ಥಾನವಾಗುವುದು.

30''ನಾನು ಒಬ್ಬಂಟಿಗನಾಗಿ ಏನೂ ಮಾಡಲಾರೆನು. ನಾನು
ಕೇಳಿದ್ದಕ್ಕನುಸಾರವಾಗಿ ತೀರ್ಪು ಮಾಡುತ್ತೇನೆ. ಆದ್ದರಿಂದ ನನ್ನ

---

**ವಚನ 3** ಕೆಲವು ಗ್ರೀಕ್ ಪ್ರತಿಗಳಲ್ಲಿ ಹೀಗೆ ಬರೆದಿದೆ: ''ಇವರು ನೀರು ಉಕ್ಕುವುದನ್ನು ಕಾದುಕೊಂಡಿರುವರು.'' ವಚನ 4 ''ಒಬ್ಬ ದೇವದೂತನು ಆಗಾಗ್ಗೆ ಕೊಳದಲ್ಲಿ ಇಳಿದುಬಂದು ನೀರನ್ನು ಉಕ್ಕಿಸುವನು; ನೀರನ್ನು ಉಕ್ಕಿಸಿದ ಮೇಲೆ ಮೊದಲು ಒಳಗೆ ಹೋದವನು ಯಾವ ರೋಗದಲ್ಲಿ ಬಿದ್ದಿದ್ದರೂ ಸ್ವಸ್ಥನಾಗುವನು.''

**ಸಬ್ಬತ್‌ದಿನ** ಯೆಹೂದ್ಯರ ವಾರದಲ್ಲಿ ಶನಿವಾರವು ಏಳನೆಯ ದಿನ.

ತೀರ್ಪು ಸರಿಯಾದದ್ದು. ಏಕೆಂದರೆ, ನಾನು ನನ್ನನ್ನು ಮೆಚ್ಚಿಸಲು
ಪ್ರಯತ್ನಿಸದೆ ನನ್ನ ತಂದೆಯನ್ನು ಮೆಚ್ಚಿಸಲು ಪ್ರಯತ್ನಿಸುತ್ತೇನೆ.
31‘‘ನನ್ನ ವಿಷಯವಾಗಿ ನಾನೇ ಹೇಳಿಕೊಂಡರೆ, ನನ್ನ
ಸಾಕ್ಷಿಯು ಸತ್ಯವಾದದ್ದಲ್ಲ. 32ಆದರೆ ನನ್ನ ವಿಷಯವಾಗಿ ಜನರಿಗೆ
ಹೇಳುವ ಮತ್ತೊಬ್ಬ ವ್ಯಕ್ತಿಯಿದ್ದಾನೆ. ನನ್ನ ಬಗ್ಗೆ ಅವನು ಹೇಳುವ
ಸಂಗತಿಗಳು ಸತ್ಯವಾಗಿವೆಯೆಂದು ನನಗೆ ಗೊತ್ತದೆ.
33‘‘ನೀವು ಯೋಹಾನನ ಬಳಿಗೆ ಜನರನ್ನು ಕಳುಹಿಸಿದ್ದಿರಿ.
ಅವನು ನಿಮಗೆ ಸತ್ಯದ ಬಗ್ಗೆ ತಿಳಿಸಿದನು. 34ಆದರೆ ನನ್ನ ಬಗ್ಗೆ
ಜನರಿಗೆ ತಿಳಿಸುವುದಕ್ಕಾಗಿ ನನಗೆ ಮನುಷ್ಯನೊಬ್ಬನ ಅಗತ್ಯವಿಲ್ಲ.
ಆದರೆ ನಿಮಗೆ ರಕ್ಷಣೆಯಾಗಬೇಕೆಂದು ನಾನು ಈ
ಸಂಗತಿಗಳನ್ನು ಹೇಳುತ್ತಿದ್ದೇನೆ. 35ಯೋಹಾನನು ಉರಿಯುವ
ದೀಪದಂತೆ ಬೆಳಕನ್ನು ಕೊಟ್ಟನು. ಮತ್ತು ನೀವು ಅವನ ಬೆಳಕನ್ನು
ಸ್ವಲ್ಪಕಾಲ ಸಂತೋಷದಿಂದ ಅನುಭವಿಸಿದಿರಿ.
36‘‘ಆದರೆ ನನ್ನ ಬಗ್ಗೆ ನನ್ನಲ್ಲಿ ಯೋಹಾನನಿಗಿಂತಲೂ
ಹೆಚ್ಚಿನ ಸಾಕ್ಷಿಗಳಿವೆ. ನಾನು ಮಾಡುವ ಕಾರ್ಯಗಳೇ ನನ್ನ
ಸಾಕ್ಷಿಗಳಾಗಿವೆ. ತಂದೆಯು ನನಗೆ ಕೊಟ್ಟಿರುವ ಈ ಕಾರ್ಯ
ಗಳೇ, ತಂದೆಯು ನನ್ನನ್ನು ಕಳುಹಿಸಿ ಕೊಟ್ಟಿದ್ದಾನೆ ಎಂಬುದನ್ನು
ತೋರಿಸುತ್ತವೆ. 37ಅಲ್ಲದೆ ನನ್ನನ್ನು ಕಳುಹಿಸಿದ ತಂದೆಯು ನನ್ನ
ಬಗ್ಗೆ ತಾನೇ ಸಾಕ್ಷಿ ಕೊಟ್ಟಿದ್ದಾನೆ. ಆದರೆ ನೀವು ಆತನ ಧ್ವನಿಯನ್ನು
ಎಂದೂ ಕೇಳಿಲ್ಲ. ಆತನು ಹೇಗಿದ್ದಾನೆ ಎಂಬುದನ್ನು ನೀವು
ಎಂದೂ ಕಂಡಿಲ್ಲ. 38ತಂದೆಯ ಉಪದೇಶವು ನಿಮ್ಮಲ್ಲಿ ನೆಲೆಸಿಲ್ಲ.
ಏಕೆಂದರೆ ತಂದೆಯು ಕಳುಹಿಸಿರುವಾತನನ್ನು ನೀವು ನಂಬು
ವುದಿಲ್ಲ.
39ನೀವು ಪವಿತ್ರ ಗ್ರಂಥವನ್ನು ಜಾಗ್ರತೆಯಿಂದ ಅಧ್ಯಯನ
ಮಾಡುತ್ತೀರಿ. ಆ ಪವಿತ್ರ ಗ್ರಂಥವು ನಿಮಗೆ ನಿತ್ಯ ಜೀವವನ್ನು
ಕೊಡುತ್ತವೆ? ಎಂಬುದು ನಿಮ್ಮ ಆಲೋಚನೆ. ಆ ಪವಿತ್ರ
ಗ್ರಂಥವೂ ನನ್ನ ಬಗ್ಗೆ ತಿಳಿಸುತ್ತದೆ! 40ಆದರೆ ನೀವು ಬಯಸುವ
ಆ ಜೀವವನ್ನು ನನ್ನ ಬಳಿಗೆ ಬಂದು ಹೊಂದಿಕೊಳ್ಳಲು ನಿಮಗೆ
ಇಷ್ಟವಿಲ್ಲ.
41‘‘ಮನುಷ್ಯರಿಂದ ಬರುವ ಹೊಗಳಿಕೆಯು ನನಗೆ
ಬೇಕಾಗಿಲ್ಲ. 42ಆದರೆ ನಾನು ನಿಮ್ಮನ್ನು ಬಲ್ಲೆನು. ದೇವರ ಮೇಲೆ
ನಿಮಗೆ ಪ್ರೀತಿಯಿಲ್ಲವೆಂದು ನನಗೆ ಗೊತ್ತಿದೆ. 43ನಾನು ನನ್ನ
ತಂದೆಯ ಹೆಸರಿನಲ್ಲಿ ಬಂದಿದ್ದೇನೆ. ನಾನು ಆತನಿಗೋಸ್ಕರ
ಮಾತಾಡುತ್ತೇನೆ. ಆದರೆ ನೀವು ನನ್ನನ್ನು ಸ್ವೀಕರಿಸಿಕೊಳ್ಳು
ವುದಿಲ್ಲ. ಮತ್ತೊಬ್ಬನು ಬಂದು ತನಗೋಸ್ಕರವಾಗಿ ಮಾತಾ
ಡಿದರೆ ನೀವು ಅವನನ್ನು ಸ್ವೀಕರಿಸಿಕೊಳ್ಳುತ್ತೀರಿ. 44ನೀವು
ಪರಸ್ಪರ ಸನ್ಮಾನವನ್ನು ಬಯಸುತ್ತೀರಿ. ಆದರೆ ಒಬ್ಬನೇ
ದೇವರಿಂದ ಬರುವ ಸನ್ಮಾನವನ್ನು ಪಡೆದುಕೊಳ್ಳಲು ನೀವೆಂದೂ
ಪ್ರಯತ್ನಿಸುವುದಿಲ್ಲ. ಹೀಗಿರಲು ನೀವು ಹೇಗೆ ನಂಬಬಲ್ಲಿರಿ?
45ನಾನು ತಂದೆಯ ಮುಂದೆ ನಿಂತುಕೊಂಡು ನಿಮ್ಮನ್ನು ತಪ್ಪಿತಸ್ಥ
ರೆಂಬುದಾಗಿ ಹೇಳುತ್ತೇನೆಂದು ಯೋಚಿಸಬೇಡಿರಿ. ನಿಮ್ಮನ್ನು
ರಕ್ಷಿಸುತ್ತಾನೆಂದು ನೀವು ನಿರೀಕ್ಷಿಸಿಕೊಂಡಿರುವ ಮೋಶೆಯೇ
ನಿಮ್ಮ ಮೇಲೆ ದೂರು ಹೇಳುವವನು. 46ನೀವು ಮೋಶೆಯನ್ನು
ನಿಜವಾಗಿಯೂ ನಂಬಿದ್ದರೆ, ನನ್ನನ್ನೂ ನಂಬುತ್ತಿದ್ದಿರಿ.
ಯಾಕೆಂದರೆ ಅವನು ನನ್ನ ವಿಷಯವಾಗಿ ಬರೆದಿದ್ದಾನೆ. 47ಆದರೆ
ಮೋಶೆ ಬರೆದದ್ದನ್ನು ನೀವು ನಂಬುವುದಿಲ್ಲ. ಹೀಗಿರಲು ನಾನು
ಹೇಳುವ ಸಂಗತಿಗಳನ್ನು ನೀವು ಹೇಗೆ ನಂಬಬಲ್ಲಿರಿ?’’

### ಐದು ಸಾವಿರಕ್ಕಿಂತ ಹೆಚ್ಚು ಜನರಿಗೆ ಆಹಾರದಾನ

(ಮತ್ತಾಯ 14:13-21; ಮಾರ್ಕ 6:30-44; ಲೂಕ 9:10-17)

6 ತರುವಾಯ, ಯೇಸು ಗಲಿಲೇಯ ಸರೋವರವನ್ನು
(ತಿಬೇರಿಯ ಸರೋವರ) ದಾಟಿ ಆಚೆಯ ದಡಕ್ಕೆ
ಹೋದನು. 2ಅನೇಕ ಜನರು ಯೇಸುವನ್ನು ಹಿಂಬಾಲಿಸಿದರು.
ಏಕೆಂದರೆ ಯೇಸು ರೋಗಿಗಳನ್ನು ಗುಣಪಡಿಸುವುದರ
ಮೂಲಕ ತನ್ನ ಅಧಿಕಾರವನ್ನು ತೋರಿಸಿದ್ದನು. ಅವರೆಲ್ಲರೂ
ಅದನ್ನು ನೋಡಿದ್ದರು. 3ಆಗ ಯೇಸು ಬೆಟ್ಟವನ್ನು ಹತ್ತಿ ತನ್ನ
ಶಿಷ್ಯರ ಸಂಗಡ ಕುಳಿತುಕೊಂಡನು. 4ಯೆಹೂದ್ಯರ ಪಸ್ಕ
ಹಬ್ಬವೂ ಬಹು ಸಮೀಪವಾಗಿತ್ತು.
5ಯೇಸು ಕಣ್ಣೆತ್ತಿ ನೋಡಿದಾಗ, ತನ್ನ ಬಳಿಗೆ ಬರುತ್ತಿದ್ದ
ಜನಸಮೂಹವನ್ನು ಕಂಡು ಫಿಲಿಪ್ಪನಿಗೆ, ‘‘ಈ ಜನರಿಗೆಲ್ಲಾ
ಸಾಕಾಗುವಷ್ಟು ರೊಟ್ಟಿಯನ್ನು ನಾವು ಎಲ್ಲಿ ಕೊಂಡು
ಕೊಳ್ಳೋಣ?’’ ಎಂದು ಕೇಳಿದನು. 6(ಫಿಲಿಪ್ಪನನ್ನು ಪರೀಕ್ಷಿಸು
ವುದಕ್ಕಾಗಿ ಆತನು ಈ ಪ್ರಶ್ನೆಯನ್ನು ಕೇಳಿದನು. ತಾನು ಮಾಡ
ಲಿದ್ದ ಕಾರ್ಯ ಯೇಸುವಿಗೆ ಮೊದಲೇ ತಿಳಿದಿತ್ತು.)
7ಫಿಲಿಪ್ಪನು, ‘‘ಇಲ್ಲಿರುವ ಪ್ರತಿಯೊಬ್ಬರಿಗೆ ರೊಟ್ಟಿಯ
ಒಂದು ತುಂಡನ್ನು ಕೊಡಬೇಕಾದರೆ, ಇನ್ನೂರು ದಿನಾರಿ ನಾಣ್ಯ
ಗಳಾದರೂ* ಬೇಕು’’ ಎಂದು ಉತ್ತರಕೊಟ್ಟನು.
8ಅಂದ್ರೆಯನೆಂಬ ಮತ್ತೊಬ್ಬ ಶಿಷ್ಯನು ಅಲ್ಲಿದ್ದನು. ಅಂದ್ರೆ
ಯನು ಸೀಮೋನ್ ಪೇತ್ರನ ಸಹೋದರ. 9ಅಂದ್ರೆಯನು,
‘‘ಇಲ್ಲಿರುವ ಒಬ್ಬ ಹುಡುಗನ ಬಳಿ ಜವೆಗೋದಿಯ ಐದು
ರೊಟ್ಟಿಗಳಿವೆ ಮತ್ತು ಎರಡು ಚಿಕ್ಕ ಮೀನುಗಳಿವೆ. ಆದರೆ ಅವು
ಈ ಜನಸಮೂಹಕ್ಕೆ ಸಾಕಾಗುವುದಿಲ್ಲ’’ ಎಂದು ಹೇಳಿದನು.
10ಯೇಸು, ‘‘ಜನರಿಗೆ ಕುಳಿತುಕೊಳ್ಳಲು ಹೇಳಿರಿ’’ ಎಂದು
ತಿಳಿಸಿದನು. ಆ ಸ್ಥಳದಲ್ಲಿ ಹುಲ್ಲು ಹುಲುಸಾಗಿ ಬೆಳೆದಿತ್ತು. ಅಲ್ಲಿ
ಕುಳಿತುಕೊಂಡವರಲ್ಲಿ ಸುಮಾರು ಐದು ಸಾವಿರ ಮಂದಿ
ಗಂಡಸರಿದ್ದರು.
11ಬಳಿಕ ಯೇಸು ಆ ರೊಟ್ಟಿಗಳನ್ನು ತೆಗೆದು ಕೊಂಡು
ಅವುಗಳಿಗಾಗಿ ದೇವರಿಗೆ ಸ್ತೋತ್ರಸಲ್ಲಿಸಿ, ಕೆಳಗೆ
ಕುಳಿತುಕೊಂಡಿದ್ದ ಜನರಿಗೆ ಕೊಟ್ಟನು. ಆತನು ಮೀನುಗಳನ್ನು
ಕೊಡುವಾಗಲೂ ಅದೇ ರೀತಿ ಮಾಡಿದನು. ಎಲ್ಲರೂ ತಮಗೆ
ಬೇಕಾದಷ್ಟು ತಿಂದರು.
12ಅವರೆಲ್ಲರೂ ಊಟ ಮಾಡಿ ತೃಪ್ತರಾದ ಮೇಲೆ ಯೇಸು
ತನ್ನ ಶಿಷ್ಯರಿಗೆ, ‘‘ಉಳಿದುಹೋದ ರೊಟ್ಟಿ ಮತ್ತು ಮೀನುಗಳ
ತುಂಡುಗಳನ್ನು ಒಟ್ಟುಗೂಡಿಸಿರಿ. ಯಾವುದನ್ನೂ ಹಾಳುಮಾಡ
ಬೇಡಿ’’ ಎಂದು ಹೇಳಿದನು. 13ಆದ್ದರಿಂದ ಶಿಷ್ಯರು ಉಳಿದು
ಹೋಗಿದ್ದ ತುಂಡುಗಳನ್ನು ಒಟ್ಟುಗೂಡಿಸಿದರು. ಜನರು ತಿನ್ನಲು
ಆರಂಭಿಸಿದಾಗ ಕೇವಲ ಐದು ಜವೆಗೋದಿಯ ರೊಟ್ಟಿ
ಗಳಿದ್ದವು. ಆದರೆ ಶಿಷ್ಯರು ಉಳಿದುಹೋದ ಆಹಾರದ ತುಂಡು
ಗಳನ್ನು ಒಟ್ಟುಗೂಡಿಸಿದಾಗ ಹನ್ನೆರಡು ದೊಡ್ಡ ಬುಟ್ಟಿಗಳು
ತುಂಬಿಹೋದವು.
14ಯೇಸು ಮಾಡಿದ ಈ ಸೂಚಕಕಾರ್ಯವನ್ನು ಕಂಡ
ಜನರು, ‘‘ಈ ಲೋಕಕ್ಕೆ ಬರಲಿರುವ ಪ್ರವಾದಿ ನಿಜವಾಗಿಯೂ
ಈತನೇ ಇರಬೇಕು’’ ಎಂದು ಹೇಳತೊಡಗಿದರು.

---

**ಇನ್ನೂರು ದಿನಾರಿ ನಾಣ್ಯ** ಒಬ್ಬನಿಗೆ ದೊರೆಯುತ್ತಿದ್ದ ಒಂದು ವರ್ಷದ ಆದಾಯ.

15ತನ್ನನ್ನು ಬಲವಂತದಿಂದ ರಾಜನನ್ನಾಗಿ ಮಾಡಲು ಜನರು ಯೋಚಿಸುತ್ತಿದ್ದಾರೆಂಬುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಆತನು ಅಲ್ಲಿಂದ ತಾನೊಬ್ಬನೇ ಬೆಟ್ಟಕ್ಕೆ ಮತ್ತೆ ಹೋದನು.

### ನೀರಿನ ಮೇಲೆ ಕಾಲ್ನಡಿಗೆ

(ಮತ್ತಾಯ 14:22-27; ಮಾರ್ಕ 6:45-52)

16ಆ ಸಾಯಂಕಾಲ ಯೇಸುವಿನ ಶಿಷ್ಯರು (ಗಲಿಲೀಯ) ಸರೋವರಕ್ಕೆ ಹೋದರು. 17ಆಗಲೇ ಕತ್ತಲಾಗಿತ್ತು. ಯೇಸು ಅವರ ಬಳಿಗೆ ಇನ್ನೂ ಬಂದಿರಲಿಲ್ಲ. ಆದ್ದರಿಂದ ಶಿಷ್ಯರು ದೋಣಿಯನ್ನು ಹತ್ತಿ ಸರೋವರದ ಆಚೆಯ ಕಡೆಯಿದ್ದ ಕಪೆರ್ನೌಮಿಗೆ ಹೊರಟರು. 18ಗಾಳಿಯು ಬಹು ರಭಸವಾಗಿ ಬೀಸುತ್ತಿತ್ತು. ಸರೋವರದ ಅಲೆಗಳು ದೊಡ್ಡದಾಗುತ್ತಿದ್ದವು. 19ಅವರು ಹುಟ್ಟುಹಾಕುತ್ತಾ ಸುಮಾರು ಮೂರು ಅಥವಾ ನಾಲ್ಕು ಮೈಲಿಗಳವರೆಗೆ ದೋಣಿಯನ್ನು ನಡೆಸಿದ ನಂತರ ಯೇಸುವನ್ನು ಕಂಡರು. ಆತನು ನೀರಿನ ಮೇಲೆ ನಡೆಯುತ್ತಾ ದೋಣಿಯ ಸಮೀಪಕ್ಕೆ ಬರುತ್ತಿರುವುದನ್ನು ಕಂಡು ಅವರಿಗೆ ಭಯವಾಯಿತು. 20ಯೇಸು ಅವರಿಗೆ, ''ಹೆದರಬೇಡಿರಿ, ನಾನೇ'' ಎಂದು ಹೇಳಿದನು. 21ಆಗ ಅವರು ಯೇಸುವನ್ನು ದೋಣಿಯೊಳಗೆ ಬರಮಾಡಿಕೊಳ್ಳಬೇಕೆಂದಿದ್ದರು. ಅಷ್ಟರಲ್ಲೇ, ಅವರು ಹೋಗಬೇಕೆಂದಿದ್ದ ಸ್ಥಳದ ದಡಕ್ಕೆ ದೋಣಿಯು ತಲುಪಿತು.

### ಯೇಸುವಿಗಾಗಿ ಹುಡುಕಾಟ

22ಮರುದಿನವಾಯಿತು. ಕೆಲವು ಜನರು ಸರೋವರದ ಮತ್ತೊಂದು ಕಡೆಯಲ್ಲಿ ಉಳಿದುಕೊಂಡಿದ್ದರು. ಯೇಸು ತನ್ನ ಶಿಷ್ಯರೊಂದಿಗೆ ದೋಣಿಯಲ್ಲಿ ಹೋಗಲಿಲ್ಲ ಎಂಬುದು ಈ ಜನರಿಗೆ ತಿಳಿದಿತ್ತು. ಯೇಸುವಿನ ಶಿಷ್ಯರು ಮಾತ್ರ ದೋಣಿಯಲ್ಲಿ ಹೋದರೆಂಬುದೂ ಮತ್ತು ಅದೊಂದು ದೋಣಿ ಮಾತ್ರ ಅಲ್ಲಿತ್ತೆಂಬುದೂ ಅವರಿಗೆ ಗೊತ್ತಿತ್ತು. 23ಆದರೆ ಅಷ್ಟರಲ್ಲಿಯೇ, ಕೆಲವು ದೋಣಿಗಳು ತಿಬೇರಿಯಾದಿಂದ ಬಂದವು. ಅವರು ಊಟಮಾಡಿದ ಸ್ಥಳಕ್ಕೆ ಸಮೀಪದ ದಡದಲ್ಲಿಯೇ ಆ ದೋಣಿಗಳು ನಿಂತುಕೊಂಡವು. ಪ್ರಭುವು (ಯೇಸು) ಸ್ತೋತ್ರ ಮಾಡಿದ ಮೇಲೆ ಅವರು ರೊಟ್ಟಿಯನ್ನು ಆ ಸ್ಥಳದಲ್ಲೇ ತಿಂದಿದ್ದರು. 24ಯೇಸು ಮತ್ತು ಆತನ ಶಿಷ್ಯರು ಅಲ್ಲಿಲ್ಲದಿರುವುದನ್ನು ಜನರು ಕಂಡು ದೋಣಿಗಳನ್ನು ಹತ್ತಿ ಯೇಸುವನ್ನು ಹುಡುಕುತ್ತಾ ಕಪೆರ್ನೌಮಿಗೆ ಹೋದರು. ಅವರು ಯೇಸುವನ್ನು ಕಂಡುಕೊಳ್ಳಬೇಕೆಂದಿದ್ದರು.

### ಯೇಸುವೇ ಜೀವದ ರೊಟ್ಟಿ

25ಜನರು ಯೇಸುವನ್ನು ಸರೋವರದ ಆಚೆಯ ದಡದಲ್ಲಿ ಕಂಡುಕೊಂಡರು. ಅವರು ಆತನಿಗೆ, ''ಗುರುವೇ, ನೀನು ಇಲ್ಲಿಗೆ ಯಾವಾಗ ಬಂದೆ?'' ಎಂದು ಕೇಳಿದರು.

26ಯೇಸು, ''ನೀವು ನನ್ನನ್ನು ಏಕೆ ಹುಡುಕುತ್ತಿದ್ದೀರಿ? ನನ್ನ ಅಧಿಕಾರವನ್ನು ನಿರೂಪಿಸುವ ನನ್ನ ಅದ್ಭುತ ಕಾರ್ಯಗಳನ್ನು ಕಂಡು ನೀವು ನನ್ನನ್ನು ಹುಡುಕುತ್ತಿದ್ದೀರೋ? ಇಲ್ಲ! ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ರೊಟ್ಟಿಯನ್ನು ತೃಪ್ತಿಯಾಗುವಷ್ಟು ತಿಂದಕಾರಣ ನನ್ನನ್ನು ಹುಡುಕುತ್ತಿದ್ದೀರಿ. 27ಈ ಲೋಕದ ಆಹಾರವು ಕೆಟ್ಟುಹೋಗುತ್ತದೆ ಮತ್ತು ಹಾಳಾಗುತ್ತದೆ. ಆದ್ದರಿಂದ ಅಂಥ ಆಹಾರವನ್ನು ಪಡೆದುಕೊಳ್ಳಲು ದುಡಿಯಬೇಡಿರಿ. ಆದರೆ ಎಂದಿಗೂ ಕೆಟ್ಟುಹೋಗದಂಥ ಮತ್ತು ನಿಮಗೆ ನಿತ್ಯಜೀವವನ್ನು ಕೊಡುವಂಥ ಆಹಾರವನ್ನು ಪಡೆದುಕೊಳ್ಳಲು ದುಡಿಯಿರಿ. ಮನುಷ್ಯಕುಮಾರನು ಆ ಆಹಾರವನ್ನು ನಿಮಗೆ ಕೊಡುವನು. ತಂದೆಯಾದ ದೇವರು ಆತನ ಮೇಲೆ ತನ್ನ ಅಧಿಕಾರದ ಮುದ್ರೆಯನ್ನು ಒತ್ತಿದ್ದಾನೆ'' ಎಂದು ಹೇಳಿದನು.

28ಜನರು ಯೇಸುವಿಗೆ, ''ನಾವು ಯಾವ ಕಾರ್ಯಗಳನ್ನು ಮಾಡಬೇಕೆಂದು ದೇವರು ಬಯಸುತ್ತಾನೆ?'' ಎಂದು ಕೇಳಿದರು.

29ಯೇಸು, ''ದೇವರು ಕಳುಹಿಸಿದಾತನನ್ನು ನೀವು ನಂಬಬೇಕು. ಈ ಕಾರ್ಯವನ್ನೇ ದೇವರು ನಿಮ್ಮಿಂದ ಅಪೇಕ್ಷಿಸುತ್ತಾನೆ'' ಎಂದು ಉತ್ತರಕೊಟ್ಟನು.

30ಆದ್ದರಿಂದ ಜನರು, ''ದೇವರಿಂದ ಕಳುಹಿಸಲ್ಪಟ್ಟಾತನು ನೀನೇ ಎಂಬುದನ್ನು ನಿರೂಪಿಸುವುದಕ್ಕಾಗಿ ನೀನು ಯಾವ ಸೂಚಕಕಾರ್ಯವನ್ನು ಮಾಡುವೆ? 31ನಮ್ಮ ಪಿತೃಗಳು ತಮಗೆ ದೇವರು ಮರುಭೂಮಿಯಲ್ಲಿ ಕೊಟ್ಟ ಮನ್ನವನ್ನು (ಆಹಾರವನ್ನು) ತಿಂದರು. 'ದೇವರು ಅವರಿಗೆ ತಿನ್ನಲು ಪರಲೋಕದಿಂದ ರೊಟ್ಟಿಯನ್ನು ಕೊಟ್ಟನು* ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ'' ಎಂದು ಹೇಳಿದರು.

32ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನಿಮ್ಮ ಜನರಿಗೆ ಪರಲೋಕದಿಂದ ರೊಟ್ಟಿಯನ್ನು ಕೊಟ್ಟವನು ಮೋಶೆಯಲ್ಲ. ಆದರೆ ನನ್ನ ತಂದೆಯು ನಿಮಗೆ ಪರಲೋಕದಿಂದ ನಿಜವಾದ ರೊಟ್ಟಿಯನ್ನು ಕೊಡುವನು. 33ದೇವರ ರೊಟ್ಟಿ ಯಾವುದು? ಪರಲೋಕದಿಂದ ಇಳಿದುಬಂದು ಈ ಲೋಕಕ್ಕಾಗಿ ಜೀವವನ್ನು ಕೊಡುವಾತನೇ ದೇವರು ಕೊಡುವ ರೊಟ್ಟಿ'' ಎಂದು ಹೇಳಿದನು. 34ಜನರು, ''ಅಯ್ಯಾ, ಆ ರೊಟ್ಟಿಯನ್ನು ನಮಗೆ ಯಾವಾಗಲೂ ಕೊಡು'' ಎಂದು ಕೇಳಿಕೊಂಡರು.

35ಅದಕ್ಕೆ ಯೇಸು, ''ನಾನೇ ಜೀವಕೊಡುವ ರೊಟ್ಟಿ. ನನ್ನ ಬಳಿಗೆ ಬರುವವನಿಗೆ ಎಂದಿಗೂ ಹಸಿವೆಯಾಗದು. ನನ್ನಲ್ಲಿ ನಂಬಿಕೆ ಇಡುವವನಿಗೆ ಎಂದಿಗೂ ಬಾಯಾರಿಕೆಯಾಗದು. 36ನಾನು ನಿಮಗೆ ಮೊದಲೇ ಹೇಳಿದಂತೆ, ನೀವು ನನ್ನನ್ನು ನೋಡಿದ್ದರೂ ಇನ್ನೂ ನನ್ನನ್ನು ನಂಬುತ್ತಿಲ್ಲ. 37ತಂದೆಯು ನನ್ನ ಜನರನ್ನು ನನಗೆ ಕೊಡುತ್ತಾನೆ. ಆ ಜನರಲ್ಲಿ ಪ್ರತಿಯೊಬ್ಬರೂ ನನ್ನ ಬಳಿಗೆ ಬರುತ್ತಾರೆ. ನನ್ನಲ್ಲಿಗೆ ಬರುವ ಪ್ರತಿಯೊಬ್ಬರನ್ನೂ ನಾನು ಖಂಡಿತವಾಗಿ ಸ್ವೀಕರಿಸಿಕೊಳ್ಳುವೆನು, ಅವರನ್ನೆಂದಿಗೂ ತಳ್ಳಿಬಿಡುವುದಿಲ್ಲ. 38ನಾನು ಪರಲೋಕದಿಂದ ಇಳಿದು ಬಂದದ್ದು ದೇವರ ಚಿತ್ತಕ್ಕನುಸಾರವಾಗಿ ಮಾಡುವುದಕ್ಕಾಗಿಯೇ ಹೊರತು ನನ್ನ ಚಿತ್ತಕ್ಕನುಸಾರವಾಗಿಯಲ್ಲ. 39ದೇವರು ನನಗೆ ಕೊಟ್ಟಿರುವ ಯಾವ ವ್ಯಕ್ತಿಯನ್ನೂ ನಾನು ಕಳೆದುಕೊಳ್ಳಕೂಡದು. ಅಲ್ಲದೆ ಅಂತಿಮ ದಿನದಂದು ನಾನು ಆ ಜನರನ್ನು ಜೀವಂತವಾಗಿ ಎಬ್ಬಿಸಬೇಕು. ನನ್ನನ್ನು ಕಳುಹಿಸಿದಾತನು ಆ ಕಾರ್ಯವನ್ನೇ ನನ್ನಿಂದ ಅಪೇಕ್ಷಿಸುತ್ತಾನೆ. 40ಮಗನನ್ನು ನೋಡಿ ಆತನಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬನೂ ನಿತ್ಯಜೀವವನ್ನು ಹೊಂದಿದ್ದಾನೆ. ಅಂತಿಮ ದಿನದಂದು ನಾನು ಆ ವ್ಯಕ್ತಿಯನ್ನು ಜೀವಂತವಾಗಿ ಎಬ್ಬಿಸುವೆನು. ನನ್ನ ತಂದೆಯು ಬಯಸುವುದು ಇದನ್ನೇ'' ಎಂದನು.

---

**ದೇವರು … ಕೊಟ್ಟನು** ಕೀರ್ತನೆ 78:24

41ಯೆಹೂದ್ಯರು ಯೇಸುವಿನ ಬಗ್ಗೆ ಗುಣಗುಟ್ಟಿದರು.
‘‘ಪರಲೋಕದಿಂದ ಇಳಿದುಬರುವ ರೊಟ್ಟಿಯೇ ನಾನು’’
ಎಂದು ಆತನು ಹೇಳಿದ್ದರಿಂದ ಅವರು ಆಕ್ಷೇಪಿಸಿದರು.
42ಯೆಹೂದ್ಯರು, ‘‘ಇವನು ಯೇಸು. ಇವನ ತಂದೆ
ತಾಯಿಗಳನ್ನು ನಾವು ಬಲ್ಲೆವು. ಇವನು ಕೇವಲ ಯೋಸೇಫನ
ಮಗನು. ನಾನು ಪರಲೋಕದಿಂದ ಇಳಿದುಬಂದೆನು ಎಂದು
ಇವನು ಹೇಳುವುದಕ್ಕೆ ಹೇಗೆ ಸಾಧ್ಯ?’’ ಎಂದರು.

43ಆದಕ್ಕೆ ಯೇಸು, ‘‘ನೀವು ಗುಣಗುಟ್ಟುತ್ತಿರುವುದನ್ನು
ನಿಲ್ಲಿಸಿರಿ. 44ತಂದೆಯೇ ನನ್ನನ್ನು ಕಳುಹಿಸಿದನು ಮತ್ತು
ತಂದೆಯೇ ನನ್ನ ಬಳಿಗೆ ಜನರನ್ನು ಕರೆತರುವನು. ಅಂತಿಮ
ದಿನದಂದು ನಾನು ಆ ಜನರನ್ನು ಜೀವಂತವಾಗಿ ಎಬ್ಬಿಸುವೆನು.
ತಂದೆಯು ನನ್ನ ಬಳಿಗೆ ಕರೆದುಕೊಂಡು ಬರದ ಹೊರತು
ಯಾವನೂ ನನ್ನ ಬಳಿಗೆ ಬರಲಾರನು. 45‘‘ದೇವರು ಎಲ್ಲಾ
ಜನರಿಗೆ ಉಪದೇಶಿಸುವನು’* ಎಂದು ಪವಿತ್ರ ಗ್ರಂಥದಲ್ಲಿ
ಬರೆದಿದೆ. ಜನರು ತಂದೆಗೆ ಕಿವಿಗೊಟ್ಟು ಆತನಿಂದ ಕಲಿತು
ಕೊಳ್ಳುವರು. ಆ ಜನರು ನನ್ನ ಬಳಿಗೆ ಬರುವರು. 46ತಂದೆ
ಯಿಂದ ಬಂದಿರುವಾತನು ಮಾತ್ರ ತಂದೆಯನ್ನು ನೋಡಿದವ
ನಾಗಿದ್ದಾನೆ. ಬೇರೆ ಯಾವ ವ್ಯಕ್ತಿಯೂ ತಂದೆಯನ್ನು ಎಂದೂ
ನೋಡಿಲ್ಲ. 47ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನನ್ನನ್ನು
ನಂಬಿರುವವನು ನಿತ್ಯಜೀವವನ್ನು ಹೊಂದಿದ್ದಾನೆ. 48ನಾನೇ
ಜೀವಕೊಡುವ ರೊಟ್ಟಿ. 49ನಿಮ್ಮ ಪಿತೃಗಳು ತಮಗೆ ದೇವರು
ಮರುಭೂಮಿಯಲ್ಲಿ ಕೊಟ್ಟ ಮನ್ನವನ್ನು ತಿಂದರು. ಆದರೆ ಎಲ್ಲಾ
ಜನರಂತೆ ಅವರೂ ಸತ್ತುಹೋದರು. 50ಪರಲೋಕದಿಂದ
ಇಳಿದುಬರುವ ಆ ರೊಟ್ಟಿ ನಾನೇ. ಈ ರೊಟ್ಟಿಯನ್ನು
ತಿನ್ನುವವನು ಎಂದಿಗೂ ಸಾಯುವುದಿಲ್ಲ. 51ಪರಲೋಕದಿಂದ
ಇಳಿದುಬಂದ ಜೀವವುಳ್ಳ ರೊಟ್ಟಿ ನಾನೇ. ಈ ರೊಟ್ಟಿಯನ್ನು
ತಿನ್ನುವವನು ಶಾಶ್ವತವಾಗಿ ಜೀವಿಸುವನು. ಈ ರೊಟ್ಟಿಯೇ ನನ್ನ
ದೇಹ. ಈ ಲೋಕದಲ್ಲಿರುವ ಜನರು ಜೀವವನ್ನು ಹೊಂದಿ
ಕೊಳ್ಳಲೆಂದು ನಾನು ನನ್ನ ದೇಹವನ್ನೇ ಕೊಡುತ್ತೇನೆ’’ಎಂದು
ಉತ್ತರಕೊಟ್ಟನು. 53ಆಗ ಯೆಹೂದ್ಯರು, ‘‘ಈ ಮನುಷ್ಯನು ತನ್ನ
ದೇಹವನ್ನು ನಮಗೆ ತಿನ್ನಲು ಹೇಗೆ ಕೊಡಲಾದೀತು?’’ ಎಂದು
ತಮ್ಮ ತಮ್ಮೊಳಗೆ ವಾಗ್ವಾದ ಮಾಡತೊಡಗಿದರು.

53ಯೇಸು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು
ಮನುಷ್ಯಕುಮಾರನ ದೇಹವನ್ನು ತಿನ್ನಲೇಬೇಕು. ಆತನ
ರಕ್ತವನ್ನು ಕುಡಿಯಲೇಬೇಕು. ನೀವು ಹೀಗೆ ಮಾಡದಿದ್ದರೆ,
ನಿಮ್ಮಲ್ಲಿ ನಿಜವಾದ ಜೀವ ಇರುವುದಿಲ್ಲ. 54ನನ್ನ ದೇಹವನ್ನು
ತಿಂದು ನನ್ನ ರಕ್ತವನ್ನು ಕುಡಿಯುವವನು ನಿತ್ಯಜೀವವನ್ನು
ಹೊಂದಿದ್ದಾನೆ. ಅಂತಿಮ ದಿನದಂದು ನಾನು ಆ ವ್ಯಕ್ತಿಯನ್ನು
ಜೀವಂತವಾಗಿ ಎಬ್ಬಿಸುವೆನು. 55ನನ್ನ ದೇಹವು ನಿಜವಾದ
ಆಹಾರವಾಗಿದೆ. ನನ್ನ ರಕ್ತವು ನಿಜವಾದ ಪಾನೀಯವಾಗಿದೆ.
56ನನ್ನ ದೇಹವನ್ನು ತಿಂದು ನನ್ನ ರಕ್ತವನ್ನು ಕುಡಿಯುವವನು
ನನ್ನಲ್ಲಿ ವಾಸಿಸುತ್ತಾನೆ. ನಾನು ಅವನಲ್ಲಿ ವಾಸಿಸುತ್ತೇನೆ.
57ತಂದೆಯೇ ನನ್ನನ್ನು ಕಳುಹಿಸಿದನು. ತಂದೆಯು ಜೀವಸ್ವರೂಪ
ನಾಗಿದ್ದಾನೆ. ನಾನು ತಂದೆಯಿಂದಲೇ ಜೀವಿಸುತ್ತೇನೆ. ಆದ್ದರಿಂದ
ನನ್ನನ್ನು ತಿನ್ನುವವನು ನನ್ನಿಂದಲೇ ಜೀವಿಸುವನು. 58ನಮ್ಮ
ಪಿತೃಗಳು ತಿಂದ ರೊಟ್ಟಿಯಂತಲ್ಲ ನಾನು. ಅವರು ಆ ರೊಟ್ಟಿ
ಯನ್ನು ತಿಂದರೂ ಎಲ್ಲಾ ಜನರಂತೆ ಸತ್ತುಹೋದರು. ನಾನು
ಪರಲೋಕದಿಂದ ಇಳಿದುಬಂದ ರೊಟ್ಟಿ. ಈ ರೊಟ್ಟಿಯನ್ನು
ತಿನ್ನುವವನು ಸದಾಕಾಲ ಜೀವಿಸುವನು,’’ ಎಂದು ಹೇಳಿದನು.
59ಯೇಸು ಕಪೆರ್ನೌಮಿನ ಸಭಾಮಂದಿರದಲ್ಲಿ ಉಪದೇಶಿಸು
ತ್ತಿದ್ದಾಗ ಈ ಸಂಗತಿಗಳನ್ನೆಲ್ಲಾ ಹೇಳಿದನು.

### ನಿತ್ಯಜೀವದ ನುಡಿಗಳು

60ಇದನ್ನು ಕೇಳಿದ ಆತನ ಶಿಷ್ಯರಲ್ಲಿ ಅನೇಕರು, ‘‘ಈ
ಉಪದೇಶವು ಕಠಿಣವಾಗಿದೆ. ಇದನ್ನು ಯಾರು ಗ್ರಹಿಸಿಕೊಳ್ಳ
ಬಲ್ಲರು?’’ ಎಂದರು. 61ತನ್ನ ಶಿಷ್ಯರು ಆಕ್ಷೇಪಿಸುತ್ತಿರುವುದನ್ನು
ತಿಳಿದಿದ್ದ ಯೇಸು, ‘‘ಈ ಉಪದೇಶದಿಂದ ನಿಮಗೆ ಬೇಸರ
ವಾಯಿತೇ? 62ಹಾಗಾದರೆ ಮನುಷ್ಯಕುಮಾರನು ತಾನು
ಬಿಟ್ಟುಬಂದ ಸ್ಥಳಕ್ಕೆ ಮರಳಿಹೋಗುವುದನ್ನು ನೀವು ನೋಡು
ವಾಗ ಬೇಸರಪಡುವಿರಾ? 63ಒಬ್ಬನಿಗೆ ಜೀವವನ್ನು ಕೊಡು
ವಂಥದ್ದು ದೈಹಿಕ ಸಂಗತಿಗಳಲ್ಲ. ಜೀವವನ್ನು ಕೊಡುವಂಥದ್ದು
ದೇವರಾತ್ಮ. ನಾನು ನಿಮಗೆ ಹೇಳಿದ ಸಂಗತಿಗಳು ಆತ್ಮಿಕ
ಸಂಗತಿಗಳಾಗಿವೆ. ಆದ್ದರಿಂದ ಈ ಸಂಗತಿಗಳೇ ಜೀವವನ್ನು
ಕೊಡುತ್ತವೆ. 64ಆದರೆ ನಿಮ್ಮಲ್ಲಿ ಕೆಲವರು ನಂಬುವುದಿಲ್ಲ’’
ಎಂದು ಹೇಳಿದನು. (ತನ್ನನ್ನು ಯಾರೂ ನಂಬಿಲ್ಲವೆಂದು
ಯೇಸುವಿಗೆ ತಿಳಿದಿತ್ತು. ಆತನಿಗೆ ಅದು ಮೊದಲಿನಿಂದಲೂ
ತಿಳಿದಿತ್ತು. ತನಗೆ ಯಾವ ವ್ಯಕ್ತಿ ದ್ರೋಹ ಮಾಡುತ್ತಾನೆ
ಎಂಬುದೂ ಆತನಿಗೆ ಗೊತ್ತಿತ್ತು.) 65ಯೇಸು, ‘‘ತಂದೆಯ
ಅನುಮತಿ ಇಲ್ಲದೆ ಯಾವನೂ ನನ್ನ ಬಳಿಗೆ ಬರಲಾರನು ಎಂದು
ನಾನು ನಿಮಗೆ ಹೇಳಿದ್ದಕ್ಕೆ ಅದೇ ಕಾರಣ’’ ಎಂದನು.

66ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ ಆತನ
ಹಿಂಬಾಲಕರಲ್ಲಿ ಅನೇಕರು ಆತನನ್ನು ತೊರೆದುಬಿಟ್ಟರು.
ಅವರು ಆತನನ್ನು ಹಿಂಬಾಲಿಸಲಿಲ್ಲ.

67ಯೇಸು ತನ್ನ ಹನ್ನೆರಡು ಮಂದಿ ಶಿಷ್ಯರಿಗೆ, ‘‘ನೀವು ಸಹ
ನನ್ನನ್ನು ಬಿಟ್ಟುಹೋಗಬೇಕೆಂದಿರುವಿರಾ?’’ ಎಂದು
ಕೇಳಿದನು. 68ಸೀಮೋನ್ ಪೇತ್ರನು ಯೇಸುವಿಗೆ, ‘‘ಪ್ರಭುವೇ,
ನಾವೆಲ್ಲಿಗೆ ಹೋಗೋಣ? ನಿತ್ಯಜೀವವನ್ನು ಕೊಡುವ
ಸಂಗತಿಗಳು ನಿನ್ನಲ್ಲಿವೆ. 69ನಾವು ನಿನ್ನಲ್ಲಿ ನಂಬಿಕೆ ಇಡುತ್ತೇವೆ.
ನೀನು ದೇವರಿಂದ ಬಂದ ಪರಿಶುದ್ಧನೆಂದು ನಮಗೆ ಗೊತ್ತಿದೆ’’
ಎಂದು ಉತ್ತರಕೊಟ್ಟನು. 70ಬಳಿಕ ಯೇಸು, ‘‘ನಾನು
ಆರಿಸಿಕೊಂಡ ಹನ್ನೆರಡು ಮಂದಿ ನೀವೇ. ಆದರೆ ನಿಮ್ಮಲ್ಲಿರುವ
ಒಬ್ಬನು ಪಿಶಾಚಿಯಾಗಿದ್ದಾನೆ’’ ಎಂದು ಉತ್ತರಕೊಟ್ಟನು.

71ಯೇಸು ಸಿಮೋನನ ಮಗನಾದ ಇಸ್ಕರಿಯೋತ
ಯೂದನ ಬಗ್ಗೆ ಮಾತಾಡುತ್ತಿದ್ದನು. ಯೂದನು ಹನ್ನೆರಡು
ಮಂದಿ ಅಪೊಸ್ತಲರಲ್ಲಿ ಒಬ್ಬನಾಗಿದ್ದನು. ಆದರೆ ಮುಂದೆ
ಯೇಸುವಿಗೆ ದ್ರೋಹ ಮಾಡಿದ ವ್ಯಕ್ತಿ ಇವನೇ.

### ಯೇಸು ಮತ್ತು ಆತನ ಸಹೋದರರು

7 ಇದಾದ ಮೇಲೆ, ಯೇಸು ಗಲಿಲೇಯ ಪ್ರಾಂತ್ಯದಲ್ಲೆಲ್ಲಾ
ಸಂಚರಿಸಿದನು. ಜುದೇಯದಲ್ಲಿ ಸಂಚರಿಸಲು ಯೇಸು
ವಿಗೆ ಇಷ್ಟವಿರಲಿಲ್ಲ. ಏಕೆಂದರೆ ಅಲ್ಲಿನ ಯೆಹೂದ್ಯರು ಆತನನ್ನು
ಕೊಲ್ಲಲು ಅವಕಾಶಕ್ಕಾಗಿ ಕಾಯುತ್ತಿದ್ದರು. 2ಆಗ ಯೆಹೂದ್ಯರ
ಪರ್ಣಕುಟೀರಗಳ ಹಬ್ಬದ ಸಮಯವಾಗಿತ್ತು. 3ಆದ್ದರಿಂದ

---

**ದೇವರು ... ಉಪದೇಶಿಸುವನು** ಯೆಶಾಯ 54:13.

ಯೇಸುವಿನ ಸಹೋದರರು ಆತನಿಗೆ, ‘‘ನೀನು ಇಲ್ಲಿಂದ
ಜುದೇಯಕ್ಕೆ ಹೋಗು. ಆಗ ಅಲ್ಲಿರುವ ನಿನ್ನ ಹಿಂಬಾಲಕರು
ನೀನು ಮಾಡುವ ಅದ್ಭುತಕಾರ್ಯಗಳನ್ನು ನೋಡುವರು. 4ತನ್ನ
ಬಗ್ಗೆ ಜನರಿಗೆ ತಿಳಿಯಬೇಕೆಂದು ಅಪೇಕ್ಷಿಸುವವನು ತಾನು
ಮಾಡುವ ಕಾರ್ಯಗಳನ್ನು ಮರೆಮಾಡಕೂಡದು. ನಿನ್ನನ್ನು ಈ
ಲೋಕಕ್ಕೆ ತೋರಿಸಿಕೊ. ನೀನು ಮಾಡುವ ಕಾರ್ಯಗಳನ್ನು
ಅವರು ನೋಡಲಿ’’ ಎಂದು ಹೇಳಿದರು. 5(ಯೇಸುವಿನ
ಸಹೋದರರು ಸಹ ಆತನನ್ನು ನಂಬಲಿಲ್ಲ.) 6ಯೇಸು ತನ್ನ
ಸಹೋದರರಿಗೆ, ‘‘ನನಗೆ ಸರಿಯಾದ ಸಮಯವು ಇನ್ನೂ
ಬಂದಿಲ್ಲ. ನಿಮಗಾದರೋ ಹೋಗಲು ಎಲ್ಲಾ ಸಮಯವೂ
ಸರಿಯಾಗಿರುತ್ತದೆ. 7ಈ ಲೋಕವು ನಿಮ್ಮನ್ನು ದ್ವೇಷಿಸಲಾರದು.
ಆದರೆ ಈ ಲೋಕವು ನನ್ನನ್ನು ದ್ವೇಷಿಸುತ್ತದೆ. ಏಕೆಂದರೆ ನಾನು
ಈ ಲೋಕದ ಜನರಿಗೆ, ಅವರು ಮಾಡುತ್ತಿರುವುದು ಕೆಟ್ಟ
ಕಾರ್ಯಗಳೆಂದು ಹೇಳುವೆನು. 8ಆದ್ದರಿಂದ ನೀವು ಹಬ್ಬಕ್ಕೆ
ಹೋಗಿರಿ. ನಾನು ಈ ಹಬ್ಬಕ್ಕೆ ಹೋಗುವುದಿಲ್ಲ. ನನಗೆ
ಸರಿಯಾದ ಸಮಯವು ಇನ್ನೂ ಬಂದಿಲ್ಲ’’ ಎಂದು ಹೇಳಿದನು.
9ಯೇಸು ಹೀಗೆ ಹೇಳಿ ಗಲಿಲೇಯದಲ್ಲೇ ಉಳಿದುಕೊಂಡನು.

10ಆದ್ದರಿಂದ ಯೇಸುವಿನ ಸಹೋದರರು ಹಬ್ಬಕ್ಕಾಗಿ
ಹೊರಟರು. ಅವರು ಹೋದನಂತರ ಆತನು ಸಹ ಗುಟ್ಟಾಗಿ
ಹೋದನು. 11ಹಬ್ಬದಲ್ಲಿ ಯೆಹೂದ್ಯರು, ‘‘ಆತನು ಎಲ್ಲಿದ್ದಾನೆ’’
ಎಂದು ಕೇಳುತ್ತಾ ಆತನಿಗಾಗಿ ಹುಡುಕುತ್ತಿದ್ದರು.

12ಅಲ್ಲಿ ಜನರ ದೊಡ್ಡ ಗುಂಪೊಂದು ನೆರೆದಿದ್ದಿತು. ಆ
ಜನರಲ್ಲಿ ಅನೇಕರು ಯೇಸುವಿನ ಬಗ್ಗೆ ಒಬ್ಬರಿಗೊಬ್ಬರು
ಮಾತಾಡಿಕೊಳ್ಳುತ್ತಿದ್ದರು. ‘‘ಆತನು ಒಳ್ಳೆಯವನು’’ ಎಂದು
ಕೆಲವರು ಹೇಳಿದರು. ಇತರರು, ‘‘ಇಲ್ಲ, ಆತನು ಜನರನ್ನು
ಮೋಸಗೊಳಿಸುತ್ತಿದ್ದಾನೆ’’ ಎಂದು ಟೀಕಿಸಿದರು. 13ಆದರೆ
ಯೇಸುವಿನ ಬಗ್ಗೆ ಬಹಿರಂಗವಾಗಿ ಮಾತಾಡಲು ಆ ಜನರಲ್ಲಿ
ಯಾರಿಗೂ ಸಾಕಷ್ಟು ಧೈರ್ಯವಿರಲಿಲ್ಲ. ಜನರು ಯೆಹೂದ್ಯ
ನಾಯಕರುಗಳಿಗೆ ಹೆದರಿಕೊಂಡಿದ್ದರು.

## ಯೆಹೂದ್ಯರ ಹಬ್ಬದಲ್ಲಿ ಯೇಸುವಿನ ಉಪದೇಶ

14ಹಬ್ಬದಲ್ಲಿ ಸುಮಾರು ಅರ್ಧಭಾಗ ಮುಗಿದು ಹೋಗಿತ್ತು,
ಆಗ ಯೇಸು ದೇವಾಲಯಕ್ಕೆ ಹೋಗಿ ಉಪದೇಶಿಸಲು
ಆರಂಭಿಸಿದನು. 15ಯೆಹೂದ್ಯರಿಗೆ ಆಶ್ಚರ್ಯವಾಯಿತು. ‘‘ಈ
ಮನುಷ್ಯನು ಎಂದೂ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಲಿಲ್ಲ.
ಇವನು ಇಷ್ಟೆಲ್ಲವನ್ನೂ ಹೇಗೆ ಕಲಿತನು?’’ ಎಂದು ವಿಚಾರಿಸ
ತೊಡಗಿದರು.

16ಯೇಸು, ‘‘ನಾನು ಉಪದೇಶಿಸುವ ಸಂಗತಿಗಳು ನನ್ನ
ಸ್ವಂತವಾದವುಗಳಲ್ಲ. ನನ್ನ ಉಪದೇಶವು ನನ್ನನ್ನು ಕಳುಹಿಸಿ
ದಾತನಿಂದ (ದೇವರು) ಬರುತ್ತದೆ. 17ದೇವರು ಅಪೇಕ್ಷಿಸು
ವುದನ್ನು ಮಾಡಬಯಸುವವನಿಗೆ ನನ್ನ ಉಪದೇಶವು ದೇವ
ರಿಂದ ಬಂದದ್ದೇ ಹೊರತು ನನ್ನ ಸ್ವಂತದ್ದಲ್ಲವೆಂದು ಗೊತ್ತಾಗು
ವುದು. 18ತನ್ನ ಸ್ವಂತ ಆಲೋಚನೆಗಳನ್ನು ಉಪದೇಶಿಸುವವನು,
ತನಗೇ ಘನತೆಯನ್ನು ಉಂಟುಮಾಡಿಕೊಳ್ಳಲು ಪ್ರಯತ್ನಿಸು
ತ್ತಾನೆ. ಆದರೆ ತನ್ನನ್ನು ಕಳುಹಿಸಿದಾತನಿಗೆ ಘನತೆಯನ್ನು ಉಂಟು
ಮಾಡಲು ಪ್ರಯತ್ನಿಸುವವನು ಸತ್ಯವನ್ನೇ ಹೇಳುತ್ತಾನೆ. ಆತನಲ್ಲಿ
ಯಾವ ಸುಳ್ಳೂ ಇಲ್ಲ. 19ಮೋಶೆಯು ನಿಮಗೆ ಧರ್ಮಶಾಸ್ತ್ರವನ್ನು
ಕೊಟ್ಟನು. ಹೌದಲ್ಲವೇ? ಆದರೆ ನಿಮ್ಮಲ್ಲಿ ಒಬ್ಬರೂ ಧರ್ಮ
ಶಾಸ್ತ್ರಕ್ಕೆ ವಿಧೇಯರಾಗುತ್ತಿಲ್ಲ. ನೀವು ನನ್ನನ್ನು ಕೊಲ್ಲಲು ಏಕೆ
ಪ್ರಯತ್ನಿಸುತ್ತಿದ್ದೀರಿ?’’ ಎಂದು ಉತ್ತರಕೊಟ್ಟನು.

20ಜನರು, ‘‘ದೆವ್ವವು ನಿನ್ನೊಳಗೆ ಸೇರಿಕೊಂಡು ನಿನ್ನನ್ನು
ಹುಚ್ಚನನ್ನಾಗಿ ಮಾಡಿದೆ! ನಾವು ನಿನ್ನನ್ನು ಕೊಲ್ಲಲು ಪ್ರಯತ್ನಿಸು
ತ್ತಿಲ್ಲ’’ ಎಂದು ಉತ್ತರಕೊಟ್ಟರು.

21ಯೇಸು ಅವರಿಗೆ, ‘‘ನಾನು ಮಾಡಿದ ಒಂದು
ಅದ್ಭುತಕಾರ್ಯವನ್ನು ಕಂಡು ನೀವೆಲ್ಲರೂ ಆಶ್ಚರ್ಯ
ಗೊಂಡಿದ್ದೀರಿ. 22ಮೋಶೆಯು ನಿಮಗೆ ಸುನ್ನತಿಯ ಬಗ್ಗೆ
ಕಟ್ಟಳೆಯನ್ನು ಕೊಟ್ಟನು. (ಆದರೆ ನಿಜವಾಗಿಯೂ ಸುನ್ನತಿ ಎಂಬ
ಸಂಸ್ಕಾರವನ್ನು ನಿಮಗೆ ಕೊಟ್ಟವನು ಮೋಶೆಯಲ್ಲ. ಅವನಿಗಿಂತ
ಮೊದಲೇ ಜೀವಿಸಿದ್ದ ನಮ್ಮ ಜನರಿಂದ ಈ ಸಂಸ್ಕಾರವು
ಬಂದಿದೆ.) ಆದ್ದರಿಂದ ಕೆಲವೊಮ್ಮೆ ನೀವು ಸಬ್ಬತ್ ದಿನದಲ್ಲಿ
ಮಗುವಿಗೆ ಸುನ್ನತಿ ಮಾಡುತ್ತೀರಿ. 23ಒಬ್ಬ ವ್ಯಕ್ತಿಯು ಮೋಶೆಯ
ಕಟ್ಟಳೆಗೆ ವಿಧೇಯನಾಗುವುದಕ್ಕಾಗಿ ಸಬ್ಬತ್‌ದಿನದಂದು ಸುನ್ನತಿ
ಮಾಡಬಹುದು ಎಂಬುದನ್ನು ಇದು ತೋರಿಸುತ್ತದೆ. ಹೀಗಿರು
ವಲ್ಲಿ, ಸಬ್ಬತ್‌ದಿನದಂದು ಒಬ್ಬನ ಇಡೀ ದೇಹವನ್ನು ಗುಣಪಡಿಸಿ
ದ್ದಕ್ಕೋಸ್ಕರ ನೀವು ಏಕೆ ಕೋಪಗೊಂಡಿದ್ದೀರಿ? 24ಹೊರ
ತೋರಿಕೆಯ ಆಧಾರದ ಮೇಲೆ ತೀರ್ಪುಮಾಡದೆ ನ್ಯಾಯಾನು
ಸಾರವಾಗಿ ತೀರ್ಪುಮಾಡಿರಿ’’ ಎಂದು ಹೇಳಿದನು.

## ಯೇಸುವೇ ಕ್ರಿಸ್ತನೋ?

25ಬಳಿಕ, ಜೆರುಸಲೇಮಿನಲ್ಲಿ ವಾಸವಾಗಿದ್ದ ಕೆಲವರು,
‘‘ಅವರು ಕೊಲ್ಲಲು ಪ್ರಯತ್ನಿಸುತ್ತಿರುವುದು ಈ ವ್ಯಕ್ತಿಯನ್ನೇ.
26ಆದರೆ ಇವನು ಪ್ರತಿಯೊಬ್ಬರಿಗೂ ಕಾಣುವ ಮತ್ತು ಕೇಳುವ
ಸ್ಥಳದಲ್ಲಿ ಉಪದೇಶಿಸುತ್ತಿದ್ದಾನೆ. ಅಲ್ಲದೆ ಉಪದೇಶ ಮಾಡ
ದಂತೆ ಯಾರೂ ಅವನನ್ನು ತಡೆಯುತ್ತಿಲ್ಲ. ಒಂದುವೇಳೆ ಈತನೇ
ಕ್ರಿಸ್ತನು ಎಂಬ ನಿರ್ಧಾರಕ್ಕೆ ನಾಯಕರುಗಳು ಬಂದಿರಬಹುದು.
27ಆದರೆ ಈ ಮನುಷ್ಯನ ಮನೆಯು ಎಲ್ಲಿದೆ ಎಂಬುದು ನಮಗೆ
ಗೊತ್ತಿದೆ. ಅಲ್ಲದೆ, ಕ್ರಿಸ್ತನು ಬಂದಾಗ, ಆತನು ಎಲ್ಲಿಂದ ಬಂದ
ನೆಂದು ಯಾರಿಗೂ ತಿಳಿಯುವುದಿಲ್ಲ’’ ಎಂದು ಮಾತಾಡಿ
ಕೊಂಡರು. 28ಯೇಸುವು ದೇವಾಲಯದಲ್ಲಿ ಇನ್ನೂ
ಉಪದೇಶಿಸುತ್ತಾ, ‘‘ಹೌದು, ನಿಮಗೆ ನನ್ನ ಬಗ್ಗೆ ಗೊತ್ತಿದೆ, ನಾನು
ಎಲ್ಲಿಂದ ಬಂದೆನೆಂಬುದೂ ನಿಮಗೆ ತಿಳಿದಿದೆ. ಆದರೆ ನಾನು
ಬಂದಿರುವುದು ನನ್ನ ಸ್ವಂತ ಅಧಿಕಾರದಿಂದಲ್ಲ. ಸತ್ಯಸ್ವರೂಪನು
ನನ್ನನ್ನು ಕಳುಹಿಸಿದ್ದಾನೆ. ನಿಮಗೆ ಆತನು ಗೊತ್ತಿಲ್ಲ. 29ಆದರೆ
ನಾನು ಆತನನ್ನು ಬಲ್ಲೆನು. ನಾನು ಆತನಿಂದಲೇ ಬಂದೆನು.
ಮತ್ತು ಆತನೇ ನನ್ನನ್ನು ಕಳುಹಿಸಿದನು’’ ಎಂದು ಗಟ್ಟಿಯಾಗಿ
ಕೂಗಿ ಹೇಳಿದನು. 30ಇದನ್ನು ಕೇಳಿ ಜನರು ಆತನನ್ನು
ಬಂಧಿಸಲು ಪ್ರಯತ್ನಿಸಿದರು. ಆದರೆ ಯೇಸುವಿನ ಮೇಲೆ
ಕೈಹಾಕಲು ಯಾರಿಗೂ ಸಾಧ್ಯವಿರಲಿಲ್ಲ, ಏಕೆಂದರೆ ಯೇಸುವನ್ನು
ಕೊಲ್ಲಲು ಇನ್ನೂ ಸರಿಯಾದ ಸಮಯ ಬಂದಿರಲಿಲ್ಲ. 31ಆದರೆ
ಅನೇಕರು ಯೇಸುವಿನಲ್ಲಿ ನಂಬಿಕೆ ಇಟ್ಟರು. ‘‘ಕ್ರಿಸ್ತನು ಬರುತ್ತಾ
ನೆಂದು ನಾವು ಎದುರುನೋಡುತ್ತಿದ್ದೇವೆ. ಕ್ರಿಸ್ತನು ಬಂದಾಗ,
ಈ ಮನುಷ್ಯನು (ಯೇಸು) ಮಾಡಿರುವುದಕ್ಕಿಂತಲೂ ಹೆಚ್ಚು
ಸೂಚಕಕಾರ್ಯಗಳನ್ನು ಮಾಡುವನೇ? ಇಲ್ಲ! ಆದ್ದರಿಂದ
ಈತನೇ ಕ್ರಿಸ್ತನಿರಬೇಕು’’ ಎಂದರು.

### ಯೇಸುವನ್ನು ಬಂಧಿಸಲು ಯೆಹೂದ್ಯರ ಪ್ರಯತ್ನ

32ಯೇಸುವಿನ ಬಗ್ಗೆ ಜನರು ಹೇಳುತ್ತಿದ್ದ ಈ ಸಂಗತಿಗಳನ್ನು
ಫರಿಸಾಯರು ಕೇಳಿದರು. ಆದ್ದರಿಂದ ಮಹಾಯಾಜಕರು
ಮತ್ತು ಫರಿಸಾಯರು ಯೇಸುವನ್ನು ಬಂಧಿಸುವುದಕ್ಕಾಗಿ
ದೇವಾಲಯದ ಸಿಪಾಯಿಗಳಲ್ಲಿ ಕೆಲವರನ್ನು ಕಳುಹಿಸಿದರು.
33ಆಗ ಯೇಸು, ''ಇನ್ನು ಸ್ವಲ್ಪಕಾಲ ನಾನು ನಿಮ್ಮೊಂದಿಗಿರು
ತ್ತೇನೆ. ಬಳಿಕ, ನನ್ನನ್ನು ಕಳುಹಿಸಿದಾತನ ಬಳಿಗೆ ನಾನು ಹಿಂತಿರುಗಿ
ಹೋಗುತ್ತೇನೆ. 34ನೀವು ನನ್ನನ್ನು ಹುಡುಕುವಿರಿ, ಆದರೆ ನೀವು
ನನ್ನನ್ನು ಕಂಡುಕೊಳ್ಳುವುದಿಲ್ಲ ಮತ್ತು ನಾನಿರುವಲ್ಲಿಗೆ ನೀವು
ಬರಲಾರಿರಿ'' ಎಂದು ಹೇಳಿದನು.

35ಯೆಹೂದ್ಯರು, ''ಇವನನ್ನು ನಾವು ಕಂಡುಕೊಳ್ಳ
ಲಾಗದಂತೆ ಇವನು ಎಲ್ಲಿಗೆ ಹೋಗುವನು? ನಮ್ಮವರು
ವಾಸವಾಗಿರುವ ಗ್ರೀಕ್ ಜನರ ಪಟ್ಟಣಗಳಿಗೆ ಹೋಗಿ ಗ್ರೀಕರಿಗೆ
ಉಪದೇಶಿಸುವನೇ? 36ಇವನು (ಯೇಸು), 'ನೀವು ನನ್ನನ್ನು
ಹುಡುಕುವಿರಿ, ಆದರೆ ನೀವು ನನ್ನನ್ನು ಕಂಡುಕೊಳ್ಳುವುದಿಲ್ಲ'
ಎನ್ನುತ್ತಾನೆ. ಅಲ್ಲದೆ ಇವನು, 'ನಾನು ಇರುವಲ್ಲಿಗೆ ನೀವು
ಬರಲಾರಿರಿ' ಎನ್ನುತ್ತಾನೆ. ಇದರರ್ಥವೇನು?'' ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು.

### ಪವಿತ್ರಾತ್ಮನ ಬಗ್ಗೆ ಉಪದೇಶ

37ಹಬ್ಬದ ಕೊನೆಯ ದಿನ ಬಂದಿತು. ಅದು ಅತ್ಯಂತ
ಮುಖ್ಯವಾದ ದಿನವಾಗಿತ್ತು. ಅಂದು ಯೇಸು ನಿಂತುಕೊಂಡು,
''ಯಾವನಿಗಾದರೂ ಬಾಯಾರಿಕೆಯಾಗಿದ್ದರೆ ಅವನು ನನ್ನ
ಬಳಿಗೆ ಬಂದು ಕುಡಿಯಲಿ. 38ನನ್ನಲ್ಲಿ ನಂಬಿಕೆ ಇಡುವವನ
ಹೃದಯದಿಂದ ಜೀವಕರವಾದ ನೀರಿನ ಹೊಳೆಗಳು ಹರಿಯು
ತ್ತವೆ. ಪವಿತ್ರ ಗ್ರಂಥವು ತಿಳಿಸುವುದು ಇದನ್ನೇ'' ಎಂದು
ಗಟ್ಟಿಯಾಗಿ ಹೇಳಿದನು. 39ಯೇಸು ತನ್ನನ್ನು ನಂಬಿದವರು
ಹೊಂದಲಿರುವ ಪವಿತ್ರಾತ್ಮನನ್ನು ಕುರಿತು ಹೇಳಿದನು. ಆತನು
ಇನ್ನೂ ತನ್ನ ಮಹಿಮೆಯನ್ನು ಹೊಂದಿಲ್ಲದಿದ್ದ ಕಾರಣ
ಪವಿತ್ರಾತ್ಮನು ಇನ್ನೂ ಬಂದಿರಲಿಲ್ಲ.

### ಯೇಸುವಿನ ಬಗ್ಗೆ ಜನರ ವಾದವಿವಾದ

40ಈ ಸಂಗತಿಗಳನ್ನು ಕೇಳಿದ ಜನರಲ್ಲಿ ಕೆಲವರು, ''ಈ
ಮನುಷ್ಯನು ನಿಜವಾಗಿಯೂ ಪ್ರವಾದಿ'' ಎಂದರು.

42''ಆತನೇ ಕ್ರಿಸ್ತನು'' ಎಂದು ಇನ್ನು ಕೆಲವರು ಹೇಳಿದರು.
ಮತ್ತೆ ಕೆಲವರು, ''ಕ್ರಿಸ್ತನು ಗಲಿಲೇಯದಿಂದ ಬರುವುದಿಲ್ಲ.
42ಕ್ರಿಸ್ತನು ದಾವೀದನ ಕುಟುಂಬದವನೆಂತಲೂ ದಾವೀದನು
ವಾಸಿಸಿದ ಬೆತ್ಲೆಹೇಮ್ ಊರಿನಿಂದ ಆತನು ಬರುತ್ತಾನೆಂತಲೂ
ಪವಿತ್ರ ಗ್ರಂಥವು ತಿಳಿಸುತ್ತದೆ'' ಎಂದರು. 43ಹೀಗೆ ಯೇಸುವಿನ
ಕುರಿತು ಜನರಲ್ಲಿ ಭೇದ ಉಂಟಾಯಿತು. 44ಕೆಲವರು ಯೇಸು
ವನ್ನು ಬಂಧಿಸಬೇಕೆಂದಿದ್ದರು. ಆದರೆ ಬಂಧಿಸಲು ಯಾರೂ
ಪ್ರಯತ್ನಿಸಲಿಲ್ಲ

### ಯೆಹೂದ್ಯನಾಯಕರ ಅಪನಂಬಿಕೆ

45ದೇವಾಲಯದ ಸಿಪಾಯಿಗಳು ಹಿಂತಿರುಗಿದಾಗ,
ಮಹಾಯಾಜಕರು ಮತ್ತು ಫರಿಸಾಯರು ಅವರಿಗೆ, ''ನೀವು
ಅವನನ್ನು ಏಕೆ ಹಿಡಿದುಕೊಂಡು ಬರಲಿಲ್ಲ?'' ಎಂದು
ಕೇಳಿದರು.

46ದೇವಾಲಯದ ಸಿಪಾಯಿಗಳು, ''ಆತನು ಹೇಳುವ
ಸಂಗತಿಗಳು ಬೇರೆ ಯಾವ ಮನುಷ್ಯನ ಮಾತುಗಳಿಗಿಂತಲೂ
ಮಹತ್ವಪೂರ್ಣವಾಗಿವೆ'' ಎಂದು ಉತ್ತರಕೊಟ್ಟರು.

47ಫರಿಸಾಯರು, ''ಹಾಗಾದರೆ, ಯೇಸು ನಿಮ್ಮನ್ನು ಸಹ
ಮರುಳುಗೊಳಿಸುತ್ತಿದ್ದಾನೆ! 48ನಾಯಕರಲ್ಲಿ ಯಾರಾದರೂ
ಯೇಸುವಿನಲ್ಲಿ ನಂಬಿಕೆ ಇಟ್ಟಿದ್ದಾರೋ? ಇಲ್ಲ! ಫರಿಸಾಯರಾದ
ನಮ್ಮಲ್ಲಿ ಯಾರಾದರೂ ಅತನನ್ನು ನಂಬಿದ್ದೇವೋ? ಇಲ್ಲ!
49ಆದರೆ ಹೊರಗಿನ ಜನರಿಗೆ ಧರ್ಮಶಾಸ್ತ್ರದ ಬಗ್ಗೆ ಏನೂ
ಗೊತ್ತಿಲ್ಲ. ಅವರು ದೇವರ ಶಾಪಕ್ಕೆ ಒಳಗಾಗಿದ್ದಾರೆ!'' ಎಂದು
ಉತ್ತರಕೊಟ್ಟರು.

50ಆದರೆ ಆ ಗುಂಪಿನಲ್ಲಿ ನಿಕೊದೇಮನು ಇದ್ದನು.
ಮೊದಲೊಮ್ಮೆ ಯೇಸುವನ್ನು ನೋಡಲು ಹೋಗಿದ್ದವನು
ಇವನೇ. 51ನಿಕೊದೇಮನು, ''ಒಬ್ಬ ವ್ಯಕ್ತಿಯ ಹೇಳಿಕೆಯನ್ನು
ಕೇಳದೆ ತೀರ್ಪು ನೀಡಲು ನಮ್ಮ ಧರ್ಮಶಾಸ್ತ್ರವು ಸಮ್ಮತಿಸು
ವುದಿಲ್ಲ. ಆತನು ಮಾಡಿರುವುದನ್ನು ನಾವು ತಿಳಿದುಕೊಳ್ಳು
ವವರೆಗೆ ಆತನಿಗೆ ತೀರ್ಪು ಮಾಡಲಾಗದು'' ಎಂದು ಹೇಳಿದನು.

52ಯೆಹೂದ್ಯನಾಯಕರು, ''ನೀನೂ ಗಲಿಲೇಯ
ದವನೋ? ಪವಿತ್ರ ಗ್ರಂಥವನ್ನು ಅಧ್ಯಯನಮಾಡು.
ಗಲಿಲೇಯದಿಂದ ಯಾವ ಪ್ರವಾದಿಯೂ ಬರುವುದಿಲ್ಲ
ವೆಂಬುದು ಆಗ ನಿನಗೆ ತಿಳಿಯುತ್ತದೆ'' ಎಂದು ಉತ್ತರಕೊಟ್ಟರು.

### ಸಿಕ್ಕಿಕೊಂಡ ವ್ಯಭಿಚಾರಿಣಿ

53ಬಳಿಕ ಅವರೆಲ್ಲರೂ ತಮ್ಮತಮ್ಮ ಮನೆಗಳಿಗೆ
ಹೊರಟುಹೋದರು.

8 ಯೇಸು ಆಲಿವ್ ಮರಗಳ ಗುಡ್ಡಕ್ಕೆ ಹೋದನು.
2ಮರುದಿನ ನಸುಕಿನಲ್ಲಿ ಯೇಸು ದೇವಾಲಯಕ್ಕೆ ಮರಳಿ
ಹೋದನು. ಎಲ್ಲಾ ಜನರು ಯೇಸುವಿನ ಬಳಿಗೆ ನೆರೆದು
ಬಂದರು. ಯೇಸು ಕುಳಿತುಕೊಂಡು ಜನರಿಗೆ ಉಪದೇಶಿಸಿ
ದನು. 3ಧರ್ಮೋಪದೇಶಕರು ಮತ್ತು ಫರಿಸಾಯರು ಒಬ್ಬ
ಸ್ತ್ರೀಯನ್ನು ಅಲ್ಲಿಗೆ ಕರೆದುಕೊಂಡು ಬಂದರು. ಆ ಸ್ತ್ರೀಯು
ವ್ಯಭಿಚಾರ ಮಾಡುವಾಗಲೇ ಸಿಕ್ಕಿಕೊಂಡಿದ್ದಳು. ಈ ಯೆಹೂ
ದ್ಯರು ಆ ಸ್ತ್ರೀಯನ್ನು ಜನರ ಮುಂದೆ ಬಲವಂತವಾಗಿ ನಿಲ್ಲಿಸಿ,
4ಯೇಸುವಿಗೆ, ''ಉಪದೇಶಕನೇ, ಈ ಸ್ತ್ರೀಯು ವ್ಯಭಿಚಾರ
ಮಾಡುತ್ತಿದ್ದಾಗಲೇ ಸಿಕ್ಕಿಕೊಂಡಳು. 5ಇಂಥ ಕಾರ್ಯವನ್ನು
ಮಾಡುವ ಪ್ರತಿಯೊಬ್ಬ ಸ್ತ್ರೀಯನ್ನು ಕಲ್ಲೆಸೆದು ಕೊಲ್ಲಬೇಕೆಂದು
ಮೋಶೆಯ ಧರ್ಮಶಾಸ್ತ್ರವು ಆಜ್ಞಾಪಿಸುತ್ತದೆ. ಈಗ ನಾವೇನು
ಮಾಡಬೇಕು? ನೀನೇ ಹೇಳು'' ಎಂದರು. 6ಯೇಸುವನ್ನು
ಮಾತಿನಲ್ಲಿ ಸಿಕ್ಕಿಸಿದರೆ ಆತನ ಮೇಲೆ ಅಪವಾದ ಹೊರಿಸಲು
ಸಾಧ್ಯವಾಗುತ್ತದೆ ಎಂದು ಈ ಪ್ರಶ್ನೆಯನ್ನು ಕೇಳಿದರು. ಆದರೆ
ಯೇಸು ತಲೆ ಬಾಗಿಸಿಕೊಂಡು ತನ್ನ ಬೆರಳಿನಿಂದ ನೆಲದ ಮೇಲೆ
ಬರೆಯತೊಡಗಿದನು. 7ಯೆಹೂದ್ಯನಾಯಕರು ಅದೇ ಪ್ರಶ್ನೆ
ಯನ್ನು ಮತ್ತೆ ಕೇಳಿದರು. ಆಗ ಯೇಸು ನೆಟ್ಟಗೆ ಕುಳಿತುಕೊಂಡು,
''ನಿಮ್ಮಲ್ಲಿ ಪಾಪ ಮಾಡಿಲ್ಲದವನು ಆಕೆಯ ಮೇಲೆ ಮೊದಲ
ನೆಯ ಕಲ್ಲನ್ನು ಎಸೆಯಲಿ'' ಎಂದು ಹೇಳಿ, 8ಮತ್ತೆ ಬಗ್ಗಿಕೊಂಡು
ನೆಲದ ಮೇಲೆ ಬರೆಯತೊಡಗಿದನು.

9ಯೇಸುವಿನ ಈ ಮಾತನ್ನು ಕೇಳಿದ ಆ ಜನರು
ಒಬ್ಬೊಬ್ಬರಾಗಿ ಅಲ್ಲಿಂದ ಹೊರಟುಹೋದರು. ಮೊದಲಾಗಿ

ಹಿರಿಯರು, ನಂತರ ಇತರರು ಹೊರಟುಹೋದರು. ಕೊನೆಗೆ
ಅಲ್ಲಿ ಉಳಿದವರೆಂದರೆ, ಯೇಸು ಮತ್ತು ಆ ಸ್ತ್ರೀ. ಆಕೆಯು ಆತನ
ಮುಂದೆ ನಿಂತುಕೊಂಡಿದ್ದಳು. [10]ಯೇಸು ನೆಟ್ಟಗೆ ಕುಳಿತು
ಕೊಂಡು, 'ಅಮ್ಮಾ, ನಿನ್ನ ಮೇಲೆ ತಪ್ಪು ಹೊರಿಸಿದವರು ಎಲ್ಲಿ
ದ್ದಾರೆ? ಅವರಲ್ಲಿ ಒಬ್ಬರಾದರೂ ನಿನಗೆ ಶಿಕ್ಷೆ ವಿಧಿಸಲಿಲ್ಲವೇ?''
ಎಂದು ಕೇಳಿದನು.

[11]ಆ ಸ್ತ್ರೀಯು, ''ಸ್ವಾಮೀ, ಅವರಲ್ಲಿ ಯಾರೂ ನನಗೆ
ತೀರ್ಪು ನೀಡಲಿಲ್ಲ'' ಎಂದು ಉತ್ತರ ಕೊಟ್ಟಳು.

ಯೇಸು ಆಕೆಗೆ, ''ಆದ್ದರಿಂದ ನಾನು ಸಹ ನಿನಗೆ ತೀರ್ಪು
ನೀಡುವುದಿಲ್ಲ. ಈಗ ನೀನು ಹೋಗಬಹುದು, ಆದರೆ ಇನ್ನು
ಮುಂದೆ ಮತ್ತೆ ಪಾಪ ಮಾಡಬೇಡ'' ಎಂದು ಹೇಳಿದನು.

## ಯೇಸುವೇ ಲೋಕಕ್ಕೆ ಬೆಳಕು

[12]ಬಳಿಕ, ಯೇಸುವು ಜನರೊಂದಿಗೆ ಮತ್ತೆ ಮಾತಾಡುತ್ತಾ
''ನಾನೇ ಈ ಲೋಕಕ್ಕೆ ಬೆಳಕಾಗಿದ್ದೇನೆ. ನನ್ನನ್ನು ಹಿಂಬಾ
ಲಿಸುವವನು ಕತ್ತಲೆಯಲ್ಲಿ ಎಂದಿಗೂ ಜೀವಿಸುವುದಿಲ್ಲ. ಅವನು
ಜೀವಕೊಡುವ ಬೆಳಕನ್ನು ಹೊಂದಿದವನಾಗಿರುವನು'' ಎಂದು
ಹೇಳಿದನು.

[13]ಫರಿಸಾಯರು ಯೇಸುವಿಗೆ, ''ನೀನು ನಿನ್ನ ಬಗ್ಗೆ
ಮಾತಾಡುವ ಈ ಸಂಗತಿಗಳು ಸತ್ಯವೆಂದು ಹೇಳುವವನು
ನೀನೊಬ್ಬನು ಮಾತ್ರ. ಆದ್ದರಿಂದ, ನೀನು ಹೇಳುವ ಈ ಸಂಗತಿ
ಗಳನ್ನು ನಾವು ಸ್ವೀಕರಿಸಿಕೊಳ್ಳಲಾರೆವು'' ಎಂದು ಹೇಳಿದರು.

[14]ಯೇಸು, ''ಹೌದು, ನಾನೇ ನನ್ನ ಬಗ್ಗೆ ಈ ಸಂಗತಿಗಳನ್ನು
ಹೇಳುತ್ತಿದ್ದರೂ ಈ ಸಂಗತಿಗಳು ಜನರ ನಂಬಿಕೆಗೆ ಯೋಗ್ಯ
ವಾಗಿವೆ. ಏಕೆಂದರೆ, ನಾನು ಎಲ್ಲಿಂದ ಬಂದೆನೆಂಬುದೂ ನಾನು
ಎಲ್ಲಿಗೆ ಹೋಗುತ್ತೇನೆಂಬುದೂ ನನಗೆ ತಿಳಿದಿದೆ. ನಾನು
ನಿಮ್ಮಂಥ ವ್ಯಕ್ತಿಯಲ್ಲ. ನಾನು ಎಲ್ಲಿಂದ ಬಂದೆನೆಂಬುದು ಮತ್ತು
ಎಲ್ಲಿಗೆ ಹೋಗುತ್ತೇನೆಂಬುದು ನಿಮಗೆ ಗೊತ್ತಿಲ್ಲ. [15]ನೀವು
ಹೊರತೋರಿಕೆಯ ಪ್ರಕಾರ ತೀರ್ಪು ಮಾಡುತ್ತಿದ್ದೀರಿ. ಆದರೆ
ನಾನು ಯಾರಿಗೂ ತೀರ್ಪು ಮಾಡುವುದಿಲ್ಲ. [16]ನಾನು ಮಾಡುವ
ತೀರ್ಪು ನ್ಯಾಯಬದ್ಧವಾಗಿರುತ್ತದೆ. ಏಕೆಂದರೆ ನಾನು ತೀರ್ಪು
ಮಾಡುವಾಗ ಒಬ್ಬಂಟಿಗನಾಗಿರುವುದಿಲ್ಲ. ನನ್ನನ್ನು ಕಳುಹಿಸಿದ
ತಂದೆಯೂ ನನ್ನೊಂದಿಗಿರುತ್ತಾನೆ. [17]ಇಬ್ಬರ ಸಾಕ್ಷಿ ಒಂದೇ
ಆಗಿದ್ದರೆ ಅವರ ಹೇಳಿಕೆಯನ್ನು ಸ್ವೀಕರಿಸಿಕೊಳ್ಳಬೇಕೆಂದು ನಿಮ್ಮ
ಧರ್ಮಶಾಸ್ತ್ರವೇ ತಿಳಿಸುತ್ತದೆ. [18]ನನ್ನ ಪರವಾದ ಸಾಕ್ಷಿಗಳಲ್ಲಿ
ನಾನೂ ಒಬ್ಬನಾಗಿದ್ದೇನೆ, ನನ್ನನ್ನು ಕಳುಹಿಸಿದ ತಂದೆಯು ನನ್ನ
ಮತ್ತೊಬ್ಬ ಸಾಕ್ಷಿಯಾಗಿದ್ದಾನೆ'' ಎಂದು ಉತ್ತರಕೊಟ್ಟನು.

[19]ಜನರು, ''ನಿನ್ನ ತಂದೆ ಎಲ್ಲಿದ್ದಾನೆ?'' ಎಂದು ಕೇಳಿದರು.

ಯೇಸು, ''ನಿಮಗೆ ನಾನಾಗಲಿ, ನನ್ನ ತಂದೆಯಾಗಲಿ
ಗೊತ್ತಿಲ್ಲ. ನೀವು ನನ್ನನ್ನು ತಿಳಿದಿದ್ದರೆ, ನನ್ನ ತಂದೆಯನ್ನೂ ಸಹ
ತಿಳಿದಿರುವಿರಿ'' ಎಂದು ಹೇಳಿದನು.

[20]ಯೇಸುವು ದೇವಾಲಯದಲ್ಲಿ ಉಪದೇಶಿಸುತ್ತಿದ್ದಾಗ ಈ
ಮಾತುಗಳನ್ನು ಹೇಳಿದನು. ಜನರು ಕೊಡುವ ಕಾಣಿಕೆಯನ್ನು
ಇಟ್ಟಿದ್ದ ಸ್ಥಳದ ಸಮೀಪದಲ್ಲಿ ಆತನಿದ್ದನು. ಆದರೆ ಆತನನ್ನು
ಯಾರೂ ಬಂಧಿಸಲಿಲ್ಲ. ಏಕೆಂದರೆ ಆತನನ್ನು ಬಂಧಿಸತಕ್ಕ
ಸಮಯ ಇನ್ನೂ ಬಂದಿರಲಿಲ್ಲ.

## ಯೆಹೂದ್ಯರ ಅಪನಂಬಿಕೆ

[21]ಯೇಸು ಅವರಿಗೆ, ''ನಾನು ನಿಮ್ಮನ್ನು ಬಿಟ್ಟುಹೋಗು
ತ್ತೇನೆ. ನೀವು ನನ್ನನ್ನು ಹುಡುಕುವಿರಿ. ಆದರೆ ನೀವು ನಿಮ್ಮ
ಪಾಪದಲ್ಲೇ ಸಾಯುವಿರಿ. ನಾನು ಹೋಗುವಲ್ಲಿಗೆ ನೀವು ಬರ
ಲಾರಿರಿ'' ಎಂದು ಹೇಳಿದನು.

[22]ಆದ್ದರಿಂದ ಯೆಹೂದ್ಯರು, ''ಯೇಸು ತನ್ನನ್ನು ತಾನೇ
ಕೊಂದುಕೊಳ್ಳುವನೇ? ಅದಕ್ಕಾಗಿಯೇ, ನಾನು ಹೋಗು
ವಲ್ಲಿಗೆ ನೀವು ಬರಲಾರಿರಿ ಎಂದು ಹೇಳಿದನೇ?'' ಎಂದು
ತಮ್ಮತಮ್ಮೊಳಗೆ ಮಾತಾಡಿಕೊಂಡರು.

[23]ಅದಕ್ಕೆ ಯೇಸು, ''ನೀವು ಕೆಳಗಿನವರಾಗಿದ್ದೀರಿ.
ನಾನಾದರೋ ಮೇಲಿನವನು. ನೀವು ಈ ಲೋಕದವ
ರಾಗಿದ್ದೀರಿ. ಆದರೆ ನಾನು ಈ ಲೋಕದವನಲ್ಲ. [24]ನೀವು ನಿಮ್ಮ
ಪಾಪಗಳಲ್ಲೇ ಸಾಯುವಿರಿ ಎಂದು ನಾನು ನಿಮಗೆ ಹೇಳಿದೆ.
ಹೌದು, ನಾನೇ ಆತನೆಂಬುದನ್ನು ನೀವು ನಂಬದಿದ್ದರೆ ನಿಮ್ಮ
ಪಾಪಗಳಲ್ಲಿಯೇ ನೀವು ಸಾಯುವಿರಿ'' ಎಂದು ಹೇಳಿದನು.

[25]ಯೆಹೂದ್ಯರು, ''ಹಾಗಾದರೆ, ನೀನು ಯಾರು?''
ಎಂದು ಕೇಳಿದರು.

ಯೇಸು, ''ನಾನು ಯಾರೆಂದು ನಿಮಗೆ ಮೊದಲಿಂದ
ತಿಳಿಸುತ್ತಾ ಬಂದೆನೊ ಆತನೇ ನಾನು. [26]ನಿಮ್ಮ ಬಗ್ಗೆ ಹೇಳಲು
ನನ್ನಲ್ಲಿ ಅನೇಕ ಸಂಗತಿಗಳಿವೆ. ನಾನು ನಿಮಗೆ ತೀರ್ಪು ಮಾಡ
ಬಲ್ಲೆನು. ಆದರೆ ನನ್ನನ್ನು ಕಳುಹಿಸಿದಾತನಿಂದ ನಾನು ಕೇಳಿದ
ಸಂಗತಿಗಳನ್ನು ಮಾತ್ರ ಜನರಿಗೆ ಹೇಳುತ್ತೇನೆ. ಆತನು ಸತ್ಯವನ್ನೇ
ತಿಳಿಸುತ್ತಾನೆ'' ಎಂದು ಉತ್ತರಕೊಟ್ಟನು.

[27]ಯೇಸು ಯಾರ ಬಗ್ಗೆ ಮಾತಾಡುತ್ತಿದ್ದಾನೆ ಎಂಬುದನ್ನು
ಜನರು ಅರ್ಥಮಾಡಿಕೊಳ್ಳಲಿಲ್ಲ. ಯೇಸು ಅವರಿಗೆ ತಂದೆಯ
(ದೇವರ) ಬಗ್ಗೆ ಹೇಳುತ್ತಿದ್ದನು. [28]ಆದ್ದರಿಂದ ಆತನು ಅವರಿಗೆ,
''ನೀವು ಮನುಷ್ಯಕುಮಾರನನ್ನು ಮೇಲಕ್ಕೇರಿಸುವಿರಿ (ಕೊಲ್ಲು
ವಿರಿ). ನಾನೇ ಆತನೆಂಬುದು ಆಗ ನಿಮಗೆ ತಿಳಿಯುವುದು.
ನಾನು ಈ ಕಾರ್ಯಗಳನ್ನು ನನ್ನ ಸ್ವಂತ ಅಧಿಕಾರದಿಂದ ಮಾಡು
ತ್ತಿಲ್ಲ ಎಂಬುದನ್ನು ನೀವು ತಿಳಿದುಕೊಳ್ಳುವಿರಿ. ಅಲ್ಲದೆ,
ತಂದೆಯು ನನಗೆ ಉಪದೇಶಿಸಿದ ಸಂಗತಿಗಳನ್ನು ಮಾತ್ರ ನಾನು
ಹೇಳುತ್ತೇನೆಂಬುದೂ ನಿಮಗೆ ಅರಿವಾಗುವುದು. [29]ನನ್ನನ್ನು
ಕಳುಹಿಸಿದಾತನು (ದೇವರು) ನನ್ನೊಂದಿಗೆ ಇದ್ದಾನೆ. ಆತನಿಗೆ
ಮೆಚ್ಚಿಕೆಯಾದದ್ದನ್ನೇ ನಾನು ಯಾವಾಗಲೂ ಮಾಡುತ್ತೇನೆ.
ಆದ್ದರಿಂದ ಆತನು ನನ್ನನ್ನು ಒಬ್ಬಂಟಿಗನಾಗಿ ಬಿಟ್ಟುಬಿಟ್ಟಿಲ್ಲ''
ಎಂದು ಹೇಳಿದನು.

[30]ಯೇಸು ಈ ಸಂಗತಿಗಳನ್ನು ಹೇಳುತ್ತಿದ್ದಾಗ, ಅನೇಕ
ಜನರು ಆತನಲ್ಲಿ ನಂಬಿಕೆಯಿಟ್ಟರು.

## ಪಾಪವಿಮೋಚನೆಯ ಬಗ್ಗೆ ಯೇಸುವಿನ ಉಪದೇಶ

[31]ಆದ್ದರಿಂದ ಯೇಸು ತನ್ನಲ್ಲಿ ನಂಬಿಕೆ ಇಟ್ಟಿದ್ದ ಯೆಹೂದ್ಯ
ರಿಗೆ, ''ನೀವು ನನ್ನ ಉಪದೇಶಕ್ಕೆ ವಿಧೇಯರಾಗಿದ್ದರೆ, ನೀವು
ನಿಜವಾಗಿಯೂ ನನ್ನ ಹಿಂಬಾಲಕರಾಗಿದ್ದೀರಿ. [32]ನೀವು ಸತ್ಯ
ವನ್ನು ತಿಳಿದುಕೊಳ್ಳುವಿರಿ. ಆ ಸತ್ಯವು ನಿಮ್ಮನ್ನು ಬಿಡುಗಡೆ
ಮಾಡುವುದು'' ಎಂದು ಹೇಳಿದನು.

[33]ಯೆಹೂದ್ಯರು, ''ನಾವು ಅಬ್ರಹಾಮನ ಮಕ್ಕಳು.
ನಾವೆಂದೂ ಯಾರ ಗುಲಾಮರೂ ಆಗಿರಲಿಲ್ಲ. ಹೀಗಿದ್ದರೂ,

ನಮಗೆ ಬಿಡುಗಡೆ ಆಗುವುದೆಂದು ನೀನು ಹೇಳುವುದೇಕೆ?''
ಎಂದು ಉತ್ತರಕೊಟ್ಟರು.
34ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಪಾಪಮಾಡುವ ಪ್ರತಿಯೊಬ್ಬನೂ ಪಾಪಕ್ಕೆ ಗುಲಾಮನಾಗಿ
ದ್ದಾನೆ. ಪಾಪವು ಅವನ ಯಜಮಾನನಾಗಿದೆ. 35ಗುಲಾಮನು
ಒಂದು ಮನೆಯಲ್ಲಿ ಶಾಶ್ವತವಾಗಿ ಇರುವುದಿಲ್ಲ. ಆದರೆ ಮಗನು
ಕುಟುಂಬಕ್ಕೆ ಶಾಶ್ವತವಾಗಿ ಸೇರಿದವನಾಗಿದ್ದಾನೆ. 36ಆದ್ದರಿಂದ
ಮಗನು ನಿಮ್ಮನ್ನು ಬಿಡುಗಡೆ ಮಾಡಿದರೆ, ನೀವು ನಿಜ
ವಾಗಿಯೂ ಬಿಡುಗಡೆಯಾಗಿರುವಿರಿ. 37ನೀವು ಅಬ್ರಹಾಮನ
ಮಕ್ಕಳೆಂದು ನನಗೆ ಗೊತ್ತಿದೆ. ಆದರೆ ನೀವು ನನ್ನನ್ನು ಕೊಲ್ಲ
ಬೇಕೆಂದಿದ್ದೀರಿ. ಏಕೆಂದರೆ ನನ್ನ ಉಪದೇಶವನ್ನು ಸ್ವೀಕರಿಸಿ
ಕೊಳ್ಳಲು ನಿಮಗೆ ಇಷ್ಟವಿಲ್ಲ. 38ನನ್ನ ತಂದೆಯು ನನಗೆ ತೋರಿ
ಸಿರುವುದನ್ನೇ ನಾನು ನಿಮಗೆ ಹೇಳುತ್ತಿದ್ದೇನೆ. ನೀವಾದರೊ
ನಿಮ್ಮ ತಂದೆ ನಿಮಗೆ ಹೇಳಿದ ಸಂಗತಿಗಳನ್ನೇ ಮಾಡುತ್ತೀರಿ''
ಎಂದು ಉತ್ತರಕೊಟ್ಟನು.

39ಯೆಹೂದ್ಯರು, ''ಅಬ್ರಹಾಮನೇ ನಮ್ಮ ತಂದೆ'' ಎಂದು
ಉತ್ತರಿಸಿದರು.

ಯೇಸು, ''ನೀವು ನಿಜವಾಗಿಯೂ ಅಬ್ರಹಾಮನ
ಮಕ್ಕಳಾಗಿದ್ದರೆ, ಅಬ್ರಹಾಮನು ಮಾಡಿದ ಕಾರ್ಯಗಳನ್ನೇ
ಮಾಡುತ್ತಿದ್ದಿರಿ. 40ನಾನು ದೇವರಿಂದ ಕೇಳಿದ ಸತ್ಯವನ್ನು ನಿಮಗೆ
ಹೇಳಿದವನಾಗಿದ್ದೇನೆ. ಆದರೆ ನೀವು ನನ್ನನ್ನು ಕೊಲ್ಲಲು
ಪ್ರಯತ್ನಿಸುತ್ತಿದ್ದೀರಿ. ಅಬ್ರಹಾಮನು ಅಂಥದ್ದೇನ್ನೂ ಮಾಡ
ಲಿಲ್ಲ. 41ಆದ್ದರಿಂದ ನಿಮ್ಮ ಸ್ವಂತ ತಂದೆ ಮಾಡಿದ್ದನ್ನೇ ನೀವು
ಮಾಡುತ್ತಿದ್ದೀರಿ''ಎಂದು ಹೇಳಿದನು.

ಆದರೆ ಯೆಹೂದ್ಯರು, ''ನಾವು ಹಾದರಕ್ಕೆ ಹುಟ್ಟಿದವರಲ್ಲ.
ದೇವರೇ ನಮ್ಮ ತಂದೆ. ನಮಗಿರುವ ತಂದೆ ಆತನೊಬ್ಬನೇ''
ಎಂದು ಹೇಳಿದರು.

42ಯೇಸು ಆ ಯೆಹೂದ್ಯರಿಗೆ, ''ದೇವರು ನಿಜವಾಗಿಯೂ
ನಿಮ್ಮ ತಂದೆಯಾಗಿದ್ದರೆ, ನೀವು ನನ್ನನ್ನು ಪ್ರೀತಿಸುತ್ತಿದ್ದಿರಿ. ನಾನು
ದೇವರಿಂದ ಬಂದು ಈಗ ಇಲ್ಲಿದ್ದೇನೆ. ನಾನು ಬಂದದ್ದು ನನ್ನ
ಸ್ವಂತ ಅಧಿಕಾರದಿಂದಲ್ಲ. ದೇವರೇ ನನ್ನನ್ನು ಕಳುಹಿಸಿದನು.
43ನಾನು ಹೇಳುವ ಈ ಸಂಗತಿಗಳನ್ನು ನೀವು ಅರ್ಥಮಾಡಿ
ಕೊಳ್ಳುವುದಿಲ್ಲ. ಏಕೆಂದರೆ ನನ್ನ ಉಪದೇಶವನ್ನು ನೀವು
ಸ್ವೀಕರಿಸಿಕೊಳ್ಳಲಾರಿರಿ. 44ಸೈತಾನನೇ ನಿಮ್ಮ ತಂದೆ. ನೀವು
ಅವನಿಗೆ ಹುಟ್ಟಿದವರಾಗಿದ್ದೀರಿ. ಅವನ ದುರಿಚ್ಛೆಗಳನ್ನು
ಮಾಡಬಯಸುತ್ತೀರಿ. ಅವನು ಆರಂಭದಿಂದಲೂ ಕೊಲೆಗಾರ
ನಾಗಿದ್ದು ಸತ್ಯಕ್ಕೆ ವಿರೋಧವಾಗಿದ್ದನು. ಅವನಲ್ಲಿ ಸತ್ಯವು ಇಲ್ಲವೇ
ಇಲ್ಲ. ಅವನು ಸ್ವಭಾವಾನುಸಾರವಾಗಿ ಸುಳ್ಳಾಡುತ್ತಾನೆ. ಅವನು
ಸುಳ್ಳುಗಾರನೂ ಸುಳ್ಳಿಗೆ ತಂದೆಯೂ ಆಗಿದ್ದಾನೆ. 45ನಾನು
ಸತ್ಯವನ್ನು ಹೇಳುತ್ತೇನೆ. ಆದರೆ ನೀವು ನನ್ನನ್ನು ನಂಬುವುದಿಲ್ಲ.
46ನನ್ನಲ್ಲಿ ಪಾಪವನ್ನು ತೋರಿಸಿಕೊಡುವವನು ನಿಮ್ಮಲ್ಲಿ ಯಾವ
ನಾದರೂ ಇರುವನೇ? ನಾನು ಸತ್ಯವನ್ನು ಹೇಳಿದರೂ ನೀವೇಕೆ
ನಂಬುವುದಿಲ್ಲ?

47ದೇವರಿಂದ ಹುಟ್ಟಿದವನು ದೇವರು ಹೇಳುವ
ಮಾತುಗಳನ್ನು ಸ್ವೀಕರಿಸಿಕೊಳ್ಳುವನು. ಆದರೆ ನೀವು ದೇವರಿಂದ
ಹುಟ್ಟಿಲ್ಲದ ಕಾರಣ ಆತನ ಮಾತುಗಳನ್ನು ಸ್ವೀಕರಿಸಿಕೊಳ್ಳು
ವುದಿಲ್ಲ'' ಎಂದನು.

### ತನ್ನ ಮತ್ತು ಅಬ್ರಹಾಮನ ಬಗ್ಗೆ ಯೇಸುವಿನ ಹೇಳಿಕೆ

48ಯೆಹೂದ್ಯರು, ''ನಾವು ನಿನ್ನನ್ನು ಸಮಾರ್ಯದವನೆಂದು
ಹೇಳುತ್ತೇವೆ! ನಿನ್ನೊಳಗೆ ದೆವ್ವವು ಸೇರಿಕೊಂಡು ನಿನ್ನನ್ನು
ಹುಚ್ಚನನ್ನಾಗಿ ಮಾಡಿದೆ'' ಎಂದು ಉತ್ತರಕೊಟ್ಟರು. 49ಯೇಸು,
''ನನ್ನೊಳಗೆ ದೆವ್ವವಿಲ್ಲ. ನನ್ನ ತಂದೆಗೆ ನಾನು ಗೌರವ ಕೊಡು
ತ್ತೇನೆ, ಆದರೆ ನೀವು ನನಗೆ ಗೌರವ ಕೊಡುವುದಿಲ್ಲ. 50ನನಗಾಗಿ
ಗೌರವವನ್ನು ಪಡೆದುಕೊಳ್ಳಲು ನಾನು ಪ್ರಯತ್ನಿಸುತ್ತಿಲ್ಲ. ನನಗೆ
ಗೌರವ ದೊರೆಯಬೇಕೆಂದು ಬಯಸುವ ಒಬ್ಬಾತನಿದ್ದಾನೆ.
ಆತನೇ ನ್ಯಾಯಾಧಿಪತಿ. 51ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನನ್ನ ವಾಕ್ಯಕ್ಕೆ ವಿಧೇಯನಾಗುವವನು ಎಂದಿಗೂ
ಸಾಯುವುದಿಲ್ಲ'' ಎಂದು ಉತ್ತರಕೊಟ್ಟನು.

52ಯೆಹೂದ್ಯರು ಆತನಿಗೆ, ''ನಿನ್ನೊಳಗೆ ದೆವ್ವವಿದೆ ಎಂದು
ಈಗ ನಮಗೆ ತಿಳಿಯಿತು! ಅಬ್ರಹಾಮನು ಮತ್ತು ಪ್ರವಾದಿಗಳು
ಸಹ ಸತ್ತುಹೋದರು. ಆದರೆ 'ನನ್ನ ಉಪದೇಶಕ್ಕೆ ವಿಧೇಯ
ನಾಗುವವನು ಎಂದಿಗೂ ಸಾಯುವುದಿಲ್ಲ' ಎಂದು ನೀನು ಹೇಳು
ತ್ತಿರುವೆ. 53ನಮ್ಮ ತಂದೆಯಾದ ಅಬ್ರಹಾಮನಿಗಿಂತಲೂ ನೀನು
ದೊಡ್ಡವನೆಂದು ಭಾವಿಸಿಕೊಂಡಿರುವೆಯಾ? ಅಬ್ರಹಾಮನು
ಸತ್ತುಹೋದನು ಮತ್ತು ಪ್ರವಾದಿಗಳು ಸಹ ಸತ್ತುಹೋದರು.
ಹೀಗಿರಲು, ನೀನು ನಿನ್ನನ್ನು ಯಾರೆಂದು ಭಾವಿಸಿ
ಕೊಂಡಿರುವೆ?'' ಎಂದು ಕೇಳಿದರು.

54ಯೇಸು, ''ನನ್ನನ್ನು ನಾನೇ ಮಹಿಮೆಪಡಿಸಿಕೊಂಡರೆ, ಆ
ಮಹಿಮೆಗೆ ಯಾವ ಬೆಲೆಯೂ ಇಲ್ಲ. ನನ್ನ ತಂದೆಯೇ ನನ್ನನ್ನು
ಮಹಿಮೆಪಡಿಸುವನು. ನೀವು ಆತನನ್ನೇ ನಿಮ್ಮ ದೇವರೆಂದು
ಹೇಳಿಕೊಳ್ಳುತ್ತೀರಿ. 55ಆದರೆ ನೀವು ಆತನನ್ನು ನಿಜವಾಗಿಯೂ
ತಿಳಿದಿಲ್ಲ. ನಾನು ಆತನನ್ನು ಬಲ್ಲೆನು. ನಾನು ಆತನನ್ನು
ತಿಳಿದಿಲ್ಲವೆಂದು ಹೇಳಿದರೆ ನಿಮ್ಮಂತೆ ನಾನು ಸಹ ಸುಳ್ಳುಗಾರ
ನಾಗುತ್ತೇನೆ. ನಾನು ಆತನನ್ನು ಬಲ್ಲೆನು. ನಾನು ಆತನ ವಾಕ್ಯಕ್ಕೆ
ವಿಧೇಯನಾಗುತ್ತೇನೆ.

56ನಾನು ಬರುವ ದಿನವನ್ನು ತಾನು ನೋಡುವುದಾಗಿ ನಿಮ್ಮ
ತಂದೆಯಾದ ಅಬ್ರಹಾಮನು ಬಹು ಸಂತೋಷಪಟ್ಟನು. ಅವನು
ಆ ದಿನವನ್ನು ಕಂಡು ಬಹು ಸಂತೋಷಗೊಂಡನು'' ಎಂದು
ಉತ್ತರಕೊಟ್ಟನು. 57ಯೆಹೂದ್ಯರು ಯೇಸುವಿಗೆ, ''ಏನು?
ನೀನು ಅಬ್ರಹಾಮನನ್ನು ನೋಡಿರುವಿಯೊ? ನಿನಗೆ ಐವತ್ತು
ವರ್ಷವೂ ಆಗಿಲ್ಲ!'' ಎಂದು ಹೇಳಿದರು.

58ಯೇಸು, ''ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಅಬ್ರಹಾಮನು ಹುಟ್ಟುವುದಕ್ಕಿಂತ ಮೊದಲಿಂದಲೂ ನಾನು
ಇದ್ದೇನೆ!'' ಎಂದು ಉತ್ತರಿಸಿದನು. 59ಇದನ್ನು ಕೇಳಿದ ಕೂಡಲೇ
ಜನರು ಆತನತ್ತ ಬೀರಲು ಕಲ್ಲುಗಳನ್ನು ತೆಗೆದುಕೊಂಡರು.
ಆದರೆ ಯೇಸು ಅಡಗಿಕೊಂಡು ದೇವಾಲಯದಿಂದ ಹೊರಟು
ಹೋದನು.

### ಯೇಸು ಹುಟ್ಟುಕುರುಡನನ್ನು ಗುಣಪಡಿಸುವನು

9 ಯೇಸು ನಡೆದುಕೊಂಡು ಹೋಗುತ್ತಿದ್ದಾಗ ಒಬ್ಬ
ಹುಟ್ಟುಕುರುಡನನ್ನು ಕಂಡನು. 2ಯೇಸುವಿನ ಶಿಷ್ಯರು
ಆತನಿಗೆ, ''ಗುರುವೇ, ಈ ಮನುಷ್ಯನು ಹುಟ್ಟುಕುರುಡನಾಗಲು
ಯಾರ ಪಾಪ ಕಾರಣ? ಅವನ ಸ್ವಂತ ಪಾಪವೇ ಅಥವಾ ಅವನ
ತಂದೆತಾಯಿಗಳ ಪಾಪವೇ?'' ಎಂದು ಕೇಳಿದರು.

3ಯೇಸು, ''ಅವನ ಪಾಪವಾಗಲಿ ಅವನ ತಂದೆತಾಯಿಗಳ
ಪಾಪವಾಗಲಿ ಇದಕ್ಕೆ ಕಾರಣವಲ್ಲ. ದೇವರ ಕಾರ್ಯವು ಅವನಲ್ಲಿ
ತೋರಿಬರಲೆಂದು ಹೀಗಾಗಿದ್ದಾನೆ. 4ನನ್ನನ್ನು ಕಳುಹಿಸಿದಾತನ
ಕಾರ್ಯವನ್ನು ಹಗಲಿರುವಾಗಲೇ ನಾವು ಮಾಡಬೇಕು. ರಾತ್ರಿ
ಬರುತ್ತದೆ. ಆಗ ಯಾವನೂ ಕೆಲಸ ಮಾಡಲಾರನು. 5ನಾನು
ಈ ಲೋಕದಲ್ಲಿರುವಾಗ, ನಾನೇ ಈ ಲೋಕಕ್ಕೆ ಬೆಳಕಾಗಿದ್ದೇನೆ''
ಎಂದು ಹೇಳಿದನು.

6ಯೇಸು ಈ ಮಾತನ್ನು ಹೇಳಿದ ಮೇಲೆ ನೆಲದ ಮೇಲೆ
ಉಗುಳಿ ಅದರಿಂದ ಕೆಸರನ್ನು ಮಾಡಿಕೊಂಡು ಆ ಮನುಷ್ಯನ
ಕಣ್ಣುಗಳಿಗೆ ಹಚ್ಚಿದನು. 7ಯೇಸು ಆ ಮನುಷ್ಯನಿಗೆ, ''ಹೋಗಿ
ಶಿಲೋಮ್ ಕೊಳದಲ್ಲಿ (ಶಿಲೋಮ್ ಅಂದರೆ
''ಕಳುಹಿಸಲ್ಪಟ್ಟವನು.'') ತೊಳೆದುಕೊ'' ಎಂದು ಹೇಳಿದನು.
ಅಂತೆಯೇ ಅವನು ಹೋಗಿ ತೊಳೆದುಕೊಂಡನು. ಆ ಕೂಡಲೇ
ಅವನಿಗೆ ದೃಷ್ಟಿ ಬಂದಿತು.

8ಈ ಮನುಷ್ಯನು ಮೊದಲು ಭಿಕ್ಷೆ ಬೇಡುತ್ತಿದ್ದುದನ್ನು
ನೋಡಿದ್ದ ಕೆಲವರು ಮತ್ತು ಅವನ ನೆರೆಯವರು, ''ನೋಡಿ!
ಭಿಕ್ಷೆ ಬೇಡುತ್ತಾ ಯಾವಾಗಲೂ ಕುಳಿತುಕೊಂಡಿದ್ದವನು ಇವನೇ
ಅಲ್ಲವೇ'' ಎಂದು ವಿಚಾರಿಸಿದರು.

9ಕೆಲವು ಜನರು, ''ಹೌದು ಅವನೇ'' ಎಂದು ಹೇಳಿದರು.
ಇನ್ನು ಕೆಲವರು, ''ಇಲ್ಲ, ಇವನು ಆ ಮನುಷ್ಯನಲ್ಲ. ಇವನು
ಅವನಂತಿದ್ದಾನಷ್ಟೇ'' ಎಂದು ಹೇಳಿದರು.

ಅದಕ್ಕೆ ಆ ಮನುಷ್ಯನು, ''ನಾನೇ ಅವನು'' ಎಂದು
ಹೇಳಿದನು.

10ಆಗ ಜನರು, ''ನೀನು ದೃಷ್ಟಿಯನ್ನು ಹೇಗೆ ಪಡೆದು
ಕೊಂಡೆ?'' ಎಂದು ಕೇಳಿದರು.

11ಆ ಮನುಷ್ಯನು, ''ಯೇಸು ಎಂಬವನು ಸ್ವಲ್ಪ ಕೆಸರನ್ನು
ಮಾಡಿ ನನ್ನ ಕಣ್ಣುಗಳಿಗೆ ಹಚ್ಚಿ, ಶಿಲೋಮ್ ಕೊಳಕ್ಕೆ ಹೋಗಿ
ತೊಳೆದುಕೊಳ್ಳಲು ಹೇಳಿದನು. ಅಂತೆಯೇ ನಾನು ತೊಳೆದು
ಕೊಂಡೆನು. ಈಗ ನನಗೆ ಕಣ್ಣು ಕಾಣಿಸುತ್ತಿದೆ'' ಎಂದು ಉತ್ತರ
ಕೊಟ್ಟನು. 12ಜನರು ಆ ಮನುಷ್ಯನಿಗೆ, ''ಆ ವ್ಯಕ್ತಿ ಎಲ್ಲಿದ್ದಾನೆ?''
ಎಂದು ಕೇಳಿದರು. ಆ ಮನುಷ್ಯನು, ''ನನಗೆ ಗೊತ್ತಿಲ್ಲ'' ಎಂದು
ಉತ್ತರಕೊಟ್ಟನು.

### ಗುಣಹೊಂದಿದ ವ್ಯಕ್ತಿಗೆ ಫರಿಸಾಯರಿಂದ ವಿಚಾರಣೆ

13ಬಳಿಕ ಜನರು ಆ ಮನುಷ್ಯನನ್ನು ಫರಿಸಾಯರ ಬಳಿಗೆ
ಕರೆದುತಂದರು. ಮೊದಲು ಕುರುಡನಾಗಿದ್ದವನು ಅವನೇ.
14ಯೇಸು ಕೆಸರು ಮಾಡಿ ಅವನ ಕಣ್ಣುಗಳನ್ನು ಗುಣಪಡಿ
ಸಿದ್ದನು. ಯೇಸು ಈ ಕಾರ್ಯವನ್ನು ಮಾಡಿದ್ದು ಸಬ್ಬತ್
ದಿನದಲ್ಲಿ. 15ಆದ್ದರಿಂದ ಅವರು ಆ ಮನುಷ್ಯನಿಗೆ, ''ನೀನು
ದೃಷ್ಟಿಯನ್ನು ಹೇಗೆ ಪಡೆದುಕೊಂಡೆ?'' ಎಂದು ಕೇಳಿದರು.

ಆ ಮನುಷ್ಯನು, ''ಆತನು ನನ್ನ ಕಣ್ಣುಗಳಿಗೆ ಕೆಸರನ್ನು
ಹಚ್ಚಿದನು. ನಾನು ತೊಳೆದುಕೊಂಡೆನು. ಈಗ ನನಗೆ ಕಣ್ಣು
ಕಾಣಿಸುತ್ತಿದೆ'' ಎಂದು ಉತ್ತರಕೊಟ್ಟನು.

16ಫರಿಸಾಯರಲ್ಲಿ ಕೆಲವರು, ''ಈ ಮನುಷ್ಯನು (ಯೇಸು)
ಸಬ್ಬತ್ ದಿನದ ವಿಷಯದಲ್ಲಿ ಧರ್ಮಶಾಸ್ತ್ರಕ್ಕೆ ವಿಧೇಯನಾಗು
ವುದಿಲ್ಲ. ಆದ್ದರಿಂದ ಇವನು ದೇವರಿಂದ ಬಂದಿಲ್ಲ'' ಎಂದು
ಹೇಳಿದರು. ಇತರರು, ''ಇವನು ಪಾಪಿಯಾಗಿದ್ದರೆ ಇಂಥ
ಅದ್ಭುತಕಾರ್ಯಗಳನ್ನು ಹೇಗೆ ಮಾಡಲಾದೀತು?'' ಎಂದರು.
ಹೀಗೆ ಯೆಹೂದ್ಯರಲ್ಲೇ ಭಿನ್ನಾಭಿಪ್ರಾಯ ಉಂಟಾಯಿತು.

17ಯೆಹೂದ್ಯನಾಯಕರು ಗುಣಹೊಂದಿದವನಿಗೆ, ''ಆ
ಮನುಷ್ಯನು (ಯೇಸು) ನಿನ್ನನ್ನು ಗುಣಪಡಿಸಿದನು ಮತ್ತು ನಿನಗೆ
ಕಣ್ಣು ಕಾಣಿಸುತ್ತಿದೆ. ಆದರೆ ಅವನ ಬಗ್ಗೆ ನಿನಗೇನು
ಅನ್ನಿಸುತ್ತದೆ?'' ಎಂದು ಕೇಳಿದರು.

ಅದಕ್ಕೆ ಅವನು, ''ಆತನು ಒಬ್ಬ ಪ್ರವಾದಿ'' ಎಂದು
ಉತ್ತರಕೊಟ್ಟನು. 18ಈ ಮನುಷ್ಯನು ಮೊದಲು
ಕುರುಡನಾಗಿದ್ದನು. ಆದರೆ ಈಗ ಇವನಿಗೆ ಗುಣವಾಗಿದೆ ಎಂದು
ಯೆಹೂದ್ಯ ನಾಯಕರುಗಳು ನಂಬಲಿಲ್ಲ. ಆದ್ದರಿಂದ ಅವರು
ಅವನ ತಂದೆತಾಯಿಗಳನ್ನು ಕರೆಯಿಸಿದರು. 19ಅವರು ಅವನ
ತಂದೆತಾಯಿಗಳಿಗೆ, ''ಇವನು ನಿಮ್ಮ ಮಗನೋ? ಇವನು
ಹುಟ್ಟುಕುರುಡನೆಂದು ನೀವು ಹೇಳುತ್ತೀರಿ. ಹಾಗಾದರೆ ಇವನಿಗೆ
ಈಗ ಹೇಗೆ ಕಣ್ಣು ಕಾಣಿಸುತ್ತದೆ?'' ಎಂದು ಕೇಳಿದರು.

20ತಂದೆತಾಯಿಗಳು, ''ಇವನು ನಮ್ಮ ಮಗನೆಂದು ನಮಗೆ
ಗೊತ್ತು. ಇವನು ಹುಟ್ಟುಕುರುಡನೆಂಬುದೂ ನಮಗೆ ಗೊತ್ತು.
21ಆದರೆ ಈಗ ಇವನಿಗೆ ಹೇಗೆ ಕಣ್ಣು ಕಾಣಿಸುತ್ತದೆಯೋ ಯಾರು
ಗುಣಪಡಿಸಿದರೋ ನಮಗೆ ತಿಳಿಯದು. ಅವನನ್ನೇ ಕೇಳಿ.
ಇವನು ತನ್ನ ವಿಷಯವಾಗಿ ಹೇಳುವಷ್ಟು ಪ್ರಾಯಸ್ಥನಾಗಿದ್ದಾನೆ''
ಎಂದು ಉತ್ತರಕೊಟ್ಟರು. 22ಅವನ ತಂದೆತಾಯಿಗಳು
ಯೆಹೂದ್ಯನಾಯಕರಿಗೆ ಹೆದರಿಕೊಂಡಿದ್ದರಿಂದ ಹಾಗೆ ಹೇಳಿ
ದರು. ಯೇಸುವನ್ನು ಕ್ರಿಸ್ತನೆಂದು ಹೇಳುವ ಯಾರನ್ನೇ ಆಗಲಿ
ಸಭಾಮಂದಿರದಿಂದ ಬಹಿಷ್ಕರಿಸುವುದಾಗಿ ಯೆಹೂದ್ಯನಾಯಕ
ರುಗಳು ಪ್ರಕಟಿಸಿದ್ದರು. 23ಆದಕಾರಣವೇ ಅವನ ತಂದೆ
ತಾಯಿಗಳು, ''ಅವನು ಪ್ರಾಯಸ್ಥನಾಗಿದ್ದಾನೆ. ಅವನನ್ನೇ ಕೇಳಿ''
ಎಂದು ಹೇಳಿದರು.

24ಯೆಹೂದ್ಯನಾಯಕರು ಕುರುಡನಾಗಿದ್ದ ಆ ಮನುಷ್ಯ
ನನ್ನು ಒಳಗೆ ಕರೆದು, ''ನೀನು ದೇವರನ್ನು ಮಹಿಮೆಪಡಿಸ
ಬೇಕು. ಈ ಮನುಷ್ಯನು (ಯೇಸು) ಪಾಪಿಯೆಂದು ನಮಗೆ
ಗೊತ್ತಿದೆ'' ಎಂದರು.

25ಆ ಮನುಷ್ಯನು, ''ಅವನು ಪಾಪಿಯೋ ಅಲ್ಲವೋ ನನಗೆ
ಗೊತ್ತಿಲ್ಲ. ಆದರೆ ನಾನು ಕುರುಡನಾಗಿದ್ದೆನು; ಈಗ ನನಗೆ ದೃಷ್ಟಿ
ಬಂದಿದೆ ಎಂಬುದಂತೂ ನನಗೆ ಗೊತ್ತಿದೆ'' ಎಂದು ಉತ್ತರ
ಕೊಟ್ಟನು.

26ಯೆಹೂದ್ಯನಾಯಕರು, ''ಅವನು (ಯೇಸು) ನಿನ
ಗೇನು ಮಾಡಿದನು? ಅವನು ನಿನ್ನ ಕಣ್ಣುಗಳನ್ನು ಹೇಗೆ
ಗುಣಪಡಿಸಿದನು?'' ಎಂದು ಕೇಳಿದರು.

27ಆ ಮನುಷ್ಯನು, ''ಆಗಲೇ ನಿಮಗೆ ಅದನ್ನು ತಿಳಿಸಿದ್ದೇನೆ.
ಆದರೆ ನೀವು ನನಗೆ ಕಿವಿಗೊಡಲಿಲ್ಲ. ಈಗ ಅದನ್ನು ಮತ್ತೆ ಏಕೆ
ಕೇಳಬೇಕೆಂದಿದ್ದೀರಿ? ನೀವು ಸಹ ಆತನ ಹಿಂಬಾಲಕ
ರಾಗಬೇಕೆಂದಿದ್ದೀರೋ?'' ಎಂದು ಉತ್ತರಕೊಟ್ಟನು.

28ಯೆಹೂದ್ಯನಾಯಕರು ಕೋಪಗೊಂಡು ಆ ಮನುಷ್ಯ
ನನ್ನು ಅಪಹಾಸ್ಯಮಾಡಿ, ''ನೀನು ಅವನ (ಯೇಸು) ಹಿಂಬಾಲಕ
ನಾಗಿರುವೆ. ನಾವು ಮೋಶೆಯ ಹಿಂಬಾಲಕರಾಗಿದ್ದೇವೆ.
29ದೇವರು ಮೋಶೆಯೊಂದಿಗೆ ಮಾತಾಡಿದನೆಂಬುದನ್ನು ನಾವು
ಬಲ್ಲೆವು. ಆದರೆ ಈ ಮನುಷ್ಯನು (ಯೇಸು) ಎಲ್ಲಿಂದ ಬಂದ
ನೆಂಬುದು ಸಹ ನಮಗೆ ಗೊತ್ತಿಲ್ಲ!'' ಎಂದು ಹೇಳಿದರು.

30ಆ ಮನುಷ್ಯನು, ‘‘ಇದು ಬಹು ಆಶ್ಚರ್ಯಕರವಾದ
ಸಂಗತಿ. ಯೇಸು ಎಲ್ಲಿಂದ ಬಂದನೆಂಬುದು ನಿಮಗೆ ಗೊತ್ತಿಲ್ಲ.
ಆದರೆ ಆತನು ನನ್ನ ಕಣ್ಣುಗಳನ್ನು ಗುಣಪಡಿಸಿದನು. 31ದೇವರು
ಪಾಪಿಗಳಿಗೆ ಕಿವಿಗೊಡುವುದಿಲ್ಲವೆಂಬುದು ನಮ್ಮೆಲ್ಲರಿಗೂ
ಗೊತ್ತಿದೆ. ಆದರೆ ದೇವರು ತನ್ನನ್ನು ಆರಾಧಿಸುವವನಿಗೂ ಮತ್ತು
ತನಗೆ ವಿಧೇಯನಾಗುವವನಿಗೂ ಕಿವಿಗೊಡುತ್ತಾನೆ. 32ಹುಟ್ಟು
ಕುರುಡನೊಬ್ಬನನ್ನು ಯಾರಾದರೂ ಎಂದಾದರೂ ಗುಣಪಡಿ
ಸಿರುವುದು ಇದೇ ಮೊದಲನೆ ಸಲ. 33ಆ ಮನುಷ್ಯನು (ಯೇಸು)
ದೇವರಿಂದಲೇ ಬಂದಿರಬೇಕು. ಆತನು ದೇವರಿಂದ ಬಂದಿಲ್ಲ
ದಿದ್ದರೆ, ಇಂಥ ಕಾರ್ಯಗಳನ್ನು ಮಾಡಲಾಗುತ್ತಿರಲಿಲ್ಲ’’ ಎಂದು
ಉತ್ತರಕೊಟ್ಟನು.

34ಯೆಹೂದ್ಯನಾಯಕರು, ‘‘ಪಾಪದಲ್ಲೇ ಹುಟ್ಟಿ
ಬೆಳೆದವನು ನೀನು! ನಮಗೇ ಉಪದೇಶಮಾಡುವಿಯಾ?’’
ಎಂದು ಉತ್ತರ ಕೊಟ್ಟರು. ಅಲ್ಲದೆ ಅವರು ಅವನನ್ನು ಬಲವಂತ
ವಾಗಿ ಹೊರಗಟ್ಟಿದರು.

### ಆತ್ಮಿಕ ಅಂಧತೆ

35ಯೆಹೂದ್ಯನಾಯಕರು ಆ ಮನುಷ್ಯನನ್ನು ಹೊರ
ಗಟ್ಟಿದ್ದು ಯೇಸುವಿಗೆ ತಿಳಿಯಿತು. ಯೇಸು ಆ ಮನುಷ್ಯನನ್ನು
ಕಂಡು, ‘‘ನೀನು ಮನುಷ್ಯಕುಮಾರನಲ್ಲಿ ನಂಬಿಕೆ
ಯಿಡುವಿಯಾ?’’ ಎಂದು ಕೇಳಿದನು. 36ಆ ಮನುಷ್ಯನು,
‘‘ಸ್ವಾಮೀ, ಆ ಮನುಷ್ಯಕುಮಾರನು ಯಾರು? ನನಗೆ ತಿಳಿಸು.
ನಾನು ಆತನಲ್ಲಿ ನಂಬಿಕೆ ಇಡುತ್ತೇನೆ’’ ಎಂದು ಹೇಳಿದನು.

37ಯೇಸು, ‘‘ನೀನು ಆತನನ್ನು ಈಗಾಗಲೇ ನೋಡಿರುವೆ.
ಈಗ ನಿನ್ನೊಂದಿಗೆ ಮಾತಾಡುತ್ತಿರುವಾತನೇ ಮನುಷ್ಯ
ಕುಮಾರನು’’ ಎಂದು ಹೇಳಿದನು.

38ಆ ಮನುಷ್ಯನು, ‘‘ಹೌದು ಪ್ರಭುವೇ, ನಾನು
ನಂಬುತ್ತೇನೆ!’’ ಎಂದು ಉತ್ತರಕೊಟ್ಟನು. ಬಳಿಕ ಅವನು
ಯೇಸುವಿಗೆ ಅಡ್ಡಬಿದ್ದು ಆರಾಧಿಸಿದನು. 39ಯೇಸು, ‘‘ಈ
ಲೋಕಕ್ಕೆ ತೀರ್ಪಾಗಲೆಂದು ನಾನು ಈ ಲೋಕಕ್ಕೆ ಬಂದೆನು.
ಕುರುಡರು ಕಾಣುವಂತಾಗಲೆಂದೂ ಕಣ್ಣುಳ್ಳವರು ಕುರುಡ
ರಾಗಲೆಂದೂ ನಾನು ಬಂದೆನು’’ ಎಂದು ಹೇಳಿದನು.

40ಅಲ್ಲಿದ್ದ ಫರಿಸಾಯರು ಇದನ್ನು ಕೇಳಿ, ‘‘ಏನು? ನಮ್ಮನ್ನು
ಸಹ ಕುರುಡರೆಂದು ಹೇಳುತ್ತಿರುವೆಯಾ?’’ ಎಂದು
ಪ್ರಶ್ನಿಸಿದರು.

41ಯೇಸು, ‘‘ನೀವು ನಿಜವಾಗಿಯೂ ಕುರುಡರಾಗಿದ್ದರೆ
ಪಾಪವೆಂಬ ಅಪರಾಧಕ್ಕೆ ಗುರಿಯಾಗುತ್ತಿರಲಿಲ್ಲ. ಆದರೆ ನೀವು,
‘ನಮಗೆ ಕಣ್ಣು ಕಾಣುತ್ತದೆ’ ಎಂದು ಹೇಳುತ್ತೀರಿ. ಆದ್ದರಿಂದ
ನೀವು ಪಾಪಿಗಳೇ ಆಗಿದ್ದೀರಿ’’ ಎಂದು ಹೇಳಿದನು.

### ಕುರುಬನು ಮತ್ತು ಅವನ ಕುರಿಗಳು

10 ಯೇಸು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ಒಬ್ಬನು ಕುರಿಹಟ್ಟಿಯೊಳಗೆ ಪ್ರವೇಶಿಸುವಾಗ
ಬಾಗಿಲಿನ ಮೂಲಕ ಪ್ರವೇಶಿಸಬೇಕು. ಮತ್ತೆಲ್ಲಿಂದಾದರೂ ಹತ್ತಿ
ಬರುವವನು ಸುಲಿಗೆಗಾರನಾಗಿದ್ದಾನೆ; ಕುರಿಗಳನ್ನು ಕದ್ದು
ಕೊಳ್ಳಲು ಪ್ರಯತ್ನಿಸುವವನಾಗಿದ್ದಾನೆ. 2ಆದರೆ ಕುರುಬನು
ಬಾಗಿಲ ಮೂಲಕ ಪ್ರವೇಶಿಸುತ್ತಾನೆ. 3ಕಾವಲುಗಾರನು
ಕುರುಬನಿಗೆ ಬಾಗಿಲನ್ನು ತೆರೆಯುತ್ತಾನೆ. ಕುರಿಗಳು ಅವನ ಸ್ವರಕ್ಕೆ
ಕಿವಿಗೊಡುತ್ತವೆ. ಕುರುಬನು ತನ್ನ ಸ್ವಂತ ಕುರಿಗಳನ್ನು ಹೆಸರು
ಹಿಡಿದು ಕರೆದು ಹೊರಗೆ ಬಿಡುತ್ತಾನೆ. 4ಆ ಬಳಿಕ ಅವುಗಳ
ಮುಂದೆ ಹೋಗುತ್ತಾ ಅವುಗಳಿಗೆ ಮಾರ್ಗದರ್ಶನ ಮಾಡು
ತ್ತಾನೆ. ಕುರಿಗಳು ಅವನನ್ನು ಹಿಂಬಾಲಿಸುತ್ತವೆ; ಏಕೆಂದರೆ ಅವು
ಅವನ ಸ್ವರವನ್ನು ತಿಳಿದಿವೆ. 5ಆದರೆ ಕುರಿಗಳು ತಮಗೆ ಗೊತ್ತಿಲ್ಲದ
ವ್ಯಕ್ತಿಯನ್ನು ಎಂದಿಗೂ ಹಿಂಬಾಲಿಸುವುದಿಲ್ಲ. ಅವುಗಳು ಆ
ವ್ಯಕ್ತಿಯ ಬಳಿಯಿಂದ ಓಡಿಹೋಗುತ್ತವೆ. ಏಕೆಂದರೆ ಅವುಗಳು
ಅವನ ಸ್ವರವನ್ನು ತಿಳಿದಿಲ್ಲ’’ ಎಂದು ಹೇಳಿದನು. 6ಯೇಸು
ಹೇಳಿದ ಈ ಸಾಮ್ಯದ ಅರ್ಥವನ್ನು ಜನರು ಗ್ರಹಿಸಿಕೊಳ್ಳಲಿಲ್ಲ.

### ಯೇಸು ಒಳ್ಳೆಯ ಕುರುಬ

7ಆದ್ದರಿಂದ ಯೇಸು ಮತ್ತೆ, ‘‘ನಾನು ನಿಮಗೆ ಸತ್ಯವನ್ನು
ಹೇಳುತ್ತೇನೆ. ನಾನೇ ಕುರಿಗಳಿಗೆ ಬಾಗಿಲಾಗಿದ್ದೇನೆ. 8ನಾನು
ಬರುವುದಕ್ಕಿಂತ ಮೊದಲು ಬಂದವರೆಲ್ಲರೂ ಕಳ್ಳರಾಗಿದ್ದರು
ಮತ್ತು ಸುಲಿಗೆಗಾರರಾಗಿದ್ದರು. ಕುರಿಗಳು ಅವರಿಗೆ ಕಿವಿ
ಗೊಡಲಿಲ್ಲ. 9ನಾನೇ ಬಾಗಿಲಾಗಿದ್ದೇನೆ. ನನ್ನ ಮೂಲಕವಾಗಿ
ಪ್ರವೇಶಿಸುವವರು ರಕ್ಷಣೆ ಹೊಂದುವರು. ಅವರು ಒಳಗೆ ಬರ
ಬಲ್ಲರು, ಹೊರಗೆ ಹೋಗಬಲ್ಲರು ಮತ್ತು ಹುಲ್ಲುಗಾವಲನ್ನು
ಕಂಡುಕೊಳ್ಳುವರು. 10ಕಳ್ಳನು ಕದಿಯುವುದಕ್ಕೂ ಕೊಲ್ಲು
ವುದಕ್ಕೂ ನಾಶಮಾಡುವುದಕ್ಕೂ ಬರುತ್ತಾನೆ. ನಾನಾದರೊ
ಸಮೃದ್ಧಿಕರವಾದ ಜೀವವನ್ನು ಕೊಡಲು ಬಂದೆನು.

11‘‘ನಾನೇ ಒಳ್ಳೆಯ ಕುರುಬ. ಒಳ್ಳೆಯ ಕುರುಬನು
ಕುರಿಗಳಿಗಾಗಿ ತನ್ನ ಪ್ರಾಣವನ್ನು ಕೊಡುತ್ತಾನೆ. 12ಕುರಿಗಳನ್ನು
ನೋಡಿಕೊಳ್ಳುವುದಕ್ಕಾಗಿ ನಿಯಮಿತವಾಗಿರುವ ಕೂಲಿಯಾಳು
ಕುರುಬನಿಗಿಂತ ಭಿನ್ನವಾಗಿದ್ದಾನೆ. ಕೂಲಿಯಾಳು ಕುರಿಗಳ
ಒಡೆಯನಲ್ಲ. ಆದ್ದರಿಂದ ಕೂಲಿಯಾಳು ತೋಳ ಬರುವುದನ್ನು
ಕಾಣುವಾಗ ಕುರಿಗಳನ್ನು ಬಿಟ್ಟು ಓಡಿಹೋಗುತ್ತಾನೆ. ಆಗ
ತೋಳವು ಕುರಿಗಳ ಮೇಲೆ ಬಿದ್ದು ಅವುಗಳನ್ನು ಚದರಿಸಿ
ಬಿಡುತ್ತದೆ. 13ಆ ವ್ಯಕ್ತಿಯು ಓಡಿಹೋಗುತ್ತಾನೆ. ಏಕೆಂದರೆ
ಅವನು ಕೇವಲ ಕೂಲಿಗಾರನಾಗಿದ್ದಾನೆ. ಅವನು ಕುರಿಗಳ ಬಗ್ಗೆ
ನಿಜವಾಗಿಯೂ ಚಿಂತಿಸುವುದಿಲ್ಲ. 14-15ನಾನು ಕುರಿಗಳಿಗಾಗಿ
(ಜನರಿಗಾಗಿ) ಚಿಂತಿಸುವ ಕುರುಬನಾಗಿದ್ದೇನೆ. ನನ್ನ ತಂದೆಯು
ನನ್ನನ್ನು ತಿಳಿದಿರುವಂತೆ ನನ್ನ ಕುರಿಗಳನ್ನು ನಾನು ತಿಳಿದಿದ್ದೇನೆ.
ಮತ್ತು ನಾನು ನನ್ನ ತಂದೆಯನ್ನು ತಿಳಿದಿರುವಂತೆ ನನ್ನ ಕುರಿಗಳು
ನನ್ನನ್ನು ತಿಳಿದಿವೆ. ಈ ಕುರಿಗಳಿಗೋಸ್ಕರ ನನ್ನ ಜೀವವನ್ನೇ
ಕೊಡುತ್ತೇನೆ. 16ನನಗೆ ಬೇರೆ ಕುರಿಗಳು ಸಹ ಇವೆ. ಅವುಗಳು
ಇಲ್ಲಿರುವ ಈ ಮಂದೆಯಲ್ಲಿಲ್ಲ. ನಾನು ಅವುಗಳನ್ನು ಸಹ ಒಳಗೆ
ನಡೆಸಬೇಕು. ಅವುಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ಮುಂದಿನ
ಕಾಲದಲ್ಲಿ ಒಂದೇ ಮಂದೆಯಿರುವುದು ಮತ್ತು ಒಬ್ಬನೇ ಕುರುಬ
ನಿರುವನು. 17ತಂದೆಯು ನನ್ನನ್ನು ಪ್ರೀತಿಸುತ್ತಾನೆ, ಏಕೆಂದರೆ
ನಾನು ನನ್ನ ಪ್ರಾಣವನ್ನು ಮತ್ತೆ ಪಡೆದುಕೊಳ್ಳುವುದಕ್ಕಾಗಿ
ಕೊಡುತ್ತೇನೆ. 18ನನ್ನ ಪ್ರಾಣವನ್ನು ಯಾರೂ ನನ್ನಿಂದ
ಕಸಿದುಕೊಳ್ಳಲಾರರು; ನಾನೇ ಅದನ್ನು ಇಚ್ಛಾಪೂರ್ವಕವಾಗಿ
ಕೊಡುತ್ತೇನೆ. ನನ್ನ ಪ್ರಾಣವನ್ನು ಕೊಡುವುದಕ್ಕೂ ಅದನ್ನು ಮತ್ತೆ
ಪಡೆದುಕೊಳ್ಳುವುದಕ್ಕೂ ನನಗೆ ಹಕ್ಕಿದೆ. ಹೀಗೆ ಮಾಡಬೇಕೆಂದು
ತಂದೆಯೇ ನನಗೆ ಆಜ್ಞಾಪಿಸಿದ್ದಾನೆ’’ ಎಂದು ಹೇಳಿದನು.

[19]ಯೇಸು ಈ ಸಂಗತಿಗಳನ್ನು ಹೇಳಿದ್ದರಿಂದ ಯೆಹೂದ್ಯ
ರಲ್ಲಿ ಮತ್ತೆ ಭೇದ ಉಂಟಾಯಿತು. [20]ಅವರಲ್ಲಿ ಅನೇಕರು,
‘‘ಅವನೊಳಗೆ ದೆವ್ವವು ಸೇರಿಕೊಂಡು ಅವನನ್ನು ಹುಚ್ಚನನ್ನಾಗಿ
ಮಾಡಿದೆ. ಅವನಿಗೆ ಏಕೆ ಕಿವಿಗೊಡುತ್ತೀರಿ?’’ ಎಂದು
ಹೇಳಿದರು.
[21]ಆದರೆ ಇತರರು, ‘‘ದೆವ್ವದಿಂದ ಹುಚ್ಚು ಹಿಡಿದಿರುವ
ಮನುಷ್ಯನು ಈ ರೀತಿಯ ಸಂಗತಿಗಳನ್ನು ಹೇಳುವುದಿಲ್ಲ.
ಕುರುಡರ ಕಣ್ಣುಗಳನ್ನು ಗುಣಪಡಿಸಲು ದೆವ್ವಕ್ಕೆ ಸಾಧ್ಯವೇ?
ಇಲ್ಲ!’’ ಎಂದು ಹೇಳಿದರು.

## ಯೇಸುವಿನ ವಿರುದ್ಧ ಯೆಹೂದ್ಯರು

[22]ಜೆರುಸಲೇಮಿನಲ್ಲಿ ಆಚರಿಸುವ ಪ್ರತಿಷ್ಠೆಯ ಹಬ್ಬವು
ನಡೆಯುತ್ತಿತ್ತು. ಅದು ಚಳಿಗಾಲದಲ್ಲಿ ಆಚರಿಸುವ ಹಬ್ಬ.
[23]ಯೇಸು ದೇವಾಲಯದೊಳಗೆ ಸೊಲೊಮೋನನ ಆಲಯ
ದಲ್ಲಿದ್ದನು. [24]ಯೆಹೂದ್ಯರು ಯೇಸುವಿನ ಸುತ್ತಲೂ ನೆರೆದರು.
ಅವರು ಆತನಿಗೆ, ‘‘ಇನ್ನೆಷ್ಟುಕಾಲ ನೀನು ನಿನ್ನ ಬಗ್ಗೆ ನಮ್ಮನ್ನು
ಆಶ್ಚರ್ಯಗೊಳಿಸುವೆ? ನೀನು ಕ್ರಿಸ್ತನಾಗಿದ್ದರೆ, ನಮಗೆ
ಸ್ಪಷ್ಟವಾಗಿ ತಿಳಿಸು’’ ಎಂದು ಹೇಳಿದರು.
[25]ಯೇಸು, ‘‘ನಾನು ಆಗಲೇ ನಿಮಗೆ ಹೇಳಿದೆನು, ಆದರೆ
ನೀವು ನಂಬಲಿಲ್ಲ. ನನ್ನ ತಂದೆಯ ಹೆಸರಿನಲ್ಲಿ ನಾನು ಅದ್ಭುತ
ಕಾರ್ಯಗಳನ್ನು ಮಾಡುತ್ತೇನೆ. ನಾನು ಯಾರೆಂಬುದನ್ನು ಆ
ಅದ್ಭುತಕಾರ್ಯಗಳು ತೋರಿಸುತ್ತವೆ. [26]ಆದರೆ ನೀವು ನಂಬು
ವುದಿಲ್ಲ. ಏಕೆಂದರೆ ನೀವು ನನ್ನ ಕುರಿಗಳಲ್ಲ (ಜನರಲ್ಲ). [27]ನನ್ನ
ಕುರಿಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ನಾನು ಅವುಗಳನ್ನು
ಬಲ್ಲೆನು, ಮತ್ತು ಅವುಗಳು ನನ್ನನ್ನು ಹಿಂಬಾಲಿಸುತ್ತವೆ. [28]ನನ್ನ
ಕುರಿಗಳಿಗೆ ನಾನು ನಿತ್ಯಜೀವವನ್ನು ಕೊಡುತ್ತೇನೆ. ಅವು
ಎಂದಿಗೂ ಸಾಯುವುದಿಲ್ಲ. ಮತ್ತು ಅವುಗಳನ್ನು ಯಾರೂ
ನನ್ನಿಂದ ಕಸಿದುಕೊಳ್ಳಲಾರರು. [29]ನನ್ನ ಕುರಿಗಳನ್ನು ನನ್ನ
ತಂದೆಯೇ ನನಗೆ ಕೊಟ್ಟನು. ಆತನು ಎಲ್ಲರಿಗಿಂತಲೂ
ದೊಡ್ಡವನಾಗಿದ್ದಾನೆ. ನನ್ನ ಕುರಿಗಳನ್ನು ನನ್ನ ತಂದೆಯ
ಕೈಯಿಂದ ಯಾರೂ ಕದ್ದುಕೊಳ್ಳಲಾರರು. [30]ತಂದೆಯು ಮತ್ತು
ನಾನು ಒಂದೇ ಆಗಿದ್ದೇವೆ’’ ಎಂದು ಉತ್ತರ ಕೊಟ್ಟನು.
[31]ಯೆಹೂದ್ಯರು ಯೇಸುವನ್ನು ಕೊಲ್ಲಲು ಮತ್ತೆ
ಕಲ್ಲುಗಳನ್ನು ತೆಗೆದುಕೊಂಡರು. [32]ಆದರೆ ಯೇಸು ಅವರಿಗೆ,
‘‘ನಾನು ತಂದೆಯಿಂದ ಅನೇಕ ಒಳ್ಳೆಯ ಕಾರ್ಯಗಳನ್ನು
ಮಾಡಿದ್ದೇನೆ. ನೀವು ಆ ಕಾರ್ಯಗಳನ್ನು ನೋಡಿದ್ದೀರಿ. ಆ
ಒಳ್ಳೆಯ ಕಾರ್ಯಗಳಲ್ಲಿ ಯಾವುದರ ನಿಮಿತ್ತ ನೀವು ನನ್ನನ್ನು
ಕೊಲ್ಲಬೇಕೆಂದಿದ್ದೀರಿ?’’ ಎಂದು ಹೇಳಿದನು.
[33]ಯೆಹೂದ್ಯರು, ‘‘ನಾವು ನಿನ್ನನ್ನು ಕೊಲ್ಲುತ್ತಿರುವುದು
ನೀನು ಮಾಡಿದ ಯಾವುದೇ ಒಳ್ಳೆಯ ಕಾರ್ಯದ
ನಿಮಿತ್ತದಿಂದಲ್ಲ. ನೀನು ಮಾಡುತ್ತಿರುವ ದೇವದೂಷಣೆಗಾಗಿ.
ನೀನು ಕೇವಲ ಒಬ್ಬ ಮನುಷ್ಯ. ನೀನು ನಿನ್ನನ್ನೇ ದೇವರೆಂದು
ಹೇಳಿಕೊಳ್ಳುತ್ತಿರುವೆ! ಆದಕಾರಣ ಕಲ್ಲುಗಳಿಂದ ನಿನ್ನನ್ನು
ಕೊಲ್ಲಬೇಕೆಂದಿದ್ದೇವೆ!’’ ಎಂದು ಉತ್ತರ ಕೊಟ್ಟರು.
[34]ಅದಕ್ಕೆ ಯೇಸು, ‘‘ನಿಮ್ಮ ಧರ್ಮಶಾಸ್ತ್ರದಲ್ಲಿ, ‘ನಾನು
ನಿಮ್ಮನ್ನು ದೇವರುಗಳೆಂದು ಹೇಳಿದೆನು’* ಎಂಬುದಾಗಿ
ಬರೆದಿದೆ. [35]ದೇವರ ಸಂದೇಶವನ್ನು ಹೊಂದಿದ್ದ ಜನರನ್ನು ಈ
ಪವಿತ್ರಗ್ರಂಥವು ದೇವರುಗಳೆಂದು ಕರೆದಿದೆ. ಪವಿತ್ರ ಗ್ರಂಥವು
ಯಾವಾಗಲೂ ಸತ್ಯವಾದದ್ದು. [36]ತಂದೆಯೇ ನನ್ನನ್ನು ಪ್ರತಿಷ್ಠಿಸಿ
ಈ ಲೋಕಕ್ಕೆ ಕಳುಹಿಸಿಕೊಟ್ಟಿರುವುದರಿಂದ ನಾನು ದೇವರ
ಮಗನು ಎಂದು ಹೇಳಿದ್ದಕ್ಕೆ ನೀವು ನನ್ನನ್ನು ದೇವದೂಷಣೆ
ಮಾಡುತ್ತಿದ್ದಾನೆಂದು ಹೇಳುವುದೇಕೆ? [37]ನನ್ನ ತಂದೆಯು
ಮಾಡುವುದನ್ನು ನಾನು ಮಾಡದಿದ್ದರೆ, ನಾನು ಹೇಳುವುದನ್ನು
ನಂಬಬೇಡಿ. [38]ಆದರೆ ನನ್ನ ತಂದೆಯು ಮಾಡುವ ಕಾರ್ಯ
ಗಳನ್ನೇ ನಾನು ಮಾಡಿದರೆ, ಆ ಕಾರ್ಯಗಳಲ್ಲಿ ನೀವು ನಂಬಿಕೆ
ಇಡಬೇಕು. ನೀವು ನನ್ನಲ್ಲಿ ನಂಬಿಕೆ ಇಡದಿದ್ದರೂ ನನ್ನ ಕಾರ್ಯ
ಗಳಲ್ಲಾದರೂ ನಂಬಿಕೆ ಇಡಿರಿ. ತಂದೆಯು ನನ್ನಲ್ಲಿದ್ದಾನೆ ಮತ್ತು
ನಾನು ತಂದೆಯಲ್ಲಿದ್ದೇನೆ ಎಂಬುದನ್ನು ಆಗ ನೀವು ತಿಳಿದು
ಕೊಳ್ಳುವಿರಿ ಮತ್ತು ಅರ್ಥಮಾಡಿಕೊಳ್ಳುವಿರಿ’’ ಎಂದು
ಹೇಳಿದನು.
[39]ಯೇಸುವನ್ನು ಬಂಧಿಸಲು ಯೆಹೂದ್ಯರು ಮತ್ತೆ
ಪ್ರಯತ್ನಿಸಿದರು. ಆದರೆ ಯೇಸು ಅವರಿಂದ ತಪ್ಪಿಸಿಕೊಂಡನು.
[40]ಬಳಿಕ ಯೇಸು ಜೋರ್ಡನ್ ನದಿಯ ಆಚೆಯ ದಡಕ್ಕೆ
ಹೋದನು. ಯೋಹಾನನು ಮೊದಲು ದೀಕ್ಷಾಸ್ನಾನ ಕೊಡು
ತ್ತಿದ್ದ ಸ್ಥಳಕ್ಕೆ ಯೇಸು ಹೋಗಿ ಅಲ್ಲಿ ತಂಗಿದನು. [41]ಆಗ ಅನೇಕ
ಜನರು ಆತನ ಬಳಿಗೆ ಬಂದರು. ‘‘ಯೋಹಾನನು ಎಂದೂ
ಅದ್ಭುತಕಾರ್ಯವನ್ನು ಮಾಡಲಿಲ್ಲ. ಆದರೆ ಯೋಹಾನನು ಈ
ಮನುಷ್ಯನ (ಯೇಸುವಿನ) ಬಗ್ಗೆ ಹೇಳಿದ ಪ್ರತಿಯೊಂದೂ
ಸತ್ಯವಾದದ್ದು’’ ಎಂದು ಅವರು ಮಾತಾಡಿಕೊಂಡರು. [42]ಮತ್ತು
ಅಲ್ಲಿ ಅನೇಕ ಜನರು ಯೇಸುವಿನಲ್ಲಿ ನಂಬಿಕೆ ಇಟ್ಟರು.

## ಲಾಜರನ ಮರಣ

11 ಲಾಜರನೆಂಬ ಒಬ್ಬನು ಅಸ್ವಸ್ಥನಾಗಿದ್ದನು. ಅವನು
ಬೆಥಾನಿಯ ಎಂಬ ಊರಿನಲ್ಲಿ ವಾಸವಾಗಿದ್ದನು.
ಮರಿಯಳು ಮತ್ತು ಆಕೆಯ ಸಹೋದರಿಯಾದ ಮಾರ್ಥಳು ಈ
ಊರಿನಲ್ಲೇ ವಾಸವಾಗಿದ್ದರು. [2]ಪ್ರಭುವಿಗೆ (ಯೇಸುವಿಗೆ)
ಪರಿಮಳ ತೈಲವನ್ನು ಹಚ್ಚಿ ಆತನ ಪಾದಗಳನ್ನು ತನ್ನ ತಲೆಕೂದಲಿ
ನಿಂದ ಒರಸಿದವಳೇ ಈ ಮರಿಯಳು. ಅಸ್ವಸ್ಥನಾಗಿದ್ದ ಲಾಜರನು
ಮರಿಯಳ ಸಹೋದರನಾಗಿದ್ದನು. [3]ಆದ್ದರಿಂದ ಮರಿಯಳು
ಮತ್ತು ಮಾರ್ಥಳು, ‘‘ಪ್ರಭುವೇ, ನಿನ್ನ ಪ್ರಿಯ ಸ್ನೇಹಿತನಾದ
ಲಾಜರನು ಅಸ್ವಸ್ಥನಾಗಿದ್ದಾನೆ’’ ಎಂಬ ಸಂದೇಶವನ್ನು ಆತನಿಗೆ
ತಿಳಿಸಲು ಒಬ್ಬನನ್ನು ಕಳುಹಿಸಿಕೊಟ್ಟರು.
[4]ಯೇಸು ಇದನ್ನು ಕೇಳಿದಾಗ, ‘‘ಈ ಕಾಯಿಲೆಯು ದೇವರ
ಮತ್ತು ದೇವಕುಮಾರನ ಮಹಿಮೆಗಾಗಿ ಬಂದಿದೆಯೇ ಹೊರತು
ಮರಣಕ್ಕಾಗಿಯಲ್ಲ’’ ಎಂದು ಹೇಳಿದನು. [5](ಯೇಸು ಮಾರ್ಥ
ಳನ್ನು, ಆಕೆಯ ಸಹೋದರಿಯನ್ನು ಮತ್ತು ಲಾಜರನನ್ನು
ಪ್ರೀತಿಸುತ್ತಿದ್ದನು.) [6]‘ಲಾಜರನು ಅಸ್ವಸ್ಥನಾಗಿದ್ದಾನೆ’ ಎಂಬ
ವಾರ್ತೆಯನ್ನು ಆತನು ಕೇಳಿದಾಗ ತಾನಿದ್ದ ಸ್ಥಳದಲ್ಲಿಯೇ ಇನ್ನೂ
ಎರಡು ದಿನಗಳವರೆಗೆ ತಂಗಿದನು. [7]ಬಳಿಕ ಆತನು ತನ್ನ ಶಿಷ್ಯರಿಗೆ,
‘‘ನಾವು ಜುದೇಯಕ್ಕೆ ಹಿಂತಿರುಗಿ ಹೋಗಬೇಕು’’ ಎಂದು
ಹೇಳಿದನು.
[8]ಶಿಷ್ಯರು, ‘‘ಗುರುವೇ, ಜುದೇಯದ ಯೆಹೂದ್ಯರು
ನಿನ್ನನ್ನು ಕಲ್ಲುಗಳಿಂದ ಕೊಲ್ಲಲು ಪ್ರಯತ್ನಿಸಿದರು. ಆದಾದದ್ದು

---

**ನಾನು … ಹೇಳಿದೆನು** ಕೀರ್ತನೆ 82:6

ಕೇವಲ ಸ್ವಲ್ಪಕಾಲದ ಹಿಂದೆಯಷ್ಟೇ. ಈಗ ನೀನು ಮತ್ತೆ ಅಲ್ಲಿಗೆ
ಹೋಗಬೇಕೆನ್ನುವಿಯಾ?'' ಎಂದು ಉತ್ತರಕೊಟ್ಟರು.
9ಯೇಸು, ''ಹಗಲಿಗೆ ಹನ್ನೆರಡು ತಾಸುಗಳಿರುತ್ತವೆ.
ಹೌದಲ್ಲವೇ? ಹಗಲಿನಲ್ಲಿ ನಡೆಯುವವನು ಎಡವಿ ಬೀಳು
ವುದಿಲ್ಲ. ಏಕೆಂದರೆ ಈ ಲೋಕದ ಬೆಳಕಿನಿಂದ ಅವನು ನೋಡ
ಬಲ್ಲನು. 10ಆದರೆ ರಾತ್ರಿಯಲ್ಲಿ ನಡೆಯುವವನು ಎಡವುತ್ತಾನೆ.
ಏಕೆಂದರೆ ನೋಡಿಕೊಂಡು ನಡೆಯಲು ಅವನಿಗೆ ಯಾವ
ಬೆಳಕೂ ಇರುವುದಿಲ್ಲ'' ಎಂದು ಉತ್ತರಕೊಟ್ಟನು.
11ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ, ''ನಮ್ಮ
ಸ್ನೇಹಿತನಾದ ಲಾಜರನು ಈಗ ನಿದ್ರಿಸುತ್ತಿದ್ದಾನೆ. ಅವನನ್ನು
ಎಬ್ಬಿಸಲು ನಾನು ಅಲ್ಲಿಗೆ ಹೋಗುತ್ತಿದ್ದೇನೆ''ಎಂದು ಹೇಳಿದನು.
12ಶಿಷ್ಯರು, ''ಪ್ರಭುವೇ, ಅವನು ನಿದ್ರೆ ಮಾಡುತ್ತಿದ್ದರೆ
ಆರೋಗ್ಯ ಹೊಂದುವನು'' ಎಂದು ಉತ್ತರಕೊಟ್ಟರು.
13ಲಾಜರನು ಸತ್ತುಹೋಗಿದ್ದಾನೆ ಎಂಬರ್ಥದಲ್ಲಿ ಯೇಸು
ಹೇಳಿದನು. ಆದರೆ ಲಾಜರನು ನಿಜವಾಗಿಯೂ ನಿದ್ರಿಸುತ್ತಿದ್ದಾನೆ
ಎಂಬರ್ಥದಲ್ಲಿ ಯೇಸು ಹೇಳಿದನೆಂಬುದಾಗಿ ಶಿಷ್ಯರು ಭಾವಿಸಿ
ಕೊಂಡರು. 14ಆದ್ದರಿಂದ ಯೇಸು, ''ಲಾಜರನು ಸತ್ತುಹೋಗಿ
ದ್ದಾನೆ. 15ಆದರೆ ನಾನು ಅಲ್ಲಿ ಇಲ್ಲದಿದ್ದ ಕಾರಣ ಸಂತೋಷಿಸು
ತ್ತೇನೆ. ನಿಮ್ಮ ವಿಷಯದಲ್ಲಿಯೂ ನಾನು ಸಂತೋಷಪಡುತ್ತೇನೆ.
ಏಕೆಂದರೆ, ಆಗ ನೀವು ನನ್ನಲ್ಲಿ ನಂಬಿಕೆ ಇಡುವಿರಿ. ಬನ್ನಿ, ಅವನ
ಬಳಿಗೆ ಹೋಗೋಣ'' ಎಂದು ಸ್ಪಷ್ಟವಾಗಿ ಹೇಳಿದನು. 16ಆಗ
ದಿದುಮನೆಂಬ ತೋಮನು ತನ್ನ ಜೊತೆ ಶಿಷ್ಯರಿಗೆ, ''ನಾವು ಸಹ
ಯೇಸುವಿನೊಂದಿಗೆ ಹೋಗಿ ಜುದೇಯದಲ್ಲಿ ಸಾಯೋಣ''
ಎಂದು ಹೇಳಿದನು.

## ಬೆಥಾನಿಯಲ್ಲಿ ಯೇಸು

17ಯೇಸು ಬೆಥಾನಿಯಕ್ಕೆ ಬಂದನು. ಈಗಾಗಲೇ
ಲಾಜರನು ಸತ್ತು ಸಮಾಧಿಯಾಗಿ ನಾಲ್ಕು ದಿನಗಳಾಯಿ
ತೆಂಬುದು ಯೇಸುವಿಗೆ ತಿಳಿಯಿತು. 18ಬೆಥಾನಿಯು ಜೆರುಸ
ಲೇಮಿನಿಂದ ಸುಮಾರು ಎರಡು ಮೈಲಿಗಳಷ್ಟು ದೂರದಲ್ಲಿತ್ತು.
19ಅನೇಕ ಯೆಹೂದ್ಯರು ಮಾರ್ಥ ಮತ್ತು ಮರಿಯಳ ಬಳಿಗೆ
ಬಂದಿದ್ದರು. ಮಾರ್ಥ ಮತ್ತು ಮರಿಯಳನ್ನು ಅವರ ತಮ್ಮನಾದ
ಲಾಜರನ ವಿಷಯದಲ್ಲಿ ಸಂತೈಸಲು ಯೆಹೂದ್ಯರು ಬಂದಿದ್ದರು.
20ಯೇಸು ಬರುತ್ತಿದ್ದಾನೆ ಎಂಬ ಸುದ್ದಿಯನ್ನು ಕೇಳಿ
ಮಾರ್ಥಳು ಆತನನ್ನು ವಂದಿಸಲು ಹೊರಗೆ ಹೋದಳು. ಆದರೆ
ಮರಿಯಳು ಮನೆಯಲ್ಲೇ ಇದ್ದಳು. 21ಮಾರ್ಥಳು ಯೇಸುವಿಗೆ,
''ಪ್ರಭುವೇ, ನೀನು ಇಲ್ಲಿ ಇದ್ದಿದ್ದರೆ, ನನ್ನ ಸಹೋದರನು
ಸಾಯುತ್ತಿರಲಿಲ್ಲ. 22ಆದರೆ ಈಗಲೂ ಸಹ ನೀನು ಏನನ್ನೇ ಕೇಳಿ
ಕೊಂಡರೂ ದೇವರು ನಿನಗೆ ಕೊಡುತ್ತಾನೆ ಎಂಬುದು ನನಗೆ
ತಿಳಿದಿದೆ'' ಎಂದು ಹೇಳಿದಳು.
23ಯೇಸು, ''ನಿನ್ನ ಸಹೋದರನು ಮತ್ತೆ ಜೀವಂತವಾಗಿ
ಎದ್ದು ಬರುವನು'' ಎಂದು ಹೇಳಿದನು.
24ಮಾರ್ಥಳು, ''ಅಂತಿಮ ದಿನದಂದು ಪುನರುತ್ಥಾನ
ವಾಗುವಾಗ ಅವನು ಮತ್ತೆ ಎದ್ದು ಬರುವನೆಂದು ನನಗೆ
ಗೊತ್ತಿದೆ'' ಎಂಬುದಾಗಿ ಉತ್ತರ ಕೊಟ್ಟಳು.
25ಯೇಸು ಆಕೆಗೆ, ''ನಾನೇ ಪುನರುತ್ಥಾನ. ನಾನೇ ಜೀವ.
ನನ್ನನ್ನು ನಂಬುವವನು ತಾನು ಸತ್ತನಂತರವೂ ಮತ್ತೆ ಜೀವವನ್ನು
ಹೊಂದುವನು. 26ಮತ್ತು ಬದುಕುತ್ತಾ ನನ್ನನ್ನು ನಂಬುವವನು
ಎಂದಿಗೂ ನಿಜವಾಗಿ ಸಾಯುವುದಿಲ್ಲ. ಮಾರ್ಥಳೇ, ನೀನು
ಇದನ್ನು ನಂಬುವಿಯಾ?'' ಎಂದನು.
27ಮಾರ್ಥಳು, ''ಹೌದು ಪ್ರಭುವೇ, ನೀನು ದೇವರ ಮಗ
ನಾದ ಕ್ರಿಸ್ತನೆಂದು ನಾನು ನಂಬುವೆ. ಈ ಲೋಕಕ್ಕೆ ಬರ
ಬೇಕಾಗಿದ್ದವನು ನೀನೇ'' ಎಂದು ಉತ್ತರಕೊಟ್ಟಳು.

## ಯೇಸು ಕಣ್ಣೀರಿಡುವನು

28ಮಾರ್ಥಳು ಹೀಗೆ ಹೇಳಿದ ಮೇಲೆ, ತನ್ನ ಸಹೋದರಿ
ಯಾದ ಮರಿಯಳ ಬಳಿಗೆ ಹಿಂತಿರುಗಿ ಹೋದಳು. ಮಾರ್ಥಳು
ಮರಿಯಳೊಂದಿಗೆ ಪ್ರತ್ಯೇಕವಾಗಿ ಮಾತಾಡಿ, ''ಗುರುವು
(ಯೇಸು) ನಿನ್ನನ್ನು ಕರೆಯುತ್ತಿದ್ದಾನೆ'' ಎಂದು ತಿಳಿಸಿದಳು.
29ಇದನ್ನು ಕೇಳಿದ ಕೂಡಲೇ ಮರಿಯಳು ಎದ್ದು ಯೇಸುವಿನ
ಬಳಿಗೆ ಬೇಗಬೇಗನೆ ಹೋದಳು. 30ಯೇಸು ಇನ್ನೂ
ಊರೊಳಗೆ ಬಂದಿರಲಿಲ್ಲ. ಮಾರ್ಥಳು ತನ್ನನ್ನು ಸಂಧಿಸಿದ
ಸ್ಥಳದಲ್ಲೇ ಆತನಿದ್ದನು. 31ಯೆಹೂದ್ಯರು ಮರಿಯಳೊಂದಿಗೆ
ಮನೆಯಲ್ಲಿದ್ದರು. ಅವರು ಆಕೆಯನ್ನು ಸಂತೈಸುತ್ತಿದ್ದರು.
ಮರಿಯಳು ಎದ್ದು ಬೇಗನೆ ಹೋಗುವುದನ್ನು ಅವರು ಕಂಡರು.
ಆಕೆಯು ಅಳುವುದಕ್ಕಾಗಿ ಸಮಾಧಿಯ ಬಳಿಗೆ ಹೋಗುತ್ತಿದ್ದಾ
ಳೆಂದು ಅವರು ಭಾವಿಸಿಕೊಂಡು ಆಕೆಯನ್ನು ಹಿಂಬಾಲಿಸಿದರು.
32ಯೇಸು ಇದ್ದ ಸ್ಥಳಕ್ಕೆ ಮರಿಯಳು ಹೋದಳು. ಆಕೆಯು
ಯೇಸುವನ್ನು ಕಂಡಾಗ ಆತನ ಪಾದಗಳಿಗೆ ಅಡ್ಡಬಿದ್ದು,
''ಪ್ರಭುವೇ, ನೀನು ಇಲ್ಲಿ ಇದ್ದಿದ್ದರೆ, ನನ್ನ ಸಹೋದರನು
ಸಾಯುತ್ತಿರಲಿಲ್ಲ'' ಎಂದು ಹೇಳಿದಳು.
33ಮರಿಯಳ ಮತ್ತು ಆಕೆಯೊಂದಿಗೆ ಬಂದಿದ್ದ ಯೆಹೂದ್ಯರ
ಗೋಳಾಟವನ್ನು ಯೇಸು ನೋಡಿದಾಗ, ತನ್ನ ಹೃದಯದಲ್ಲಿ
ಬಹಳವಾಗಿ ದುಃಖಗೊಂಡು ತತ್ತರಿಸಿದನು. 34ಯೇಸು ಅವರಿಗೆ,
''ಅವನನ್ನು ಎಲ್ಲಿ ಇಟ್ಟಿದ್ದೀರಿ?'' ಎಂದು ಕೇಳಿದನು. ಅದಕ್ಕೆ
ಅವರು, ''ಸ್ವಾಮೀ, ಬಂದು ನೋಡು'' ಎಂದರು.
35ಯೇಸು ಕಣ್ಣೀರಿಟ್ಟನು.
36ಆಗ ಯೆಹೂದ್ಯರು, ''ನೋಡಿ! ಯೇಸು ಅವನನ್ನು
ಬಹಳವಾಗಿ ಪ್ರೀತಿಸುತ್ತಿದ್ದನು!'' ಎಂದರು.
37ಆದರೆ ಕೆಲವು ಯೆಹೂದ್ಯರು, ''ಯೇಸು ಕುರುಡನ
ಕಣ್ಣುಗಳನ್ನು ಗುಣಪಡಿಸಿದನಲ್ಲಾ; ಲಾಜರನಿಗೂ ಸಹಾಯ
ಮಾಡಿ ಅವನನ್ನು ಸಾವಿನಿಂದ ತಪ್ಪಿಸಬಾರದಾಗಿತ್ತೇ?''
ಎಂದರು.

## ಮರುಜೀವ ಪಡೆದ ಲಾಜರ

38ಯೇಸು ತನ್ನ ಹೃದಯದಲ್ಲಿ ಮತ್ತೆ ಬಹಳವಾಗಿ ದುಃಖ
ಗೊಂಡು, ಲಾಜರನಿದ್ದ ಸಮಾಧಿಯ ಬಳಿಗೆ ಬಂದನು. ಆ
ಸಮಾಧಿಯು ಒಂದು ಗವಿಯಾಗಿತ್ತು. ಅದರ ಬಾಯಿಗೆ ದೊಡ್ಡ
ಕಲ್ಲನ್ನು ಮುಚ್ಚಿದ್ದರು. 39''ಆ ಕಲ್ಲನ್ನು ತೆಗೆದುಹಾಕಿರಿ'' ಎಂದು
ಯೇಸು ಹೇಳಿದನು.

ಲಾಜರನ ಅಕ್ಕಳಾದ ಮಾರ್ಥಳು, ''ಪ್ರಭುವೇ, ಲಾಜರನು
ಸತ್ತು ನಾಲ್ಕು ದಿನಗಳಾಗಿವೆ. ಆದ್ದರಿಂದ ಅಲ್ಲಿ ದುರ್ವಾಸನೆ
ಯಿರುತ್ತದೆ'' ಎಂದು ಹೇಳಿದಳು.

40ಯೇಸು ಮಾರ್ಥಳಿಗೆ, ‘‘ನಾನು ನಿನಗೆ ಹೇಳಿದ್ದನ್ನು
ಜ್ಞಾಪಿಸಿಕೊಳ್ಳುವಿಯಾ? ನೀನು ನಂಬಿದರೆ ದೇವರ ಮಹಿಮೆ
ಯನ್ನು ಕಾಣುವೆ ಎಂದು ನಾನು ನಿನಗೆ ಹೇಳಿದೆನು’’ ಎಂದನು.
41ಆದ್ದರಿಂದ ಅವರು ಸಮಾಧಿಯ ಬಾಯಿಂದ ಕಲ್ಲನ್ನು
ತೆಗೆದುಹಾಕಿದರು. ಆಗ ಯೇಸು ಕಣ್ಣೆತ್ತಿ ಮೇಲಕ್ಕೆ ನೋಡಿ,
‘‘ತಂದೆಯೇ, ನನ್ನ ಪ್ರಾರ್ಥನೆಯನ್ನು ಕೇಳಿದ್ದರಿಂದ ನಿನ್ನನ್ನು
ಕೊಂಡಾಡುತ್ತೇನೆ. 42ನೀನು ಯಾವಾಗಲೂ ನನಗೆ ಕಿವಿ
ಗೊಡುವೆ ಎಂಬುದು ನನಗೆ ತಿಳಿದಿದೆ. ಆದರೆ ಇಲ್ಲಿ ನನ್ನ ಸುತ್ತಲೂ
ನೆರೆದಿರುವ ಜನರಿಗೋಸ್ಕರವಾಗಿ ನಾನು ಈ ಸಂಗತಿಗಳನ್ನು
ಹೇಳಿದೆನು. ನೀನೇ ನನ್ನನ್ನು ಕಳುಹಿಸಿರುವುದಾಗಿ ಅವರು ನಂಬ
ಬೇಕೆಂದು ನಾನು ಬಯಸುತ್ತೇನೆ’’ ಎಂದನು. 43ಬಳಿಕ ಯೇಸು
ಗಟ್ಟಿಯಾದ ಧ್ವನಿಯಿಂದ, ‘‘ಲಾಜರನೇ ಹೊರಗೆ ಬಾ!’’ ಎಂದು
ಕರೆದನು. 44ಸತ್ತುಹೋಗಿದ್ದವನು (ಲಾಜರನು) ಹೊರಗೆ
ಬಂದನು. ಅವನ ಕೈಕಾಲುಗಳನ್ನು ಬಟ್ಟೆಗಳಿಂದ ಸುತ್ತಲಾಗಿತ್ತು.
ಅವನ ಮುಖವನ್ನು ಕರವಸ್ತ್ರದಿಂದ ಮುಚ್ಚಲಾಗಿತ್ತು.
ಆಗ ಯೇಸು, ‘‘ಅವನಿಗೆ ಸುತ್ತಿರುವ ಬಟ್ಟೆಗಳನ್ನು
ತೆಗೆದುಹಾಕಿರಿ, ಅವನು ಹೋಗಲಿ’’ ಎಂದು ಹೇಳಿದನು.

### ಯೇಸುವನ್ನು ಕೊಲ್ಲಲು ಯೆಹೂದ್ಯ ನಾಯಕರ ಸಂಚು

(ಮತ್ತಾಯ 26:1-5; ಮಾರ್ಕ 14:1-2; ಲೂಕ 22:1-2)

45ಮರಿಯಳನ್ನು ಸಂದರ್ಶಿಸಲು ಬಂದಿದ್ದ ಅನೇಕ
ಯೆಹೂದ್ಯರು ಅಲ್ಲಿದ್ದರು. ಯೇಸು ಮಾಡಿದ ಈ ಕಾರ್ಯವನ್ನು
ಕಂಡ ಇವರಲ್ಲಿ ಅನೇಕರು ಯೇಸುವಿನಲ್ಲಿ ನಂಬಿಕೆ ಇಟ್ಟರು.
46ಆದರೆ ಕೆಲವು ಯೆಹೂದ್ಯರು ಫರಿಸಾಯರ ಬಳಿಗೆ ಹೋಗಿ,
ಯೇಸು ಮಾಡಿದ್ದನ್ನು ತಿಳಿಸಿದರು. 47ಆಗ ಮಹಾಯಾಜಕರು
ಮತ್ತು ಫರಿಸಾಯರು ಯೆಹೂದ್ಯರ ಆಲೋಚನಾಸಭೆಯನ್ನು
ಕರೆದು, ‘‘ನಾವು ಏನು ಮಾಡಬೇಕು? ಈ ಮನುಷ್ಯನು
(ಯೇಸು) ಅನೇಕ ಸೂಚಕಕಾರ್ಯಗಳನ್ನು ಮಾಡುತ್ತಿದ್ದಾನೆ.
48ಈ ಕಾರ್ಯಗಳನ್ನು ಮಾಡಲು ನಾವು ಅವನಿಗೆ ಅವಕಾಶ
ಕೊಟ್ಟರೆ ಜನರೆಲ್ಲರೂ ಇವನಲ್ಲಿ ನಂಬಿಕೆ ಇಡುವರು. ಆಗ
ರೋಮ್ ರಾಜ್ಯದವರು ಬಂದು ನಮ್ಮ ದೇವಾಲಯವನ್ನೂ
ನಮ್ಮ ದೇಶವನ್ನೂ ವಶಪಡಿಸಿಕೊಳ್ಳುವರು’’ ಅಂದರು.
49ಅವರಲ್ಲಿ ಕಾಯಫನೆಂಬ ಒಬ್ಬನಿದ್ದನು. ಅವನು ಆ ವರ್ಷ
ಮಹಾಯಾಜಕನಾಗಿದ್ದನು. ಅವನು, ‘‘ನಿಮಗೆ ಏನೂ ಗೊತ್ತಿಲ್ಲ!
50ಇಡೀ ಜನಾಂಗವು ನಾಶವಾಗುವುದಕ್ಕಿಂತ ಒಬ್ಬನು ಅವರಿ
ಗೋಸ್ಕರವಾಗಿ ಸಾಯುವುದು ಉತ್ತಮ. ಆದರೆ ನೀವು ಇದನ್ನು
ಅರ್ಥಮಾಡಿಕೊಳ್ಳುತ್ತಿಲ್ಲ’’ ಎಂದು ಹೇಳಿದನು.
51ಇದು ಕಾಯಫನ ಸ್ವಂತ ಆಲೋಚನೆಯಾಗಿರಲಿಲ್ಲ.
ಅವನು ಆ ವರ್ಷ ಮಹಾಯಾಜಕನಾಗಿದ್ದನು. ಆದ್ದರಿಂದ
ಯೆಹೂದ್ಯರಿಗೋಸ್ಕರವಾಗಿ ಯೇಸು ಸಾಯುತ್ತಾನೆಂದು
ಅವನು ನಿಜವಾಗಿಯೂ ಪ್ರವಾದಿಸಿದನು. 52ಹೌದು,
ಯೆಹೂದ್ಯರಿಗಾಗಿಯೂ ಲೋಕದಲ್ಲೆಲ್ಲಾ ಚದರಿಹೋಗಿರುವ
ದೇವರ ಮಕ್ಕಳನ್ನೆಲ್ಲ ಒಂದುಗೂಡಿಸುವುದಕ್ಕಾಗಿಯೂ ಆತನು
ಸಾಯಲಿದ್ದನು.
53ಅಂದಿನಿಂದ ಯೆಹೂದ್ಯನಾಯಕರು ಯೇಸುವನ್ನು
ಕೊಲ್ಲಲು ಸಂಚು ಮಾಡಲಾರಂಭಿಸಿದರು. 54ಆದ್ದರಿಂದ
ಯೇಸುವು ಯೆಹೂದ್ಯರ ಮಧ್ಯದಲ್ಲಿ ಬಹಿರಂಗವಾಗಿ ಸಂಚರಿಸು
ವುದನ್ನು ಬಿಟ್ಟುಬಿಟ್ಟನು. ಆತನು ಜೆರುಸಲೇಮನ್ನು ಬಿಟ್ಟು
ಮರುಭೂಮಿಯ ಸಮೀಪದಲ್ಲಿದ್ದ ಸ್ಥಳಕ್ಕೆ ಹೋಗಿ ಎಫ್ರಾ
ಯಿಮ್ ಎಂಬ ಊರಿನಲ್ಲಿ ತನ್ನ ಶಿಷ್ಯರ ಸಂಗಡ ಇಳಿದು
ಕೊಂಡನು.
55ಆಗ ಯೆಹೂದ್ಯರ ಪಸ್ಕಹಬ್ಬವು ಸಮೀಪವಾಗಿತ್ತು.
ಪಸ್ಕಹಬ್ಬಕ್ಕಿಂತ ಮೊದಲೇ ತಮ್ಮ ಗ್ರಾಮಗಳಿಂದ ಅನೇಕ ಜನರು
ಜೆರುಸಲೇಮಿಗೆ ಹೋಗಿದ್ದರು. ವಿಶೇಷವಾದ ಕಾರ್ಯಗಳನ್ನು
ಮಾಡಿ ಪಸ್ಕಹಬ್ಬಕ್ಕಾಗಿ ತಮ್ಮನ್ನು ಶುದ್ಧೀಕರಿಸಿಕೊಳ್ಳಬೇಕೆಂದು
ಅವರು ಹೋಗಿದ್ದರು. 56ಅವರು ಅಲ್ಲಿ ಯೇಸುವನ್ನು ಹುಡುಕ
ತೊಡಗಿದರು. ಅವರು ದೇವಾಲಯದಲ್ಲಿ ನಿಂತುಕೊಂಡು,
‘‘ಆತನು ಹಬ್ಬಕ್ಕೆ ಬರುವನೇ? ನಿಮ್ಮ ಆಲೋಚನೆ ಏನು?’’
ಎಂದು ಒಬ್ಬರನ್ನೊಬ್ಬರು ಕೇಳುತ್ತಿದ್ದರು. 57ಆದರೆ ಮಹಾ
ಯಾಜಕರು ಮತ್ತು ಫರಿಸಾಯರು, ಯೇಸು ಎಲ್ಲಿದ್ದಾನೆಂಬುದು
ಯಾರಿಗಾದರೂ ತಿಳಿದು ಬಂದರೆ ತಮಗೆ ತಿಳಿಸಬೇಕೆಂಬ
ವಿಶೇಷ ಆಜ್ಞೆಯನ್ನು ಪ್ರಕಟಿಸಿದ್ದರು. ಅವರು ಆತನನ್ನು
ಬಂಧಿಸಬೇಕೆಂದಿದ್ದರು.

### ಬೆಥಾನಿಯಲ್ಲಿ ಯೇಸು

(ಮತ್ತಾಯ 26:6-13; ಮಾರ್ಕ 14:3-9)

12 ಪಸ್ಕಹಬ್ಬಕ್ಕೆ ಇನ್ನೂ ಆರು ದಿನಗಳಿದ್ದಾಗ ಯೇಸು
ಬೆಥಾನಿಗೆ ಹೋದನು. ಲಾಜರನು ವಾಸವಾಗಿದ್ದ
ಊರೇ ಬೆಥಾನಿ. (ಯೇಸು ಸತ್ತವರೊಳಗಿಂದ ಎಬ್ಬಿಸಿದ
ಮನುಷ್ಯನೇ ಲಾಜರನು.) 2ಅವರು ಯೇಸುವಿಗೆ ರಾತ್ರಿ
ಭೋಜನವನ್ನು ಏರ್ಪಡಿಸಿದ್ದರು. ಮಾರ್ಥಳು ಊಟವನ್ನು
ಬಡಿಸುತ್ತಿದ್ದಳು. ಯೇಸುವಿನೊಂದಿಗೆ ಊಟ ಮಾಡುತ್ತಿದ್ದ
ವರಲ್ಲಿ ಲಾಜರನೂ ಒಬ್ಬನಾಗಿದ್ದನು. 3ಆಗ ಮರಿಯಳು, ಬಹು
ಬೆಲೆಬಾಳುವ ಸುಗಂಧ ತೈಲವನ್ನು* ಅರ್ಧ ಲೀಟರಿನಷ್ಟು
ತೆಗೆದುಕೊಂಡು ಬಂದು, ಯೇಸುವಿನ ಪಾದಗಳಿಗೆ ಹಚ್ಚಿದಳು.
ಬಳಿಕ ತನ್ನ ತಲೆಕೂದಲಿನಿಂದ ಆತನ ಪಾದಗಳನ್ನು ಒರಸಿದಳು.
ಆ ಪರಿಮಳ ದ್ರವ್ಯದ ಸುವಾಸನೆಯು ಇಡೀ ಮನೆಯನ್ನೇ
ತುಂಬಿಕೊಂಡಿತು.
4ಇಸ್ಕರಿಯೋತ ಯೂದನು ಅಲ್ಲಿದ್ದನು. ಅವನು ಯೇಸು
ವಿನ ಶಿಷ್ಯರಲ್ಲಿ ಒಬ್ಬನಾಗಿದ್ದನು. (ಮುಂದೆ, ಯೇಸುವಿಗೆ
ದ್ರೋಹ ಮಾಡಿದವನು ಇವನೇ.) ಮರಿಯಳು ಮಾಡಿದ ಈ
ಕಾರ್ಯವನ್ನು ಯೂದನು ಇಷ್ಟಪಡಲಿಲ್ಲ. 5ಅವನು, ‘‘ಆ
ಪರಿಮಳ ದ್ರವ್ಯದ ಬೆಲೆ ಮುನ್ನೂರು ಬೆಳ್ಳಿನಾಣ್ಯಗಳು.*
ಅದನ್ನು ಮಾರಿ ಆ ಹಣವನ್ನು ಬಡವರಿಗೆ ಕೊಡಬೇಕಿತ್ತು’’
ಎಂದು ಟೀಕಿಸಿದನು. 6ಆದರೆ ಯೂದನಿಗೆ ಬಡವರ ಬಗ್ಗೆ
ನಿಜವಾಗಿಯೂ ಚಿಂತೆಯಿರಲಿಲ್ಲ. ಅವನು ಕಳ್ಳನಾಗಿದ್ದುದರಿಂದ
ಹಾಗೆ ಹೇಳಿದನು. ಶಿಷ್ಯಸಮುದಾಯಕ್ಕೋಸ್ಕರವಿದ್ದ ಹಣದ
ಪೆಟ್ಟಿಗೆಯು ಅವನ ವಶದಲ್ಲಿತ್ತು. ಅವನು ಆಗಾಗ್ಗೆ ಆ ಪೆಟ್ಟಿಗೆ
ಯಿಂದ ಹಣವನ್ನು ಕದ್ದುಕೊಳ್ಳುತ್ತಿದ್ದನು.
7ಯೇಸು ಅವನಿಗೆ, ‘‘ಆಕೆಯನ್ನು ತಡೆಯಬೇಡ. ನನ್ನನ್ನು
ಶವಸಂಸ್ಕಾರಕ್ಕೆ ಸಿದ್ಧಪಡಿಸುವ ಈ ದಿನಕ್ಕೋಸ್ಕರ ಆಕೆ ಸುಗಂಧ

---

**ಸುಗಂಧ ತೈಲ** ನಾರ್ಡ್ ಗಿಡದ ಅಪ್ಪಟ ಬೇರಿನಿಂದ ಮಾಡಿದ ಅತ್ಯಂತ ಬೆಲೆಬಾಳುವ ತೈಲ.

**ಬೆಳ್ಳಿನಾಣ್ಯ** ಮೂಲ ದಿನಾರಿ. ಒಬ್ಬ ಕೆಲಸಗಾರನ ಒಂದು ದಿನದ ಸಂಬಳ.

ದ್ರವ್ಯವನ್ನು ಶೇಖರಿಸಿದ್ದು ಒಳ್ಳೆಯದೇ ಸರಿ. [8]ಬಡವರು ಯಾವಾ
ಗಲೂ ನಿಮ್ಮೊಂದಿಗಿರುತ್ತಾರೆ, ಆದರೆ ನಾನು ನಿಮ್ಮೊಂದಿಗೆ
ಯಾವಾಗಲೂ ಇರುವುದಿಲ್ಲ'' ಎಂದು ಉತ್ತರಕೊಟ್ಟನು.

### ಲಾಜರನ ವಿರುದ್ಧ ಸಂಚು

[9]ಯೇಸು ಬೆಥಾನಿಯಲ್ಲಿದ್ದಾನೆ ಎಂಬ ಸುದ್ದಿಯನ್ನು ಅನೇಕ
ಯೆಹೂದ್ಯರು ಕೇಳಿ ಆತನನ್ನೂ ಲಾಜರನನ್ನೂ ನೋಡ
ಬೇಕೆಂದು ಅಲ್ಲಿಗೆ ಹೋದರು. ಯೇಸುವಿನಿಂದ ಜೀವಂತವಾಗಿ
ಎಬ್ಬಿಸಲ್ಪಟ್ಟವನೇ ಲಾಜರನು. [10]ಆದರೆ ಮಹಾಯಾಜಕರು
ಲಾಜರನನ್ನು ಸಹ ಕೊಲ್ಲಲು ಯೋಜನೆಗಳನ್ನು ಮಾಡಿದರು.
[11]ಲಾಜರನ ನಿಮಿತ್ತ ಅನೇಕ ಯೆಹೂದ್ಯರು ತಮ್ಮ ನಾಯಕ
ರನ್ನು ತೊರೆದು ಯೇಸುವಿನಲ್ಲಿ ನಂಬಿಕೆ ಇಡುತ್ತಿದ್ದರು. ಆದ
ಕಾರಣವೇ ಯೆಹೂದ್ಯ ನಾಯಕರು ಲಾಜರನನ್ನು ಸಹ ಕೊಲ್ಲ
ಬೇಕೆಂದಿದ್ದರು.

### ಜೆರುಸಲೇಮಿಗೆ ಯೇಸುವಿನ ಪ್ರವೇಶ

(ಮತ್ತಾಯ 21:1-11; ಮಾರ್ಕ 11:1-11; ಲೂಕ 19:28-40)

[12]ಮರುದಿನ, ಯೇಸು ಜೆರುಸಲೇಮಿಗೆ ಬರುತ್ತಿದ್ದಾನೆ
ಎಂಬ ಸುದ್ದಿ ಅಲ್ಲಿಯ ಜನರಿಗೆ ತಿಳಿಯಿತು. ಪಸ್ಕಹಬ್ಬಕ್ಕಾಗಿ
ಬಂದಿದ್ದ ಅನೇಕರು ಅಲ್ಲಿದ್ದರು. [13]ಜನರು ಖರ್ಜೂರದ
ಗರಿಗಳನ್ನು ತೆಗೆದುಕೊಂಡು ಯೇಸುವನ್ನು ಎದುರುಗೊಳ್ಳಲು
ಹೋದರು.

> ''ಆತನಿಗೆ ಸ್ತೋತ್ರವಾಗಲಿ! ಪ್ರಭುವಿನ ಹೆಸರಿನಲ್ಲಿ
> ಬರುವಾತನಿಗೆ ದೇವರಾಶೀರ್ವಾದವಾಗಲಿ!
> ಇಸ್ರೇಲ್ ರಾಜನಿಗೆ ದೇವರಾಶೀರ್ವಾದ
> ವಾಗಲಿ!''
>
> *ಕೀರ್ತನೆ 118:25-26*

ಎಂದು ಜನರು ಕೂಗಿದರು.

[14]ಯೇಸು ಅಲ್ಲಿದ್ದ ಕತ್ತೆಯೊಂದನ್ನು ಕಂಡು, ಅದರ ಮೇಲೆ
ಕುಳಿತುಕೊಂಡು ಹೊರಟನು. ಪವಿತ್ರ ಗ್ರಂಥ ಹೇಳುವಂತೆಯೇ
ಇದು ನೆರವೇರಿತು:

> [15]''ಸಿಯೋನ್ ನಗರವೇ, ಭಯಪಡಬೇಡ!
> ನೋಡು! ನಿನ್ನ ರಾಜನು ಬರುತ್ತಿದ್ದಾನೆ. ಆತನು
> ಪ್ರಾಯದ ಕತ್ತೆಯ ಮೇಲೆ ಕುಳಿತುಕೊಂಡು
> ಬರುತ್ತಿದ್ದಾನೆ.''
>
> *ಜಕರ್ಯ 9:9*

[16]ಯೇಸುವಿನ ಶಿಷ್ಯರು ಆ ಸಮಯದಲ್ಲಿ ಇದನ್ನು
ಅರ್ಥಮಾಡಿಕೊಳ್ಳಲಿಲ್ಲ. ಆದರೆ ಯೇಸು ಮಹಿಮಾಪದವಿಗೆ
ಏರಿಹೋದ ನಂತರ, ಈ ಸಂಗತಿಗಳು ಆತನ ವಿಷಯವಾಗಿ
ಬರೆಯಲ್ಪಟ್ಟಿವೆ ಎಂಬುದನ್ನು ಶಿಷ್ಯರು ಅರ್ಥಮಾಡಿಕೊಂಡರು;
ಮತ್ತು ತಾವು ಆತನಿಗಾಗಿ ಮಾಡಿದ ಕಾರ್ಯಗಳನ್ನು
ಜ್ಞಾಪಿಸಿಕೊಂಡರು.

### ಯೇಸುವಿನ ಬಗ್ಗೆ ಜನರ ಹೇಳಿಕೆ

[17]ಯೇಸು ಲಾಜರನಿಗೆ ಸಮಾಧಿಯೊಳಗಿಂದ ಬರುವಂತೆ
ಹೇಳಿ ಅವನನ್ನು ಜೀವಂತವಾಗಿ ಎಬ್ಬಿಸಿದಾಗ ಅನೇಕ ಜನರು
ಯೇಸುವಿನ ಸಂಗಡ ಇದ್ದರು. ಯೇಸು ಮಾಡಿದ ಈ ಕಾರ್ಯದ
ಬಗ್ಗೆ ಅವರು ಇತರರಿಗೆ ಹೇಳುತ್ತಿದ್ದರು. [18]ಯೇಸು ಮಾಡಿದ
ಈ ಅದ್ಭುತ ಕಾರ್ಯವನ್ನು ಕೇಳಿ, ಅನೇಕ ಜನರು ಯೇಸುವನ್ನು
ಎದುರುಗೊಳ್ಳಲು ಹೋಗಿದ್ದರು. [19]ಆದ್ದರಿಂದ ಫರಿಸಾಯರು,
''ನೋಡಿ! ನಮ್ಮ ಯೋಜನೆಯು ನಿಷ್ಪ್ರಯೋಜಕವಾಯಿತು.
ಜನರು ಆತನನ್ನೇ ಹಿಂಬಾಲಿಸುತ್ತಿದ್ದಾರೆ!'' ಎಂದು ಒಬ್ಬರಿ
ಗೊಬ್ಬರು ಮಾತಾಡಿಕೊಂಡರು.

### ಜೀವ, ಮರಣಗಳ ಬಗ್ಗೆ ಯೇಸುವಿನ ಉಪದೇಶ

[20]ಅಲ್ಲಿ ಕೆಲವು ಗ್ರೀಕ್ ಜನರು ಸಹ ಇದ್ದರು. ಪಸ್ಕಹಬ್ಬದಲ್ಲಿ
ಆರಾಧಿಸುವುದಕ್ಕಾಗಿ ಜೆರುಸಲೇಮಿಗೆ ಹೋಗಿದ್ದವರಲ್ಲಿ
ಇವರೂ ಸೇರಿದ್ದರು. [21]ಈ ಗ್ರೀಕ್ ಜನರು ಫಿಲಿಪ್ಪನ ಬಳಿಗೆ
ಹೋದರು. (ಫಿಲಿಪ್ಪನು ಗಲಿಲೇಯದ ಬೆತ್ಸಾಯಿ ಎಂಬ
ಊರಿನವನಾಗಿದ್ದನು.) ಅವರು, ''ಸ್ವಾಮೀ, ನಾವು ಯೇಸು
ವನ್ನು ನೋಡಬೇಕು'' ಎಂದು ಅವನನ್ನು ಕೇಳಿಕೊಂಡರು.
[22]ಫಿಲಿಪ್ಪನು ಅಂದ್ರೆಯನ ಬಳಿಗೆ ಹೋಗಿ ಈ ವಿಷಯವನ್ನು
ತಿಳಿಸಿದನು. ಬಳಿಕ ಅಂದ್ರೆಯನು ಮತ್ತು ಫಿಲಿಪ್ಪನು ಒಟ್ಟಾಗಿ
ಯೇಸುವಿನ ಬಳಿಗೆ ಹೋಗಿ ಈ ವಿಷಯವನ್ನು ತಿಳಿಸಿದರು.
[23]ಯೇಸು ಅವರಿಗೆ, ''ಮನುಷ್ಯಕುಮಾರನು ತನ್ನ ಮಹಿಮೆ
ಯನ್ನು ಹೊಂದುವ ಸಮಯ ಇದೇ ಆಗಿದೆ. [24]ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ಗೋಧಿಯ ಕಾಳು ಭೂಮಿಗೆ ಬಿದ್ದು
ಸಾಯಲೇಬೇಕು. ಬಳಿಕ ಅದು ಬೆಳೆದು ಅನೇಕ ಕಾಳುಗಳನ್ನು
ಫಲಿಸುವುದು. ಸಾಯದಿದ್ದರೆ, ಅದು ಯಾವಾಗಲೂ ಕೇವಲ
ಒಂದೇ ಕಾಳಾಗಿರುವುದು. [25]ತನ್ನ ಸ್ವಂತ ಪ್ರಾಣವನ್ನು ಪ್ರೀತಿಸು
ವವನು ಅದನ್ನು ಕಳೆದುಕೊಳ್ಳುವನು. ಆದರೆ ಈ ಲೋಕದಲ್ಲಿ
ತನ್ನ ಪ್ರಾಣವನ್ನು ದ್ವೇಷಿಸುವವನು ಅದನ್ನು ಉಳಿಸಿಕೊಳ್ಳುವನು.
ಅವನು ನಿತ್ಯಜೀವವನ್ನು ಹೊಂದುವನು. [26]ನನ್ನ ಸೇವೆ ಮಾಡು
ವವನು ನನ್ನನ್ನು ಹಿಂಬಾಲಿಸಬೇಕು. ಆಗ ನಾನು ಇರುವಲ್ಲೆಲ್ಲಾ
ನನ್ನ ಸೇವಕನು ಇರುವನು. ನನ್ನ ಸೇವೆ ಮಾಡುವ ಜನರನ್ನು
ನನ್ನ ತಂದೆಯು ಸನ್ಮಾನಿಸುವನು'' ಎಂದು ಹೇಳಿದನು.

### ತನ್ನ ಮರಣದ ಕುರಿತು ಯೇಸುವಿನ ಹೇಳಿಕೆ

[27]ಯೇಸು ಮಾತನ್ನು ಮುಂದುವರಿಸಿ, ''ನನ್ನ ಪ್ರಾಣವು
ತತ್ತರಿಸುತ್ತಿದೆ. ನಾನೇನು ಹೇಳಲಿ? 'ತಂದೆಯೇ, ನನ್ನನ್ನು ಈ
ಸಂಕಟಕಾಲದಿಂದ ರಕ್ಷಿಸು ಎನ್ನಬೇಕೇ?' ಇಲ್ಲ! ಸಂಕಟಪಡು
ವುದಕ್ಕೋಸ್ಕರವೇ ನಾನು ಬಂದಿದ್ದೇನೆ. [28]ತಂದೆಯೇ, ನಿನ್ನ
ಹೆಸರನ್ನು ಮಹಿಮೆಪಡಿಸಿಕೊ!'' ಎಂದು ಹೇಳಿದನು.

ಆಗ ಪರಲೋಕದಿಂದ, ''ನನ್ನ ಹೆಸರನ್ನು ಮಹಿಮೆಪಡಿಸಿ
ಕೊಂಡಿದ್ದೇನೆ. ನಾನು ಮತ್ತೆ ಮಹಿಮೆಪಡಿಸಿಕೊಳ್ಳುವೆನು,''
ಎಂದು ವಾಣಿ ಆಯಿತು.

[29]ಅಲ್ಲಿ ನಿಂತಿದ್ದ ಜನರು ಈ ವಾಣಿಯನ್ನು ಕೇಳಿ ''ಅದು
ಗುಡುಗು'' ಎಂದರು.

ಆದರೆ ಇತರರು, ''ದೇವದೂತನೊಬ್ಬನು ಯೇಸುವಿ
ನೊಂದಿಗೆ ಮಾತಾಡಿದನು!'' ಎಂದರು.

30ಯೇಸು ಜನರಿಗೆ, ‘‘ಆ ವಾಣಿಯಾದದ್ದು ನನಗೋಸ್ಕರ
ವಲ್ಲ, ನಿಮಗೋಸ್ಕರ. 31ಈ ಲೋಕಕ್ಕೆ ತೀರ್ಪಾಗುವ ಕಾಲ
ಇದೇ ಆಗಿದೆ. ಈಗ ಈ ಲೋಕದ ಅಧಿಪತಿಯನ್ನು (ಸೈತಾನ)
ಹೊರಗೆ ದಬ್ಬಲಾಗುವುದು. 32ನಾನು ಭೂಮಿಯಿಂದ ಮೇಲೆ
ತ್ತಲ್ಪಡುವೆನು. ಆಗ ನಾನು ಎಲ್ಲಾ ಜನರನ್ನು ನನ್ನ ಬಳಿಗೆ
ಸೆಳೆದುಕೊಳ್ಳುವೆನು’’ ಎಂದು ಹೇಳಿದನು. 33ತಾನು ಸಾಯುವ
ರೀತಿಯನ್ನು ಯೇಸು ಈ ಮಾತಿನ ಮೂಲಕ ಸೂಚಿಸಿದನು.
34ಜನರು, ‘‘ಕ್ರಿಸ್ತನು ಸದಾಕಾಲ ಜೀವಿಸುತ್ತಾನೆ ಎಂದು
ನಮ್ಮ ಧರ್ಮಶಾಸ್ತ್ರವು ಹೇಳುತ್ತದೆ. ಹೀಗಿರಲಾಗಿ, ‘ಮನುಷ್ಯ
ಕುಮಾರನು ಮೇಲೆತ್ತಲ್ಪಡುವನು’ ಎಂದು ನೀನು ಹೇಳುವು
ದೇಕೆ? ಈ ಮನುಷ್ಯಕುಮಾರನು ಯಾರು?’’ ಎಂದು
ಕೇಳಿದರು.
35ಅದಕ್ಕೆ ಯೇಸು, ‘‘ಇನ್ನು ಸ್ವಲ್ಪಕಾಲ ಮಾತ್ರ ಬೆಳಕು
ನಿಮ್ಮೊಂದಿಗಿರುತ್ತದೆ. ಆದ್ದರಿಂದ ಬೆಳಕು ನಿಮ್ಮೊಂದಿಗೆ
ಇರುವಾಗಲೇ ನಡೆಯಿರಿ. ಆಗ ಕತ್ತಲೆಯು (ಪಾಪ) ನಿಮ್ಮನ್ನು
ಕವಿದುಕೊಳ್ಳುವುದಿಲ್ಲ. ಕತ್ತಲೆಯಲ್ಲಿ ನಡೆಯುವವನಿಗೆ ತಾನು
ಎಲ್ಲಿಗೆ ಹೋಗುತ್ತಿದ್ದೇನೆಂಬುದು ತಿಳಿಯದು. 36ಆದ್ದರಿಂದ
ನೀವು ಬೆಳಕನ್ನು ಇನ್ನೂ ಹೊಂದಿರುವಾಗಲೇ ಅದರಲ್ಲಿ ನಂಬಿಕೆ
ಇಡಿರಿ. ಆಗ ನೀವು ಬೆಳಕಿನವರಾಗುವಿರಿ’’ ಎಂದು ಹೇಳಿದನು.
ಈ ಸಂಗತಿಗಳನ್ನು ಹೇಳಿದ ಮೇಲೆ ಯೇಸು ಅಲ್ಲಿಂದ ಹೊರಟು,
ತನ್ನನ್ನು ಜನರು ಕಂಡುಕೊಳ್ಳಲಾಗದ ಸ್ಥಳಕ್ಕೆ ಹೋದನು.

## ಯೆಹೂದ್ಯರ ಅಪನಂಬಿಕೆ

37ಯೇಸು ಅನೇಕ ಮಹತ್ಕಾರ್ಯಗಳನ್ನು ಮಾಡಿದನು.
ಜನರು ಆ ಕಾರ್ಯಗಳನ್ನೆಲ್ಲಾ ನೋಡಿದರೂ ಆತನಲ್ಲಿ ನಂಬಿಕೆ
ಇಡಲಿಲ್ಲ. 38ಇದರಿಂದಾಗಿ, ಪ್ರವಾದಿಯಾದ ಯೆಶಾಯನು
ಹೇಳಿದ್ದ ಮಾತುಗಳು ನೆರವೇರಿದವು. ಅದೇನೆಂದರೆ:

> ‘‘ಪ್ರಭುವೇ, ನಾವು ಹೇಳಿದ ಸಂಗತಿಗಳನ್ನು ಯಾರು
> ನಂಬಿದರು? ಪ್ರಭುವಿನ ಬಾಹುಬಲವು ಯಾರಿಗೆ
> ಗೋಚರವಾಯಿತು?’’
>
> *ಯೆಶಾಯ 53:1*

39ಆದಕಾರಣವೇ ಜನರು ನಂಬಲಾಗಲಿಲ್ಲ. ಏಕೆಂದರೆ
ಯೆಶಾಯನು ಮತ್ತೊಂದು ಕಡೆಯಲ್ಲಿ ಹೀಗೆ ಹೇಳಿದ್ದಾನೆ:

> 40‘‘ತಮ್ಮ ಕಣ್ಣುಗಳಿಂದ ಕಾಣದಂತೆ ತಮ್ಮ ಮನಸ್ಸು
> ಗಳಿಂದ ಅರ್ಥಮಾಡಿಕೊಳ್ಳದಂತೆ ಪರಿವರ್ತನೆ
> ಗೊಂಡು ಗುಣಹೊಂದದಂತೆ ಆತನು ಅವರನ್ನು
> ಕುರುಡರನ್ನಾಗಿ ಮಾಡಿದ್ದಾನೆ, ಅವರ ಮನಸ್ಸು
> ಗಳನ್ನು ಕಲ್ಲಾಗಿಸಿದ್ದಾನೆ.’’
>
> *ಯೆಶಾಯ 6:10*

41ಯೆಶಾಯನು ಆತನ (ಯೇಸುವಿನ) ಮಹಿಮೆಯನ್ನು
ನೋಡಿದ್ದರಿಂದಲೇ ಹೀಗೆ ಹೇಳಿದನು.
42ಆದರೆ ಅನೇಕ ಜನರು ಯೇಸುವಿನಲ್ಲಿ ನಂಬಿಕೆ ಇಟ್ಟರು.
ಅನೇಕ ಯೆಹೂದ್ಯನಾಯಕರು ಸಹ ಯೇಸುವಿನಲ್ಲಿ ನಂಬಿಕೆ
ಯಿಟ್ಟರು. ಆದರೆ ಅವರು ಫರಿಸಾಯರಿಗೆ ಹೆದರಿಕೊಂಡು ತಮ್ಮ
ನಂಬಿಕೆಯನ್ನು ಬಹಿರಂಗಪಡಿಸಲಿಲ್ಲ. ತಮ್ಮನ್ನು ಫರಿಸಾಯರು
ಸಭಾಮಂದಿರದಿಂದ ಬಹಿಷ್ಕರಿಸುತ್ತಾರೆ ಎಂಬ ಭಯ ಅವರಿ
ಗಿತ್ತು. 43ಈ ಜನರು ದೇವರ ಹೊಗಳಿಕೆಗಿಂತಲೂ ಜನರ
ಹೊಗಳಿಕೆಯನ್ನೇ ಹೆಚ್ಚಾಗಿ ಪ್ರೀತಿಸಿದರು.

## ಯೇಸುವಿನ ಉಪದೇಶ ಜನರಿಗೆ ತೀರ್ಪು ಮಾಡುವುದು

44ಬಳಿಕ ಯೇಸು ಗಟ್ಟಿಯಾಗಿ ಇಂತೆಂದನು: ‘‘ನನ್ನಲ್ಲಿ
ನಂಬಿಕೆ ಇಡುವವನು ನನ್ನನ್ನು ಕಳುಹಿಸಿದಾತನಲ್ಲಿ (ದೇವರು)
ನಿಜವಾಗಿಯೂ ನಂಬಿಕೆ ಇಡುವವನಾಗಿದ್ದಾನೆ. 45ನನ್ನನ್ನು
ನೋಡುವವನು ನನ್ನನ್ನು ಕಳುಹಿಸಿದಾತನನ್ನು ನಿಜವಾಗಿಯೂ
ನೋಡುವವನಾಗಿದ್ದಾನೆ. 46ನಾನೇ ಬೆಳಕಾಗಿದ್ದೇನೆ. ನನ್ನಲ್ಲಿ
ನಂಬಿಕೆ ಇಡುವವರು ಕತ್ತಲೆಯಲ್ಲಿ ಇರಬಾರದೆಂದು ನಾನೇ ಈ
ಲೋಕಕ್ಕೆ ಬಂದಿದ್ದೇನೆ.
47‘‘ನಾನು ಈ ಲೋಕಕ್ಕೆ ಬಂದದ್ದು ಜನರಿಗೆ ತೀರ್ಪು
ಮಾಡುವುದಕ್ಕಾಗಿಯಲ್ಲ. ಈ ಲೋಕದಲ್ಲಿರುವ ಜನರನ್ನು
ರಕ್ಷಿಸುವುದಕ್ಕಾಗಿ ನಾನು ಬಂದೆನು. ಆದ್ದರಿಂದ ನನ್ನ ಮಾತು
ಗಳನ್ನು ಕೇಳಿಯೂ ನಂಬದಿರುವ ಜನರಿಗೆ ತೀರ್ಪು ಮಾಡು
ವವನು ನಾನಲ್ಲ. 48ನನ್ನಲ್ಲಿ ನಂಬಿಕೆ ಇಡದಿರುವವನಿಗೆ ಮತ್ತು
ನಾನು ಹೇಳುವುದನ್ನು ತಿರಸ್ಕರಿಸುವವನಿಗೆ ತೀರ್ಪು
ಮಾಡುವಂಥದ್ದು ನಾನು ಆಡಿದ ಮಾತುಗಳೇ. ಅಂತಿಮ ದಿನ
ದಂದು ಅವೇ ಅವನಿಗೆ ತೀರ್ಪು ಮಾಡುತ್ತವೆ. 49ಏಕೆಂದರೆ, ನನ್ನ
ಮಾತುಗಳು ನನ್ನಿಂದ ಬಂದವುಗಳಲ್ಲ. ನನ್ನನ್ನು ಕಳುಹಿಸಿದ
ತಂದೆಯೇ ನಾನು ಏನು ಹೇಳಬೇಕು, ಏನು ಮಾತಾಡಬೇಕು
ಎಂದು ನನಗೆ ಹೇಳಿಕೊಟ್ಟಿದ್ದಾನೆ. 50ತಂದೆಯ ಆಜ್ಞೆಯು
ನಿತ್ಯಜೀವಕ್ಕೆ ನಡೆಸುತ್ತದೆ ಎಂದು ನಾನು ಬಲ್ಲೆನು. ಆದ್ದರಿಂದ
ತಂದೆಯು ನನಗೆ ಹೇಳಿಕೊಟ್ಟ ಸಂಗತಿಗಳನ್ನೇ ನಾನು
ತಿಳಿಸುತ್ತೇನೆ.’’

## ಯೇಸು ತನ್ನ ಶಿಷ್ಯರ ಪಾದಗಳನ್ನು ತೊಳೆಯುವನು

13 ಯೆಹೂದ್ಯರ ಪಸ್ಕಹಬ್ಬವು ಬಹು ಸಮೀಪವಾಗಿತ್ತು.
ತಾನು ಈ ಲೋಕವನ್ನು ಬಿಟ್ಟು ತಂದೆಯ ಬಳಿಗೆ
ಹೋಗುವ ಸಮಯ ಬಂದಿರುವುದಾಗಿ ಯೇಸುವಿಗೆ ತಿಳಿದಿತ್ತು.
ಈ ಲೋಕದಲ್ಲಿದ್ದ ತನ್ನವರನ್ನು ಆತನು ಯಾವಾಗಲೂ ಪ್ರೀತಿಸು
ತ್ತಿದ್ದನು. ಈಗಲಾದರೊ ಅವರ ಮೇಲೆ ತನಗಿರುವ ಅಪಾರ
ಪ್ರೀತಿಯನ್ನು ತೋರಿಸುವ ಕಾಲ ಆತನಿಗೆ ಬಂದಿತ್ತು.
2ಯೇಸು ಮತ್ತು ಆತನ ಶಿಷ್ಯರು ರಾತ್ರಿಯ ಊಟಕ್ಕಾಗಿ
ಕುಳಿತುಕೊಂಡಿದ್ದರು. ಯೇಸುವಿಗೆ ದ್ರೋಹ ಮಾಡುವಂತೆ
ಸೈತಾನನು ಇಸ್ಕರಿಯೋತ ಯೂದನನ್ನು ಈಗಾಗಲೇ ಪ್ರೇರೇಪಿ
ಸಿದ್ದನು. (ಯೂದನು ಸಿಮೋನನ ಮಗ.) 3ತಂದೆಯು ಪ್ರತಿ
ಯೊಂದರ ಮೇಲೆ ತನಗೆ ಅಧಿಕಾರವನ್ನು ಕೊಟ್ಟಿದ್ದಾನೆಂಬುದು
ಯೇಸುವಿಗೆ ತಿಳಿದಿತ್ತು. ಅಲ್ಲದೆ ತಾನು ದೇವರ ಬಳಿಯಿಂದ
ಬಂದಿರುವುದಾಗಿಯೂ ಮತ್ತು ಈಗ ದೇವರ ಬಳಿಗೆ ಮರಳಿ
ಹೋಗುತ್ತಿರುವುದಾಗಿಯೂ ಆತನಿಗೆ ಗೊತ್ತಿತ್ತು. 4ಅವರು
ಊಟ ಮಾಡುತ್ತಿದ್ದಾಗ ಯೇಸು ಎದ್ದು ತನ್ನ ಮೇಲಂಗಿಯನ್ನು
ತೆಗೆದಿಟ್ಟನು; ಅಂಗವಸ್ತ್ರವನ್ನು ಸೊಂಟಕ್ಕೆ ಕಟ್ಟಿಕೊಂಡನು.
5ಅನಂತರ ಒಂದು ಬೋಗುಣಿಗೆ ನೀರು ಸುರಿದುಕೊಂಡು

ಶಿಷ್ಯರ ಕಾಲುಗಳನ್ನು ತೊಳೆದು ತಾನು ಕಟ್ಟಿಕೊಂಡಿದ್ದ ಅಂಗ
ವಸ್ತ್ರದಿಂದ ಅವರ ಪಾದಗಳನ್ನು ಒರಸಿದನು.
6ಯೇಸು ಸೀಮೋನ್ ಪೇತ್ರನ ಬಳಿಗೆ ಬಂದಾಗ ಪೇತ್ರನು,
‘‘ಪ್ರಭುವೇ, ನನ್ನ ಪಾದಗಳನ್ನು ನೀನು ತೊಳೆಯಕೂಡದು’’
ಎಂದನು.
7ಯೇಸು, ‘‘ಈಗ ನಾನು ಏನು ಮಾಡುತ್ತಿರುವೆನೆಂದು
ನಿನಗೆ ಗೊತ್ತಿಲ್ಲ. ಆದರೆ ಮುಂದೆ ನೀನು ಅರ್ಥಮಾಡಿ
ಕೊಳ್ಳುವೆ’’ ಎಂದು ಉತ್ತರಕೊಟ್ಟನು.
8ಪೇತ್ರನು, ‘‘ಇಲ್ಲ! ನನ್ನ ಪಾದಗಳನ್ನು ನೀನು ಎಂದಿಗೂ
ತೊಳೆಯಕೂಡದು’’ ಎಂದು ಪ್ರತಿಭಟಿಸಿದನು.
ಯೇಸು, ‘‘ನಿನ್ನ ಪಾದಗಳನ್ನು ನಾನು ತೊಳೆಯದಿದ್ದರೆ,
ನನ್ನಲ್ಲಿ ನಿನಗೆ ಪಾಲು ಇಲ್ಲ’’ ಎಂದು ಹೇಳಿದನು.
9ಆಗ ಸೀಮೋನ್ ಪೇತ್ರನು, ‘‘ಪ್ರಭುವೇ, ನನ್ನ ಪಾದ
ಗಳನ್ನು ಮಾತ್ರವಲ್ಲದೆ ನನ್ನ ಕೈಗಳನ್ನು ಮತ್ತು ತಲೆಯನ್ನೂ
ತೊಳೆ!’’ ಎಂದು ಕೇಳಿಕೊಂಡನು.
10ಯೇಸು, ‘‘ಸ್ನಾನಮಾಡಿಕೊಂಡವನ ದೇಹವೆಲ್ಲಾ ಶುದ್ಧ
ವಾಗಿರುತ್ತದೆ. ಅವನು ತನ್ನ ಪಾದಗಳನ್ನು ತೊಳೆದುಕೊಂಡರೆ
ಸಾಕು. ನೀವು ಸಹ ಶುದ್ಧರಾಗಿದ್ದೀರಿ, ಆದರೆ ನಿಮ್ಮಲ್ಲಿ
ಪ್ರತಿಯೊಬ್ಬನೂ ಶುದ್ಧನಲ್ಲ’’ ಎಂದು ಹೇಳಿದನು. 11ತನಗೆ
ದ್ರೋಹ ಮಾಡುವ ವ್ಯಕ್ತಿ ಯಾರೆಂದು ಯೇಸುವಿಗೆ ತಿಳಿದಿತ್ತು.
ಆದಕಾರಣ ಆತನು, ‘‘ನಿಮ್ಮಲ್ಲಿ ಪ್ರತಿಯೊಬ್ಬನೂ ಶುದ್ಧನಲ್ಲ’’
ಎಂದು ಹೇಳಿದನು.
12ಯೇಸು ಅವರ ಪಾದಗಳನ್ನು ತೊಳೆದ ಮೇಲೆ ತನ್ನ
ಮೇಲಂಗಿಯನ್ನು ಧರಿಸಿಕೊಂಡು ಮತ್ತೆ ಕುಳಿತುಕೊಂಡು
ಇಂತೆಂದನು:‘‘ನಾನು ನಿಮಗೆ ಮಾಡಿದ್ದು ಏನೆಂದು ಅರ್ಥ
ವಾಯಿತೇ? 13ನೀವು ನನ್ನನ್ನು, ‘ಗುರುವೇ, ಪ್ರಭುವೇ’ ಎಂದು
ಕರೆಯುತ್ತೀರಿ. ನೀವು ಹಾಗೆ ಕರೆಯುವುದು ಸರಿ. ಏಕೆಂದರೆ
ನಾನು ಗುರುವೂ ಹೌದು, ಪ್ರಭುವೂ ಹೌದು. 14ನಿಮ್ಮ
ಪ್ರಭುವೂ ಗುರುವೂ ಆಗಿರುವ ನಾನು ನಿಮ್ಮ ಪಾದಗಳನ್ನು
ಸೇವಕನಂತೆ ತೊಳೆದೆನು. ಆದ್ದರಿಂದ ನೀವು ಸಹ ಒಬ್ಬರ
ಪಾದಗಳನ್ನು ಇನ್ನೊಬ್ಬರು ತೊಳೆಯಬೇಕು. 15ಈ ಕಾರ್ಯಕ್ಕೆ
ನಾನೇ ನಿಮಗೆ ಮಾದರಿಯಾಗಿದ್ದೇನೆ. ನಾನು ನಿಮಗೆ ಮಾಡಿ
ದಂತೆ ನೀವೂ ಒಬ್ಬರಿಗೊಬ್ಬರು ಮಾಡಬೇಕು. 16ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ಸೇವಕನು ಒಡೆಯನಿಗಿಂತ ದೊಡ್ಡವ
ನಲ್ಲ. ಆದ್ದರಿಂದ ಕೆಲಸಕ್ಕಾಗಿ ಕಳುಹಿಸಲ್ಪಟ್ಟವನು ಕಳುಹಿಸಿದವ
ನಿಗಿಂತ ದೊಡ್ಡವನಲ್ಲ. 17ನೀವು ಈ ಸಂಗತಿಗಳನ್ನು ತಿಳಿದು
ಕೊಂಡು ಇವುಗಳನ್ನು ಕೈಕೊಂಡು ನಡೆದರೆ ಸಂತೋಷ
ದಿಂದಿರುವಿರಿ.
18‘‘ನಾನು ನಿಮ್ಮೆಲ್ಲರ ಬಗ್ಗೆ ಮಾತಾಡುತ್ತಿಲ್ಲ. ನಾನು
ಆರಿಸಿಕೊಂಡಿರುವ ಜನರ ಬಗ್ಗೆ ನನಗೆ ಗೊತ್ತಿದೆ. ಆದರೆ
‘ನನ್ನೊಂದಿಗೆ ಊಟ ಮಾಡುವವನೇ ನನಗೆ ದ್ರೋಹ
ಬಗೆದನು.’* ಎಂಬ ಪವಿತ್ರಗ್ರಂಥದ ಮಾತು ನೆರವೇರಬೇಕು.
19ಅದು ನೆರವೇರುವಾಗ ನಾನೇ ಕ್ರಿಸ್ತನೆಂದು ನೀವು ನಂಬ
ಬೇಕೆಂದು, ಅದು ನೆರವೇರುವುದಕ್ಕಿಂತ ಮೊದಲೇ ಅದನ್ನು
ನಿಮಗೆ ತಿಳಿಸುತ್ತಿದ್ದೇನೆ. 20ನಾನು ನಿಮಗೆ ಸತ್ಯವನ್ನು ಹೇಳು
ತ್ತೇನೆ. ನಾನು ಕಳುಹಿಸುವ ಯಾರನ್ನಾದರೂ ಸ್ವೀಕರಿಸಿ
ಕೊಳ್ಳುವವನು ನನ್ನನ್ನೇ ಸ್ವೀಕರಿಸಿಕೊಳ್ಳುವವನಾಗಿದ್ದಾನೆ.
ನನ್ನನ್ನು ಸ್ವೀಕರಿಸಿಕೊಳ್ಳುವವನು ನನ್ನನ್ನು ಕಳುಹಿಸಿದಾತನನ್ನೇ
ಸ್ವೀಕರಿಸಿಕೊಳ್ಳುವವನಾಗಿದ್ದಾನೆ.’’

## ಯೇಸುವಿನ ಶಿಷ್ಯನ ದ್ರೋಹ

(ಮತ್ತಾಯ 26:20-25; ಮಾರ್ಕ 14:17-21; ಲೂಕ 22:21-23)

21ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ ಆತ್ಮದಲ್ಲಿ
ತತ್ತರಗೊಂಡು, ‘‘ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ.
ನಿಮ್ಮಲ್ಲಿ ಒಬ್ಬನು ನನಗೆ ದ್ರೋಹ ಮಾಡುವನು’’ ಎಂದು ಬಹಿ
ರಂಗವಾಗಿ ಹೇಳಿದನು.
22ಯೇಸುವಿನ ಶಿಷ್ಯರೆಲ್ಲಾ ಒಬ್ಬರನ್ನೊಬ್ಬರು ನೋಡತೊಡ
ಗಿದರು. ಆತನು ಯಾರ ಬಗ್ಗೆ ಮಾತಾಡುತ್ತಿದ್ದಾನೆಂದು ಅವರಿಗೆ
ಅರ್ಥವಾಗಲಿಲ್ಲ. 23ಶಿಷ್ಯರಲ್ಲಿ ಒಬ್ಬನು ಯೇಸುವಿನ ಸಮೀಪ
ದಲ್ಲಿ ಒರಗಿಕೊಂಡಿದ್ದನು. ಯೇಸು ಪ್ರೀತಿಸುತ್ತಿದ್ದ ಶಿಷ್ಯನೇ
ಅವನು.
24ಸೀಮೋನ್ ಪೇತ್ರನು ಈ ಶಿಷ್ಯನಿಗೆ, ಯಾರನ್ನು ಕುರಿತು
ಯೇಸು ಹೇಳುತ್ತಿದ್ದಾನೆಂದು ಕೇಳಿ ತಿಳಿದುಕೊಳ್ಳಲು
ಸನ್ನೆಮಾಡಿದನು.
25ಆ ಶಿಷ್ಯನು ಯೇಸುವಿನ ಸಮೀಪಕ್ಕೆ ಬಾಗಿಕೊಂಡು,
‘‘ಪ್ರಭುವೇ, ಅವನು ಯಾರು?’’ ಎಂದು ಕೇಳಿದನು.
26ಯೇಸು, ‘‘ನಾನು ಈ ರೊಟ್ಟಿಯನ್ನು ಬಟ್ಟಲಲ್ಲಿ ಅದ್ದಿ ಅದನ್ನು
ಯಾರಿಗೆ ಕೊಡುತ್ತೇನೋ ಅವನೇ ನನಗೆ ದ್ರೋಹ ಮಾಡು
ವನು’’ ಎಂದು ಹೇಳಿ ರೊಟ್ಟಿಯ ತುಂಡೊಂದನ್ನು ತೆಗೆದು
ಕೊಂಡು ಅದನ್ನು ಬಟ್ಟಲಲ್ಲಿ ಅದ್ದಿ ಸಿಮೋನನ ಮಗನಾದ
ಇಸ್ಕರಿಯೋತ ಯೂದನಿಗೆ ಕೊಟ್ಟನು. 27ಯೂದನು ಆ
ರೊಟ್ಟಿಯನ್ನು ತೆಗೆದುಕೊಂಡಾಗ ಸೈತಾನನು ಅವನೊಳಗೆ
ಪ್ರವೇಶಿಸಿದನು. ಯೇಸು ಯೂದನಿಗೆ, ‘‘ನೀನು ಮಾಡುವ
ಕೆಲಸವನ್ನು ಬೇಗನೆ ಮಾಡು!’’ ಎಂದು ಹೇಳಿದನು. 28ಯೇಸು
ಯೂದನಿಗೆ ಏಕೆ ಹಾಗೆ ಹೇಳಿದನೆಂದು ಊಟಕ್ಕೆ ಕುಳಿತಿದ್ದವ
ರಲ್ಲಿ ಯಾರಿಗೂ ಅರ್ಥವಾಗಲಿಲ್ಲ. 29ಆ ಶಿಷ್ಯ ಸಮುದಾಯದ
ಹಣದ ಪೆಟ್ಟಿಗೆಯು ಯೂದನ ವಶದಲ್ಲಿತ್ತು. ಆದ್ದರಿಂದ ಹಬ್ಬಕ್ಕೆ
ಅಗತ್ಯವಾದ ಕೆಲವು ವಸ್ತುಗಳನ್ನು ತೆಗೆದುಕೊಂಡು ಬರುವು
ದಕ್ಕಾಗಲಿ ಬಡಜನರಿಗೆ ಏನಾದರೂ ಕೊಡುವುದಕ್ಕಾಗಲಿ
ಯೇಸು ಅವನಿಗೆ ಹೇಳಿರಬೇಕೆಂದು ಕೆಲವು ಶಿಷ್ಯರು ಭಾವಿಸಿ
ಕೊಂಡರು. 30ಯೇಸು ಕೊಟ್ಟ ರೊಟ್ಟಿಯನ್ನು ತೆಗೆದುಕೊಂಡ
ನಂತರ ಯೂದನು ಅಲ್ಲಿಂದ ಹೊರಟುಹೋದನು. ಆಗ
ರಾತ್ರಿಯಾಗಿತ್ತು.

## ತನ್ನ ಮರಣದ ಬಗ್ಗೆ ಯೇಸುವಿನ ಪ್ರಕಟನೆ

31ಯೂದನು ಹೊರಟುಹೋದ ಮೇಲೆ ಯೇಸು, ‘‘ಈಗ
ಮನುಷ್ಯಕುಮಾರನಿಗೆ ಮಹಿಮೆಯಾಗುವುದು. ಅಲ್ಲದೆ,
ಮನುಷ್ಯಕುಮಾರನ ಮೂಲಕ ದೇವರಿಗೂ ಮಹಿಮೆ
ಯಾಗುವುದು. 32ಆತನ ಮೂಲಕವಾಗಿ ದೇವರಿಗೆ ಮಹಿಮೆ
ಯಾಗುವುದರಿಂದ ತಕ್ಷಣವೇ ದೇವರ ಮೂಲಕವಾಗಿಯೂ
ಆತನಿಗೆ ಮಹಿಮೆಯಾಗುವುದು’’ ಎಂದನು.
33ಯೇಸು, ‘‘ನನ್ನ ಮಕ್ಕಳೇ, ಇನ್ನು ಸ್ವಲ್ಪ ಸಮಯ ಮಾತ್ರ
ನಾನು ನಿಮ್ಮೊಂದಿಗೆ ಇರುತ್ತೇನೆ. ನೀವು ನನಗಾಗಿ ಹುಡುಕುವಿರಿ.

---

**ನನ್ನೊಂದಿಗೆ … ಬಗೆದನು** ಕೀರ್ತನೆ 41:9

ನಾನು ಯೆಹೂದ್ಯರಿಗೆ ಹೇಳಿದ್ದನ್ನು ನಿಮಗೂ ಹೇಳುತ್ತೇನೆ.
ನಾನು ಹೋಗುವಲ್ಲಿಗೆ ನೀವು ಬರಲಾರಿರಿ.
34‘‘ನಾನು ನಿಮಗೆ ಹೊಸ ಆಜ್ಞೆಯನ್ನು ಕೊಡುತ್ತೇನೆ. ನೀವು
ಒಬ್ಬರನ್ನೊಬ್ಬರು ಪ್ರೀತಿಸಬೇಕು. 35ನಾನು ನಿಮ್ಮನ್ನು ಪ್ರೀತಿಸಿ
ದಂತೆಯೇ ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕು. ನೀವು
ಒಬ್ಬರನ್ನೊಬ್ಬರು ಪ್ರೀತಿಸಿದರೆ, ನೀವು ನನ್ನ ಶಿಷ್ಯರೆಂಬುದನ್ನು
ಎಲ್ಲಾ ಜನರು ತಿಳಿದುಕೊಳ್ಳುವರು’’ ಎಂದು ಹೇಳಿದನು.

### ಪೇತ್ರನ ವಿಶ್ವಾಸದ್ರೋಹದ ಮುನ್ಸೂಚನೆ

(ಮತ್ತಾಯ 26:31-35; ಮಾರ್ಕ 14:27-31; ಲೂಕ 22:31-34)

36ಸೀಮೋನ್ ಪೇತ್ರನು ಯೇಸುವಿಗೆ, ‘‘ಪ್ರಭುವೇ, ನೀನು
ಎಲ್ಲಿಗೆ ಹೋಗುತ್ತಿರುವೆ?’’ ಎಂದು ಕೇಳಿದನು.

ಯೇಸು, ‘‘ನಾನು ಹೋಗುವಲ್ಲಿಗೆ ಈಗ ನೀನು ಹಿಂಬಾಲಿಸಿ
ಕೊಂಡು ಬರಲಾರೆ. ಆದರೆ ಮುಂದೆ ನೀನು ಹಿಂಬಾಲಿಸಿ
ಕೊಂಡು ಬರುವೆ’’ ಎಂದು ಉತ್ತರಕೊಟ್ಟನು.
37ಪೇತ್ರನು, ‘‘ಪ್ರಭುವೇ, ಈಗ ನಾನು ನಿನ್ನನ್ನು ಹಿಂಬಾಲಿ
ಸಲು ಏಕಾಗದು? ನಿನಗೋಸ್ಕರ ಸಾಯುವುದಕ್ಕೂ ನನಗೆ
ಮನಸ್ಸಿದೆ!’’ ಎಂದು ಹೇಳಿದನು.
38ಯೇಸು, ‘‘ನೀನು ನನಗೋಸ್ಕರ ನಿನ್ನ ಪ್ರಾಣವನ್ನು
ನಿಜವಾಗಿಯೂ ಕೊಡುವಿಯಾ? ನಾನು ನಿನಗೆ ಸತ್ಯವನ್ನು
ಹೇಳುತ್ತೇನೆ. ನಾಳೆ ಮುಂಜಾನೆ ಕೋಳಿ ಕೂಗುವುದಕ್ಕಿಂತ
ಮುಂಚಿತವಾಗಿ ನೀನು ನನ್ನನ್ನು ತಿಳಿದಿಲ್ಲವೆಂದು ಮೂರು ಸಾರಿ
ಹೇಳುವೆ’’ ಎಂದು ಉತ್ತರ ಕೊಟ್ಟನು.

### ಶಿಷ್ಯರಿಗೆ ಯೇಸುವಿನ ಆದರಣೆ ಮಾತುಗಳು

14 ಯೇಸು, ‘‘ನಿಮ್ಮ ಹೃದಯವು ಕಳವಳಗೊಳ್ಳದಿರಲಿ.
ದೇವರಲ್ಲಿ ವಿಶ್ವಾಸವಿಡಿರಿ. ನನ್ನಲ್ಲಿಯೂ ವಿಶ್ವಾಸ
ವಿಡಿರಿ. 2ನನ್ನ ತಂದೆಯ ಮನೆಯಲ್ಲಿ ಅನೇಕ ಕೋಣೆಗಳಿವೆ.
ಅದು ಸತ್ಯವಲ್ಲದಿದ್ದರೆ, ನಾನು ನಿಮಗೆ ಹೇಳುತ್ತಿರಲಿಲ್ಲ. ನಾನು
ನಿಮಗೋಸ್ಕರ ಸ್ಥಳವನ್ನು ಸಿದ್ಧಪಡಿಸಲು ಅಲ್ಲಿಗೆ ಹೋಗು
ತ್ತಿದ್ದೇನೆ. 3ನಾನು ಹೋಗಿ ನಿಮಗೋಸ್ಕರ ಸ್ಥಳವನ್ನು
ಸಿದ್ಧಪಡಿಸಿದ ಮೇಲೆ ಹಿಂತಿರುಗಿ ಬಂದು, ನಿಮ್ಮನ್ನು ನನ್ನೊಂದಿಗೆ
ಕರೆದುಕೊಂಡು ಹೋಗುವೆನು, ಏಕೆಂದರೆ ನಾನಿರುವಲ್ಲಿ
ನೀವೂ ಇರಬೇಕು. 4ನಾನು ಹೋಗಲಿರುವ ಸ್ಥಳದ ದಾರಿಯು
ನಿಮಗೆ ತಿಳಿದಿದೆ’’ ಎಂದು ಹೇಳಿದನು.
5ತೋಮನು ಯೇಸುವಿಗೆ, ‘‘ಪ್ರಭುವೇ, ನೀನು ಹೋಗು
ತ್ತಿರುವುದು ಎಲ್ಲಿಗೆಂಬುದೇ ನಮಗೆ ಗೊತ್ತಿಲ್ಲ. ಹೀಗಿರಲು, ಆ
ದಾರಿಯನ್ನು ನಾವು ಹೇಗೆ ತಿಳಿದುಕೊಳ್ಳಲಾದೀತು?’’
ಎಂದನು.
6ಯೇಸು, ‘‘ನಾನೇ ಮಾರ್ಗವೂ ಸತ್ಯವೂ ಜೀವವೂ
ಆಗಿದ್ದೇನೆ. ತಂದೆಯ ಬಳಿಗೆ ಹೋಗಲು ನಾನೇ ಏಕೈಕ ಮಾರ್ಗ.
7ನೀವು ನನ್ನನ್ನು ನಿಜವಾಗಿಯೂ ತಿಳಿದಿದ್ದರೆ, ನನ್ನ ತಂದೆಯನ್ನು
ಸಹ ತಿಳಿದುಕೊಳ್ಳುತ್ತಿದ್ದಿರಿ. ಆದರೆ ಈಗ ನೀವು ತಂದೆಯನ್ನು
ತಿಳಿದಿದ್ದೀರಿ. ನೀವು ಆತನನ್ನು ನೋಡಿದ್ದೀರಿ’’ ಎಂದು
ಹೇಳಿದನು.
8ಫಿಲಿಪ್ಪನು ಯೇಸುವಿಗೆ, ‘‘ಪ್ರಭುವೇ, ನಮಗೆ ತಂದೆಯನ್ನು
ತೋರಿಸು. ನಮಗೆ ಅಷ್ಟೇ ಸಾಕು’’ ಎಂದು ಹೇಳಿದನು.
9ಯೇಸು, ‘‘ಫಿಲಿಪ್ಪನೇ, ನಾನು ಇಷ್ಟು ಕಾಲದಿಂದ
ನಿನ್ನೊಂದಿಗಿದ್ದರೂ ನೀನು ನನ್ನನ್ನು ತಿಳಿದುಕೊಳ್ಳಲಿಲ್ಲವೇ?
ನನ್ನನ್ನು ನೋಡಿದವನು ತಂದೆಯನ್ನು ಸಹ ನೋಡಿದವ
ನಾಗಿದ್ದಾನೆ. ಆದ್ದರಿಂದ, ‘ತಂದೆಯನ್ನು ನಮಗೆ ತೋರಿಸು’
ಎಂದು ಏಕೆ ಕೇಳುವಿರಿ? 10ನಾನು ತಂದೆಯಲ್ಲಿದ್ದೇನೆ ಮತ್ತು
ತಂದೆಯು ನನ್ನಲ್ಲಿದ್ದಾನೆ ಎಂದು ನೀವು ನಿಜವಾಗಿಯೂ
ನಂಬುವಿರಾ? ನಾನು ನಿಮಗೆ ಹೇಳುವ ಸಂಗತಿಗಳು ನನ್ನಿಂದಲೇ
ಬಂದಂಥವುಗಳಲ್ಲ. ತಂದೆಯು ನನ್ನಲ್ಲಿ ವಾಸವಾಗಿದ್ದಾನೆ ಮತ್ತು
ಆತನು ತನ್ನ ಕಾರ್ಯವನ್ನು ಮಾಡುತ್ತಿದ್ದಾನೆ. 11ನಾನು
ತಂದೆಯಲ್ಲಿದ್ದೇನೆ ಮತ್ತು ತಂದೆಯು ನನ್ನಲ್ಲಿದ್ದಾನೆ ಎಂಬ ನನ್ನ
ಮಾತನ್ನು ನಂಬಿರಿ. ಅಥವಾ ನಾನು ಮಾಡಿದ ಅದ್ಭುತ
ಕಾರ್ಯಗಳ ನಿಮಿತ್ತವಾದರೂ ನಂಬಿರಿ. 12ನಾನು ನಿಮಗೆ
ಸತ್ಯವನ್ನು ಹೇಳುತ್ತೇನೆ. ನನ್ನಲ್ಲಿ ನಂಬಿಕೆ ಇಡುವ ವ್ಯಕ್ತಿಯು
ನಾನು ಮಾಡಿದ ಕಾರ್ಯಗಳನ್ನೇ ಮಾಡುವನು. ಹೌದು ನಾನು
ಮಾಡುವ ಕಾರ್ಯಗಳಿಗಿಂತಲೂ ಹೆಚ್ಚು ದೊಡ್ಡ ಕಾರ್ಯ
ಗಳನ್ನು ಅವನು ಮಾಡುವನು. ಏಕೆಂದರೆ ನಾನು ತಂದೆಯ ಬಳಿಗೆ
ಹೋಗುತ್ತಿದ್ದೇನೆ. 13ಮತ್ತು ನೀವು ನನ್ನ ಹೆಸರಿನಲ್ಲಿ ಏನಾದರೂ
ಬೇಡಿಕೊಂಡರೆ, ನಾನು ನಿಮಗೋಸ್ಕರ ಅದನ್ನು ನೆರವೇರಿಸು
ವೆನು. ಆಗ ಮಗನ ಮೂಲಕವಾಗಿ ತಂದೆಗೆ ಮಹಿಮೆ ಆಗುವುದು.
14ನೀವು ನನ್ನ ಹೆಸರಿನಲ್ಲಿ ಏನಾದರೂ ಬೇಡಿಕೊಂಡರೆ, ನಾನು
ಅದನ್ನು ನೆರವೇರಿಸುವೆನು.

### ಪವಿತ್ರಾತ್ಮನನ್ನು ಕೊಡುವುದಾಗಿ ವಾಗ್ದಾನ

15‘‘ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ, ನಾನು
ಆಜ್ಞಾಪಿಸುವವುಗಳನ್ನು ಮಾಡುವಿರಿ. 16ನಾನು ತಂದೆಯನ್ನು
ಕೇಳಿಕೊಳ್ಳುವೆನು, ಆಗ ಆತನು ಬೇರೊಬ್ಬ ಸಹಾಯಕನನ್ನು
ನಿಮಗೆ ಕೊಡುವನು. ಆ ಸಹಾಯಕನು ಸದಾಕಾಲ ನಿಮ್ಮೊಂದಿ
ಗಿರುವನು.
17‘‘ಸತ್ಯದ ಆತ್ಮನೇ ಈ ಸಹಾಯಕನು. ಈ ಲೋಕವು
ಆತನನ್ನು ಸ್ವೀಕರಿಸಿಕೊಳ್ಳಲಾರದು. ಏಕೆಂದರೆ ಲೋಕವು
ಆತನನ್ನು ಕಾಣುವುದೂ ಇಲ್ಲ. ತಿಳಿದುಕೊಳ್ಳುವುದೂ ಇಲ್ಲ.
ಆದರೆ ನೀವು ಆತನನ್ನು ಬಲ್ಲಿರಿ. ಆತನು ನಿಮ್ಮೊಂದಿಗೆ ಮತ್ತು
ನಿಮ್ಮೊಳಗೆ ವಾಸಿಸುವವನಾಗಿದ್ದಾನೆ.
18‘‘ನಾನು ನಿಮ್ಮನ್ನು ತಂದೆತಾಯಿಗಳಿಲ್ಲದ ಮಕ್ಕಳಂತೆ
ಒಬ್ಬಂಟಿಗರನ್ನಾಗಿ ಬಿಟ್ಟುಹೋಗುವುದಿಲ್ಲ. ನಾನು ನಿಮ್ಮ ಬಳಿಗೆ
ಬರುತ್ತೇನೆ. 19ಇನ್ನು ಸ್ವಲ್ಪ ಕಾಲವಾದ ಮೇಲೆ ಈ ಲೋಕದ
ಜನರು ನನ್ನನ್ನು ಇನ್ನೆಂದಿಗೂ ಕಾಣುವುದಿಲ್ಲ. ಆದರೆ ನೀವು
ನನ್ನನ್ನು ನೋಡುವಿರಿ. ನಾನು ಜೀವಿಸುವುದರಿಂದ ನೀವೂ
ಜೀವಿಸುವಿರಿ. 20ನಾನು ನನ್ನ ತಂದೆಯಲ್ಲಿರುವುದನ್ನು ನೀವು ಆ
ದಿನದಂದು ತಿಳಿದುಕೊಳ್ಳುವಿರಿ. ನೀವು ನನ್ನಲ್ಲಿರುವುದನ್ನೂ
ನಾನು ನಿಮ್ಮಲ್ಲಿರುವುದನ್ನೂ ತಿಳಿದುಕೊಳ್ಳುವಿರಿ. 21ಒಬ್ಬನು
ನನ್ನ ಆಜ್ಞೆಗಳನ್ನು ಸ್ವೀಕರಿಸಿಕೊಂಡು ಅವುಗಳಿಗೆ ವಿಧೇಯ
ನಾದರೆ ಅವನು ನನ್ನನ್ನು ನಿಜವಾಗಿಯೂ ಪ್ರೀತಿಸುವವ
ನಾಗಿದ್ದಾನೆ. ಅಲ್ಲದೆ ನನ್ನನ್ನು ಪ್ರೀತಿಸುವವನನ್ನು ನನ್ನ
ತಂದೆಯೂ ಪ್ರೀತಿಸುವನು. ಮತ್ತು ನಾನೂ ಅವನನ್ನು ಪ್ರೀತಿಸು
ವೆನು. ನಾನು ಅವನಿಗೆ ನನ್ನನ್ನೇ ತೋರ್ಪಡಿಸಿಕೊಳ್ಳುವೆನು’’
ಎಂದು ಉತ್ತರಕೊಟ್ಟನು.

22ಆಗ ಯೂದನು (ಇಸ್ಕರಿಯೋತ ಯೂದನಲ್ಲ),
‘‘ಪ್ರಭುವೇ, ನೀನು ನಿನ್ನನ್ನು ಈ ಲೋಕಕ್ಕೆ ತೋರ್ಪಡಿಸಿ
ಕೊಳ್ಳದೆ ನಮಗೆ ಮಾತ್ರ ತೋರ್ಪಡಿಸಿಕೊಳ್ಳಬೇಕೆಂದಿರು
ವುದೇಕೆ?’’ ಎಂದು ಕೇಳಿದನು.
23ಯೇಸು ಹೀಗೆ ಉತ್ತರ ಕೊಟ್ಟನು: ‘‘ನನ್ನನ್ನು ಪ್ರೀತಿಸು
ವವನು ನನ್ನ ಉಪದೇಶಕ್ಕೆ ವಿಧೇಯನಾಗುವನು. ನನ್ನ
ತಂದೆಯು ಅವನನ್ನು ಪ್ರೀತಿಸುವನು. ನನ್ನ ತಂದೆ ಮತ್ತು ನಾನು
ಅವನ ಬಳಿಗೆ ಬಂದು ಅವನೊಂದಿಗೆ ವಾಸಿಸುವೆವು. 24ಆದರೆ
ನನ್ನನ್ನು ಪ್ರೀತಿಸದವನು, ನನ್ನ ಉಪದೇಶಕ್ಕೆ ವಿಧೇಯನಾಗು
ವುದಿಲ್ಲ. ನೀವು ಕೇಳುತ್ತಿರುವ ಈ ಉಪದೇಶವು ನಿಜವಾಗಿಯೂ
ನನ್ನದಲ್ಲ, ನನ್ನನ್ನು ಕಳುಹಿಸಿರುವ ನನ್ನ ತಂದೆಯದು. 25ನಾನು
ನಿಮ್ಮೊಂದಿಗೆ ಇರುವಾಗಲೇ ಈ ಸಂಗತಿಗಳನ್ನೆಲ್ಲಾ ನಿಮಗೆ ಹೇಳಿ
ದ್ದೇನೆ.
26‘‘ಆದರೆ ಆ ಸಹಾಯಕನು ನಿಮಗೆ ಪ್ರತಿಯೊಂದನ್ನೂ
ಉಪದೇಶಿಸುವನು. ನಾನು ನಿಮಗೆ ಹೇಳಿದ ಸಂಗತಿಗಳನ್ನೆಲ್ಲಾ
ಆ ಸಹಾಯಕನು ನಿಮ್ಮ ನೆನಪಿಗೆ ತರುವನು. ತಂದೆಯು ನನ್ನ
ಹೆಸರಿನಲ್ಲಿ ಕಳುಹಿಸಿಕೊಡುವ ಪವಿತ್ರಾತ್ಮನೇ ಆ ಸಹಾಯಕನು.
27‘‘ನಾನು ನಿಮಗೆ ಶಾಂತಿಯನ್ನು ಬಿಟ್ಟುಹೋಗುತ್ತೇನೆ.
ನಾನು ನಿಮಗೆ ನನ್ನ ಸ್ವಂತ ಶಾಂತಿಯನ್ನು ನೀಡುತ್ತೇನೆ. ಈ
ಲೋಕವು ಕೊಡುವದಕ್ಕಿಂತ ಭಿನ್ನವಾದ ರೀತಿಯಲ್ಲಿ ನಾನು
ನಿಮಗೆ ಶಾಂತಿಯನ್ನು ಕೊಡುತ್ತೇನೆ. ಆದ್ದರಿಂದ ನಿಮ್ಮ
ಹೃದಯವು ಕಳವಳಗೊಳ್ಳದಿರಲಿ. ಭಯಪಡಬೇಡಿರಿ. 28‘ನಾನು
ಹೊರಟು ಹೋಗುತ್ತೇನೆ, ಆದರೆ ನಿಮ್ಮ ಬಳಿಗೆ ಹಿಂತಿರುಗಿ
ಬರುತ್ತೇನೆ’ ಎಂದು ನಾನು ನಿಮಗೆ ಹೇಳಿದ್ದನ್ನು ನೀವು
ಕೇಳಿದ್ದೀರಿ. ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ, ನಾನು
ತಂದೆಯ ಬಳಿಗೆ ಮರಳಿಹೋಗುವುದರ ಬಗ್ಗೆ
ಸಂತೋಷಪಡುತ್ತಿದ್ದಿರಿ. ಏಕೆಂದರೆ ತಂದೆಯು ನನಗಿಂತಲೂ
ದೊಡ್ಡವನು. 29ಇದು ಸಂಭವಿಸುವುದಕ್ಕಿಂತ ಮೊದಲೇ ನಾನು
ನಿಮಗೆ ಇದನ್ನು ಈಗಲೇ ತಿಳಿಸಿದ್ದೇನೆ. ಹೀಗಿರಲು, ಇದು
ಸಂಭವಿಸುವಾಗ ನೀವು ನಂಬುವಿರಿ. 30ನಾನು ನಿಮ್ಮೊಂದಿಗೆ
ಇನ್ನು ಬಹಳ ಹೊತ್ತು ಮಾತಾಡುವುದಿಲ್ಲ. ಈ ಲೋಕದ
ಅಧಿಪತಿಯು (ಸೈತಾನನು) ಬರುತ್ತಿದ್ದಾನೆ. ಅವನಿಗೆ ನನ್ನ ಮೇಲೆ
ಯಾವ ಅಧಿಕಾರವೂ ಇಲ್ಲ. 31ಆದರೆ ನಾನು ತಂದೆಯನ್ನು
ಪ್ರೀತಿಸುತ್ತೇನೆ ಎಂಬುದನ್ನು ಈ ಲೋಕವು ತಿಳಿದುಕೊಳ್ಳಬೇಕು.
ಆದ್ದರಿಂದ ತಂದೆಯು ನನಗೆ ಹೇಳಿರುವುದನ್ನೇ ನಾನು
ಮಾಡುತ್ತೇನೆ. ಬನ್ನಿ, ನಾವು ಇಲ್ಲಿಂದ ಹೋಗೋಣ.’’

## ಯೇಸು ದ್ರಾಕ್ಷಿಬಳ್ಳಿಯಂತಿದ್ದಾನೆ

15 ‘‘ನಾನು ನಿಜವಾದ ದ್ರಾಕ್ಷಿಬಳ್ಳಿ. ನನ್ನ ತಂದೆ
ತೋಟಗಾರನು. 2ಫಲಕೊಡದಿರುವ ಪ್ರತಿಯೊಂದು
ಕವಲನ್ನು ಆತನು ಕತ್ತರಿಸಿ ಹಾಕುವನು. ಫಲಕೊಡುವ ಕವಲು
ಇನ್ನೂ ಹೆಚ್ಚು ಫಲಕೊಡುವಂತೆ ಅದನ್ನು ಶುದ್ಧಗೊಳಿಸುವನು.
3ನಾನು ನಿಮಗೆ ಹೇಳಿದ ಉಪದೇಶದಿಂದ ನೀವು ಈಗಾಗಲೇ
ಶುದ್ಧರಾಗಿದ್ದೀರಿ.
4‘‘ನೀವು ನನ್ನಲ್ಲಿ ನೆಲೆಗೊಂಡಿರಿ, ಆಗ ನಾನೂ ನಿಮ್ಮಲ್ಲಿ
ನೆಲೆಗೊಂಡಿರುವೆನು. ಯಾವ ಕವಲೂ ತನ್ನಷ್ಟಕ್ಕೆ ತಾನೇ
ಫಲಕೊಡಲಾರದು. ಅದು ದ್ರಾಕ್ಷಿಬಳ್ಳಿಯಲ್ಲಿ ನೆಲೆಗೊಂಡಿರ
ಬೇಕು. ಇದು ನಿಮಗೂ ಅನ್ವಯಿಸುತ್ತದೆ. ನೀವು ನಿಮ್ಮಷ್ಟಕ್ಕೇ
ಫಲಕೊಡಲಾರಿರಿ. ನೀವು ನನ್ನಲ್ಲಿ ನೆಲೆಗೊಂಡಿರಬೇಕು.
5‘‘ನಾನೇ ದ್ರಾಕ್ಷಿಬಳ್ಳಿ; ನೀವೇ ಕವಲುಗಳು. ಒಬ್ಬನು ನನ್ನಲ್ಲಿ
ನೆಲೆಗೊಂಡಿದ್ದರೆ ಮತ್ತು ನಾನು ಅವನಲ್ಲಿ ನೆಲೆಗೊಂಡಿದ್ದರೆ, ಆಗ
ಅವನು ಹೆಚ್ಚು ಫಲಕೊಡುವನು. ಆದರೆ ಅವನು ನನ್ನನ್ನು ಬಿಟ್ಟು
ಏನೂ ಮಾಡಲಾರನು. 6ನನ್ನಲ್ಲಿ ನೆಲೆಗೊಂಡಿಲ್ಲದವನು
ಹೊರಗೆ ಬಿಸಾಡಲ್ಪಟ್ಟ ಕವಲಿನಂತಿರುವನು. ಆ ಕವಲು ಸತ್ತು
ಹೋಗುವುದು. ಸತ್ತ ಕವಲುಗಳನ್ನು ಜನರು ಒಟ್ಟುಗೂಡಿಸಿ
ಬೆಂಕಿಯೊಳಕ್ಕೆ ಎಸೆದು ಸುಟ್ಟುಹಾಕುವರು.
7‘‘ನೀವು ನನ್ನಲ್ಲಿಯೂ ನನ್ನ ವಾಕ್ಯಗಳು ನಿಮ್ಮಲ್ಲಿಯೂ
ನೆಲೆಗೊಂಡಿದ್ದರೆ ಏನು ಬೇಕಾದರೂ ಕೇಳಿಕೊಳ್ಳಿರಿ, ಅದು
ನಿಮಗೆ ದೊರೆಯುವುದು. 8ನೀವು ಬಹಳ ಫಲಕೊಟ್ಟು, ನೀವೇ
ನನ್ನ ಶಿಷ್ಯರೆಂಬುದನ್ನು ತೋರಿಸಬೇಕು. ಇದರಿಂದ ನನ್ನ ತಂದೆಗೆ
ಮಹಿಮೆ ಆಗುವುದು. 9ತಂದೆಯು ನನ್ನನ್ನು ಪ್ರೀತಿಸಿದಂತೆ
ನಾನೂ ನಿಮ್ಮನ್ನು ಪ್ರೀತಿಸಿದೆನು. ಈಗ ನನ್ನ ಪ್ರೀತಿಯಲ್ಲಿ ನೆಲೆ
ಗೊಂಡಿರಿ. 10ನಾನು ನನ್ನ ತಂದೆಯ ಆಜ್ಞೆಗಳಿಗೆ ವಿಧೇಯ
ನಾಗಿದ್ದು ಆತನ ಪ್ರೀತಿಯಲ್ಲಿ ನೆಲೆಗೊಂಡಿದ್ದೇನೆ. ಅದೇ
ರೀತಿಯಲ್ಲಿ, ನೀವು ನನ್ನ ಆಜ್ಞೆಗಳಿಗೆ ವಿಧೇಯರಾದರೆ, ನೀವು
ನನ್ನ ಪ್ರೀತಿಯಲ್ಲಿ ನೆಲೆಗೊಂಡಿರುವಿರಿ. 11ನನಗಿರುವ ಆನಂದ
ವನ್ನು ನೀವೂ ಹೊಂದಿಕೊಳ್ಳಬೇಕೆಂದು ನಾನು ನಿಮಗೆ ಈ
ಸಂಗತಿಗಳನ್ನು ಹೇಳಿದ್ದೇನೆ. ನಿಮ್ಮ ಆನಂದವು ಪರಿಪೂರ್ಣವಾದ
ಆನಂದವಾಗಿರಬೇಕೆಂದು ನಾನು ಬಯಸುತ್ತೇನೆ. 12ನಾನು
ನಿಮ್ಮನ್ನು ಪ್ರೀತಿಸಿದಂತೆ ನೀವೂ ಒಬ್ಬರನ್ನೊಬ್ಬರು ಪ್ರೀತಿಸ
ಬೇಕೆಂಬುದೇ ನಾನು ನಿಮಗೆ ಕೊಡುವ ಆಜ್ಞೆಯಾಗಿದೆ.
13ಗೆಳೆಯರಿಗಾಗಿ ಸ್ವಂತ ಪ್ರಾಣವನ್ನೇ ಕೊಡುವ ಪ್ರೀತಿಗಿಂತ
ಮಿಗಿಲಾದ ಪ್ರೀತಿ ಯಾರಲ್ಲೂ ಇಲ್ಲ. 14ನಾನು ಹೇಳುವ
ಕಾರ್ಯಗಳನ್ನು ನೀವು ಮಾಡಿದರೆ, ನೀವು ನನ್ನ ಸ್ನೇಹಿತರು.
15ಈಗ ನಾನು ನಿಮ್ಮನ್ನು ನನ್ನ ಸೇವಕರುಗಳೆಂದು
ಕರೆಯುವುದಿಲ್ಲ. ಯಜಮಾನನ ಕೆಲಸಕಾರ್ಯಗಳು ಸೇವಕನಿಗೆ
ತಿಳಿದಿರುವುದಿಲ್ಲ. ಆದರೆ ಈಗ ನಾನು ನಿಮ್ಮನ್ನು ನನ್ನ ಗೆಳೆಯ
ರೆಂದು ಕರೆಯುತ್ತೇನೆ, ಏಕೆಂದರೆ ನನ್ನ ತಂದೆಯಿಂದ ಕೇಳಿದ
ಪ್ರತಿಯೊಂದನ್ನೂ ನಾನು ನಿಮಗೆ ಹೇಳಿದ್ದೇನೆ. 16ನೀವು ನನ್ನನ್ನು
ಆರಿಸಿಕೊಳ್ಳಲಿಲ್ಲ; ನಾನು ನಿಮ್ಮನ್ನು ಆರಿಸಿಕೊಂಡೆನು. ನೀವು
ಹೊರಟುಹೋಗಿ ಫಲಕೊಡಬೇಕು. ಇದೇ ನಾನು ನಿಮಗೆ
ಕೊಟ್ಟಿರುವ ಕೆಲಸ. ಈ ಫಲವು ನಿಮ್ಮ ಜೀವನದಲ್ಲಿ ಶಾಶ್ವತ
ವಾಗಿರಲಿ ಎಂಬುದೇ ನನ್ನ ಬಯಕೆ. ಹೀಗಿರಲಾಗಿ, ನೀವು ನನ್ನ
ಹೆಸರಿನಲ್ಲಿ ಏನು ಕೇಳಿಕೊಂಡರೂ ತಂದೆಯು ಅದನ್ನು ನಿಮಗೆ
ಕೊಡುವನು. 17ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬುದೇ
ನನ್ನ ಆಜ್ಞೆ.

## ಯೇಸು ತನ್ನ ಶಿಷ್ಯರಿಗೆ ನೀಡಿದ ಎಚ್ಚರಿಕೆ

18‘‘ಈ ಲೋಕವು ನಿಮ್ಮನ್ನು ದ್ವೇಷ ಮಾಡಿದರೆ, ಅದು
ಮೊದಲು ನನ್ನನ್ನೇ ದ್ವೇಷ ಮಾಡಿದ್ದನ್ನು ನೆನಪಿಗೆ ತಂದುಕೊಳ್ಳಿರಿ.
19ನೀವು ಈ ಲೋಕಕ್ಕೆ ಸೇರಿದವರಾಗಿದ್ದರೆ, ಈ ಲೋಕವು ತನ್ನ
ಸ್ವಂತ ಜನರನ್ನು ಪ್ರೀತಿಸುವಂತೆ ನಿಮ್ಮನ್ನೂ ಪ್ರೀತಿಸುತ್ತಿತ್ತು. ಆದರೆ
ನಾನು ನಿಮ್ಮನ್ನು ಈ ಲೋಕದೊಳಗಿಂದ ಆರಿಸಿಕೊಂಡಿದ್ದೇನೆ.
ಆದ್ದರಿಂದ ನೀವು ಈ ಲೋಕಕ್ಕೆ ಸೇರಿದವರಲ್ಲ. ಆದಕಾರಣ

ಈ ಲೋಕವು ನಿಮ್ಮನ್ನು ದ್ವೇಷಿಸುತ್ತದೆ. [20]ಸೇವಕನು ತನ್ನ ಒಡೆಯನಿಗಿಂತ ದೊಡ್ಡವನಲ್ಲ ಎಂದು ನಾನು ನಿಮಗೆ ಹೇಳಿದ ಮಾತನ್ನು ಜ್ಞಾಪಿಸಿಕೊಳ್ಳಿ. ಜನರು ನನ್ನನ್ನು ಹಿಂಸಿಸಿದಂತೆ ನಿಮ್ಮನ್ನೂ ಹಿಂಸಿಸುವವರು ಮತ್ತು ನನ್ನ ಉಪದೇಶಕ್ಕೆ ವಿಧೇಯರಾದರೆ ನಿಮ್ಮ ಉಪದೇಶಕ್ಕೂ ವಿಧೇಯರಾಗುವರು. [21]ಜನರು ನನ್ನ ದೆಸೆಯಿಂದ ಇದನ್ನೆಲ್ಲಾ ನಿಮಗೆ ಮಾಡುವರು. ನನ್ನನ್ನು ಕಳುಹಿಸಿದಾತನನ್ನು ಅವರು ತಿಳಿದಿಲ್ಲ. [22]ನಾನು ಬಂದು ಈ ಲೋಕದ ಜನರೊಂದಿಗೆ ಮಾತಾಡಿಲ್ಲದಿದ್ದರೆ, ಅವರನ್ನು ಪಾಪದೋಷಿಗಳೆಂದು ಹೇಳಲಾಗುತ್ತಿರಲಿಲ್ಲ. ಆದರೆ ಈಗ ನಾನು ಅವರೊಂದಿಗೆ ಮಾತಾಡಿದ್ದೇನೆ. ಆದ್ದರಿಂದ ತಮ್ಮ ಪಾಪಕ್ಕೆ ಅವರಿಗೆ ಯಾವ ನೆವವೂ ಇಲ್ಲ. [23]ನನ್ನನ್ನು ದ್ವೇಷಿಸುವವನು ನನ್ನ ತಂದೆಯನ್ನೂ ದ್ವೇಷಿಸುವವನಾಗಿದ್ದಾನೆ. [24]ಬೇರೆ ಯಾವ ವ್ಯಕ್ತಿಯೂ ಹಿಂದೆಂದೂ ಮಾಡಿಲ್ಲದ ಕಾರ್ಯಗಳನ್ನು ನಾನು ಆ ಜನರ ಮಧ್ಯದಲ್ಲಿ ಮಾಡಿದೆನು. ನಾನು ಆ ಕಾರ್ಯಗಳನ್ನು ಮಾಡಿಲ್ಲದಿದ್ದರೆ, ಅವರನ್ನು ಪಾಪದೋಷಿಗಳೆಂದು ಹೇಳಲಾಗುತ್ತಿರಲಿಲ್ಲ. ಆದರೆ ನಾನು ಮಾಡಿದ ಆ ಕಾರ್ಯಗಳನ್ನು ಅವರು ನೋಡಿದ್ದಾರೆ. ಹೀಗಿದ್ದರೂ ಅವರು ನನ್ನನ್ನೂ ನನ್ನ ತಂದೆಯನ್ನೂ ದ್ವೇಷಿಸುತ್ತಾರೆ. [25]‘ಅವರು ನನ್ನನ್ನು ನಿಷ್ಕಾರಣವಾಗಿ ದ್ವೇಷಿಸಿದರು’ * ಎಂದು ಅವರ ಧರ್ಮಶಾಸ್ತ್ರದಲ್ಲಿ ಬರೆದಿರುವ ಮಾತು ನಿಜವಾಗಲೆಂದು ಹೀಗಾಯಿತು.

[26]“ನಾನು ತಂದೆಯ ಬಳಿಯಿಂದ ಸಹಾಯಕನನ್ನು ನಿಮಗೆ ಕಳುಹಿಸಿಕೊಡುವೆನು. ತಂದೆಯ ಬಳಿಯಿಂದ ಬರುವ ಆ ಸಹಾಯಕನು ಸತ್ಯದ ಆತ್ಮನಾಗಿದ್ದಾನೆ. ಆತನು ಬಂದಾಗ ನನ್ನ ಬಗ್ಗೆ ನಿಮಗೆ ತಿಳಿಸುವನು. [27]ಮತ್ತು ನೀವು ಮೊದಲಿಂದಲೂ ನನ್ನೊಂದಿಗೆ ಇದ್ದಕಾರಣ ನೀವು ಸಹ ನನ್ನ ಬಗ್ಗೆ ಜನರಿಗೆ ಹೇಳುವಿರಿ.

16 “ಜನರು ನಿಮ್ಮ ನಂಬಿಕೆಯನ್ನು ನಾಶಮಾಡಲಾಗದಂತೆ ನಾನು ಈ ಸಂಗತಿಗಳನ್ನೆಲ್ಲಾ ನಿಮಗೆ ಹೇಳಿದ್ದೇನೆ. [2]ಜನರು ನಿಮ್ಮನ್ನು ತಮ್ಮ ಸಭಾಮಂದಿರಗಳಿಂದ ಬಹಿಷ್ಕರಿಸುವರು. ಹೌದು, ನಿಮ್ಮನ್ನು ಕೊಂದರೆ ದೇವರ ಸೇವೆ ಮಾಡಿದಂತಾಗುವುದು ಎಂದು ಜನರು ಯೋಚಿಸುವ ಕಾಲ ಬರಲಿದೆ. [3]ಜನರು ತಂದೆಯನ್ನು ಮತ್ತು ನನ್ನನ್ನು ತಿಳಿದಿಲ್ಲದ ಕಾರಣ ಇವುಗಳನ್ನು ಮಾಡುವರು. [4]ಈಗ ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದೇನೆ. ಹೀಗಿರಲು, ಈ ಸಂಗತಿಗಳೆಲ್ಲಾ ನೆರವೇರುವ ಕಾಲ ಬಂದಾಗ ನನ್ನ ಎಚ್ಚರಿಕೆಯ ಮಾತುಗಳನ್ನು ನೀವು ಜ್ಞಾಪಿಸಿಕೊಳ್ಳುವಿರಿ.

### ಪವಿತ್ರಾತ್ಮನ ಕಾರ್ಯ

“ನಾನು ಈ ಸಂಗತಿಗಳನ್ನೆಲ್ಲಾ ನಿಮಗೆ ಆರಂಭದಲ್ಲೇ ತಿಳಿಸಲಿಲ್ಲ. ಏಕೆಂದರೆ, ಆಗ ನಾನು ನಿಮ್ಮ ಸಂಗಡವಿದ್ದೆನು. [5]ಈಗಲಾದರೊ, ನನ್ನನ್ನು ಕಳುಹಿಸಿದಾತನ ಬಳಿಗೆ ನಾನು ಹೋಗುತ್ತಿದ್ದೇನೆ. ಆದರೆ ನಿಮ್ಮಲ್ಲಿ ಒಬ್ಬರಾದರೂ, ‘ನೀನು ಎಲ್ಲಿಗೆ ಹೋಗುತ್ತಿರುವೆ?’ ಎಂದು ನನ್ನನ್ನು ಕೇಳಲಿಲ್ಲ. [6]ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದರಿಂದ ನಿಮ್ಮ ಹೃದಯಗಳು ದುಃಖದಿಂದ ತುಂಬಿಹೋಗಿವೆ. [7]ಆದರೆ ನಾನು ನಿಮಗೆ ಸತ್ಯವನ್ನೇ ಹೇಳುತ್ತೇನೆ. ನಾನು ಹೋಗುವುದು ನಿಮ್ಮ ಒಳ್ಳೆಯದಕ್ಕಾಗಿಯೇ. ಏಕೆಂದರೆ ನಾನು ಹೋಗಿ ಸಹಾಯಕನನ್ನು ನಿಮ್ಮ ಬಳಿಗೆ ಕಳುಹಿಸುವೆನು. ನಾನು ಹೋಗದಿದ್ದರೆ, ಸಹಾಯಕನು ನಿಮ್ಮ ಬಳಿಗೆ ಬರುವುದಿಲ್ಲ. [8]ಸಹಾಯಕನು ಬಂದು ಪಾಪ, ನೀತಿ, ನ್ಯಾಯತೀರ್ಪು ಈ ವಿಷಯಗಳ ಬಗ್ಗೆ ಲೋಕಕ್ಕೆ ತಿಳಿಸಿಕೊಡುವನು. [9]ನನ್ನನ್ನು ನಂಬದಿರುವುದರಿಂದ ಜನರಲ್ಲಿ ಪಾಪವಿದೆಯೆಂದು ಆ ಸಹಾಯಕನು ನಿರೂಪಿಸುವನು. [10]ನಾನು ತಂದೆಯ ಬಳಿಗೆ ಹೋಗುವುದರಿಂದ ನೀತಿಯ ವಿಷಯವಾಗಿಯೂ ಆತನು ಜನರಿಗೆ ನಿರೂಪಿಸುವನು. ಇನ್ನು ಮೇಲೆ ನೀವು ನನ್ನನ್ನು ನೋಡುವುದಿಲ್ಲ. [11]ನ್ಯಾಯತೀರ್ಪಿನ ಕುರಿತಾದ ಸತ್ಯವನ್ನು ಆ ಸಹಾಯಕನು ಈ ಲೋಕಕ್ಕೆ ಸಾಧರಪಡಿಸುವನು, ಏಕೆಂದರೆ ಈ ಲೋಕದ ಅಧಿಪತಿಗೆ ಈಗಾಗಲೇ ನ್ಯಾಯತೀರ್ಪಾಗಿದೆ.

[12]“ನಾನು ನಿಮಗೆ ತಿಳಿಸಬೇಕಾದ ಇನ್ನೂ ಅನೇಕ ಸಂಗತಿಗಳಿವೆ. ಆದರೆ ಈಗ ಆ ಸಂಗತಿಗಳನ್ನು ಸ್ವೀಕರಿಸಿಕೊಳ್ಳಲು ನಿಮಗೆ ಬಹು ಕಷ್ಟವಾಗಬಹುದು. [13]ಆದರೆ ಸತ್ಯದ ಆತ್ಮನು ಬಂದಾಗ, ಆತನು ನಿಮ್ಮನ್ನು ಸಕಲ ವಿಷಯದಲ್ಲಿಯೂ ಸತ್ಯಕ್ಕೆ ನಡೆಸುವನು. ಸತ್ಯದ ಆತ್ಮನು ಹೇಳುವುದು ಆತನ ಸ್ವಂತ ಮಾತುಗಳಲ್ಲ. ತಾನು ಕೇಳಿದ್ದನ್ನು ಮಾತ್ರ ಆತನು ಹೇಳುತ್ತಾನೆ. ಸಂಭವಿಸಲಿರುವ ಸಂಗತಿಗಳನ್ನು ಆತನು ನಿಮಗೆ ತಿಳಿಸುತ್ತಾನೆ. [14]ಸತ್ಯದ ಆತ್ಮನು ನನ್ನಿಂದಲೇ ವಿಷಯಗಳನ್ನು ತೆಗೆದುಕೊಂಡು ನಿಮಗೆ ತಿಳಿಸುವುದರ ಮೂಲಕ ನನ್ನನ್ನು ಮಹಿಮೆಪಡಿಸುವನು. [15]ನನ್ನ ತಂದೆಗೆ ಇರುವುದೆಲ್ಲಾ ನನ್ನವೇ. ಆದಕಾರಣ, ಪವಿತ್ರಾತ್ಮನು ನನ್ನಿಂದಲೇ ವಿಷಯಗಳನ್ನು ತೆಗೆದುಕೊಂಡು, ನಿಮಗೆ ತಿಳಿಸುತ್ತಾನೆ ಎಂದು ನಿಮಗೆ ಹೇಳಿದೆನು.

### ದುಃಖವು ಸಂತೋಷವಾಗುವುದು

[16]“ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಅನಂತರ ಸ್ವಲ್ಪಕಾಲವಾದ ಮೇಲೆ ನೀವು ನನ್ನನ್ನು ಮತ್ತೆ ನೋಡುವಿರಿ.”

[17]ಶಿಷ್ಯರಲ್ಲಿ ಕೆಲವರು, “‘ಸ್ವಲ್ಪಕಾಲದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಆದರೆ ಅನಂತರ ಸ್ವಲ್ಪಕಾಲವಾದ ಬಳಿಕ ನನ್ನನ್ನು ಮತ್ತೆ ನೋಡುವಿರಿ. ಏಕೆಂದರೆ ನಾನು ತಂದೆಯ ಬಳಿಗೆ ಹೋಗುತ್ತಿದ್ದೇನೆ’ ಎಂದು ಆತನು ಹೇಳಿದ್ದರ ಅರ್ಥವೇನು?” ಎಂದು ಒಬ್ಬರಿಗೊಬ್ಬರು ಮಾತಾಡಿಕೊಂಡರು. [18]ಶಿಷ್ಯರು, “‘ಸ್ವಲ್ಪಕಾಲ’ ಎಂದರೇನು? ಆತನ ಮಾತೇ ನಮಗೆ ಅರ್ಥವಾಗುತ್ತಿಲ್ಲ” ಎಂದು ಒಬ್ಬರನ್ನೊಬ್ಬರು ಕೇಳತೊಡಗಿದರು.

[19]ಶಿಷ್ಯರು ಇದರ ಬಗ್ಗೆ ತನ್ನನ್ನು ಕೇಳಬೇಕೆಂದಿದ್ದಾರೆ ಎಂಬುದು ಯೇಸುವಿಗೆ ತಿಳಿದಿತ್ತು. ಆದ್ದರಿಂದ ಆತನು, ‘ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ಕಾಣುವುದಿಲ್ಲ. ಆದರೆ ಅನಂತರ ಸ್ವಲ್ಪಕಾಲವಾದ ಬಳಿಕ ನೀವು ನನ್ನನ್ನು ನೋಡುವಿರಿ’ ಎಂದು ನಾನು ಹೇಳಿದ್ದರ ಅರ್ಥವೇನೆಂದು ನೀವು ಒಬ್ಬರನ್ನೊಬ್ಬರು ಕೇಳುತ್ತಿದ್ದೀರಾ? [20]ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ಅಳುವಿರಿ, ದುಃಖಪಡುವಿರಿ. ಆದರೆ ಲೋಕವು ಸಂತೋಷಪಡುವುದು. ನೀವು ದುಃಖಪಡುವಿರಿ ಆದರೆ ನಿಮ್ಮ ದುಃಖವು ಆನಂದವಾಗುವುದು. [21]ಗರ್ಭಿಣಿ ಸ್ತ್ರೀಯು ಪ್ರಸವಿಸುವ ಗಳಿಗೆ ಬಂದಾಗ ವೇದನೆಪಡುತ್ತಾಳೆ. ಮಗುವು ಜನಿಸಿದಾಗ, ಲೋಕದಲ್ಲಿ ಮಗುವೊಂದು ಜನಿಸಿತೆಂಬ

---

**ಅವರು … ದ್ವೇಷಿಸಿದರು** ಕೀರ್ತನೆ 35:19; 69:4

ಸಂತೋಷದಿಂದ ಆ ವೇದನೆಯನ್ನು ಮರೆತುಬಿಡುತ್ತಾಳೆ. 22ಇದು ನಿಮಗೂ ಅನ್ವಯಿಸುತ್ತದೆ. ಈಗ ನೀವು ದುಃಖದಿಂದಿದ್ದೀರಿ. ಆದರೆ ನಾನು ನಿಮ್ಮನ್ನು ಮತ್ತೆ ನೋಡಿದಾಗ ಹರ್ಷಿಸುವಿರಿ. ಆ ಹರ್ಷವನ್ನು ಯಾರೂ ನಿಮ್ಮಿಂದ ಕಸಿದುಕೊಳ್ಳಲಾರರು. 23ಆ ದಿನದಲ್ಲಿ ನೀವು ನನಗೆ ಯಾವ ಪ್ರಶ್ನೆಯನ್ನೂ ಕೇಳುವುದಿಲ್ಲ. ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ. ನೀವು ನನ್ನ ಹೆಸರಿನಲ್ಲಿ ಏನು ಕೇಳಿಕೊಂಡರೂ ತಂದೆಯು ಅದನ್ನು ನಿಮಗೆ ಕೊಡುವನು. 24ನೀವು ನನ್ನ ಹೆಸರಿನಲ್ಲಿ ಏನೂ ಕೇಳಿಕೊಳ್ಳಲಿಲ್ಲ. ಕೇಳಿರಿ, ಆಗ ನಿಮಗೆ ದೊರೆಯುವುದು. ಮತ್ತು ನಿಮ್ಮ ಆನಂದವು ಪರಿಪೂರ್ಣವಾಗುವುದು.

### ಲೋಕದ ಮೇಲೆ ವಿಜಯ

25‘‘ನಾನು ನಿಮಗೆ ಈ ಸಂಗತಿಗಳನ್ನು ಸಾಮ್ಯಗಳ ರೂಪದಲ್ಲಿ ತಿಳಿಸಿದೆನು. ಆದರೆ ಸಮಯವು ಬರಲಿದೆ. ಆಗ ನಾನು ಸಾಮ್ಯಗಳನ್ನು ಬಳಸದೆ ನನ್ನ ತಂದೆಯ ಬಗ್ಗೆ ಸರಳವಾದ ಮಾತುಗಳಲ್ಲಿ ತಿಳಿಸುವೆನು. 26ಆಗ ನೀವು ನನ್ನ ಹೆಸರಿನಲ್ಲಿ ತಂದೆಯನ್ನು ಬೇಡಿಕೊಳ್ಳುವಿರಿ. ನಾನು ನಿಮಗೋಸ್ಕರ ತಂದೆಯನ್ನು ಕೇಳಿಕೊಳ್ಳುವ ಅಗತ್ಯವಿರುವುದಿಲ್ಲ. 27ಹೌದು, ತಂದೆಯು ತಾನೇ ನಿಮ್ಮನ್ನು ಪ್ರೀತಿಸುತ್ತಾನೆ. ನೀವು ನನ್ನನ್ನು ಪ್ರೀತಿಸಿದ್ದರಿಂದ ಮತ್ತು ನಾನು ದೇವರಿಂದ ಬಂದೆನೆಂದು ನೀವು ನಂಬುವುದರಿಂದ ಆತನು ನಿಮ್ಮನ್ನು ಪ್ರೀತಿಸುತ್ತಾನೆ. 28ನಾನು ತಂದೆಯ ಬಳಿಯಿಂದ ಈ ಲೋಕಕ್ಕೆ ಬಂದೆನು. ಈಗ ನಾನು ಈ ಲೋಕವನ್ನು ಬಿಟ್ಟು ತಂದೆಯ ಬಳಿಗೆ ಹಿಂತಿರುಗಿ ಹೋಗುತ್ತಿದ್ದೇನೆ’’ ಎಂದು ಹೇಳಿದನು. 29 ಆಗ ಶಿಷ್ಯರು ಯೇಸುವಿಗೆ, ‘‘ಈಗ ನೀನು ನಮ್ಮೊಂದಿಗೆ ಸ್ಪಷ್ಟವಾಗಿ ಮಾತಾಡುತ್ತಿರುವೆ. ಅರ್ಥವಾಗದಂಥ ಕಠಿಣ ಮಾತುಗಳನ್ನು ನೀನು ಬಳಸುತ್ತಿಲ್ಲ. 30ನಿನಗೆ ಎಲ್ಲಾ ಸಂಗತಿಗಳು ತಿಳಿದಿವೆಯೆಂದು ನಮಗೆ ಈಗ ತಿಳಿಯಿತು. ಒಬ್ಬನು ಪ್ರಶ್ನೆಯನ್ನು ಕೇಳುವುದಕ್ಕಿಂತ ಮೊದಲೇ ನೀನು ಅವನ ಪ್ರಶ್ನೆಗೆ ಉತ್ತರ ಕೊಡಬಲ್ಲೆ. ಇದರಿಂದಾಗಿ, ನೀನು ದೇವರಿಂದ ಬಂದವನೆಂದು ನಾವು ನಂಬುತ್ತೇವೆ’’ ಎಂದು ಹೇಳಿದರು.

31ಯೇಸು, ‘‘ಹಾಗಾದರೆ ಈಗ ನೀವು ನಂಬುತ್ತೀರಾ? 32ನನಗೆ ಕಿವಿಗೊಡಿರಿ. ನೀವು ಚದರಿಹೋಗುವ ಕಾಲ ಬರುತ್ತಿದೆ. ನಿಮ್ಮಲ್ಲಿ ಪ್ರತಿಯೊಬ್ಬನೂ ತನ್ನ ಸ್ವಂತ ಮನೆಗೆ ಚದರಿಹೋಗುವನು. ಆ ಸಮಯ ಈಗಲೇ ಬಂದಿದೆ. ನೀವು ನನ್ನನ್ನು ಬಿಟ್ಟು ಹೋಗುವಿರಿ. ನಾನು ಒಬ್ಬಂಟಿಗನಾಗಿರುವೆನು. ಆದರೆ ನಿಜವಾಗಿ ನಾನೆಂದಿಗೂ ಒಬ್ಬಂಟಿಗನಲ್ಲ. ಏಕೆಂದರೆ ತಂದೆಯು ನನ್ನೊಂದಿಗಿದ್ದಾನೆ.

33‘‘ನೀವು ನನ್ನಲ್ಲಿ ಶಾಂತಿಯನ್ನು ಹೊಂದಿದವರಾಗಿರಬೇಕೆಂದು ನಾನು ನಿಮಗೆ ಈ ಸಂಗತಿಗಳನ್ನೆಲ್ಲಾ ಹೇಳಿದ್ದೇನೆ. ಈ ಲೋಕದಲ್ಲಿ ನಿಮಗೆ ಸಂಕಟವಿದೆ. ಆದರೆ ಧೈರ್ಯದಿಂದಿರಿ! ನಾನು ಈ ಲೋಕವನ್ನು ಸೋಲಿಸಿದ್ದೇನೆ!’’ ಎಂದು ಹೇಳಿದನು.

### ಶಿಷ್ಯರಿಗೋಸ್ಕರ ಯೇಸುವಿನ ಪ್ರಾರ್ಥನೆ

17 ಯೇಸು ಈ ಸಂಗತಿಗಳನ್ನು ಹೇಳಿದ ಮೇಲೆ ಪರಲೋಕದ ಕಡೆಗೆ ನೋಡಿ ಹೀಗೆ ಪ್ರಾರ್ಥಿಸಿದನು, ‘‘ತಂದೆಯೇ, ಸಮಯವು ಬಂದಿದೆ. ನಿನ್ನ ಮಗನನ್ನು ಮಹಿಮೆಪಡಿಸು. ಆಗ ಮಗನು ನಿನ್ನನ್ನು ಮಹಿಮೆಪಡಿಸಬಲ್ಲನು. 2ನೀನು ಮಗನಿಗೆ ಯಾರ್ಯಾರನ್ನು ಕೊಟ್ಟಿಯೋ ಅವರೆಲ್ಲರಿಗೂ ಮಗನು ನಿತ್ಯಜೀವವನ್ನು ಕೊಡಬೇಕೆಂದು ನೀನು ಮಗನಿಗೆ ಅಧಿಕಾರವನ್ನು ಕೊಟ್ಟಿರುವೆ. 3ಒಬ್ಬನೇ ಸತ್ಯದೇವರಾಗಿರುವ ನಿನ್ನನ್ನು ಮತ್ತು ನೀನು ಕಳುಹಿಸಿದ ಯೇಸು ಕ್ರಿಸ್ತನನ್ನು ತಿಳಿದುಕೊಳ್ಳುವುದೇ ನಿತ್ಯಜೀವ. 4ನೀನು ನನಗೆ ಕೊಟ್ಟ ಕೆಲಸವನ್ನು ನಾನು ಮಾಡಿ ಪೂರೈಸಿದ್ದೇನೆ. ನಾನು ಭೂಲೋಕದಲ್ಲಿ ನಿನ್ನನ್ನು ಮಹಿಮೆಪಡಿಸಿದೆನು. 5ಈಗ, ತಂದೆಯೇ, ನೀನು ನಿನ್ನ ಸನ್ನಿಧಿಯಲ್ಲಿ ನನ್ನನ್ನು ಮಹಿಮೆಪಡಿಸು. ಈ ಲೋಕವು ಸೃಷ್ಟಿಯಾಗುವುದಕ್ಕಿಂತ ಮೊದಲು ನಾನು ನಿನ್ನೊಂದಿಗೆ ಹೊಂದಿದ್ದ ಮಹಿಮೆಯನ್ನು ನನಗೆ ಕೊಡು.

6‘‘ನೀನು ಈ ಲೋಕದೊಳಗಿಂದ ಈ ಕೆಲವು ಜನರನ್ನು ನನಗೆ ಕೊಟ್ಟೆ. ನಿನ್ನ ಸ್ವರೂಪವನ್ನು ನಾನು ಇವರಿಗೆ ತೋರಿಸಿದೆನು. ಇವರು ನಿನ್ನವರಾಗಿದ್ದಾರೆ, ಮತ್ತು ನೀನೇ ಇವರನ್ನು ನನಗೆ ಕೊಟ್ಟೆ. ಇವರು ನಿನ್ನ ಆಜ್ಞೆಗಳಿಗೆ ವಿಧೇಯರಾದರು. 7ನೀನು ನನಗೆ ಕೊಟ್ಟ ಪ್ರತಿಯೊಂದೂ ನಿನ್ನಿಂದಲೇ ಬಂದಿದೆ ಎಂಬುದು ಇವರಿಗೆ ಈಗ ತಿಳಿದಿದೆ. 8ನೀನು ನನಗೆ ಕೊಟ್ಟ ಮಾತುಗಳನ್ನು ನಾನು ಇವರಿಗೆ ಕೊಟ್ಟಿದ್ದೇನೆ. ಇವರು ಆ ಮಾತುಗಳನ್ನು ಸ್ವೀಕರಿಸಿಕೊಂಡಿದ್ದಾರೆ. ನಾನು ನಿಜವಾಗಿಯೂ ನಿನ್ನ ಬಳಿಯಿಂದ ಬಂದಿರುವುದಾಗಿಯೂ ನೀನೇ ನನ್ನನ್ನು ಕಳುಹಿಸಿರುವುದಾಗಿಯೂ ಇವರು ನಂಬಿದ್ದಾರೆ. 9ಈಗ ನಾನು ಇವರಿಗಾಗಿ ಪ್ರಾರ್ಥಿಸುವೆನು. ಈ ಲೋಕದಲ್ಲಿರುವ ಜನರಿಗೋಸ್ಕರ ನಾನು ಪ್ರಾರ್ಥಿಸುತ್ತಿಲ್ಲ. ಆದರೆ ನೀನು ನನಗೆ ಕೊಟ್ಟ ಇವರಿಗಾಗಿ ಪ್ರಾರ್ಥಿಸುತ್ತಿದ್ದೇನೆ, ಏಕೆಂದರೆ ಇವರು ನಿನ್ನವರಾಗಿದ್ದಾರೆ.

10‘‘ನನ್ನಲ್ಲಿರುವುದೆಲ್ಲಾ ನಿನ್ನದೇ ಮತ್ತು ನಿನ್ನಲ್ಲಿರುವುದೆಲ್ಲಾ ನನ್ನದೇ. ಇವರಿಂದ ನನಗೆ ಮಹಿಮೆ ಉಂಟಾಗಿದೆ. 11ಈಗ ನಾನು ನಿನ್ನ ಬಳಿಗೆ ಬರುತ್ತಿದ್ದೇನೆ. ಇನ್ನು ನಾನು ಈ ಲೋಕದಲ್ಲಿರುವುದಿಲ್ಲ. ಆದರೆ ಇವರು ಇನ್ನೂ ಈ ಲೋಕದಲ್ಲಿರುತ್ತಾರೆ. ಪವಿತ್ರನಾದ ತಂದೆಯೇ, (ನೀನು ನನಗೆ ಕೊಟ್ಟ) ನಿನ್ನ ಹೆಸರಿನ ಶಕ್ತಿಯಿಂದ ಇವರನ್ನು ಕಾಯ್ದು ಕಾಪಾಡು. ನೀನು ನಾನೂ ಒಂದಾಗಿರುವಂತೆ ಇವರೂ ಒಂದಾಗಿರಲು ಆಗ ಸಾಧ್ಯವಾಗುವುದು. 12ನಾನು ಇವರೊಂದಿಗೆ ಇದ್ದಾಗ, ನಿನ್ನ ಹೆಸರಿನ ಶಕ್ತಿಯಿಂದ ಇವರನ್ನು ಕಾಯ್ದು ಕಾಪಾಡಿದೆನು. ಪವಿತ್ರ ಗ್ರಂಥದ ಹೇಳಿಕೆಯು ನೆರವೇರುವಂತೆ ಕಳೆದುಹೋಗುವುದಕ್ಕಾಗಿಯೇ ಆರಿಸಲ್ಪಟ್ಟಿದ್ದ (ಯೂದನೆಂಬ) ಒಬ್ಬನೇ ಒಬ್ಬನು ಇವರಲ್ಲಿ ನಾಶವಾದನು.

13‘‘ಈಗ ನಾನು ನಿನ್ನ ಬಳಿಗೆ ಬರುತ್ತಿದ್ದೇನೆ. ಆದರೆ ನಾನು ಈ ಲೋಕದಲ್ಲಿ ಇನ್ನೂ ಇರುವಾಗಲೇ ಈ ಸಂಗತಿಗಳಿಗಾಗಿ ಪ್ರಾರ್ಥಿಸುತ್ತಿದ್ದೇನೆ. ಈ ಜನರು ನನ್ನ ಆನಂದವನ್ನು ಹೊಂದಿದವರಾಗಿರಬೇಕೆಂದು ಮತ್ತು ನನ್ನ ಆನಂದವು ಇವರಲ್ಲಿ ಪರಿಪೂರ್ಣವಾಗಿರಬೇಕೆಂದು ಈ ಸಂಗತಿಗಳನ್ನು ಹೇಳುತ್ತಿದ್ದೇನೆ. 14ನಾನು ಇವರಿಗೆ ನಿನ್ನ ವಾಕ್ಯವನ್ನು ಕೊಟ್ಟಿದ್ದೇನೆ. ಈ ಲೋಕವು ಇವರನ್ನು ದ್ವೇಷಿಸುತ್ತದೆ. ನಾನು ಈ ಲೋಕಕ್ಕೆ ಯಾವ ರೀತಿ ಸೇರಿದವನಾಗಿಲ್ಲವೋ ಅದೇ ರೀತಿ ಇವರೂ ಈ ಲೋಕಕ್ಕೆ ಸೇರಿದವರಾಗಿಲ್ಲ. ಆದ್ದರಿಂದ ಈ ಲೋಕವು ಇವರನ್ನು ದ್ವೇಷಿಸುತ್ತಿದೆ. 15ನೀನು ಇವರನ್ನು ಈ ಲೋಕದಿಂದ ತೆಗೆದುಕೊಳ್ಳಬೇಕೆಂದು ನಾನು ಕೇಳುತ್ತಿಲ್ಲ. ಆದರೆ ಇವರನ್ನು ಕೆಡುಕನಿಂದ (ಸೈತಾನ

ನಿಂದ) ತಪ್ಪಿಸಿ ಸುರಕ್ಷಿತವಾಗಿರಿಸಬೇಕೆಂದು ನಾನು ಕೇಳಿಕೊಳ್ಳು
ತ್ತಿದ್ದೇನೆ.
16‘‘ನಾನು ಈ ಲೋಕಕ್ಕೆ ಯಾವ ರೀತಿ ಸೇರಿದವ
ನಾಗಿಲ್ಲವೋ ಅದೇ ರೀತಿ ಇವರೂ ಈ ಲೋಕಕ್ಕೆ ಸೇರಿದವ
ರಾಗಿಲ್ಲ.
17‘‘ನಿನ್ನ ಸತ್ಯದ ಮೂಲಕ ನೀನು ಇವರನ್ನು ನಿನ್ನ ಸೇವೆಗೆ
ಸಿದ್ಧಪಡಿಸು. ನಿನ್ನ ವಾಕ್ಯವು ಸತ್ಯವಾದದ್ದು. 18ನೀನು ನನ್ನನ್ನು
ಈ ಲೋಕಕ್ಕೆ ಕಳುಹಿಸಿದಂತೆ ನಾನೂ ಇವರನ್ನು ಈ ಲೋಕಕ್ಕೆ
ಕಳುಹಿಸಿದ್ದೇನೆ.
19‘‘ಇವರು ನಿಜವಾಗಿ ನಿನ್ನ ಸೇವೆಗೆ ಪ್ರತಿಷ್ಠಿತರಾಗಬೇಕೆಂದು
ನಾನು ನನ್ನನ್ನೇ ಪ್ರತಿಷ್ಠಿಸಿಕೊಂಡಿದ್ದೇನೆ.
20‘‘ನಾನು ಇವರಿಗಾಗಿಯೂ ಇವರ ವಾಕ್ಯದಿಂದ ನನ್ನಲ್ಲಿ
ನಂಬಿಕೆ ಇಡುವ ಎಲ್ಲರಿಗಾಗಿಯೂ ಪ್ರಾರ್ಥಿಸುತ್ತಿದ್ದೇನೆ.
21ತಂದೆಯೇ, ನನ್ನಲ್ಲಿ ನಂಬಿಕೆ ಇಡುವ ಎಲ್ಲಾ ಜನರು
ಒಂದಾಗಿರಬೇಕೆಂದು ನಾನು ಪ್ರಾರ್ಥಿಸುತ್ತೇನೆ. ನೀನು ನನ್ನಲ್ಲಿ
ನೆಲೆಸಿರುವೆ ಮತ್ತು ನಾನು ನಿನ್ನಲ್ಲಿ ನೆಲೆಸಿರುವೆ. ನೀನು ನನ್ನನ್ನು
ಕಳುಹಿಸಿರುವಿಯೆಂದು ಈ ಲೋಕವು ನಂಬಿಕೊಳ್ಳುವುದಕ್ಕಾಗಿ
ಈ ಜನರು ಸಹ ನಮ್ಮೊಂದಿಗೆ ಒಂದಾಗಿರಬೇಕೆಂದು ನಾನು
ಪ್ರಾರ್ಥಿಸುತ್ತೇನೆ. 22ನೀನು ನನಗೆ ಕೊಟ್ಟ ಮಹಿಮೆಯನ್ನು
ನಾನು ಈ ಜನರಿಗೆ ಕೊಟ್ಟಿದ್ದೇನೆ. ನೀನು ಮತ್ತು ನಾನು
ಒಂದಾಗಿರುವಂತೆ ಇವರೂ ಒಂದಾಗಿರಬೇಕೆಂದು ನಾನು
ಇವರಿಗೆ ಈ ಮಹಿಮೆಯನ್ನು ಕೊಟ್ಟೆನು. 23ನಾನು ಅವರಲ್ಲಿ
ಇರುವೆನು, ಮತ್ತು ನೀನು ನನ್ನಲ್ಲಿರುವೆ. ಆದ್ದರಿಂದ ಅವರು
ಸಂಪೂರ್ಣವಾಗಿ ಒಂದಾಗಿರುವರು. ನೀನೇ ನನ್ನನ್ನು
ಕಳುಹಿಸಿರುವುದಾಗಿ ಮತ್ತು ನೀನು ನನ್ನನ್ನು ಪ್ರೀತಿಸಿದಂತೆಯೇ
ಈ ಜನರನ್ನೂ ಪ್ರೀತಿಸಿರುವುದಾಗಿ ಈ ಲೋಕವು ಆಗ
ತಿಳಿದುಕೊಳ್ಳುವುದು.
24‘‘ತಂದೆಯೇ, ನೀನು ನನಗೆ ಕೊಟ್ಟಿರುವ ಇವರು, ನಾನು
ಇರುವಲ್ಲೆಲ್ಲಾ ನನ್ನೊಂದಿಗೆ ಇರಬೇಕೆಂದು ಮತ್ತು ನನ್ನ
ಮಹಿಮೆಯನ್ನು ನೋಡಬೇಕೆಂದು ಅಪೇಕ್ಷಿಸುತ್ತೇನೆ. ಈ
ಲೋಕವು ಸೃಷ್ಟಿಯಾಗುವುದಕ್ಕಿಂತ ಮೊದಲೇ ನೀನು ನನ್ನನ್ನು
ಪ್ರೀತಿಸಿದ್ದರಿಂದ ನೀನೇ ನನಗೆ ಈ ಮಹಿಮೆಯನ್ನು ಕೊಟ್ಟೆ.
25ನೀತಿಯುಳ್ಳ ತಂದೆಯೇ, ಈ ಲೋಕವು ನಿನ್ನನ್ನು ತಿಳಿದಿಲ್ಲ.
ಆದರೆ ನಾನು ನಿನ್ನನ್ನು ತಿಳಿದಿರುವೆ, ಮತ್ತು ನೀನೇ ನನ್ನನ್ನು
ಕಳುಹಿಸಿರುವೆ ಎಂಬುದು ಈ ಜನರಿಗೆ ತಿಳಿದಿದೆ. 26ನಾನು ನಿನ್ನ
ನಿಜಸ್ವಭಾವವನ್ನು ಇವರಿಗೆ ಗೊತ್ತುಪಡಿಸಿದೆನು. ನಾನು ನಿನ್ನ
ಸ್ವರೂಪವನ್ನು ಇವರಿಗೆ ಮತ್ತೆ ತೋರಿಸುವೆನು. ಆಗ ನನ್ನ ಮೇಲೆ
ನಿನಗೆ ಯಾವ ಪ್ರೀತಿಯಿದೆಯೋ, ಅದೇ ಪ್ರೀತಿಯು ಇವರ
ಲ್ಲಿಯೂ ಇರುವುದು ಮತ್ತು ನಾನು ಇವರಲ್ಲಿ ಇರುವೆನು.’’

## ಯೇಸುವಿನ ಬಂಧನ

(ಮತ್ತಾಯ 26:47-56; ಮಾರ್ಕ 14:43-50; ಲೂಕ 22:47-53)

18 ಯೇಸು ಪ್ರಾರ್ಥಿಸಿದ ಮೇಲೆ ತನ್ನ ಶಿಷ್ಯರೊಂದಿಗೆ
ಹೊರಟನು. ಅವರು ಕಿದ್ರೋನ್ ಕಣಿವೆಯನ್ನು
ದಾಟಿ ಹೋದರು. ಅದರ ಮತ್ತೊಂದು ಕಡೆಯಲ್ಲಿ ಆಲಿವ್
ಮರಗಳ ತೋಟವಿತ್ತು. ಯೇಸು ಮತ್ತು ಆತನ ಶಿಷ್ಯರು ಅಲ್ಲಿಗೆ
ಹೋದರು. 2ಯೇಸುವಿಗೆ ದ್ರೋಹ ಬಗೆದ ಯೂದನಿಗೂ ಈ
ಸ್ಥಳವು ತಿಳಿದಿತ್ತು. ಏಕೆಂದರೆ ಯೇಸು ತನ್ನ ಶಿಷ್ಯರೊಂದಿಗೆ ಆಗಾಗ್ಗೆ
ಅಲ್ಲಿಗೆ ಬರುತ್ತಿದ್ದನು. 3ಯೂದನು ಸೈನಿಕರ ಗುಂಪೊಂದನ್ನೂ
ಮಹಾಯಾಜಕರ ಮತ್ತು ಫರಿಸಾಯರ ಕಾವಲುಗಾರರಲ್ಲಿ
ಕೆಲವರನ್ನೂ ಕರೆದುಕೊಂಡು ತೋಟಕ್ಕೆ ಬಂದನು. ಅವರು
ದೀವಟಿಗೆ, ಪಂಜು ಮತ್ತು ಆಯುಧಗಳಿಂದ ಸುಸಜ್ಜಿತ
ರಾಗಿದ್ದರು. 4ತನಗೆ ಸಂಭವಿಸಲಿದ್ದ ಪ್ರತಿಯೊಂದೂ ಯೇಸುವಿಗೆ
ತಿಳಿದಿತ್ತು. ಆತನು ಹೊರಗೆ ಹೋಗಿ, ‘‘ನೀವು ಯಾರನ್ನು
ಹುಡುಕುತ್ತಿದ್ದೀರಿ?’’ ಎಂದು ಕೇಳಿದನು.
5ಅವರು, ‘‘ನಜರೇತಿನ ಯೇಸುವನ್ನು’’ ಎಂದು ಉತ್ತರ
ಕೊಟ್ಟರು. ಆತನು, ‘‘ನಾನೇ ಯೇಸು’’ ಎಂದನು. (ಯೇಸುವಿಗೆ
ದ್ರೋಹ ಬಗೆದ ಯೂದನು ಅವರೊಂದಿಗೆ ಅಲ್ಲೇ ನಿಂತಿದ್ದನು.)
6ಆತನು, ‘‘ನಾನೇ ಯೇಸು’’ ಎಂದಾಗ ಅವರು ಹಿಂದೆ ಸರಿದು
ನೆಲದ ಮೇಲೆ ಬಿದ್ದರು.
7ಯೇಸು ಅವರಿಗೆ ಮತ್ತೆ ‘‘ನೀವು ಯಾರನ್ನು ಹುಡುಕು
ತ್ತಿದ್ದೀರಿ’’ ಎಂದು ಕೇಳಿದನು.
ಅವರು, ‘‘ನಜರೇತಿನ ಯೇಸುವನ್ನು’’ ಎಂದು ಹೇಳಿದರು.
8ಆತನು, ‘‘ನಾನೇ ಯೇಸು ಎಂದು ನಿಮಗೆ ಹೇಳಿದೆನಲ್ಲಾ.
ನೀವು ನನ್ನನ್ನು ಹುಡುಕುತ್ತಿದ್ದರೆ, ಉಳಿದ ಇವರನ್ನು ಹೋಗ
ಬಿಡಿರಿ’’ ಎಂದು ಹೇಳಿದನು. 9‘‘ನೀನು ನನಗೆ ಕೊಟ್ಟ ಜನರಲ್ಲಿ
ಯಾರನ್ನೂ ನಾನು ಕಳೆದುಕೊಳ್ಳಲಿಲ್ಲ’’ ಎಂದು ಯೇಸು
ಮೊದಲು ಹೇಳಿದ್ದ ಮಾತು ಹೀಗೆ ನಿಜವಾಯಿತು.
10ಸೀಮೋನ್ ಪೇತ್ರನ ಬಳಿ ಒಂದು ಖಡ್ಗವಿತ್ತು. ಅವನು
ಆ ಖಡ್ಗವನ್ನು ಹೊರತೆಗೆದು ಪ್ರಧಾನ ಯಾಜಕನ ಸೇವಕ
ನೊಬ್ಬನಿಗೆ ಹೊಡೆದು, ಅವನ ಬಲಗಿವಿಯನ್ನು ಕತ್ತರಿಸಿದನು.
(ಆ ಸೇವಕನ ಹೆಸರು ಮಾಲ್ಕ.)
11ಯೇಸು ಪೇತ್ರನಿಗೆ, ‘‘ನಿನ್ನ ಖಡ್ಗವನ್ನು ಒರೆಯಲ್ಲಿ ಹಾಕು!
ತಂದೆಯು ನನಗೆ ಕೊಟ್ಟಿರುವ ಸಂಕಟದ ಪಾತ್ರೆಯನ್ನು ನಾನು
ಸ್ವೀಕರಿಸಿಕೊಳ್ಳಬೇಕು’’ ಎಂದು ಹೇಳಿದನು.

## ಅನ್ನನ ಮುಂದೆ ಯೇಸು

(ಮತ್ತಾಯ 26:57-58; ಮಾರ್ಕ 14:53-54; ಲೂಕ 22:54)

12ಬಳಿಕ ಆ ಸೈನಿಕರು, ಅವರ ಸೇನಾಧಿಪತಿ ಹಾಗೂ
ಯೆಹೂದ್ಯ ಕಾವಲುಗಾರರು ಯೇಸುವನ್ನು ಹಿಡಿದು ಕಟ್ಟಿ
ಅನ್ನನ ಬಳಿಗೆ ತಂದರು. 13ಅನ್ನನು ಕಾಯಫನ ಮಾವ. ಆ ವರ್ಷ
ಕಾಯಫನು ಪ್ರಧಾನಯಾಜಕನಾಗಿದ್ದನು. 14ಎಲ್ಲಾ ಜನರಿ
ಗಾಗಿ ಒಬ್ಬನು ಸಾಯುವುದೇ ಮೇಲು ಎಂಬ ಸಲಹೆಯನ್ನು
ಕೊಟ್ಟಿದ್ದವನು ಇವನೇ.

## ಪೇತ್ರನ ವಿಶ್ವಾಸದ್ರೋಹ

15ಸೀಮೋನ್ ಪೇತ್ರ ಮತ್ತು ಯೇಸುವಿನ ಶಿಷ್ಯರಲ್ಲಿ
ಮತ್ತೊಬ್ಬನು ಯೇಸುವಿನೊಂದಿಗೆ ಹೋದರು. ಆ ಮತ್ತೊಬ್ಬ
ಶಿಷ್ಯನಿಗೆ ಪ್ರಧಾನಯಾಜಕನ ಪರಿಚಯವಿತ್ತು. ಆದ್ದರಿಂದ
ಅವನು ಪ್ರಧಾನಯಾಜಕನ ಮನೆಯ ಅಂಗಳದೊಳಗೆ
ಹೋದನು. 16ಆದರೆ ಪೇತ್ರನು ಹೊರಗೆ ಬಾಗಿಲಿನ ಸಮೀಪ
ದಲ್ಲಿ ಕಾದುಕೊಂಡಿದ್ದನು. ಪ್ರಧಾನಯಾಜಕನ ಪರಿಚಯವಿದ್ದ
ಶಿಷ್ಯನು ಹೊರಗೆ ಬಂದು ದ್ವಾರಪಾಲಕಿಯೊಂದಿಗೆ ಮಾತಾಡಿ
ಪೇತ್ರನನ್ನು ಒಳಗೆ ಕರೆದುಕೊಂಡು ಹೋದನು. 17ದ್ವಾರ

ಪಾಲಕಿಯು ಪೇತ್ರನಿಗೆ, ''ಆ ಮನುಷ್ಯನ ಶಿಷ್ಯರಲ್ಲಿ ನೀನೂ
ಒಬ್ಬನಲ್ಲವೇ?'' ಎಂದು ಕೇಳಿದಳು.
ಪೇತ್ರನು, ''ಇಲ್ಲ, ನಾನಲ್ಲ'' ಎಂದು ಉತ್ತರಕೊಟ್ಟನು.
18 ಆಗ ಚಳಿಯಿದ್ದುದರಿಂದ ಕಾವಲುಗಾರರು ಬೆಂಕಿ ಹಾಕಿ ಅದರ
ಸುತ್ತಲೂ ನಿಂತುಕೊಂಡು ತಮ್ಮನ್ನು ಬೆಚ್ಚಗೆ ಮಾಡಿಕೊಳ್ಳು
ತ್ತಿದ್ದರು. ಪೇತ್ರನು ಅವರೊಂದಿಗೆ ನಿಂತುಕೊಂಡಿದ್ದನು.

## ಪ್ರಧಾನಯಾಜಕನು ಮಾಡಿದ ವಿಚಾರಣೆ

(ಮತ್ತಾಯ 26:69-70; ಮಾರ್ಕ 14:66-68; ಲೂಕ 22:55-57)
19 ಪ್ರಧಾನಯಾಜಕನು ಯೇಸುವಿಗೆ ಆತನ ಶಿಷ್ಯರ
ಬಗ್ಗೆಯೂ ಆತನು ಉಪದೇಶಿಸಿದ ಸಂಗತಿಗಳ ಬಗ್ಗೆಯೂ
ಪ್ರಶ್ನೆಗಳನ್ನು ಕೇಳಿದನು. 20 ಅದಕ್ಕೆ ಯೇಸು, ''ನಾನು ಬಹಿ
ರಂಗವಾಗಿ ಜನರೊಂದಿಗೆ ಮಾತಾಡಿದ್ದೇನೆ; ಯಾವಾಗಲೂ
ಸಭಾಮಂದಿರಗಳಲ್ಲಿ ಮತ್ತು ದೇವಾಲಯದಲ್ಲಿ ಬೋಧಿಸಿ
ದ್ದೇನೆ. ಯೆಹೂದ್ಯರೆಲ್ಲರೂ ಅಲ್ಲಿಗೆ ಒಟ್ಟಾಗಿ ಸೇರಿಬರುತ್ತಿದ್ದರು.
ನಾನು ಯಾವುದನ್ನೂ ರಹಸ್ಯವಾಗಿ ಎಂದೂ ಹೇಳಿಲ್ಲ. 21 ಹೀಗಿ
ರಲು, ನೀನು ನನ್ನನ್ನು ಪ್ರಶ್ನಿಸುವುದೇಕೆ? ನನ್ನ ಉಪದೇಶವನ್ನು
ಕೇಳಿದ ಜನರನ್ನು ಕೇಳು. ನಾನು ಹೇಳಿದ್ದನ್ನು ಅವರು ಬಲ್ಲರು''
ಎಂದು ಉತ್ತರ ಕೊಟ್ಟನು.
22 ಯೇಸು ಹೀಗೆ ಹೇಳಿದ ಕೂಡಲೇ, ಅಲ್ಲಿ ನಿಂತಿದ್ದ ಕಾವಲು
ಗಾರರಲ್ಲಿ ಒಬ್ಬನು ಯೇಸುವಿಗೆ ಹೊಡೆದು, ''ನೀನು ಪ್ರಧಾನ
ಯಾಜಕನೊಂದಿಗೆ ಆ ರೀತಿ ಮಾತಾಡಕೂಡದು'' ಎಂದನು.
23 ಯೇಸು, ''ನಾನು ತಪ್ಪಾಗಿ ಮಾತಾಡಿದ್ದರೆ, ನಾನು
ಹೇಳಿದ್ದು ತಪ್ಪೆಂದು ಎಲ್ಲರಿಗೂ ತೋರಿಸಿಕೊಡು. ಆದರೆ ನಾನು
ಹೇಳಿದ್ದು ಸರಿಯಾಗಿದ್ದರೆ ನೀನು ನನ್ನನ್ನು ಹೊಡೆಯುವು
ದೇಕೆ?'' ಎಂದು ಉತ್ತರಕೊಟ್ಟನು.
24 ಆಗ ಅನ್ನನು ಯೇಸುವನ್ನು ಮತ್ತೆ ಕಟ್ಟಿಸಿ, ಪ್ರಧಾನ
ಯಾಜಕನಾದ ಕಾಯಫನ ಬಳಿಗೆ ಕಳುಹಿಸಿದನು.

## ಮತ್ತೊಮ್ಮೆ ಪೇತ್ರನ ವಿಶ್ವಾಸದ್ರೋಹ

(ಮತ್ತಾಯ 26:59-66; ಮಾರ್ಕ 14:55-64; ಲೂಕ 22:66-71)
25 ಸೀಮೋನ್ ಪೇತ್ರನು ತನ್ನನ್ನು ಬೆಚ್ಚಗೆ ಮಾಡಿಕೊಳ್ಳುತ್ತಾ
ಬೆಂಕಿಯ ಸಮೀಪದಲ್ಲಿ ನಿಂತುಕೊಂಡಿದ್ದನು. ಅಲ್ಲಿದ್ದವರು
ಪೇತ್ರನಿಗೆ, ''ಆ ಮನುಷ್ಯನ ಶಿಷ್ಯರಲ್ಲಿ ನೀನೂ ಒಬ್ಬನಲ್ಲವೇ?''
ಎಂದು ಕೇಳಿದರು.
ಆದರೆ ಪೇತ್ರನು, ''ಇಲ್ಲ, ನಾನಲ್ಲ'' ಎಂದು ಹೇಳಿದನು.
26 ಪ್ರಧಾನಯಾಜಕನ ಸೇವಕರಲ್ಲಿ ಒಬ್ಬನು ಪೇತ್ರನಿಂದ
ಕಿವಿ ಕತ್ತರಿಸಿ ಹಾಕಲ್ಪಟ್ಟ ಸೇವಕನ ಸಂಬಂಧಿಕನಾಗಿದ್ದನು. ಆ
ಸೇವಕನು, ''ನೀನು ತೋಟದಲ್ಲಿ ಅವನೊಂದಿಗೆ (ಯೇಸುವಿ
ನೊಂದಿಗೆ) ಇದ್ದುದನ್ನು ನಾನು ನೋಡಿದಂತಿದೆ!'' ಎಂದು
ಹೇಳಿದನು.
27 ಆದರೆ ಪೇತ್ರನು ಮತ್ತೆ, ''ಇಲ್ಲ, ನಾನು ಆತನೊಂದಿಗೆ
ಇರಲಿಲ್ಲ!'' ಎಂದನು. ಆ ಕೂಡಲೇ ಕೋಳಿ ಕೂಗಿತು.

## ಪಿಲಾತನ ಮುಂದೆ ಯೇಸು

(ಮತ್ತಾಯ 27:1-2, 11-31; ಮಾರ್ಕ 15:1-20; ಲೂಕ 23:1-25)
28 ಬಳಿಕ ಯೆಹೂದ್ಯರು ಯೇಸುವನ್ನು ಕಾಯಫನ ಮನೆ
ಯಿಂದ ರೋಮ್ ರಾಜ್ಯಪಾಲನ ಭವನಕ್ಕೆ ಕರೆದುಕೊಂಡು
ಬಂದರು. ಆಗ ಮುಂಜಾನೆಯಾಗಿತ್ತು. ಯೆಹೂದ್ಯರು ಭವನ
ದೊಳಗೆ ಹೋಗಲಿಲ್ಲ. ಅವರು ಪಸ್ಕಹಬ್ಬದ ಊಟಮಾಡ
ಬೇಕೆಂದಿದ್ದ ಕಾರಣ ತಮ್ಮನ್ನು ಅಶುದ್ಧರನ್ನಾಗಿ ಮಾಡಿಕೊಳ್ಳಲು
ಇಷ್ಟಪಡಲಿಲ್ಲ. 29 ಆದ್ದರಿಂದ ಪಿಲಾತನು ಆ ಯೆಹೂದ್ಯರ ಬಳಿಗೆ
ಬಂದು, ''ಈ ಮನುಷ್ಯನ ಮೇಲೆ ನೀವು ಹೊರಿಸುತ್ತಿರುವ
ಅಪರಾಧಗಳೇನು?'' ಎಂದು ಕೇಳಿದನು.
30 ಯೆಹೂದ್ಯರು, ''ಇವನು ಒಬ್ಬ ಕೆಟ್ಟ ಮನುಷ್ಯ. ಆದ
ಕಾರಣ, ನಾವು ಇವನನ್ನು ನಿನ್ನ ಬಳಿಗೆ ಕರೆದುಕೊಂಡು
ಬಂದೆವು'' ಎಂದು ಉತ್ತರಕೊಟ್ಟರು.
31 ಪಿಲಾತನು ಯೆಹೂದ್ಯರಿಗೆ, ''ಯೆಹೂದ್ಯರಾದ ನೀವೇ
ಇವನನ್ನು ಕರೆದುಕೊಂಡು ಹೋಗಿ ನಿಮ್ಮ ಧರ್ಮಶಾಸ್ತ್ರದ
ಪ್ರಕಾರ ತೀರ್ಪು ಮಾಡಿ'' ಎಂದು ಹೇಳಿದನು.
ಯೆಹೂದ್ಯರು, ''ಆದರೆ ಒಬ್ಬನಿಗೆ ಮರಣದಂಡನೆ
ವಿಧಿಸಲು ನಿನ್ನ ಕಾನೂನು ನಮಗೆ ಅವಕಾಶ ಕೊಡುವುದಿಲ್ಲ''
ಎಂದು ಉತ್ತರಕೊಟ್ಟರು. 32 (ತಾನು ಸಾಯುವ ರೀತಿಯ ಬಗ್ಗೆ
ಯೇಸು ಹೇಳಿದ್ದ ಮಾತು ಹೀಗೆ ನಿಜವಾಯಿತು.)
33 ಬಳಿಕ ಪಿಲಾತನು, ಭವನದೊಳಗೆ ಹಿಂತಿರುಗಿ ಹೋಗಿ,
ಯೇಸುವನ್ನು ಕರೆದು, ''ನೀನು ಯೆಹೂದ್ಯರ ರಾಜನೋ?''
ಎಂದು ಕೇಳಿದನು.
34 ಯೇಸು, ''ಇದು ನಿನ್ನ ಪ್ರಶ್ನೆಯೋ? ಅಥವಾ ನನ್ನ ಬಗ್ಗೆ
ಬೇರೆ ಜನರು ನಿನಗೆ ತಿಳಿಸಿದರೋ?'' ಎಂದನು.
35 ಪಿಲಾತನು, ''ನಾನು ಯೆಹೂದ್ಯನಲ್ಲ! ನಿನ್ನ ಸ್ವಂತ ಜನರು
ಮತ್ತು ಅವರ ಮಹಾಯಾಜಕರು ನಿನ್ನನ್ನು ಕರೆದುಕೊಂಡು
ಬಂದು ನನ್ನ ಮುಂದೆ ನಿಲ್ಲಿಸಿದ್ದಾರೆ. ನೀನು ಏನು ಮಾಡಿದೆ?''
ಎಂದು ಕೇಳಿದನು.
36 ಯೇಸು, ''ನನ್ನ ರಾಜ್ಯವು ಈ ಲೋಕಕ್ಕೆ ಸೇರಿದ್ದಲ್ಲ. ಅದು
ಈ ಲೋಕಕ್ಕೆ ಸೇರಿದ್ದಾಗಿದ್ದರೆ, ಯೆಹೂದ್ಯರ ಕೈಗೆ ನಾನು
ಸಿಗದಂತೆ ನನ್ನ ಸೇವಕರು ಹೋರಾಡುತ್ತಿದ್ದರು. ಆದರೆ ನನ್ನ
ರಾಜ್ಯವು ಮತ್ತೊಂದು ಸ್ಥಳದ್ದು''ಎಂದನು.
37 ಪಿಲಾತನು, ''ಹಾಗಾದರೆ ನೀನು ರಾಜ!'' ಎಂದನು.
ಯೇಸು, ''ನೀನೇ ನನ್ನನ್ನು ರಾಜನೆಂದು ಹೇಳುತ್ತಿರುವೆ.
ಅದು ಸತ್ಯ. ನಾನು ಜನರಿಗೆ ಸತ್ಯದ ಬಗ್ಗೆ ಹೇಳುವುದಕ್ಕಾಗಿಯೇ
ಹುಟ್ಟಿದೆನು. ಆದಕಾರಣವೇ ನಾನು ಈ ಲೋಕಕ್ಕೆ ಬಂದೆನು.
ಮತ್ತು ಸತ್ಯಕ್ಕೆ ಸೇರಿದ ಪ್ರತಿಯೊಬ್ಬನೂ ನನಗೆ ಕಿವಿಗೊಡುತ್ತಾನೆ''
ಎಂದು ಉತ್ತರಕೊಟ್ಟನು. 38 ಪಿಲಾತನು, ''ಸತ್ಯವೆಂದರೇನು?''
ಎಂದು ಹೇಳಿ, ಮತ್ತೆ ಯೆಹೂದ್ಯರ ಬಳಿಗೆ ಹೊರಕ್ಕೆ ಬಂದನು.
ಅವನು ಯೆಹೂದ್ಯರಿಗೆ, ''ಈ ಮನುಷ್ಯನ ಮೇಲೆ ಅಪವಾದ
ಹೊರಿಸಲು ನನಗೆ ಏನೂ ಕಾಣುತ್ತಿಲ್ಲ. 39 ಆದರೆ ಪಸ್ಕಹಬ್ಬದ
ಕಾಲದಲ್ಲಿ ನಾನು ನಿಮಗೋಸ್ಕರ ಕೈದಿಗಳಲ್ಲಿ ಒಬ್ಬನನ್ನು
ಬಿಡುಗಡೆ ಮಾಡುವುದು ನಿಮ್ಮ ಪದ್ಧತಿಯಾಗಿದೆ. ನಾನು
ಯೆಹೂದ್ಯರ ರಾಜನನ್ನು ಬಿಡುಗಡೆ ಮಾಡಬೇಕೆಂದು ನೀವು
ಬಯಸುತ್ತೀರಾ?'' ಎಂದು ಕೇಳಿದನು. 40 ಯೆಹೂದ್ಯರು,
''ಇಲ್ಲ, ಅವನನ್ನಲ್ಲ! ಬರಬ್ಬನಿಗೆ ಬಿಡುಗಡೆಯಾಗಲಿ!'' ಎಂದು
ಕೂಗಿದರು. (ಬರಬ್ಬನು ಒಬ್ಬ ದರೋಡೆಕೋರ.)

19 ಬಳಿಕ, ಯೇಸುವನ್ನು ಕರೆದುಕೊಂಡು ಹೋಗಿ,
ಕೊರಡೆಯಿಂದ ಹೊಡೆಯಬೇಕೆಂದು ಪಿಲಾತನು
ಆಜ್ಞಾಪಿಸಿದನು. 2 ಸೈನಿಕರು ಮುಳ್ಳುಬಳ್ಳಿಗಳಿಂದ ಒಂದು ಕಿರೀಟ

ವನ್ನು ಮಾಡಿ ಯೇಸುವಿನ ತಲೆಯ ಮೇಲೆ ಇಟ್ಟರು. ಬಳಿಕ
ಸೈನಿಕರು ಯೇಸುವಿಗೆ ಕಡುಕೆಂಪಾದ ಅಂಗಿಯನ್ನು ತೊಡಿಸಿ
ದರು. 3ಸೈನಿಕರು ಪದೇಪದೇ ಯೇಸುವಿನ ಬಳಿಗೆ ಬಂದು,
‘‘ಯೆಹೂದ್ಯರ ರಾಜನೇ, ನಿನಗೆ ನಮಸ್ಕಾರ!’’ ಎಂದು
ಹೇಳುತ್ತಾ ಆತನ ಕೆನ್ನೆಗೆ ಹೊಡೆದರು.

4ಪಿಲಾತನು ಮತ್ತೆ ಹೊರಗೆ ಬಂದು, ಯೆಹೂದ್ಯರಿಗೆ,
‘‘ನೋಡಿ! ನಾನು ಯೇಸುವನ್ನು ನಿಮ್ಮ ಬಳಿಗೆ ತರುತ್ತಿದ್ದೇನೆ.
ನನಗೆ ಆತನಲ್ಲಿ ಯಾವ ಅಪರಾಧವೂ ಕಾಣಲಿಲ್ಲ ಎಂಬುದು
ನಿಮಗೆ ತಿಳಿದಿರಲಿ’’ ಎಂದು ಹೇಳಿದನು. 5ಆಗ ಯೇಸು ಹೊರಗೆ
ಬಂದನು. ಆತನ ತಲೆಯ ಮೇಲೆ ಮುಳ್ಳಿನ ಕಿರೀಟವನ್ನು
ಇಟ್ಟಿದ್ದರು. ಮತ್ತು ಕೆಂಪು ಅಂಗಿಯನ್ನು ಆತನಿಗೆ ತೊಡಿಸಿದ್ದರು.
ಪಿಲಾತನು ಯೆಹೂದ್ಯರಿಗೆ, ‘‘ಇಗೋ, ಈ ಮನುಷ್ಯನು!’’
ಎಂದು ಹೇಳಿದನು. 6ಮಹಾಯಾಜಕರು ಮತ್ತು ಯೆಹೂದ್ಯ
ಕಾವಲುಗಾರರು ಯೇಸುವನ್ನು ಕಂಡು, ‘‘ಅವನನ್ನು ಶಿಲುಬೆಗೆ
ಹಾಕಿಸು! ಅವನನ್ನು ಶಿಲುಬೆಗೆ ಹಾಕಿಸು! ಎಂದು ಕೂಗಿದರು.

ಆದರೆ ಪಿಲಾತನು, ‘‘ನೀವೇ ಆತನನ್ನು ಶಿಲುಬೆಗೆ ಹಾಕಿರಿ.
ನನಗೆ ಆತನಲ್ಲಿ ಯಾವ ಅಪರಾಧವೂ ಕಾಣಲಿಲ್ಲ’’ ಎಂದು
ಉತ್ತರ ಕೊಟ್ಟನು.

7ಯೆಹೂದ್ಯರು, ‘‘ನಮಗೊಂದು ನಿಯಮವಿದೆ. ಅದರ
ಪ್ರಕಾರ ಇವನಿಗೆ ಮರಣದಂಡನೆ ಆಗಲೇಬೇಕು. ಯಾಕೆಂದರೆ
ಇವನು ತನ್ನನ್ನು ದೇವರ ಮಗನೆಂದು ಹೇಳಿಕೊಂಡಿದ್ದಾನೆ’’
ಎಂದು ಉತ್ತರಕೊಟ್ಟರು.

8ಪಿಲಾತನು ಇದನ್ನು ಕೇಳಿ ಬಹು ಭಯಗೊಂಡು, 9ಮತ್ತೆ
ಭವನದೊಳಗೆ ಹೋಗಿ, ಯೇಸುವಿಗೆ, ‘‘ನೀನು ಎಲ್ಲಿಯ
ವನು?’’ ಎಂದು ಕೇಳಿದನು. ಆದರೆ ಯೇಸು ಮೌನ
ವಾಗಿದ್ದನು. 10ಪಿಲಾತನು, ‘‘ನೀನು ನನ್ನೊಂದಿಗೆ ಮಾತಾಡುವು
ದಿಲ್ಲವೇ? ನಿನ್ನನ್ನು ಬಿಡಿಸುವ ಅಧಿಕಾರವೂ ನಿನ್ನನ್ನು ಶಿಲುಬೆಗೆ
ಹಾಕಿಸುವ ಅಧಿಕಾರವೂ ನನಗಿದೆ ಎಂಬುದು ನಿನಗೆ
ತಿಳಿಯದೋ?’’ ಎಂದನು.

11ಯೇಸು, ‘‘ನನ್ನ ಮೇಲೆ ನಿನಗಿರುವ ಅಧಿಕಾರವೆಂದರೆ
ದೇವರು ನಿನಗೆ ಕೊಟ್ಟಿರುವ ಅಧಿಕಾರವೊಂದೇ. ಆದ್ದರಿಂದ
ನನ್ನನ್ನು ನಿನ್ನ ಕೈಗೆ ಒಪ್ಪಿಸಿದವನಿಗೆ ಹೆಚ್ಚಿನ ಪಾಪದೋಷ
ವಿರುವುದು’’ ಎಂದು ಉತ್ತರಕೊಟ್ಟನು.

12ಇದಾದ ಮೇಲೆ, ಯೇಸುವನ್ನು ಬಿಡುಗಡೆ ಮಾಡಲು
ಪಿಲಾತನು ಪ್ರಯತ್ನಿಸಿದನು. ಆದರೆ ಯೆಹೂದ್ಯರು, ‘‘ತನ್ನನ್ನು
ರಾಜನೆಂದು ಹೇಳಿಕೊಳ್ಳುವ ಯಾವ ವ್ಯಕ್ತಿಯಾಗಲೀ ಸೀಸರನ
ವಿರೋಧಿಯಾಗಿದ್ದಾನೆ. ಆದ್ದರಿಂದ ನೀನು ಈ ಮನುಷ್ಯನನ್ನು
(ಯೇಸುವನ್ನು) ಬಿಡುಗಡೆ ಮಾಡಿದರೆ, ನೀನು ಸೀಸರನ
ಮಿತ್ರನಲ್ಲವೆಂದೇ ಅದರ ಅರ್ಥ’’ ಎಂದು ಕೂಗಿದರು.

13ಯೆಹೂದ್ಯರು ಹೇಳಿದ್ದನ್ನು ಕೇಳಿ ಪಿಲಾತನು
ಯೇಸುವನ್ನು ಹೊರಗೆ ಕರೆಯಿಸಿ, ‘‘ಹಾಸುಗಲ್ಲು’’ ಎಂಬ
ಕಟ್ಟೆಯ (ಯೆಹೂದ್ಯರ ಭಾಷೆಯಲ್ಲಿ* ಅದರ ಹೆಸರು ಗಬ್ಬಥ.)
ಮೇಲಿದ್ದ ನ್ಯಾಯಪೀಠದಲ್ಲಿ ಕುಳಿತುಕೊಂಡನು. 14ಅಂದು
ಪಸ್ಕಹಬ್ಬದ ಸಿದ್ಧತೆಯ ದಿನ, ಮತ್ತು ಆಗಲೇ ಮಧ್ಯಾಹ್ನವಾಗಿತ್ತು.
ಪಿಲಾತನು ಯೆಹೂದ್ಯರಿಗೆ, ‘‘ಇಗೋ, ನಿಮ್ಮ ರಾಜನು!’’
ಎಂದು ಹೇಳಿದನು.

15ಯೆಹೂದ್ಯರು, ‘‘ಕೊಲ್ಲಿರಿ, ಕೊಲ್ಲಿರಿ; ಅವನನ್ನು ಶಿಲುಬೆ
ಗೇರಿಸಿರಿ!’’ ಎಂದು ಕಿರುಚಿದರು.

ಪಿಲಾತನು ಯೆಹೂದ್ಯರಿಗೆ, ‘‘ನಿಮ್ಮ ರಾಜನನ್ನು ಶಿಲುಬೆ
ಗೇರಿಸಬೇಕೇ?’’ ಎಂದು ಕೇಳಿದನು.

ಮಹಾಯಾಜಕರು, ‘‘ನಮಗಿರುವ ಒಬ್ಬನೇ ರಾಜನೆಂದರೆ
ಸೀಸರ್!’’ ಎಂದು ಉತ್ತರಕೊಟ್ಟರು.

16ಆಗ ಪಿಲಾತನು, ಯೇಸುವನ್ನು ಶಿಲುಬೆಗೇರಿಸಲು
ಅವರಿಗೆ ಒಪ್ಪಿಸಿಕೊಟ್ಟನು.

### ಯೇಸುವನ್ನು ಶಿಲುಬೆಗೇರಿಸಿದರು

(ಮತ್ತಾಯ 27:32-44; ಮಾರ್ಕ 15:21-32; ಲೂಕ 23:26-43)

ಸೈನಿಕರು ಯೇಸುವನ್ನು ಕರೆದೊಯ್ದರು. 17ಯೇಸು ತನ್ನ
ಸ್ವಂತ ಶಿಲುಬೆಯನ್ನು ಹೊತ್ತುಕೊಂಡು, ‘‘ಕಪಾಲ’’ ಎಂಬ
ಸ್ಥಳಕ್ಕೆ ಹೊರಟನು. (ಯೆಹೂದ್ಯರ ಭಾಷೆಯಲ್ಲಿ ಈ ಸ್ಥಳದ
ಹೆಸರು ‘‘ಗೊಲ್ಗೊಥಾ.’’) 18ಅವರು ಗೊಲ್ಗೊಥಾದಲ್ಲಿ
ಯೇಸುವನ್ನೂ ಆತನ ಸಂಗಡ ಇನ್ನಿಬ್ಬರನ್ನೂ ಶಿಲುಬೆಗೇರಿ
ಸಿದರು. ಅವರಿಬ್ಬರನ್ನು ಯೇಸುವಿನ ಎರಡು ಕಡೆಗಳಲ್ಲಿ ಹಾಕಿ,
ಯೇಸುವನ್ನು ಅವರ ಮಧ್ಯದಲ್ಲಿ ಹಾಕಿದರು. 19ಪಿಲಾತನು
ಒಂದು ಫಲಕವನ್ನು ಬರೆದು ಶಿಲಬೆಯ ಮೇಲೆ ಹಚ್ಚಿದನು. ಆ
ಫಲಕದಲ್ಲಿ, ‘‘ನಜರೇತಿನ ಯೇಸು, ಯೆಹೂದ್ಯರ ರಾಜನು’’
ಎಂದು ಬರೆದಿತ್ತು. 20ಆ ಫಲಕವನ್ನು ಯೆಹೂದ್ಯರ ಭಾಷೆಯಲ್ಲಿ,
ಲ್ಯಾಟಿನ್ ಮತ್ತು ಗ್ರೀಕ್ ಭಾಷೆಗಳಲ್ಲಿ ಬರೆಯಲಾಗಿತ್ತು.
ಫಲಕದಲ್ಲಿ ಬರೆದಿರುವುದನ್ನು ಅನೇಕ ಯೆಹೂದ್ಯರು
ಓದಿದರು. ಏಕೆಂದರೆ ಯೇಸುವನ್ನು ಶಿಲುಬೆಯ ಮೇಲೆ ಕೊಂದ
ಸ್ಥಳವು ಪಟ್ಟಣದ ಸಮೀಪದಲ್ಲಿತ್ತು. 21ಯೆಹೂದ್ಯ ಮಹಾ
ಯಾಜಕರು ಪಿಲಾತನಿಗೆ, ‘‘ಯೆಹೂದ್ಯರ ರಾಜನು’ ಎಂದು
ಬರೆಯಬೇಡ. ಆದರೆ, ‘ಇವನು ತನ್ನನ್ನು ಯೆಹೂದ್ಯರ ರಾಜ’
ಎಂದು ಹೇಳಿಕೊಂಡನು ಎಂಬುದಾಗಿ ಬರೆ’’ ಎಂದರು.

22ಪಿಲಾತನು, ‘‘ನಾನು ಬರೆದಿರುವುದನ್ನು ಬದಲಾಯಿಸ
ಲಾಗುವುದಿಲ್ಲ’’ ಎಂದು ಉತ್ತರಕೊಟ್ಟನು. 23ಸೈನಿಕರು ಯೇಸು
ವನ್ನು ಶಿಲುಬೆಗೇರಿಸಿದ ಬಳಿಕ ಆತನ ಬಟ್ಟೆಗಳನ್ನು ನಾಲ್ಕು ಭಾಗ
ಮಾಡಿ ಒಬ್ಬೊಬ್ಬರು ಒಂದೊಂದು ಭಾಗವನ್ನು ತೆಗೆದು
ಕೊಂಡರು. ಅಲ್ಲದೆ ಆತನ ಒಳಂಗಿಯನ್ನು ಸಹ ತೆಗೆದು
ಕೊಂಡರು. ಅದು ಹೊಲಿಗೆಯಿಲ್ಲದೆ ಮೇಲಿನಿಂದ ಕೆಳಗಿನವರೆಗೆ
ಹೆಣೆದದ್ದಾಗಿತ್ತು. 24ಆದ್ದರಿಂದ ಸೈನಿಕರು, ‘‘ನಾವು ಇದನ್ನು
ಹರಿದು ಪಾಲುಮಾಡಬಾರದು. ನಾವು ಚೀಟಿಹಾಕಿ ಇದು
ಯಾರಿಗೆ ಬರುತ್ತದೊ ನೋಡೋಣ’’ ಎಂದು ಮಾತಾಡಿ
ಕೊಂಡು ಹಾಗೆಯೇ ಮಾಡಿದರು.

> ‘‘ಅವರು ನನ್ನ ಬಟ್ಟೆಗಳನ್ನು ತಮ್ಮಲ್ಲಿ ಪಾಲುಮಾಡಿ
> ಕೊಂಡರು; ನನ್ನ ಅಂಗಿಗಾಗಿ ಚೀಟಿ ಹಾಕಿದರು.’’
> *ಕೀರ್ತನೆ 22:18*

ಎಂದು ಪವಿತ್ರ ಗ್ರಂಥದಲ್ಲಿ ಬರೆದಿರುವ ಮಾತು ಹೀಗೆ
ನೆರವೇರಿತು.

25ಯೇಸುವಿನ ತಾಯಿ, ತಾಯಿಯ ಸಹೋದರಿ, ಕ್ಲೋಪನ
ಹೆಂಡತಿಯಾದ ಮರಿಯಳು ಮತ್ತು ಮಗ್ದಲದ ಮರಿಯಳು

---

**ಯೆಹೂದ್ಯರ ಭಾಷೆ** ಅಂದರೆ ಆರ್ಯಮೇಯಿಕ್ ಭಾಷೆ.

ಶಿಲುಬೆಯ ಬಳಿಯಲ್ಲಿ ನಿಂತುಕೊಂಡಿದ್ದರು. 26ಯೇಸು ತನ್ನ ತಾಯಿಯನ್ನೂ ಅಲ್ಲೇ ನಿಂತಿದ್ದ ತನ್ನ ಪ್ರೀತಿಯ ಶಿಷ್ಯನನ್ನೂ ನೋಡಿ ತನ್ನ ತಾಯಿಗೆ, ‘‘ಅಮ್ಮಾ ಇಗೋ, ನಿನ್ನ ಮಗನು’’ ಎಂದು ಹೇಳಿದನು. 27ಬಳಿಕ ಯೇಸು ಆ ಶಿಷ್ಯನಿಗೆ, ‘‘ಇಗೋ, ನಿನ್ನ ತಾಯಿ’’ ಎಂದನು. ಅಂದಿನಿಂದ ಆ ಶಿಷ್ಯನು ಆಕೆಯನ್ನು ಕರೆದುಕೊಂಡು ಹೋಗಿ ತನ್ನ ಮನೆಯಲ್ಲೇ ಇರಿಸಿಕೊಂಡನು.

### ಯೇಸುವಿನ ಮರಣ

(ಮತ್ತಾಯ 27:45-56; ಮಾರ್ಕ 15:33-41; ಲೂಕ 23:44-49)

28ಇದಾದ ಮೇಲೆ ಎಲ್ಲವೂ ನೆರವೇರಿತೆಂದು ತಿಳಿದು ಕೊಂಡು ಆತನು ಪವಿತ್ರ ಗ್ರಂಥದ ಮಾತನ್ನು ನೆರವೇರಿಸು ವುದಕ್ಕಾಗಿ, ‘‘ನನಗೆ ದಾಹವಾಗಿದೆ* ’’ ಎಂದು ಹೇಳಿದನು. 29ಅಲ್ಲಿ ಹುಳಿರಸ ತುಂಬಿದ ಪಾತ್ರೆಯೊಂದಿತ್ತು. ಸೈನಿಕರು ಸ್ಪಂಜನ್ನು ಹುಳಿರಸದಲ್ಲಿ ತೋಯಿಸಿ ಹಿಸ್ಸೋಪ್ ಗಿಡದ ಕೋಲಿಗೆ ಸಿಕ್ಕಿಸಿ ಅದನ್ನು ಮೇಲೆತ್ತಿ ಯೇಸುವಿನ ಬಾಯಿಗೆ ಮುಟ್ಟಿಸಿದರು. 30ಯೇಸು ಹುಳಿರಸವನ್ನು ರುಚಿನೋಡಿ, ‘‘ತೀರಿತು’’ ಎಂದು ಹೇಳಿ ತಲೆಬಾಗಿ ಪ್ರಾಣಬಿಟ್ಟನು.

31ಆ ದಿನವು ಸಿದ್ಧತೆಯ ದಿನವಾಗಿತ್ತು. ಮರುದಿನ ವಿಶೇಷವಾದ ಸಬ್ಬತ್‌ದಿನವಾಗಿತ್ತು. ಸಬ್ಬತ್‌ದಿನದಂದು ದೇಹ ಗಳು ಶಿಲುಬೆಯ ಮೇಲಿರುವುದು ಯೆಹೂದ್ಯರಿಗೆ ಇಷ್ಟವಿರ ಲಿಲ್ಲ. ಆದ್ದರಿಂದ ಅವರ ಕಾಲುಗಳನ್ನು ಮುರಿದು ಬೇಗನೆ ಸಾಯಿಸಲು ಆಜ್ಞಾಪಿಸಬೇಕೆಂಬುದಾಗಿ ಅವರು ಪಿಲಾತನನ್ನು ಕೇಳಿಕೊಂಡರು. 32ಆದ್ದರಿಂದ ಸೈನಿಕರು ಬಂದು ಯೇಸುವಿ ನೊಂದಿಗೆ ಶಿಲುಬೆಗೇರಿಸಲ್ಪಟ್ಟಿದ್ದ ಇಬ್ಬರ ಕಾಲುಗಳನ್ನು ಮುರಿದುಹಾಕಿದರು. 33ಬಳಿಕ ಅವರು ಯೇಸುವಿನ ಅತಿ ಸಮೀಪಕ್ಕೆ ಬಂದಾಗ ಆತನು ಆಗಲೇ ಸತ್ತುಹೋಗಿರುವುದನ್ನು ಕಂಡು ಆತನ ಕಾಲುಗಳನ್ನು ಮುರಿಯಲಿಲ್ಲ. 34ಆದರೆ ಸೈನಿಕ ರಲ್ಲಿ ಒಬ್ಬನು ತನ್ನ ಈಟಿಯಿಂದ ಯೇಸುವಿನ ಪಕ್ಕೆಗೆ ತಿವಿದನು. ಪಕ್ಕೆಯಿಂದ ರಕ್ತ ಮತ್ತು ನೀರು ಹೊರಗೆ ಹರಿದು ಬಂದವು. 35(ಇದನ್ನು ಕಂಡವನೇ ಇದರ ಬಗ್ಗೆ ಹೇಳಿದ್ದಾನೆ. ನೀವು ಸಹ ನಂಬಬೇಕೆಂದು ಅವನು ಇದನ್ನು ತಿಳಿಸಿದ್ದಾನೆ. ಅವನು ಹೇಳುವ ಸಂಗತಿಗಳು ಸತ್ಯವಾಗಿವೆ. ತಾನು ಹೇಳುತ್ತಿರುವುದು ಸತ್ಯವೆಂದು ಅವನಿಗೆ ಗೊತ್ತಿದೆ.) 36ಪವಿತ್ರ ಗ್ರಂಥದಲ್ಲಿ ಬರೆದಿರುವ, ‘‘ಅವನ ಎಲುಬುಗಳಲ್ಲಿ ಒಂದಾದರೂ ಮುರಿಯಲ್ಪಡುವುದಿಲ್ಲ’’* ಎಂಬ ಮಾತು ಹೀಗೆ ನೆರವೇರಿತು. 37ಪವಿತ್ರ ಗ್ರಂಥದ ಮತ್ತೊಂದು ಕಡೆಯಲ್ಲಿ, ‘‘ಜನರು ತಾವು ಈಟಿಯಿಂದ ಇರಿದವ ನನ್ನೇ ದಿಟ್ಟಿಸಿ ನೋಡುವರು’’* ಎಂತಲೂ ಬರೆದಿದೆ.

### ಯೇಸುವಿನ ಶವಸಂಸ್ಕಾರ

(ಮತ್ತಾಯ 27:57-61; ಮಾರ್ಕ 15:42-47; ಲೂಕ 23:50-56)

38ತರುವಾಯ, ಅರಿಮಥಾಯ ಊರಿನ ಯೋಸೇಫ ಎಂಬವನು ಯೇಸುವಿನ ದೇಹವನ್ನು ತನಗೆ ಕೊಡಬೇಕೆಂದು ಪಿಲಾತನನ್ನು ಕೇಳಿಕೊಂಡನು. (ಯೋಸೇಫನು ಯೇಸುವಿನ ಒಬ್ಬ ಅನುಯಾಯಿ ಆಗಿದ್ದನು. ಆದರೆ ಅವನು ಯೆಹೂದ್ಯರಿಗೆ ಹೆದರಿಕೊಂಡಿದ್ದರಿಂದ ಅದರ ಬಗ್ಗೆ ಜನರಿಗೆ ಹೇಳಿಕೊಳ್ಳಲಿಲ್ಲ.) ಯೇಸುವಿನ ದೇಹವನ್ನು ತೆಗೆದುಕೊಂಡು ಹೋಗಲು ಪಿಲಾತನು ಅವನಿಗೆ ಅಪ್ಪಣೆಕೊಟ್ಟನು. 39ಆದ್ದರಿಂದ ಅವನು ಬಂದು ಯೇಸುವಿನ ದೇಹವನ್ನು ತೆಗೆದುಕೊಂಡು ಹೋದನು. ಹಿಂದೊಮ್ಮೆ, ರಾತ್ರಿಯಲ್ಲಿ ಯೇಸುವಿನ ಬಳಿಗೆ ಬಂದು ಆತನೊಂದಿಗೆ ಮಾತಾಡಿದ್ದವನೇ ನಿಕೋದೇಮನು. ಅವನು ಸುಮಾರು ಐವತ್ತು ಕಿಲೋಗ್ರಾಮಿನಷ್ಟು ಸುಗಂಧದ್ರವ್ಯಗಳನ್ನು ತೆಗೆದುಕೊಂಡು ಬಂದನು. ಆ ಸುಗಂಧ ದ್ರವ್ಯವು ರಕ್ತಬೋಳ ಮತ್ತು ಅಗರುಗಳ ಮಿಶ್ರಣವಾಗಿತ್ತು. 40ಈ ಇಬ್ಬರು ಯೇಸುವಿನ ದೇಹವನ್ನು ತೆಗೆದುಕೊಂಡು ಅದಕ್ಕೆ ಸುಗಂಧ ದ್ರವ್ಯವನ್ನು ಹಾಕಿ ನಾರುಬಟ್ಟೆಗಳಿಂದ ಸುತ್ತಿದರು. (ಯೆಹೂದ್ಯರು ಸತ್ತವರನ್ನು ಇದೇ ರೀತಿ ಸಮಾಧಿ ಮಾಡುತ್ತಾರೆ.) 41ಯೇಸುವನ್ನು ಶಿಲುಬೆಯ ಮೇಲೆ ಕೊಂದ ಸ್ಥಳದಲ್ಲೇ ಒಂದು ತೋಟವಿತ್ತು. ಆ ತೋಟದಲ್ಲಿ ಒಂದು ಹೊಸ ಸಮಾಧಿಯಿತ್ತು. ಅದರಲ್ಲಿ ಹಿಂದೆಂದೂ ಯಾರನ್ನೂ ಸಮಾಧಿ ಮಾಡಿರಲಿಲ್ಲ. 42ಅದು ಸಮೀಪವಾಗಿದ್ದುದರಿಂದ ಮತ್ತು ಯೆಹೂದ್ಯರು ತಮ್ಮ ಸಬ್ಬತ್ ದಿನವನ್ನು ಆರಂಭಮಾಡಲು ಸಿದ್ಧರಾಗುತ್ತಿದ್ದುದರಿಂದ ಅವರು ಯೇಸುವನ್ನು ಆ ಸಮಾಧಿಯಲ್ಲಿಟ್ಟರು.

### ಬರಿದಾದ ಸಮಾಧಿ

(ಮತ್ತಾಯ 28:1-10; ಮಾರ್ಕ 16:1-8; ಲೂಕ 24:1-12)

20 ಭಾನುವಾರದ ಮುಂಜಾನೆ ಮಗ್ದಲದ ಮರಿಯಳು ಯೇಸುವಿನ ದೇಹವಿದ್ದ ಸಮಾಧಿಯ ಬಳಿಗೆ ಬಂದಳು. ಆಗ ಇನ್ನೂ ಕತ್ತಲಿತ್ತು. ಸಮಾಧಿಯ ಬಾಗಿಲಿಗೆ ಮುಚ್ಚಿದ್ದ ದೊಡ್ಡ ಕಲ್ಲು ಅಲ್ಲಿಂದ ತೆಗೆದುಹಾಕಲ್ಪಟ್ಟಿರುವುದನ್ನು ಕಂಡ ಮರಿಯಳು 2ಸೀಮೋನ್ ಪೇತ್ರನ ಮತ್ತು (ಯೇಸು ಪ್ರೀತಿಸುತ್ತಿದ್ದ) ಮತ್ತೊಬ್ಬ ಶಿಷ್ಯನ ಬಳಿಗೆ ಓಡಿಬಂದು, ‘‘ಅವರು ಸಮಾಧಿಯೊಳಗಿಂದ ಪ್ರಭುವನ್ನು ತೆಗೆದುಕೊಂಡಿದ್ದಾರೆ, ಆತ ನನ್ನು ಎಲ್ಲಿಟ್ಟಿದ್ದಾರೋ ನಮಗೆ ಗೊತ್ತಿಲ್ಲ’’ ಎಂದು ಹೇಳಿದಳು.

3ಆದ್ದರಿಂದ ಪೇತ್ರನು ಮತ್ತು ಮತ್ತೊಬ್ಬ ಶಿಷ್ಯನು ಸಮಾಧಿಯ ಬಳಿಗೆ ಹೊರಟರು. 4ಅವರಿಬ್ಬರೂ ಓಡುತ್ತಾ ಹೋದರು. ಆದರೆ ಆ ಮತ್ತೊಬ್ಬ ಶಿಷ್ಯನು ಪೇತ್ರನಿಗಿಂತಲೂ ವೇಗವಾಗಿ ಓಡುತ್ತಾಹೋಗಿ ಸಮಾಧಿಯನ್ನು ಮೊದಲು ತಲುಪಿದನು. 5ಆ ಶಿಷ್ಯನು ಬಗ್ಗಿ ಒಳಗೆ ನೋಡಿದನು. 6ನಾರು ಬಟ್ಟೆಯ ತುಂಡುಗಳು ಅಲ್ಲಿ ಬಿದ್ದಿರುವುದನ್ನು ಅವನು ಕಂಡನು. 7ಅಲ್ಲದೆ ಯೇಸುವಿನ ತಲೆಗೆ ಸುತ್ತಿದ್ದ ಬಟ್ಟೆಯನ್ನೂ ಅವನು ಕಂಡನು. ಆ ಬಟ್ಟೆಯು ಸುತ್ತಲ್ಪಟ್ಟು, ಇತರ ನಾರುಬಟ್ಟೆಗಳಿಂದ ಪ್ರತ್ಯೇಕವಾಗಿ ಬಿದ್ದಿತ್ತು. 8ಬಳಿಕ ಆ ಮತ್ತೊಬ್ಬ ಶಿಷ್ಯನು ಒಳಗೆ ಹೋದನು. ಸಮಾಧಿಯನ್ನು ಮೊದಲು ತಲುಪಿದವನೇ ಆ ಶಿಷ್ಯನು. ಅವನು ಸಂಭವಿಸಿರುವುದನ್ನು ಕಂಡು ನಂಬಿಕೊಂಡನು. 9(ಯೇಸು ಸತ್ತು ಜೀವಂತವಾಗಿ ಎದ್ದು ಬರಬೇಕೆಂಬುದಾಗಿ ಪವಿತ್ರ ಗ್ರಂಥದಲ್ಲಿ ಬರೆದಿರುವುದು ಈ ಶಿಷ್ಯರಿಗೆ ಇನ್ನೂ ಅರ್ಥವಾಗಿರಲಿಲ್ಲ.)

### ಮಗ್ದಲದ ಮರಿಯಳಿಗೆ ಯೇಸುವಿನ ದರ್ಶನ

(ಮಾರ್ಕ 16:9-11)

10ಬಳಿಕ ಶಿಷ್ಯರು ಹಿಂತಿರುಗಿ ಮನೆಗೆ ಹೋದರು. 11ಆದರೆ ಮರಿಯಳು ಅಳುತ್ತಾ ಸಮಾಧಿಯ ಹೊರಗೆ ನಿಂತು

---

**ನನಗೆ ದಾಹವಾಗಿದೆ** ಕೀರ್ತನೆ 22:15; 69:21

**ಅವನ … ಮುರಿಯಲ್ಪಡುವುದಿಲ್ಲ** ಕೀರ್ತನೆ 34:20

**ಜನರು … ನೋಡುವರು** ಜೆಕರ್ಯ 12:10

ಕೊಂಡಿದ್ದಳು. ಆಕೆ ಅಳುತ್ತಾ ಸಮಾಧಿಯೊಳಗೆ ಬಗ್ಗಿ ನೋಡಿ
ದಾಗ, 12ಬಿಳುಪಾದ ಬಟ್ಟೆಗಳನ್ನು ಧರಿಸಿಕೊಂಡಿದ್ದ ಇಬ್ಬರು
ದೇವದೂತರನ್ನು ಕಂಡಳು. ಯೇಸುವಿನ ದೇಹವನ್ನು ಇಟ್ಟಿದ್ದ
ಸ್ಥಳದಲ್ಲಿ ಅವರಲ್ಲೊಬ್ಬನು ಯೇಸುವಿನ ತಲೆಯಿದ್ದ ಕಡೆ
ಯಲ್ಲಿಯೂ ಮತ್ತೊಬ್ಬನು ಪಾದವಿದ್ದ ಕಡೆಯಲ್ಲಿಯೂ ಕುಳಿತು
ಕೊಂಡಿದ್ದರು.

13ದೇವದೂತರು ಮರಿಯಳಿಗೆ, ''ಅಮ್ಮಾ, ಏಕೆ ಅಳು
ತ್ತಿರುವೆ?'' ಎಂದು ಕೇಳಿದರು. ಮರಿಯಳು, ''ನನ್ನ ಪ್ರಭುವಿನ
ದೇಹವನ್ನು ಕೆಲವು ಜನರು ತೆಗೆದುಕೊಂಡು ಹೋಗಿದ್ದಾರೆ.
ಅವರು ಆತನನ್ನು ಎಲ್ಲಿ ಇಟ್ಟಿದ್ದಾರೋ ನನಗೆ ಗೊತ್ತಿಲ್ಲ'' ಎಂದು
ಉತ್ತರಕೊಟ್ಟಳು. 14ಮರಿಯಳು ಹೀಗೆ ಹೇಳಿ ಹಿಂದಕ್ಕೆ
ತಿರುಗಿದಾಗ ಅಲ್ಲೇ ಯೇಸು ನಿಂತಿರುವುದನ್ನು ಕಂಡಳು. ಆದರೆ
ಆತನು ಯೇಸು ಎಂಬುದು ಆಕೆಗೆ ಗೊತ್ತಿರಲಿಲ್ಲ. 15ಯೇಸು
ಆಕೆಯನ್ನು ''ಅಮ್ಮಾ ಏಕೆ ಅಳುತ್ತಿರುವೆ? ನೀನು ಯಾರನ್ನು
ಹುಡುಕುತ್ತಿರುವೆ?'' ಎಂದು ಕೇಳಿದನು.

ತೋಟವನ್ನು ನೋಡಿಕೊಳ್ಳುವವನೇ ಇವನಿರಬಹುದೆಂದು
ಮರಿಯಳು ಯೋಚಿಸಿಕೊಂಡು ಅವನಿಗೆ, ''ಅಯ್ಯಾ, ನೀನು
ಯೇಸುವನ್ನು ತೆಗೆದುಕೊಂಡು ಹೋದೆಯಾ? ಆತನನ್ನು
ಎಲ್ಲಿಟ್ಟಿರುವೆ, ನನಗೆ ಹೇಳು. ನಾನು ಹೋಗಿ ಆತನನ್ನು ತೆಗೆದು
ಕೊಳ್ಳುತ್ತೇನೆ'' ಎಂದು ಹೇಳಿದಳು.

16ಯೇಸು ಆಕೆಗೆ, ''ಮರಿಯಳೇ'' ಎಂದನು.

ಮರಿಯಳು ಯೇಸುವಿನ ಕಡೆಗೆ ತಿರುಗಿ, ಯೆಹೂದ್ಯರ
ಭಾಷೆಯಲ್ಲಿ ''ರಬ್ಬೂನಿ'' ಎಂದಳು. (ರಬ್ಬೂನಿ ಎಂದರೆ
''ಗುರು.'')

17ಯೇಸು ಆಕೆಗೆ, ''ನನ್ನನ್ನು ಹಿಡಿದುಕೊಳ್ಳಬೇಡ. ನಾನು
ತಂದೆಯ ಬಳಿಗೆ ಇನ್ನೂ ಹಿಂತಿರುಗಿ ಹೋಗಿಲ್ಲ. ಆದರೆ ನೀನು
ನನ್ನ ಸಹೋದರರ (ಶಿಷ್ಯರ) ಬಳಿಗೆ ಹೋಗಿ, 'ನನ್ನ ತಂದೆಯೂ
ನಿಮ್ಮ ತಂದೆಯೂ ನನ್ನ ದೇವರೂ ನಿಮ್ಮ ದೇವರೂ
ಆಗಿರುವಾತನ ಬಳಿಗೆ ನಾನು ಹಿಂತಿರುಗಿ ಹೋಗುತ್ತಿದ್ದೇನೆ
ಎಂಬುದಾಗಿ ಹೇಳು'' ಎಂದನು.

18ಮಗ್ದಲದ ಮರಿಯಳು ಶಿಷ್ಯರ ಬಳಿಗೆ ಹೋಗಿ, ''ನಾನು
ಪ್ರಭುವನ್ನು ಕಂಡೆನು!'' ಎಂದು ಹೇಳಿದಳು. ಮತ್ತು ಯೇಸು
ಹೇಳಿದ ಸಂಗತಿಗಳನ್ನು ಆಕೆ ಅವರಿಗೆ ತಿಳಿಸಿದಳು.

### ಶಿಷ್ಯರಿಗೆ ಯೇಸುವಿನ ದರ್ಶನ

(ಮತ್ತಾಯ 28:16-20; ಮಾರ್ಕ 16:14-18; ಲೂಕ 24:36-49)

19ಅಂದು ಭಾನುವಾರ. ಅದೇ ಸಾಯಂಕಾಲ ಶಿಷ್ಯರು
ಒಟ್ಟಾಗಿ ಸೇರಿದ್ದರು. ಅವರು ಯೆಹೂದ್ಯರಿಗೆ ಹೆದರಿ ಬಾಗಿಲು
ಗಳನ್ನು ಮುಚ್ಚಿಕೊಂಡು ಒಳಗೇ ಇದ್ದರು. ಆಗ ಯೇಸು ಬಂದು
ಅವರ ಮಧ್ಯದಲ್ಲಿ ನಿಂತುಕೊಂಡು ಅವರಿಗೆ, ''ಶಾಂತಿಯು
ನಿಮ್ಮೊಂದಿಗಿರಲಿ!'' ಎಂದು ಹೇಳಿದನು. 20ಯೇಸು ಹೀಗೆ
ಹೇಳಿದ ಮೇಲೆ, ತನ್ನ ಕೈಗಳನ್ನು ಮತ್ತು ಪಕ್ಕೆಯನ್ನು ಅವರಿಗೆ
ತೋರಿಸಿದನು. ಪ್ರಭುವನ್ನು ಕಂಡು ಶಿಷ್ಯರಿಗೆ ಬಹು
ಸಂತೋಷವಾಯಿತು.

21ಬಳಿಕ ಯೇಸು ಮತ್ತೆ, ''ಶಾಂತಿಯು ನಿಮ್ಮೊಂದಿಗಿರಲಿ!
ತಂದೆಯು ನನ್ನನ್ನು ಕಳುಹಿಸಿದನು. ಅದೇ ರೀತಿಯಲ್ಲಿ, ಈಗ
ನಾನೂ ನಿಮ್ಮನ್ನು ಕಳುಹಿಸುತ್ತೇನೆ'' ಎಂದು ಹೇಳಿದನು.
22ಯೇಸು ಹೀಗೆ ಹೇಳಿದ ನಂತರ ಶಿಷ್ಯರ ಮೇಲೆ ಉಸಿರೂದಿ,
''ಪವಿತ್ರಾತ್ಮನನ್ನು ಸ್ವೀಕರಿಸಿಕೊಳ್ಳಿ. 23ನೀವು ಯಾರ ಪಾಪ
ಗಳನ್ನು ಕ್ಷಮಿಸುತ್ತೀರೋ ಅವರ ಪಾಪಗಳನ್ನು ಕ್ಷಮಿಸಲಾಗು
ವುದು. ನೀವು ಯಾರ ಪಾಪಗಳನ್ನು ಕ್ಷಮಿಸುವುದಿಲ್ಲವೋ ಅವರ
ಪಾಪಗಳಿಗೆ ಕ್ಷಮೆ ದೊರೆಯುವುದಿಲ್ಲ'' ಎಂದು ಹೇಳಿದನು.

### ತೋಮನಿಗೆ ಯೇಸುವಿನ ದರ್ಶನ

24ಯೇಸು ಬಂದಾಗ ದಿದುಮನೆಂಬ ತೋಮನು ಶಿಷ್ಯ
ರೊಂದಿಗೆ ಇರಲಿಲ್ಲ. ಹನ್ನೆರಡು ಮಂದಿ ಶಿಷ್ಯರಲ್ಲಿ ತೋಮನೂ
ಒಬ್ಬನಾಗಿದ್ದನು. 25ಉಳಿದ ಶಿಷ್ಯರು ತೋಮನಿಗೆ, ''ನಾವು
ಪ್ರಭುವನ್ನು ನೋಡಿದೆವು'' ಎಂದು ಹೇಳಿದರು. ಆದರೆ
ತೋಮನು, ''ಆತನ ಕೈಗಳಲ್ಲಿರುವ ಮೊಳೆಯ ಗಾಯದ
ಗುರುತುಗಳನ್ನು ನಾನು ನೋಡುವವರೆಗೆ, ಮೊಳೆಗಳನ್ನು
ಜಡಿದಿದ್ದ ಸ್ಥಳದಲ್ಲಿ ನನ್ನ ಬೆರಳನ್ನಿಡುವವರೆಗೆ ಮತ್ತು ಆತನ
ಪಕ್ಕೆಯಲ್ಲಿ ನನ್ನ ಕೈಯನ್ನು ಇಟ್ಟುನೋಡುವವರೆಗೆ ನಾನು
ಅದನ್ನು ನಂಬುವುದಿಲ್ಲ'' ಎಂದು ಹೇಳಿದನು.

26ಒಂದು ವಾರದ ನಂತರ ಶಿಷ್ಯರು ಮನೆಯೊಂದರಲ್ಲಿ
ಒಟ್ಟಾಗಿ ಸೇರಿದ್ದರು. ತೋಮನು ಅವರೊಂದಿಗೆ ಇದ್ದನು.
ಬಾಗಿಲುಗಳನ್ನು ಮುಚ್ಚಲಾಗಿತ್ತು. ಆಗ ಯೇಸು ಬಂದು ಅವರ
ಮಧ್ಯದಲ್ಲಿ ನಿಂತುಕೊಂಡು ಅವರಿಗೆ, ''ಶಾಂತಿಯು
ನಿಮ್ಮೊಂದಿಗಿರಲಿ!'' ಎಂದು ಹೇಳಿದನು.

27ಬಳಿಕ ಯೇಸು ತೋಮನಿಗೆ, ''ನಿನ್ನ ಬೆರಳನ್ನು ಇಲ್ಲಿಡು.
ನನ್ನ ಕೈಗಳನ್ನು ನೋಡು. ನಿನ್ನ ಕೈಯನ್ನು ನನ್ನ ಪಕ್ಕೆಯಲ್ಲಿ ಹಾಕು.
ಸಂಶಯಪಡದೆ ನಂಬುವವನಾಗು'' ಎಂದು ಹೇಳಿದನು.

28ತೋಮನು ಯೇಸುವಿಗೆ, ''ನನ್ನ ಪ್ರಭುವೇ, ನನ್ನ
ದೇವರೇ!'' ಎಂದು ಹೇಳಿದನು.

29ಯೇಸು ತೋಮನಿಗೆ, ''ನೀನು ನನ್ನನ್ನು ನೋಡಿದ್ದರಿಂದ
ನಂಬಿದೆ. ನನ್ನನ್ನು ನೋಡದೆ ನಂಬುವವರು ನಿಜವಾಗಿಯೂ
ಧನ್ಯರು'' ಎಂದು ಹೇಳಿದನು.

### ಯೋಹಾನನು ಈ ಪುಸ್ತಕವನ್ನು ಬರೆದ ಉದ್ದೇಶ

30ಯೇಸು ಇನ್ನೂ ಅನೇಕ ಸೂಚಕ ಕಾರ್ಯಗಳನ್ನು ತನ್ನ
ಶಿಷ್ಯರ ಕಣ್ಮುಂದೆ ಮಾಡಿದನು. ಆ ಅದ್ಭುತಕಾರ್ಯಗಳನ್ನು ಈ
ಪುಸ್ತಕದಲ್ಲಿ ಬರೆದಿಲ್ಲ. 31ಆದರೆ ಆತನೇ ಕ್ರಿಸ್ತನೆಂದೂ ದೇವರ
ಮಗನೆಂದೂ ನೀವು ನಂಬುವಂತೆಯೂ ನಂಬಿ ಆತನ ಹೆಸರಿನ
ಮೂಲಕವಾಗಿ ಜೀವವನ್ನು ಪಡೆದುಕೊಳ್ಳುವಂತೆಯೂ ಇಷ್ಟೆಲ್ಲಾ
ಬರೆದದೆ.

### ಏಳು ಮಂದಿ ಶಿಷ್ಯರಿಗೆ ಯೇಸುವಿನ ದರ್ಶನ

21 ತರುವಾಯ, ಯೇಸು ತನ್ನ ಶಿಷ್ಯರಿಗೆ ತಿಬೇರಿಯ
(ಗಲಿಲೇಯ) ಸರೋವರದ ಬಳಿ ಕಾಣಿಸಿ
ಕೊಂಡನು. ಅದು ಹೀಗೆ ನಡೆಯಿತು: 2ಕೆಲವು ಶಿಷ್ಯರು ಒಟ್ಟಾಗಿ
ಸೇರಿದ್ದರು. ಅವರು ಯಾರೆಂದರೆ, ಸೀಮೋನ್ ಪೇತ್ರ, ದಿದುಮ
ನೆಂಬ ತೋಮ, ಗಲಿಲೇಯಕ್ಕೆ ಸೇರಿದ ಕಾನಾ ಊರಿನವನಾದ
ನತಾನಿಯೇಲ, ಜೆಬೆದಾಯನ ಇಬ್ಬರು ಗಂಡುಮಕ್ಕಳು ಮತು
ಇನ್ನಿಬ್ಬರು ಶಿಷ್ಯರು.

3ಪೇತ್ರನು ಅವರಿಗೆ, ''ನಾನು ಮೀನು ಹಿಡಿಯಲು
ಹೋಗುತ್ತಿದ್ದೇನೆ'' ಎಂದನು.

ಉಳಿದ ಶಿಷ್ಯರು, ''ನಾವೂ ನಿನ್ನೊಂದಿಗೆ ಬರುತ್ತೇವೆ''
ಎಂದು ಹೇಳಿದರು. ಅಂತೆಯೇ ಶಿಷ್ಯರೆಲ್ಲಾ ಹೊರಟು ದೋಣಿ
ಯನ್ನು ಹತ್ತಿದರು. ಅವರು ರಾತ್ರಿಯೆಲ್ಲಾ ಬಲೆ ಬೀಸಿದರೂ
ಒಂದು ಮೀನೂ ಸಿಗಲಿಲ್ಲ. 4 ಅಂದು ಮುಂಜಾನೆಯಾದಾಗ,
ಯೇಸು ತೀರದಲ್ಲಿ ನಿಂತುಕೊಂಡಿದ್ದನು. ಆದರೆ ಆತನೇ ಯೇಸು
ಎಂಬುದು ಶಿಷ್ಯರಿಗೆ ಗೊತ್ತಿರಲಿಲ್ಲ. 5 ಆಗ ಆತನು ತನ್ನ ಶಿಷ್ಯರಿಗೆ,
''ಮಕ್ಕಳೇ, ನಿಮಗೆ ಮೀನು ಸಿಕ್ಕಿತೋ?'' ಎಂದು ಕೇಳಿದನು.

ಶಿಷ್ಯರು, ''ಇಲ್ಲ'' ಎಂದು ಉತ್ತರ ಕೊಟ್ಟರು.

6 ಯೇಸು, ''ನಿಮ್ಮ ದೋಣಿಯ ಬಲ ಭಾಗದಲ್ಲಿರುವ
ನೀರಿನೊಳಗೆ ನಿಮ್ಮ ಬಲೆ ಬೀಸಿರಿ. ಅಲ್ಲಿ ಕೆಲವು ಮೀನುಗಳು
ಸಿಕ್ಕುತ್ತವೆ'' ಎಂದು ಹೇಳಿದನು. ಶಿಷ್ಯರು ಹಾಗೆಯೇ ಮಾಡಿ
ದರು. ಬಹಳ ಮೀನುಗಳು ಸಿಕ್ಕಿಕೊಂಡದ್ದರಿಂದ ಅವರು
ಬಲೆಯನ್ನು ದೋಣಿಯೊಳಗೆ ಎಳೆದುಕೊಳ್ಳಲಾಗಲಿಲ್ಲ.

7 ಯೇಸುವಿನ ಪ್ರೀತಿಯ ಶಿಷ್ಯನು ಪೇತ್ರನಿಗೆ, ''ಆ
ಮನುಷ್ಯನು ಪ್ರಭುವೇ (ಯೇಸು)!'' ಎಂದು ಹೇಳಿದನು.
ಕೂಡಲೇ ಪೇತ್ರನು ತನ್ನ ಅಂಗಿಯನ್ನು ಹಾಕಿಕೊಂಡು, ನೀರಿಗೆ
ಧುಮುಕಿದನು. (ಪೇತ್ರನು ಮೀನು ಹಿಡಿಯುವುದಕ್ಕಾಗಿ ತನ್ನ
ಅಂಗಿಯನ್ನು ಬಿಚ್ಚಿಟ್ಟಿದ್ದನು.) 8 ಉಳಿದ ಶಿಷ್ಯರು ದೋಣಿಯಲ್ಲಿ
ತೀರಕ್ಕೆ ಹೋದರು. ಅವರು ಬಲೆ ತುಂಬ ಮೀನುಗಳನ್ನು ದಡಕ್ಕೆ
ಎಳೆದುಕೊಂಡು ಹೋದರು. ಅವರು ದಡದಿಂದ ಬಹುದೂರ
ದಲ್ಲೇನೂ ಇರಲಿಲ್ಲ. ಕೇವಲ ಮುನ್ನೂರು ಅಡಿಗಳಷ್ಟು ದೂರ
ದಲ್ಲಿದ್ದರು. 9 ಶಿಷ್ಯರು ದೋಣಿಯಿಂದ ಇಳಿದು ದಡಕ್ಕೆ
ಹೋದಾಗ, ಬೆಂಕಿಯ ಕೆಂಡಗಳನ್ನು ಕಂಡರು. ಬೆಂಕಿಯ ಮೇಲೆ
ಮೀನುಗಳಿದ್ದವು, ಮತ್ತು ಕೆಲವು ರೊಟ್ಟಿಗಳೂ ಅಲ್ಲಿದ್ದವು.
10 ಬಳಿಕ ಯೇಸು, ''ನೀವು ಹಿಡಿದ ಮೀನುಗಳಲ್ಲಿ ಕೆಲವನ್ನು
ತನ್ನಿರಿ'' ಎಂದು ಹೇಳಿದನು.

11 ಸೀಮೋನ್ ಪೇತ್ರನು ದೋಣಿಯೊಳಕ್ಕೆ ಹೋಗಿ ಬಲೆ
ಯನ್ನು ದಡಕ್ಕೆ ಎಳೆದುಕೊಂಡು ಬಂದನು. ಬಲೆಯು ದೊಡ್ಡ
ಮೀನುಗಳಿಂದ ತುಂಬಿತ್ತು. ಅದರಲ್ಲಿ ನೂರೈವತ್ತಮೂರು
ಮೀನುಗಳಿದ್ದವು. ಅವು ಬಹಳ ಭಾರವಾಗಿದ್ದರೂ ಬಲೆಯು
ಹರಿದುಹೋಗಲಿಲ್ಲ. 12 ಯೇಸು ಅವರಿಗೆ, ''ಬಂದು ಊಟ
ಮಾಡಿ'' ಎಂದು ಹೇಳಿದನು. ಶಿಷ್ಯರಲ್ಲಿ ಒಬ್ಬರಾದರೂ, ''ನೀನು
ಯಾರು'' ಎಂದು ಆತನನ್ನು ಕೇಳಲಿಲ್ಲ. ಆತನು ಪ್ರಭುವೆಂದು
ಅವರಿಗೆ ತಿಳಿದಿತ್ತು. 13 ಯೇಸುವು ಸಮೀಪಕ್ಕೆ ಬಂದು ರೊಟ್ಟಿ
ಯನ್ನು ಮತ್ತು ಮೀನುಗಳನ್ನು ತೆಗೆದುಕೊಂಡು ಅವರಿಗೆ
ಕೊಟ್ಟನು. 14 ಯೇಸು ಪುನರುತ್ಥಾನ ಹೊಂದಿದ ಮೇಲೆ ತನ್ನ
ಶಿಷ್ಯರಿಗೆ ಕಾಣಿಸಿಕೊಂಡದ್ದು ಇದು ಮೂರನೆಯ ಸಲ.

### ಪೇತ್ರನೊಂದಿಗೆ ಯೇಸುವಿನ ಸಂಭಾಷಣೆ

15 ಅವರು ಊಟಮಾಡಿದ ಮೇಲೆ, ಯೇಸು ಸೀಮೋನ್
ಪೇತ್ರನಿಗೆ, ''ಯೋಹಾನನ ಮಗನಾದ ಸೀಮೋನನೇ,
ಇಲ್ಲಿರುವ ಇವರು ನನ್ನನ್ನು ಪ್ರೀತಿಸುವುದಕ್ಕಿಂತಲೂ ಹೆಚ್ಚಾಗಿ
ನೀನು ನನ್ನನ್ನು ಪ್ರೀತಿಸುವಿಯೋ?'' ಎಂದು ಕೇಳಿದನು.

ಪೇತ್ರನು, ''ಹೌದು ಪ್ರಭುವೇ, ನಾನು ಮಮತೆ ಇಟ್ಟಿ
ದ್ದೇನೆಂಬುದು ನಿನಗೆ ಗೊತ್ತಿದೆ'' ಎಂದನು. ಯೇಸು ಪೇತ್ರನಿಗೆ,
''ನನ್ನ ಕುರಿಮರಿಗಳನ್ನು* ಮೇಯಿಸು'' ಎಂದನು.

16 ಎರಡನೆ ಸಾರಿ ಯೇಸು ಪೇತ್ರನಿಗೆ, ''ಯೋಹಾನನ
ಮಗನಾದ ಸೀಮೋನನೇ, ನೀನು ನನ್ನನ್ನು ಪ್ರೀತಿಸುವಿಯಾ?''
ಎಂದು ಕೇಳಿದನು. ಪೇತ್ರನು, ''ಹೌದು, ಪ್ರಭುವೇ, ನಾನು
ಮಮತೆ ಇಟ್ಟಿದ್ದೇನೆಂಬುದು ನಿನಗೆ ಗೊತ್ತಿದೆ'' ಎಂದನು.

ಯೇಸು ಪೇತ್ರನಿಗೆ, ''ನನ್ನ ಕುರಿಗಳನ್ನು ಕಾಯಿ'' ಎಂದನು.

17 ಯೇಸು ಮೂರನೆ ಸಲ, ''ಯೋಹಾನನ ಮಗನಾದ
ಸೀಮೋನನೇ, ನೀನು ನನ್ನನ್ನು ಪ್ರೀತಿಸುವಿಯಾ?'' ಎಂದು
ಕೇಳಿದನು. ಯೇಸು, ''ನೀನು ನನ್ನನ್ನು ಪ್ರೀತಿಸುವಿಯಾ?''
ಎಂದು ಮೂರು ಸಾರಿ ಕೇಳಿದ್ದರಿಂದ ಪೇತ್ರನಿಗೆ ದುಃಖ
ವಾಯಿತು. ಪೇತ್ರನು, ''ಪ್ರಭುವೇ, ನಿನಗೆ ಪ್ರತಿಯೊಂದೂ
ತಿಳಿದಿದೆ. ನಾನು ಮಮತೆ ಇಟ್ಟಿದ್ದೇನೆಂಬುದು ನಿನಗೆ ಗೊತ್ತಿದೆ!''
ಎಂದನು.

ಯೇಸು ಪೇತ್ರನಿಗೆ, ''ನನ್ನ ಕುರಿಗಳನ್ನು ಮೇಯಿಸು.
18 ನಾನು ನಿನಗೆ ಸತ್ಯವನ್ನು ಹೇಳುತ್ತೇನೆ. ನೀನು ಯೌವನಸ್ಥ
ನಾಗಿದ್ದಾಗ, ನಡುಕಟ್ಟಿಕೊಂಡು ನಿನಗೆ ಇಷ್ಟವಾದ ಕಡೆಗೆಲ್ಲಾ
ಹೋದೆ. ಆದರೆ ನೀನು ಮುದುಕನಾದಾಗ, ನಿನ್ನ ಕೈಗಳನ್ನು
ಚಾಚುವೆ ಮತ್ತು ಬೇರೊಬ್ಬನು ನಿನ್ನ ನಡುಕಟ್ಟಿ ನಿನಗೆ
ಇಷ್ಟವಿಲ್ಲದ ಕಡೆಗೆ ನಿನ್ನನ್ನು ನಡೆಸಿಕೊಂಡು ಹೋಗುವನು''
ಎಂದು ಹೇಳಿದನು. 19 (ದೇವರನ್ನು ಮಹಿಮೆಪಡಿಸುವುದಕ್ಕಾಗಿ
ಪೇತ್ರನು ಯಾವ ರೀತಿ ಸಾಯುತ್ತಾನೆ ಎಂಬುದನ್ನು ಸೂಚಿಸಲು
ಯೇಸು ಹೀಗೆ ಹೇಳಿದನು.) ಬಳಿಕ ಯೇಸು ಪೇತ್ರನಿಗೆ,
''ನನ್ನನ್ನು ಹಿಂಬಾಲಿಸು!'' ಎಂದನು. 20 ಪೇತ್ರನು ಹಿಂತಿರುಗಿ
ನೋಡಿದಾಗ, ಯೇಸುವಿನ ಪ್ರೀತಿಯ ಶಿಷ್ಯನು ತಮ್ಮ ಹಿಂದೆ
ನಡೆದುಕೊಂಡು ಬರುತ್ತಿರುವುದನ್ನು ಕಂಡನು. (ರಾತ್ರಿ
ಭೋಜನದ ಸಮಯದಲ್ಲಿ ಯೇಸುವಿನ ಎದೆಯ ಕಡೆಗೆ ಬಾಗಿ,
''ಪ್ರಭುವೇ, ನಿನಗೆ ದ್ರೋಹ ಮಾಡುವವನು ಯಾರು?''
ಎಂದು ಕೇಳಿದ ಶಿಷ್ಯನೇ ಇವನು.)

21 ಪೇತ್ರನು ತಮ್ಮ ಹಿಂದೆ ಬರುತ್ತಿದ್ದ ಈ ಶಿಷ್ಯನನ್ನು ಕಂಡಾಗ
ಯೇಸುವಿಗೆ, ''ಪ್ರಭುವೇ, ಇವನ ವಿಷಯವೇನು?'' ಎಂದು
ಕೇಳಿದನು. 22 ಯೇಸು, ''ನಾನು ಬರುವ ತನಕ ಅವನು
ಜೀವದಿಂದ ಇರಬೇಕೆಂಬುದು ನನ್ನ ಇಷ್ಟವಾಗಿದ್ದರೆ ಅದರಿಂದ
ನಿನಗೇನು? ನೀನು ನನ್ನನ್ನು ಹಿಂಬಾಲಿಸು!'' ಎಂದು ಉತ್ತರ
ಕೊಟ್ಟನು.

23 ಆದ್ದರಿಂದ ಸಹೋದರರ (ಶಿಷ್ಯರ) ಮಧ್ಯೆ ಒಂದು
ಕಥೆಯೇ ಹರಡಿಕೊಂಡಿತು. ಯೇಸುವಿನ ಪ್ರೀತಿಯ ಈ ಶಿಷ್ಯನು
ಸಾಯುವುದಿಲ್ಲವೆಂದು ಅವರು ಹೇಳುತ್ತಿದ್ದರು. ಆದರೆ ಅವನು
ಸಾಯುವುದಿಲ್ಲವೆಂದು ಯೇಸು ಹೇಳಲಿಲ್ಲ. ''ನಾನು ಬರುವ
ತನಕ ಅವನು ಜೀವದಿಂದ ಇರಬೇಕೆಂಬುದು ನನ್ನ ಇಷ್ಟ
ವಾಗಿದ್ದರೆ ಅದರಿಂದ ನಿನಗೇನು?'' ಎಂದಷ್ಟೇ ಆತನು
ಹೇಳಿದ್ದನು.

24 ಈ ಸಂಗತಿಗಳನ್ನು ಈಗ ಬರೆದಿರುವವನು ಮತ್ತು ಇವುಗಳ
ವಿಷಯವಾಗಿ ಈಗ ಸಾಕ್ಷಿ ಹೇಳಿರುವ ಶಿಷ್ಯನು ಅವನೇ. ಅವನು
ಹೇಳುವುದು ಸತ್ಯವೆಂದು ನಮಗೆ ಗೊತ್ತಿದೆ.

25 ಯೇಸು ಇತರ ಅನೇಕ ಕಾರ್ಯಗಳನ್ನು ಮಾಡಿದನು.
ಅವುಗಳಲ್ಲಿ ಪ್ರತಿಯೊಂದನ್ನೂ ಬರೆಯುವುದಾದರೆ, ಬರೆಯ
ಲ್ಪಡುವ ಪುಸ್ತಕಗಳನ್ನು ಇಡೀ ಪ್ರಪಂಚವೇ ಹಿಡಿಸಲಾರದೆಂದು
ನಾನು ನೆನಸುತ್ತೇನೆ.

---

**ಕುರಿಮರಿಗಳನ್ನು ಅಥವಾ ಕುರಿ** ಅಂದರೆ ಯೇಸುವಿನ ಹಿಂಬಾಲಕರು.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**

- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html